23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 334 | ನವದೆಹಲಿ | ಬೆಲೆ ₹10 | ಜೂನ್ 9 2026, ಮಂಗಳವಾರ

## ಒಳಪುಟಗಳಲ್ಲಿ


ಟಿಎಂಸಿ ಆಂತರಿಕ ಕಚ್ಚಾಟ ಉಲ್ಬಣ: ಪ್ರತ್ಯೇಕ ಆಸನಕ್ಕೆ 20 ಸಂಸದರಿಂದ ಸ್ಪೀಕರ್‌ಗೆ ಮನವಿ - ಪು.4

ಮುಂಗಾರು ಅಬ್ಬರ: ಕರಾವಳಿ, ಮಲೆನಾಡು- ಸೇರಿ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆ ಎಚ್ಚರಿಕೆ -ಪು.5

ಭೂಮಿ ಫಲವತ್ತತೆಚ ಹೆಚ್ಚಸಲು ಕಲ್ಯಾಣ ಕರ್ನಾಟಕದ ರೈತರಿಗೆ ವಿವಿಧ ರೂಪದ ತರಬೇತಿ - ಪು.6


# ನೀಟ್ ಯುಜಿ: ಕೇಂದ್ರ ಸಚಿವ ಪ್ರಧಾನ್ ರಾಜೀನಾಮೆಗೆ ಇಂಡಿ ಕೂಟ ಆಗ್ರಹ

## ಮತಗಳ್ಳತನ ಮತ್ತು ಎಸ್‌ಐಆರ್ ವಿರುದ್ಧ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗೆ ಪತ್ರ ಬರೆಯಲು ನಿರ್ಧಾರ, ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ನಿರ್ಣಯ




**ನವದೆಹಲಿ, ಜೂ. 8: ರಾಷ್ಟ್ರ ರಾಜಧಾನಿಯಲ್ಲಿ ಸೋಮವಾರ ನಡೆದ ಇಂಡಿಯಾ ಮೈತ್ರಿಕೂಟದ ಸಭೆಯಲ್ಲಿ ಎಸ್‌ಐಆರ್ ಮತ್ತು ಮತಗಳ್ಳತನ ಬಗ್ಗೆ ಚರ್ಚೆ ನಡೆಯಿತು, ಜತೆಗೆ ನೀಟ್, ಸಿಬಿಎಸ್‌ಇ ಅಕ್ರಮ ಹಿನ್ನೆಲೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಕೋರಿ ನಿರ್ಣಯ ಅಂಗೀಕರಿಸಲಾಯಿತು.**

ನವದೆಹಲಿಯ ಕಾನ್‌ಸ್ಟಿಟ್ಯೂಷನ್ ಕ್ಲಬ್‌ನಲ್ಲಿ ನಡೆದ ವಿರೋಧ ಪಕ್ಷಗಳ ಸಭೆಯಲ್ಲಿ ಡಿಎಂಕೆ, ಎಎಪಿ ಹೊರತುಪಡಿಸಿ ಉಳಿದ ಎಲ್ಲ ಪಕ್ಷಗಳ ನಾಯಕರು ಹಾಜರಾಗಿದ್ದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಮತಾ ಬ್ಯಾನರ್ಜಿ, ಅಖಿಲೇಶ್ ಯಾದವ್, ತೇಜಸ್ವಿ ಯಾದವ್, ಉದ್ಧವ್ ಠಾಕ್ರೆ, ಸುಪ್ರಿಯಾ ಸುಳೆ ಸೇರಿ ಹಲವು ನಾಯಕರು ಭಾಗವಹಿಸಿದ್ದರು.

ಸಭೆಯಲ್ಲಿ ಚುನಾವಣೆಯಲ್ಲಿ ಅಕ್ರಮಗಳು ನಡೆಯುತ್ತಿದೆ ಎಂದು ಬಲವಾಗಿ ಚರ್ಚಿಸಿದ್ದು, ಮತಗಳ್ಳತನ ಮತ್ತು ಎಸ್‌ಐಆರ್ ವಿರುದ್ಧ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗೆ ಪತ್ರ ಬರೆಯಲು ನಿರ್ಧರಿಸಲಾಗಿದೆ. ಜೊತೆಗೆ ನೀಟ್ ಮತ್ತು ಸಿಬಿಎಸ್ಯ ಅವ್ಯವಸ್ಥೆ ಹಿನ್ನೆಲೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಕ್ಷಣ ರಾಜೀನಾಮೆ ನೀಡುವಂತೆ ಒತ್ತಾಯಿಸಿದ್ದಾರೆ.

ಸಭೆ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಇಂಡಿ ಕೂಟದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಭೆಯಲ್ಲಿ 25 ಪಕ್ಷಗಳ ನಾಯಕರು ಭಾಗವಹಿಸಿದ್ದರು. ಎಲ್ಲಾ ನಾಯಕರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ನಾವು ಪ್ರಮುಖ ಐದು ವಿಷಯಗಳ ಬಗ್ಗೆ ನಿರ್ಣಯ ಕೈಗೊಂಡಿದ್ದೇವೆ ಎಂದು ಹೇಳಿದ್ದಾರೆ.

ಮೊದಲನೆಯದಾಗಿ, ಮುಖ್ಯ ನ್ಯಾಯಮೂರ್ತಿ ಅವರಿಗೆ ಎಸ್‌ಐಆರ್, ಮತ ಲೂಟಿ ಹಾಗೂ ಚುನಾವಣೆಗಳ ಕಳ್ಳತನದ ಕುರಿತು ಪತ್ರ ಬರೆಯಲು ನಿರ್ಧರಿಸಲಾಗಿದೆ. ಪತ್ರವನ್ನು ಶೀಘ್ರದಲ್ಲೇ ಸಿಜೆಐಗೆ ತಲುಪಿಸಲಾಗುವುದು. ಎರಡನೆಯದಾಗಿ, ನೀಟ್ ಮತ್ತು ಸಿಬಿಎಸ್‌ಇ ಪರೀಕ್ಷೆಗಳಲ್ಲಿ ಹಾಜರಾದ ಲಕ್ಷಾಂತರ ಯುವಕರಿಗೆ ದ್ರೋಹ ಬಗೆದ ಕಾರಣ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಕ್ಷಣದ ರಾಜೀನಾಮೆಗೆ ಒತ್ತಾಯಿಸಲಾಗಿದೆ ಎಂದು ತಿಳಿಸಿದ್ದಾರೆ. ಮೂರನೇಯದಾಗಿ, ಸಮಾಜದ ತುಳಿತಕ್ಕೊಳಗಾದ ವರ್ಗಗಳ ಮೇಲಿನ ದೌರ್ಜನ್ಯ ಸೇರಿದಂತೆ ಇತರ ವಿಷಯಗಳ ಬಗ್ಗೆ ಚರ್ಚಿಸಬೇಕು. ಜೊತೆಗೆ, ಪ್ರಸ್ತುತ ಆರ್ಥಿಕ ಪರಿಸ್ಥಿತಿ, ನಿರುದ್ಯೋಗ, ಬೆಲೆ ಏರಿಕೆ ಮತ್ತು ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಕೇಂದ್ರ ಸರ್ಕಾರ ತಕ್ಷಣವೇ ಸರ್ವಪಕ್ಷ ಸಭೆ ಕರೆಯಬೇಕು ಎಂದು ಒತ್ತಾಯಿಸಲಾಗಿದೆ ಎಂದರು.

ವಿರೋಧ ಪಕ್ಷದ ಗುಂಪಿನ ನಾಯಕರು ಎರಡು ತಿಂಗಳಿಗೊಮ್ಮೆ ಸಭೆ ಸೇರಲು ನಿರ್ಧರಿಸಲಾಗಿದೆ. ಮುಂದಿನ ಸಭೆ ಆಗಸ್ಟ್‌ನಲ್ಲಿ ಹೈದರಾಬಾದ್‌ನಲ್ಲಿ ನಡೆಯಲಿದೆ. ದಿನಾಂಕವನ್ನು ಮುಂದಿನ ದಿನಗಳಲ್ಲಿ ನಿಗದಿಪಡಿಸಲಾಗುವುದು ಎಂದು ಖರ್ಗೆ ವಿವರಿಸಿದರು.

### ಯಾರ್ಯಾರು ಭಾಗಿ

ಇಂಡಿಯಾ ಕೂಟದ ಜನಬಂಧನ್ ಸಭೆಯಲ್ಲಿ ಹಿರಿಯ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಜೈರಾಮ್ ರಮೇಶ್, ಕೆ.ಸಿ.ವೇಣುಗೋಪಾಲ್, ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮುಖ್ಯಸ್ಥೆ ಮಮತಾ ಬ್ಯಾನರ್ಜಿ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಆರ್‌ಜೆಡಿಯ ತೇಜಸ್ವಿ ಯಾದವ್, ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಉಮರ್ ಅಬ್ದುಲ್ಲಾ, ಎಡರಂಗದ ನಾಯಕರಾದ ಜಾನ್ ಬ್ರಿಟ್ಟಾಸ್, ದೀಪಂಕರ್ ಭಟ್ಟಾಚಾರ್ಯ ಹಾಗೂ ಪಿ.ಸಂತೋಷ್ ಕುಮಾರ್, ತಮಿಳುನಾಡಿನ ವಿಸಿಕೆ ಪಕ್ಷದ ಅಧ್ಯಕ್ಷ ತೋಳ್ ತಿರುಮಾವಲನ್, ಆರ್‌ಎಸ್ಪಿ ಸಂಸದ ಎನ್.ಕೆ. ಪ್ರೇಮಚಂದ್ರನ್, ಪಿಡಿಪಿಯ ಮೆಹಬೂಬಾ ಮುಫ್ತಿ ಮತ್ತು ಎನ್‌ಸಿಪಿಯ (ಎಸ್ಪಿ) ಸುಪ್ರಿಯಾ ಸುಳೆ, ಜೆಎಂಎಂ ಸಂಸದ ಸರ್ಫರಾಜ್ ಅಹ್ಮದ್ ಸಭೆಯಲ್ಲಿದ್ದರು. ಶಿವಸೇನೆ (ಯುಬಿಟಿ) ಪರವಾಗಿ ಅದರ ಮುಖ್ಯಸ್ಥ ಉದ್ಧವ್ ಠಾಕ್ರೆ, ಜಾರ್ಖಂಡ್ ಸಿಎಂ ಹೇಮಂತ್ ಸೊರೇನ್ ವರ್ಚುವಲ್ ಸಭೆಯಲ್ಲಿ ಭಾಗವಹಿಸಿದ್ದರು.

### ಜನಬಂಧನ್ ಸಭೆಯಿಂದ ದೂರ ಉಳಿದ ಡಿಎಂಕೆ, ಆಪ್

ತಮಿಳುನಾಡಿನಲ್ಲಿ ದಳಪತಿ ವಿಜಯ್ ಸರ್ಕಾರವನ್ನು ಬೆಂಬಲಿಸಿದ್ದು ಕಾಂಗ್ರೆಸ್‌ಗೆ ದುಬಾರಿಯಾಗಿ ಪರಿಣಮಿಸಿದೆ. ಇಂಡಿ ಮೈತ್ರಿಕೂಟದ ಒಗ್ಗಟ್ಟಿಗೆ ದೊಡ್ಡ ಹೊಡೆತ ನೀಡಿದೆ. ನವದೆಹಲಿಯಲ್ಲಿ ನಡೆದ ಜನಬಂಧನ್ ಸಭೆಯಿಂದ ಅಂತರ ಕಾಯ್ದುಕೊಂಡಿರುವ ಡಿಎಂಕೆ ಸಭೆಗೆ ಗೈರುಹಾಜರಾಗಿತ್ತು. ಅಲ್ಲದೆ, ಕಾಂಗ್ರೆಸ್‌ನಿಂದ ಪ್ರತ್ಯೇಕವಾಗಿ ಕುಳಿತುಕೊಳ್ಳಲು ಡಿಎಂಕೆಗೆ ಲೋಕಸಭಾ ಸಚಿವಾಲಯವು ಅನುಮೋದನೆ ನೀಡಿದೆ. ಮತ್ತೊಂದೆಡೆ ಇಂಡಿ ಒಕ್ಕೂಟದಿಂದ ಈಗಾಗಲೇ ಹಿಂದೆ ಸರಿದಿರುವ ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ನೇತೃತ್ವದ ಆಮ್ ಆದ್ಮಿ ಪಕ್ಷವೂ ಸಭೆಯನ್ನು ಬಹಿಷ್ಕರಿಸಿದೆ.

# ಹಾರ್ಮುಜ್ ಬಂದ್ ಭಾರತ ಕಳವಳ

**ನವದೆಹಲಿ, ಜೂ.8:** ಫೆಬ್ರವರಿ 28ರಂದು ಅಮೆರಿಕ ಮತ್ತು ಇಸ್ರೇಲ್ ನಡುವಿನ ಯುದ್ಧ ಆರಂಭವಾಗಿ 100 ದಿನ ಕಳೆದಿದ್ದು, ಅಪಾರ ಮಾನವೀಯ ಸಂಕಷ್ಟವನ್ನು ಉಂಟುಮಾಡಿದೆ. ಯುದ್ಧ ಆರಂಭವಾದ ಬಳಿಕ, ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವ ಹಡಗು ಸಂಚಾರವನ್ನು ಇರಾನ್‌ಬಹುತೇಕ ನಿರ್ಬಂಧಿಸಿದೆ. ಇದರಿಂದ ಜಾಗತಿಕ ಆರ್ಥಿಕತೆ ಹಾಗೂ ಇಂಧನ ಪೂರೈಕೆ ವ್ಯವಸ್ಥೆಯ ಮೇಲೂ ಗಂಭೀರ ದುಷ್ಪರಿಣಾಮ ಬೀರಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಸಾಮಾನ್ಯ ಪರಿಸ್ಥಿತಿಯಲ್ಲಿ ವಿಶ್ವದ ಸುಮಾರು ಐದನೇ ಒಂದು ಭಾಗದ ಕಚ್ಚಾತೈಲ ಮತ್ತು ದ್ರವೀಕೃತ ನೈಸರ್ಗಿಕ ಅನಿಲ ಸಾಗಣೆ ಈ ಜಲಸಂಧಿಯ ಮೂಲಕ ನಡೆಯುತ್ತದೆ. ಇದೇ ವೇಳೆ, ಭಾರತೀಯ ವಿದೇಶಾಂಗ ಸಚಿವಾಲಯ ಸೋಮವಾರ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ಇತ್ತೀಚಿನ ಹಿಂಸಾಚಾರದ ಘಟನೆಗಳನ್ನು ಖಂಡಿಸಿದೆ.



ಬೆಂಗಳೂರಿನ ಮಾಜಿ ಸಿಎಂ ವೀರಪ್ಪ ಮೊಯ್ಲಿ ಅವರ ನಿವಾಸಕ್ಕೆ ಸಿಎಂ ಡಿ ಕೆ ಶಿವಕುಮಾರ್ ಸೋಮವಾರ ಭೇಟಿ ನೀಡಿ ಆಶೀರ್ವಾದ ಪಡೆದರು. ಹರ್ಷ ಮೊಯ್ಲಿ ಇದ್ದರು.

# ತೈಲಸಾಗಣೆ ಹಡಗಿನಲ್ಲಿ ಅಗ್ನಿ ಅವಘಡ: ನೌಕಾಪಡೆಯಿಂದ ಭಾರತೀಯ ನಾವಿಕರ ರಕ್ಷಣೆ

**ನವದೆಹಲಿ, ಜೂ.8:** ಒಮನ್ ಕರಾವಳಿಯ ಸಮೀಪ ಪಲಾವ್ ಧ್ವಜ ಹೊಂದಿದ್ದ ತೈಲ ಸಾಗಣೆ ಹಡಗು ಎಮ್ ಟಿ ಮಾರಿವೆಕ್ಸ್‌ನಲ್ಲಿ ಸೋಮವಾರ ಸಂಭವಿಸಿದ ಅಗ್ನಿ ಅವಘಡದಲ್ಲಿ ಸಿಲುಕಿದ್ದ 24 ಭಾರತೀಯ ನಾವಿಕರನ್ನು ಭಾರತೀಯ ನೌಕಾಪಡೆ ಸುರಕ್ಷಿತವಾಗಿ ರಕ್ಷಿಸಿದೆ.

ಅಧಿಕಾರಿಗಳ ಮಾಹಿತಿ ಪ್ರಕಾರ, ಭಾರತೀಯ ನೌಕಾಪಡೆಯ ಹೆಲಿಕಾಪ್ಟರ್‌ಗಳ ಮೂಲಕ ನಾವಿಕರನ್ನು ಹಡಗಿನಿಂದ ಏರ್‌ಲಿಫ್ಟ್ ಮಾಡಲಾಯಿತು ಎಂದು ಹೇಳಲಾಗಿದೆ. ಆದರೆ ಬೆಂಕಿ ಕಾಣಿಸಿಕೊಳ್ಳಲು ನಿಖರ ಕಾರಣವೇನೆಂಬುದನ್ನು ಅಧಿಕಾರಿಗಳು ಬಹಿರಂಗಪಡಿಸಿಲ್ಲ.

ಭಾರತದ ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗ ಸಚಿವಾಲಯದ ಪ್ರಕಾರ, ಮಧ್ಯಾಹ್ನ ಸುಮಾರು 1.30 ಗಂಟೆ ವೇಳೆಗೆ ಹಡಗಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಹಡಗಿನಲ್ಲಿದ್ದ ಎಲ್ಲ 24 ಭಾರತೀಯ ನಾವಿಕರೂ ಸುರಕ್ಷಿತರಾಗಿದ್ದಾರೆ ಎಂದು ಸಚಿವಾಲಯದ ನಿರ್ದೇಶಕ ಓಪೇಶ್ ಕುಮಾರ್ ಶರ್ಮಾ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಇಂಡಿಯನ್ ಫಾರ್ವರ್ಡ್ ಸೀಮೆನ್ಸ್ ಯೂನಿಯನ್ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿರುವ ಚಿತ್ರಗಳಲ್ಲಿ, ದಟ್ಟ ಕಪ್ಪು ಹೊಗೆ ಹಡಗಿನ ಬ್ರಿಡ್ಜ್ ಮತ್ತು ಸಿಬ್ಬಂದಿ ವಸತಿ ವಿಭಾಗಗಳಿಂದ ಹೊರ ಬರುತ್ತಿರುವುದು ಕಂಡುಬಂದಿದೆ. ಇದೇ ವೇಳೆ ಹೆಲಿಕಾಪ್ಟರ್‌ಗಳ ಮೂಲಕ ಸಿಬ್ಬಂದಿಯನ್ನು ಹಗ್ಗಗಳ ಸಹಾಯದಿಂದ ರಕ್ಷಿಸಲಾಗುತ್ತಿರುವ ದೃಶ್ಯಗಳೂ ಕಾಣಿಸಿಕೊಂಡಿವೆ.

# ಎಚ್‌ಡಿಡಿಗೆ ರಾಜ್ಯಸಭೆ ಟಿಕೆಟ್ ತಪ್ಪಿದ್ದರ ಬಗ್ಗೆ ಪ್ರತಿಕ್ರಿಯೆ ಇಲ್ಲ ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಜೂ.8:** ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರಿಗೆ ರಾಜ್ಯಸಭೆ ಚುನಾವಣೆಗೆ ಟಿಕೆಟ್ ನೀಡದೆ ಬಿಜೆಪಿ ಅನ್ಯಾಯ ಮಾಡಿದೆ ಎಂಬುದಕ್ಕೆ ಸದ್ಯಕ್ಕೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಹೇಳಿದ್ದಾರೆ.



ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಸೋಮವಾರ ಮಾತನಾಡಿದ ಅವರು, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಈ ಬಗ್ಗೆ ಮಾತನಾಡಿದ್ದಾರೆ. ನಮ್ಮ ಪಕ್ಷ ಯಾವ ವಿಚಾರಗಳನ್ನು ಚಿಂತನೆ ಮಾಡಲಿದೆಯೋ ಅದನ್ನು ಪಾಲನೆ ಮಾಡುತ್ತೇನೆ ಎಂದು ಹೇಳಿದರು.

**ವಿನಯ್ ಕಾರ್ತಿಕ್ ಸ್ಪರ್ಧೆ ಬಗ್ಗೆ ಮಾರ್ಮಿಕ ಹೇಳಿಕೆ:** ವಿಧಾನ ಪರಿಷತ್‌ನಲ್ಲಿ ಐದನೇ ಅಭ್ಯರ್ಥಿ ಗೆಲುವಿಗೆ ರೂಪಿಸಲಾಗಿರುವ ರಣತಂತ್ರಗಳ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಿಎಂ ಡಿ.ಕೆ. ಶಿವಕುಮಾರ್, ರಾಜಕಾರಣದಲ್ಲಿ ಕಾರ್ಯತಂತ್ರಗಳ ಬಗ್ಗೆ ಯಾರಾದರೂ ಗುಟ್ಟು ಬಿಟ್ಟುಕೊಡುತ್ತಾರೆಯೆ? ರಾಜಕಾರಣದ ಚದುರಂಗದ ಆಟದಲ್ಲಿ ಪಾನ್‌ಗಳ ನಡೆಯನ್ನು ಯಾರೂ ಹೇಳುವುದಿಲ್ಲ ಎಂದು ಮಾರ್ಮಿಕವಾಗಿ ಹೇಳಿಕೆ ನೀಡಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಪರಿಷತ್ ಚುನಾವಣೆಯಲ್ಲಿ ವಿನಯ್ ಕಾರ್ತಿಕ್ ಸ್ಪರ್ಧೆ, ಜೆಡಿಎಸ್ ಹೆಚ್ಚುವರಿ ಅಭ್ಯರ್ಥಿ ಸ್ಪರ್ಧೆ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ ಡಿ.ಕೆ. ಶಿವಕುಮಾರ್ ಚದುರಂಗದ ಆಟದಲ್ಲಿ ಯಾವ ಪಾನ್ ಮುನ್ನಡೆಸುತ್ತಾರೆ ಎಂದು ಯಾರು ಹೇಳಲ್ಲ ಎಂದರು.

ಇದೇ ವೇಳೆ, ಎಐಸಿಸಿ ಕಾರ್ಯದರ್ಶಿ ಸೂರಜ್ ಹೆಗ್ಡೆ ಅವರ ನಿಧನಕ್ಕೆ ತೀವ್ರ ಸಂತಾಪ ಸೂಚಿಸಿದರು. ಯಾವುದೇ ಹುದ್ದೆ ಕೇಳದ ನಿಷ್ಠಾವಂತ ಕಾರ್ಯಕರ್ತ ಅವರಿಗೆ ಸೂಕ್ತ ಸ್ಥಾನಮಾನ ನೀಡಲು ಚಿಂತನೆ ನಡೆದಿತ್ತು ಎಂದು ಶೋಕಿಸಿದರು. ಸರ್ಕಾರಿ ಗೌರವದೊಂದಿಗೆ ಅಂತ್ಯಸಂಸ್ಕಾರ ನಡೆಸಲಾಗುವುದು ಎಂದು ತಿಳಿಸಿದರು.

# ಕುರ್ಚಿಗಾಗಿ ತಂದೆಗಾಗುತ್ತಿರುವ ಅಪಮಾನ ಸಹಿಸಿಕೊಳ್ಳುತ್ತಿರುವ ಎಚ್‌ಡಿಕೆ

**ಬೆಂಗಳೂರು, ಜೂ.8:** ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ. ದೇವೇಗೌಡರಿಗೆ ರಾಜ್ಯಸಭೆ ಚುನಾವಣೆಗೆ ಎನ್‌ಡಿಎ ಟಿಕೆಟ್ ನಿರಾಕರಿಸಿರುವ ಹಿನ್ನೆಲೆಯಲ್ಲಿ ರಾಜ್ಯ ರಾಜಕಾರಣದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ ನಡೆಸಿದೆ.

ಈ ಕುರಿತು ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ವ್ಯಂಗ್ಯವಾಡಿದ್ದಾರೆ. ತಮ್ಮ ಮಂತ್ರಿ ಕುರ್ಚಿಯನ್ನು ಭದ್ರಪಡಿಸಿಕೊಳ್ಳಲು ಕುಮಾರಸ್ವಾಮಿ ಅವರು ಹೆತ್ತ ತಂದೆ, ದೇಶದ ಮಾಜಿ ಪ್ರಧಾನಿಗೆ ಆಗುತ್ತಿರುವ ಅಪಮಾನ ಸಹಿಸಿಕೊಳ್ಳುತ್ತಿದ್ದಾರೆ ಎಂದು ಲೇವಡಿ ಮಾಡಿದ್ದಾರೆ.



ಭಾನುವಾರ ತಡರಾತ್ರಿ ಬಿಜೆಪಿ ಬಿಡುಗಡೆ ಮಾಡಿರುವ ಪಟ್ಟಿಯಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರಿಗೆ ರಾಜ್ಯಸಭಾ ನಾಮನಿರ್ದೇಶನ ನಿರಾಕರಿಸಲಾಗಿದೆ. ಅವರ ಬದಲಿಗೆ ಬಿಜೆಪಿಯ ಜಿಲ್ಲಾಮಟ್ಟದ ಕಟ್ಟಡ ನಿರ್ಮಾಣ ಉಸ್ತುವಾರಿಯಾಗಿದ್ದ ರಾಜ್ಯ ಉಪಾಧ್ಯಕ್ಷ ಡಾ. ಎಂ. ನಾಗರಾಜ ಅವರಿಗೆ ಮಣೆ ಹಾಕಲಾಗಿದೆ. ಈ ಬೆಳವಣಿಗೆಯನ್ನು ಪ್ರಸ್ತಾಪಿಸಿರುವ ಸುರ್ಜೇವಾಲಾ ಯಾವುದೇ ಬೆಲೆ ತೆತ್ತಾದರೂ ಸರಿ, ಕೇಂದ್ರದಲ್ಲಿ ತಮ್ಮ ಸಚಿವ ಸ್ಥಾನ ಉಳಿಸಿಕೊಳ್ಳಬೇಕು ಎಂಬ ಸ್ವಾರ್ಥಕ್ಕಾಗಿ ಬಿಜೆಪಿ ನಾಯಕರು ಜೆಡಿಎಸ್ ಪಕ್ಷಕ್ಕೆ ಹಾಗೂ ಅವರ ಕುಟುಂಬಕ್ಕೆ ಮಾಡುತ್ತಿರುವ ಇಂತಹ ನಿರಂತರ ಅವಮಾನ ಕುಮಾರಸ್ವಾಮಿ ಸಹಿಸಿಕೊಳ್ಳುತ್ತಿರುವುದು ಆಶ್ಚರ್ಯಕರ ಸಂಗತಿಯಾಗಿದೆ ಎಂದು ಟೀಕಿಸಿದ್ದಾರೆ.

ಜೆಡಿಎಸ್‌ನ ಹಳೆಯ ರಾಜಕೀಯ ನಿಲುವುಗಳು ಹಾಗೂ ಇತಿಹಾಸವನ್ನು ನೆನಪಿಸಿದ ಸುರ್ಜೇವಾಲಾ ಅವರು, ಐದು ಪ್ರಮುಖ ಅಂಶಗಳನ್ನು ಮುನ್ನೆಲೆಗೆ ತಂದಿದ್ದಾರೆ. 2019ರ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿಯ ಜಿ.ಎಸ್. ಬಸವರಾಜು ಅವರು ದೇವೇಗೌಡರನ್ನು ಸೋಲಿಸಿದ್ದರು.

ಆದರೂ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಕರ್ನಾಟಕದ ಮಾಜಿ ಪ್ರಧಾನಿ ಎಂಬ ಗೌರವ ನೀಡಿ, ಸೋನಿಯಾ ಗಾಂಧಿ ನೇತೃತ್ವದ ಕಾಂಗ್ರೆಸ್ ಪಕ್ಷವು ದೇವೇಗೌಡರನ್ನು ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆ ಮಾಡಲು ಬೆಂಬಲ ನೀಡಿತ್ತು. ಅಲ್ಲದೆ, ಕುಮಾರಸ್ವಾಮಿ ಏನಾದರೂ ಭವಿಷ್ಯದಲ್ಲಿ ಬಿಜೆಪಿಯೊಂದಿಗೆ ಕೈಜೋಡಿಸಿದರೆ ನಾನು ಅವರನ್ನು ನನ್ನ ಮಗನೆಂದು ಒಪ್ಪುವುದಿಲ್ಲ, ಅವರನ್ನು ತ್ಯಜಿಸುತ್ತೇನೆ ಎಂದು ಸ್ವತಃ ದೇವೇಗೌಡರೇ ಈ ಹಿಂದೆ ಸಾರ್ವಜನಿಕವಾಗಿ ಹೇಳಿದ್ದ ಹೇಳಿಕೆಯನ್ನು ಈಗಿನ ಮೈತ್ರಿ ನೆನಪಿಸಿ ಕೆಣಕಿದ್ದಾರೆ.

### ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ಕೈತಪ್ಪಿದ್ದಕ್ಕೆ ಬಿಜೆಪಿ-ಜೆಡಿಎಸ್ ವಿರುದ್ಧ ಸುರ್ಜೇವಾಲಾ ವಾಗ್ದಾಳಿ

# ರಂಗೇರಿದ ಪರಿಷತ್ ಚುನಾವಣೆ: 8ನೇ ಅಭ್ಯರ್ಥಿಯಾಗಿ ಕಣಕ್ಕಿಳಿದ ಜೆಡಿಎಸ್‌ನ ಗೋವಿಂದರಾಜು

**ಬೆಂಗಳೂರು, ಜೂ.8:** ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್‌ನ 7 ಸ್ಥಾನಗಳಿಗೆ ನಡೆಯುವ ಚುನಾವಣೆ ರಂಗೇರಿದ್ದು, ಈ ಚುನಾವಣೆಯಲ್ಲಿ ಅಭ್ಯರ್ಥಿಯಾಗಿ ಜೆಡಿಎಸ್ 8ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಈ ಮೂಲಕ ಕಾಂಗ್ರೆಸ್ ಮತ್ತು ಜೆಡಿಎಸ್ ನಡುವೆ ಮತ್ತೊಂದು ಸಮರಕ್ಕೆ ವೇದಿಕೆ ಅಣಿಯಾಗಿದೆ. ಜೊತೆಗೆ ವಿಧಾನ ಪರಿಷತ್ತಿಗೆ ಅವಿರೋಧ ಆಯ್ಕೆ ಆಗಲಿದೆ ಎಂಬ ಕಾಂಗ್ರೆಸ್‌ನ ಲೆಕ್ಕಾಚಾರಗಳು ತಲೆಕೆಳಗಾಗಿದ್ದು ಏಳು ಸ್ಥಾನಗಳಿಗೆ 8 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ವಿಧಾನಪರಿಷತ್‌ನ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಐದು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದು, ಬಿಜೆಪಿ ತನ್ನ ಅಧಿಕೃತ ಇಬ್ಬರು ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ, 7ನೇ ಸ್ಥಾನಕ್ಕೆ ಈಗ ಕಾಂಗ್ರೆಸ್‌ನ ಐದನೇ ಅಭ್ಯರ್ಥಿ ಹಾಗೂ ಜೆಡಿಎಸ್ ಅಭ್ಯರ್ಥಿ ನಡುವೆ ಸ್ಪರ್ಧೆ ಏರ್ಪಟಿದ್ದು ಗೆಲುವು ಯಾರಿಗೆ ದಕ್ಕಲಿದೆ ಎಂಬುದು ಕುತೂಹಲ ಮೂಡಿಸಿದೆ. ಕಾಂಗ್ರೆಸ್‌ನ ನಾಲ್ವರು ಅಭ್ಯರ್ಥಿಗಳಾದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ತಿಪ್ಪಣ್ಣ ಕಮಕನೂರು, ಪಿ.ವಿ. ಮೋಹನ್, ಶಿವಣ್ಣ ಮಳವಳ್ಳಿ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿತ್ತು. ಇವರೆಲ್ಲಾ ಈಗಾಗಲೇ ನಾಮಪತ್ರ ಸಲ್ಲಿಸಿದ್ದರಾದರೂ ಕಾಂಗ್ರೆಸ್‌ನ ಐದನೇ ಅಭ್ಯರ್ಥಿಯಾಗಿ ಕೆಪಿಸಿಸಿ ಖಂಜಾಚಿ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಪ್ತ ವಿನಯ್ ಕಾರ್ತಿಕ್ ಅವರನ್ನು ಆಯ್ಕೆ ಮಾಡಲಾಗಿತ್ತು ಅವರು ಸೋಮವಾರ ತಮ್ಮ ನಾಮಪತ್ರ ಸಲ್ಲಿಸಿದರು ಬಿಜೆಪಿಯಿಂದ ವಿಧಾನಪರಿಷತ್‌ನ ಎರಡು ಸ್ಥಾನಗಳಿಗೆ ಪಕ್ಷದ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜಪಾಟೀಲ್ ಹಾಗೂ ರಘು ಕೌಟಿಲ್ಯ ಅವರನ್ನು ಆಯ್ಕೆ ಮಾಡಿದ್ದು, ಇವರಿಬ್ಬರು ಸೋಮವಾರ ನಾಮಪತ್ರ ಸಲ್ಲಿಸಿದರು. ಈ ಮೊದಲು 8ನೇ ಅಭ್ಯರ್ಥಿಯನ್ನು ನಿಲ್ಲಿಸಲು ಆಸಕ್ತಿ ತೋರದಿದ್ದ ಜೆಡಿಎಸ್, ಕಾಂಗ್ರೆಸ್‌ನ ವಿನಯ್ ಕಾರ್ತಿಕ್ ನಾಮಪತ್ರ ಸಲ್ಲಿಸುತ್ತಿದ್ದಂತೆ ಜೆಡಿಎಸ್‌ನಿಂದ 8ನೇ ಅಭ್ಯರ್ಥಿಯಾಗಿ ಮಾಜಿ ವಿಧಾನಪರಿಷತ್ ಸದಸ್ಯ ಗೋವಿಂದರಾಜು ನಾಮಪತ್ರ ಸಲ್ಲಿಸಿದರು. ಬಿಜೆಪಿ ಬೆಂಬಲದೊಂದಿಗೆ ಜೆಡಿಎಸ್ ಅಭ್ಯರ್ಥಿ ನಾಮಪತ್ರ ಸಲ್ಲಿಸಿದ್ದಾರೆ .

ಹಾಗಾಗಿ ವಿಧಾನಪರಿಷತ್ ಚುನಾವಣಾ ಕಣ ರಂಗೇರಿದ್ದು, ಕಾರ್ತಿಕ್ ವಿನಯ್ ಹಾಗೂ ಗೋವಿಂದರಾಜು ನಡುವೆ ಗೆಲುವಿಗೆ ಪೈಪೋಟಿ ಇದ್ದು, ಎರಡೂ ಪಕ್ಷಗಳಿಗೂ ತಮ್ಮ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ಕೆಲವು ಮತಗಳ ಅವಶ್ಯಕತೆ ಇದ್ದು, ಇದನ್ನು ಹೇಗೆ ಕ್ರೋಡೀಕರಿಸುತ್ತವೆ ಎಂಬುದು ಕುತೂಹಲ ಮೂಡಿಸಿದೆ.

### ಕಾಂಗ್ರೆಸ್-ಜೆಡಿಎಸ್ ನಡುವೆ ಪೈಪೋಟಿ: ಬಿಜೆಪಿಯಿಂದ ಲಿಂಗರಾಜ್ ಪಾಟೀಲ್ ಹಾಗೂ ರಘು ಕೌಟಿಲ್ಯ ನಾಮಪತ್ರ



ಲಿಂಗರಾಜ್ ಪಾಟೀಲ್




ರಘು ಕೌಟಿಲ್ಯ



ವಿನಯ್ ಕಾರ್ತಿಕ್


### ರಾಜ್ಯಸಭಾ ಚುನಾವಣೆ ಬಿಜೆಪಿ ಅಭ್ಯರ್ಥಿ ಮಾ.ನಾಗರಾಜ ನಾಮಪತ್ರ ಸಲ್ಲಿಕೆ



ಎಂ.ನಾಗರಾಜ

ರಾಜ್ಯ ವಿಧಾನಸಭೆಯಿಂದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಜೂ.18ರಂದು ನಡೆಯಲಿರುವ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಲೋಕಸೇವಾ ಆಯೋಗದ ಮಾಜಿ ಸದಸ್ಯ ಎಂ. ನಾಗರಾಜು ಅವರು ಸೋಮವಾರ ನಾಮಪತ್ರ ಸಲ್ಲಿಸಿದರು. ಕಾಂಗ್ರೆಸ್‌ನಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ವಕ್ತಾರ ಪವನ್ ಖೇರಾ, ಹಾಗೂ ಮನ್ಸೂರ್ ಆಲಿಖಾನ್ ಈಗಾಗಲೇ ನಾಮಪತ್ರ ಸಲ್ಲಿಸಿದ್ದು, ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಅವಿರೋಧ ಆಯ್ಕೆಯಾಗುವ ಸಾಧ್ಯತೆಗಳಿವೆ. ನಾಲ್ಕು ಸ್ಥಾನಗಳಿಗೆ ಕಾಂಗ್ರೆಸ್‌ನಿಂದ ಮೂವರು, ಬಿಜೆಪಿಯಿಂದ ಒಬ್ಬರು ಹಾಗೂ ಪಕ್ಷೇತರದ ಅಭ್ಯರ್ಥಿ ಒಬ್ಬರು ನಾಮಪತ್ರ ಸಲ್ಲಿಸಿದ್ದರಾದರೂ ಪಕ್ಷೇತರ ಅಭ್ಯರ್ಥಿಗೆ ಶಾಸಕರ ಬೆಂಬಲ ಸಿಗದ ಕಾರಣ ಕಾಂಗ್ರೆಸ್‌ನ ಮಲ್ಲಿಕಾರ್ಜುನ ಖರ್ಗೆ, ಪವನ್ ಖೇರಾ, ಮನ್ಸೂರ್ ಆಲಿಖಾನ್ ಮತ್ತು ಬಿಜೆಪಿಯ ಎಂ. ನಾಗರಾಜ ಅವಿರೋಧವಾಗಿ ಆಯ್ಕೆಯಾಗುವುದು ಬಹುತೇಕ ನಿಶ್ಚಿತ.

## ನಿತ್ಯ ಪಂಚಾಂಗ 9.06.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಬಹುಳ, ನವಮಿ, ಉತ್ತರಾಭಾದ್ರ ನಕ್ಷತ್ರ,ವಿಶ್ವ ಸಾಗರ ದಿನಾಚರಣೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ಸಿಎಂ ಆಗುವ ಅವಕಾಶ ಮೂರು ಬಾರಿ ಕೈತಪ್ಪಿತು: ಪರಮೇಶ್ವರ್ ಬೇಸರ

**ಬೆಂಗಳೂರು, ಜೂ.8:** ಮುಖ್ಯಮಂತ್ರಿಯಾಗುವ ಅವಕಾಶಕ್ಕಾಗಿ ನಿರೀಕ್ಷೆಯಲ್ಲಿದ್ದ ನನಗೆ ಮೂರು ಬಾರಿ ಅವಕಾಶ ಕೈತಪ್ಪಿತು ಎಂದು ಡಾ.ಜಿ.ಪರಮೇಶ್ವರ್ ಭಾವುಕರಾದ ಪ್ರಸಂಗ ನಡೆದಿದೆ.

ತುಮಕೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಮೂರು ಬಾರಿ ನನಗೆ ಮುಖ್ಯಮಂತ್ರಿ ಸ್ಥಾನ ಕೈತಪ್ಪಿತು. ಕಾರಣಾಂತರಗಳಿಂದ, ಕೆಲ ರಾಜಕೀಯ ಕಾರಣಗಳಿಂದಾಗಿ ಅವಕಾಶ ತಪ್ಪಿತು ಎಂದು ಬೇಸರ ವ್ಯಕ್ತಪಡಿಸಿದರು. 2013ರಲ್ಲಿ ಚುನಾವಣೆಯಲ್ಲಿ ಸೋಲನುಭವಿಸಿದೆ ಹೀಗಾಗಿ ಸಿಎಂ ಸ್ಥಾನ ಕೈತಪ್ಪಿತು. ಅಂದು ನಾನು ಗೆದ್ದಿದ್ದರೆ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗುತ್ತಿರಲಿಲ್ಲ. ಆದರೆ ನನ್ನ ಹಣೆಬರಹ ಅಂದು ಸೋತೆ. ಹಾಗಾಗಿ ಸಿಎಂ ಆಗಲು ಆಗಲಿಲ್ಲ. 2018ರಲ್ಲಿ ಮೈತ್ರಿ ಸರ್ಕಾರದಲ್ಲಿ ಎಚ್.ಡಿ.ಕುಮಾರಸ್ವಾಮಿ ಸಿಎಂ ಆದರು. ಅಂದು ಕೂಡ ಮಾತುಕತೆ ನಡೆದಿದ್ದರೆ ನನ್ನನ್ನು ಮುಖ್ಯಮಂತ್ರಿಯನ್ನಾಗಿ ಮಾಡಬಹುದಿತ್ತು. ಆದರೆ ಯಾವುದೋ ಕಾರಣಕ್ಕೆ ಸಾಧ್ಯವಾಗಲಿಲ್ಲ. ಈ ಬಾರಿ 2026ರಲ್ಲಿ ಸಿಎಂ ಸ್ಥಾನ ನೀಡುವ ನಿರೀಕ್ಷೆ ಇತ್ತು. ಆದರೆ ರಾಜಕೀಯ ಕಾರಣಗಳಿಂದ ಅದು ಕೂಡ ಸಾಧ್ಯವಾಗಲಿಲ್ಲ. ಎಂದು ಅಲವತ್ತುಕೊಂಡರು.

# ಟೀಕೆಗಾಗಿ ಶಾಸನಸಭೆಗಳ ಬಳಕೆ ತಪ್ಪು: ರಾಜೇಂದ್ರ ಅರ್ಲೇಕರ್

## ಬೆಂಗಳೂರಿನಲ್ಲಿ ಸಂಸತ್ತಿನ ಹಕ್ಕು ಬಾಧ್ಯತಾ ನೋಟಗಳು ಕೃತಿ ಬಿಡುಗಡೆ ಸಮಾರಂಭದಲ್ಲಿ ಕೇರಳ –ತಮಿಳುನಾಡು ರಾಜ್ಯಪಾಲರ ಸ್ಪಷ್ಟ ನುಡಿ




**ಬೆಂಗಳೂರು, ಜೂ.8:** ರಾಜ್ಯಗಳ ಜಂಟಿ ಅಧಿವೇಶನಗಳಲ್ಲಿ ರಾಜ್ಯಪಾಲರ ನೀತಿ ಭಾಷಣ ಸಂವಿಧಾನದ ಪ್ರಕಾರ ಸರ್ಕಾರದ ಮುಂದಿನ ಒಂದು ವರ್ಷದ ನೀತಿಯನ್ನು ಬಿಂಬಿಸಬೇಕೇ ಹೊರತು, ಟೀಕೆಗಳಿಗಲ್ಲ. ಆದರೆ, ಇತ್ತೀಚಿನ ದಿನಗಳಲ್ಲಿ ರಾಜ್ಯಗಳಲ್ಲಿ ಸದನವನ್ನು ಇತರ ಸರ್ಕಾರಗಳು ಅಥವಾ ಕೇಂದ್ರ ಸರ್ಕಾರವನ್ನು ಟೀಕಿಸಲು ವೇದಿಕೆಯನ್ನಾಗಿ ಮಾಡಿಕೊಳ್ಳಲಾಗುತ್ತಿದೆ. ಪಕ್ಷದ ವೇದಿಕೆಗಳಲ್ಲಿ ಟೀಕೆಗಳು ಇರಲಿ, ಆದರೆ ಶಾಸಕಾಂಗದ ವೇದಿಕೆ ಟೀಕೆಗಲ್ಲ ಎಂದು ಕೇರಳ ಮತ್ತು ತಮಿಳುನಾಡು ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅಭಿಪ್ರಾಯಪಟ್ಟರು. ರಾಜ್ಯ ಸರ್ಕಾರಿ ನೌಕರರ ಸಂಘದ ಎನ್‌ಜಿಓ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಿವೃತ್ತ ವಿಧಾನಸಭಾ ಕಾರ್ಯದರ್ಶಿ ಟಿ.ಎನ್. ಧ್ರುವಕುಮಾರ್ ಅವರ 'ಸಂಸದೀಯ ಹಕ್ಕು ಬಾಧ್ಯತೆಗಳ ಒಂದು ನೋಟ–ಗ್ಲಿಂಪ್ಸಸ್ ಆಫ್ ಪಾರ್ಲಿಮೆಂಟರಿ ಪ್ರಿವಿಲೇಜಸ್' ಕೃತಿ ಬಿಡುಗಡೆಗೊಳಿಸಿ ಮಾತನಾಡಿ, ಸಂಸದೀಯ ನಡಾವಳಿಗಳು ಮತ್ತು ಹಕ್ಕು ಬಾಧ್ಯತೆಗಳು ಕೇವಲ ಸಂಘರ್ಷ ಮಾಡಲು ಅಲ್ಲ, ಬದಲಿಗೆ ಅವು ಸೌಹಾರ್ದತೆ ಮತ್ತು ಸಹಕಾರದ ಮೂಲಕ ದೇಶದ ಅಭಿವೃದ್ಧಿಗೆ, ಜನಪ್ರತಿನಿಧಿಗಳಿಗೆ ಶಿಕ್ಷಣ ಅಗತ್ಯವಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಓದು ಮತ್ತು ಬರಹ ಗೊತ್ತಿಲ್ಲದವರೂ ಜನಪ್ರತಿನಿಧಿಗಳಾಗಿ ಆಯ್ಕೆಯಾಗುತ್ತಿದ್ದಾರೆ. ಕನಿಷ್ಠ ಕಾರು ಚಾಲನೆ ಮಾಡಲು ಅಥವಾ ಕಚೇರಿಯೊಂದರಲ್ಲಿ ಆಟೆಂಡರ್ ಹುದ್ದೆಗೆ ಸೇರಲು ವಿದ್ಯಾರ್ಹತೆ ಮತ್ತು ಪ್ರಮಾಣ ಪತ್ರಗಳನ್ನು ಪರಿಶೀಲಿಸಲಾಗುತ್ತದೆ. ಆದರೆ, ಇಡೀ ದೇಶದ ಭವಿಷ್ಯವನ್ನು

5 ವರ್ಷಗಳ ಕಾಲ ಕೈಯಲ್ಲಿ ಹಿಡಿಯುವ ಜನಪ್ರತಿ ನಿಧಿಗಳ ವಿದ್ಯಾರ್ಹತೆಯ ಬಗ್ಗೆ ನಾವೇಕೆ ಯೋಚಿಸುತ್ತಿಲ್ಲ ಎಂಬ ಬಗ್ಗೆ ಜನರು ತಾವೇ ಪ್ರಶ್ನೆ ಮಾಡಿ ಕೊಳ್ಳಬೇಕು ಎಂದರು.

ಶಾಸನ ಸಭೆಗಳಲ್ಲಿ ಹೇಗೆ ನಡೆದುಕೊಳ್ಳಬೇಕು. ಚರ್ಚೆ ಮಾಡುವುದು ಮತ್ತು ಪ್ರಶ್ನೆಗಳನ್ನು ಕೇಳುವುದಕ್ಕೆ ಸಂಬಂಧಿಸಿದಂತೆ ನಿಯಮಗಳನ್ನು ಅನುಸರಿಸುವ ಕುರಿತು ಶಾಸಕರಿಗೆ ತರಬೇತಿ ನೀಡಬೇಕಾದ ಅಗತ್ಯವಿದೆ ಎಂದು ಅವರು, ಸಂಸದೀಯ ಕಾರ್ಯವಿಧಾನಗಳನ್ನು ಕಲಿಯಬಯಸುವ ಪ್ರತಿಯೊಬ್ಬರಿಗೂ ಧ್ರುವಕುಮಾರ್ ಅವರ ಕೃತಿ ಒಂದು ಅತ್ಯುತ್ತಮ ಕೈಪಿಡಿಯಾಗಿ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಕನ್ನಡಪ್ರಭ ಮತ್ತು ಏಷ್ಯಾನೆಟ್ ಸುವರ್ಣ ನ್ಯೂಸ್ ಸಮೂಹ ಸಂಪಾದಕೀಯ ನಿರ್ದೇಶಕ ರವಿ ಹೆಗಡೆ ಅವರು ಮಾತನಾಡಿ, ಸಂಸದೀಯ ವಿಶೇಷಾಧಿಕಾರಗಳು ಹಾಗೂ ಪತ್ರಿಕೋದ್ಯಮದ ನಡುವಿನ ಸಂಬಂಧವನ್ನು ಅತ್ಯಂತ ಸೂಕ್ಷ್ಮವಾಗಿ ಮತ್ತು ಆಳವಾಗಿ ವಿಶ್ಲೇಷಿಸಿರುವ ಧ್ರುವಕುಮಾರ್ ಅವರ ಈ ಕೃತಿಯು ಭಾರತೀಯ ಸಂಸದೀಯ ಇತಿಹಾಸದಲ್ಲೇ ಒಂದು ವಿಶಿಷ್ಟ ಆಕರ ಗ್ರಂಥವಾಗಿದೆ. ಮಾಧ್ಯಮಗಳು ಮತ್ತು ಸಂಸತ್ತಿನ ಹಕ್ಕುಚ್ಯುತಿ ಪ್ರಕ್ರಿಯೆಗಳ ನಡುವಿನ

ಸಂಘರ್ಷವನ್ನು ಅರ್ಥ ಮಾಡಿಕೊಳ್ಳಲು ಈ ಕೃತಿ ಸಹಕಾರಿ. ಶಾಸಕಾಂಗ, ಕಾರ್ಯಾಂಗ ಮತ್ತು ಪತ್ರಿಕಾರಂಗ ಹೇಗೆ ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂಬುದಕ್ಕೆ ಈ ಕೃತಿ ದಿಕ್ಸೂಚಿ ಇದ್ದಂತೆ ಎಂದರು. ಸುಪ್ರೀಂ ಕೋರ್ಟ್ ಹಿರಿಯ ವಕೀಲ ಕೆ.ವಿ. ಧನಂಜಯ್ ಮಾತನಾಡಿ, ಕೇರಳ ಮತ್ತು ತಮಿಳುನಾಡಿನ ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಅವರ ಕಾರ್ಯವೈಖರಿ ಶ್ಲಾಘಿಸಿದ ಅವರು, ಕಳೆದ ವರ್ಷ ತಮಿಳುನಾಡು ಸರ್ಕಾರ ಮತ್ತು ರಾಜ್ಯಪಾಲರ ನಡುವಿನ ಸಂಘರ್ಷ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು. ಈ ಬಾರಿಯೂ ಪರಿಸ್ಥಿತಿ ಕೈಮೀರುವ ಆತಂಕವಿತ್ತು. ಆದರೆ, ರಾಜ್ಯಪಾಲರು ಇಡೀ ಪರಿಸ್ಥಿತಿಯನ್ನು ಅತ್ಯಂತ ಘನತೆ ಮತ್ತು ಸೌಹಾರ್ದತೆಯಿಂದ ನಿಭಾಯಿಸಿದರು ಎಂದು ಹೇಳಿದರು.

ಇದೇ ವೇಳೆ ನರಸಿಂಹಮೂರ್ತಿ ಸ್ವಾಮೀಜಿ, ಹಿರಿಯ ವಕೀಲೆ ಪ್ರಮೀಳಾ ನೇಸರ್ಗಿ, ವಿಧಾನ ಪರಿಷತ್ ಮಾಜಿ ಸಭಾಪತಿ ಸುದರ್ಶನ್ ಸೇರಿದಂತೆ ಇತರರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಎಫ್‌ಕೆಸಿಸಿಐ ಮಾಜಿ ಅಧ್ಯಕ್ಷ ಶ್ರೀನಿವಾಸಮೂರ್ತಿ ಉಪಸ್ಥಿತರಿದ್ದರು.




ನಗರದಲ್ಲಿ ನಿವೃತ್ತ ವಿಧಾನಸಭಾ ಕಾರ್ಯದರ್ಶಿ ಟಿ.ಎನ್.ಧ್ರುವಕುಮಾರ್ ಅವರ ಸಂಸದೀಯ ಹಕ್ಕು ಬಾಧ್ಯತೆಗಳ ಒಂದು ನೋಟ ಕೃತಿಯನ್ನು ಕೇರಳ ಮತ್ತು ತಮಿಳುನಾಡು ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ಬಿಡುಗಡೆಗೊಳಿಸಿದರು. ಕನ್ನಡಪ್ರಭ ಮತ್ತು ಏಷ್ಯಾನೆಟ್ ಸುವರ್ಣ ನ್ಯೂಸ್ ಸಮೂಹ ಸಂಪಾದಕೀಯ ನಿರ್ದೇಶಕ ರವಿ ಹೆಗಡೆ, ಸುಪ್ರೀಂ ಕೋರ್ಟ್ ಹಿರಿಯ ವಕೀಲ ಕೆ.ವಿ.ಧನಂಜಯ್ ಹಾಜರಿದ್ದರು.



ವಿಧಾನಸಭೆಯಲ್ಲಿ ಜೆಡಿಎಸ್ ನಾಯಕ ಸುರೇಶ್‌ಬಾಬು, ಸಿ.ಎನ್.ಬಾಲಕೃಷ್ಣ, ಎ.ಮಂಜು, ಕರೆಮ್ಮನವರ್, ಶಾರದಾ ಪೂರ್ಯಾನಾಯಕ್, ಕೃಷ್ಣಪ್ಪ, ನೇಮಿರಾಜ್ ನಾಯಕ್, ವೆಂಕಟಶಿವಾರೆಡ್ಡಿ ಸೇರಿದಂತೆ ಜೆಡಿಎಸ್ ಶಾಸಕರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧದ ಸಿಎಂ ಕೊಠಡಿಯಲ್ಲಿ ಸೋಮವಾರ ಭೇಟಿ ಮಾಡಿ ಅಭಿನಂದಿಸಿದರು.

# ಪರಿಸರ ರಕ್ಷಣೆಗೆ ಎಸ್.ಈ.ಸುಧೀಂದ್ರ ಕರೆ

**ಬೆಂಗಳೂರು, ಜೂ.8:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ.ಸುಧೀಂದ್ರ ಅವರು ಸೋಮವಾರ ಬ್ಯೂಗಲ್ ರಾಕ್ ಉದ್ಯಾನವನ, ಬಸವನಗುಡಿ ಬೆಂಗಳೂರಿನಲ್ಲಿ ವಿಖ್ಯಾತಾನಂದ ಸ್ವಾಮೀಜಿಯವರ ಸಾನಿಧ್ಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವಿವಿಧ ಪರಿಸರ ಸಂರಕ್ಷಣೆಗೆ ಪೂರಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿಯಾದರು. ಈ ಸಂದರ್ಭದಲ್ಲಿ ಮಂಡಳಿಯ ಅಧ್ಯಕ್ಷರು ಪ್ರಸ್ತುತ ಸನ್ನಿವೇಶದಲ್ಲಿ, 2026 ನೇ ಸಾಲಿನ ವಿಶ್ವ ಪರಿಸರ ದಿನಾಚರಣೆಯ ಜಾಗತಿಕ ತಾಪಮಾನ ಏರುವಿಕೆ ಕುರಿತಾಗಿದ್ದು, ಜಗತ್ತಿನಾದ್ಯಂತ ಈ ತಾಪಮಾನ ತಗ್ಗಿಸುವಿಕೆಗೆ ಹಲವಾರು ಪರಿಸರ ಸಂರಕ್ಷಣೆ ಕುರಿತ ಕಾರ್ಯಕ್ರಮಗಳಿಗೆ ಮುಂದಾಗಿರುವುದು ಇಂದಿನ ಅವಶ್ಯಕತೆಯಾಗಿದೆ ಎಂದರು. ಮುಂದಿನ ಪೀಳಿಗೆಗಾಗಿ ನಾಡಿನ ಪರಿಸರ ಉಳಿಸಿ ರಕ್ಷಿಸಬೇಕಾದರೆ




ಪ್ರತಿಯೊಬ್ಬರು ಕಡ್ಡಾಯವಾಗಿ ಗಿಡಗಳನ್ನು ನೆಟ್ಟು ರಕ್ಷಿಸಬೇಕು ಎಂದು ಕರೆ ನೀಡಿದರು.ಜಾಗತಿಕ ತಾಪಮಾನ ತಗ್ಗಿಸುವಿಕೆಗೆ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಜೈವಿಕ ಇಂಧನ ಕಾರ್ಯ ಯೋಜನೆಗಳು ಜೈವಿಕ ಇಂಧನ ಗಿಡಗಳ ನೆಡುವಿಕೆಗೆ ಪ್ರಥಮ ಆದ್ಯತೆಯಾಗಿದೆ ಎಂದರು.ಈ ಜೈವಿಕ ಇಂಧನಗಳ ಉತ್ಪಾದನೆಗೆ ಜೈವಿಕ ಇಂಧನ ಬೀಜಗಳು ಸಹ ದೊರೆಯಲಿದ್ದು ಜೈವಿಕ ಇಂಧನ ಸಸಿಗಳು ಪರಿಸರ ಸಂರಕ್ಷಣೆ, ವಾತಾಯನದಲ್ಲಿನ ಆಮ್ಲಜನಕದ ಕೊರತೆಯನ್ನು ಕಡಿಮೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು. ಮಂಡಳಿಯ ಅಧ್ಯಕ್ಷರು ಇಂದಿನ ವಿದ್ಯಾರ್ಥಿಗಳೆ ನಾಡಿನ ಮುಂದಿನ ನಾಯಕರು ಇಂದು ಪ್ರತಿಯೊಬ್ಬ ವಿದ್ಯಾರ್ಥಿಗಳು ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರ ರಕ್ಷಣೆಗೆ ಕಟ್ಟಿಬದ್ದರಾಗಬೇಕು ಎಂದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕಗಳು, ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಬಸವನಗುಡಿ ಕ್ಷೇತ್ರದ ಶಾಸಕ ರವಿ ಸುಬ್ರಮಣ್ಯ, ಬಿಎಂಟಿಸಿ ಅಧ್ಯಕ್ಷ ವಿ.ಎಸ್.ಆರಾಧ್ಯ, ಕಾಂಗ್ರೆಸ್ ನಾಯಕರಾದ ಶೇಖರ್, ಕೃಷ್ಣ , ನಾಗರಾಜ್, ಗುಟ್ಟೆ ನಾಗರಾಜ್, ಕಬಾಡಿ ರಾಮಚಂದ್ರ, ರಘು, ಆನಂದ್‌ಕುಮಾರ್, ಪರಿಸರ ಪ್ರೇಮಿಗಳು, ವಿದ್ಯಾರ್ಥಿಗಳು ಭಾಗಿಯಾಗಿದ್ದರು.

# ಕಾಂಗ್ರೆಸ್‌ನಿಂದ 5ನೇ ಅಭ್ಯರ್ಥಿ ಕಣಕ್ಕೆ: ಪರಿಷತ್ ಚುನಾವಣೆಯಲ್ಲಿ ಪೈಪೋಟಿ ಸ್ಪಷ್ಟ

**ಹೆಚ್ಚುವರಿ ಅಭ್ಯರ್ಥಿ ಇಲ್ಲದ ಹಿನ್ನೆಲೆ ರಾಜ್ಯಸಭೆಗೆ ಅವಿರೋಧ ಆಯ್ಕೆ ಸಾಧ್ಯತೆ**

**ಬೆಂಗಳೂರು, ಜೂ.8:** ವಿಧಾನಸಭೆಯಿಂದ ವಿಧಾನ ಪರಿಷತ್‌ನ 7 ಸದಸ್ಯ ಸ್ಥಾನಗಳಿಗೆ ಮತದಾನ ಅನಿವಾರ್ಯವಾಗಲಿದೆ. ಕಾಂಗ್ರೆಸ್ ಐವರು ಅಭ್ಯರ್ಥಿಗಳನ್ನು ಸ್ಪರ್ಧೆಗಿಳಿಸಿರುವ ಹಿನ್ನೆಲೆಯಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಅಭ್ಯರ್ಥಿ ನಡುವೆ ತೀವ್ರ ಪೈಪೋಟಿ ಏರ್ಪಡುವ ಸಾಧ್ಯತೆ ಸ್ಪಷ್ಟವಾಗಿವೆ.

ಜೂ.18ರಂದು ಚುನಾವಣೆಗೆ ಮತದಾನ ನಡೆಯುವುದು ಖಾತ್ರಿಯಾಗಿದೆ. ಆದರೆ ರಾಜ್ಯಸಭೆ ಚುನಾವಣೆಗೆ ಹೆಚ್ಚುವರಿ ಅಭ್ಯರ್ಥಿಗಳು ಇಲ್ಲದಿರುವ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯಾಗುತ್ತಿದೆ. ವಿಧಾನಪರಿಷತ್ ಚುನಾವಣೆಯಲ್ಲಿ ಗೌಪ್ಯ ಮತದಾನ ನಡೆಯುವುದರಿಂದ ಅಡ್ಡ ಮತದಾನ ನಡೆಯುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ. ಜೆಡಿಎಸ್ ಮತ್ತು ಕಾಂಗ್ರೆಸ್ ನಡುವೆ ಒಂದು ಸ್ಥಾನದ ಗೆಲುವಿಗಾಗಿ ತೀವ್ರ ಪೈಪೋಟಿ ಉಂಟಾಗುವುದರಿಂದ ಶಾಸಕರಿಗೆ ಭಾರೀ ಬೇಡಿಕೆ ಉಂಟಾಗಲಿದೆ. ಒಂದು ವೇಳೆ ರಾಜ್ಯಸಭೆ ಚುನಾವಣೆಯಂತೆ ಕಾಂಗ್ರೆಸ್ 5ನೇ ಅಭ್ಯರ್ಥಿಯನ್ನು ಕಣಕ್ಕಿಳಿಸದಿದ್ದರೆ ಮೂರು ಪಕ್ಷಗಳ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗುತ್ತಿದ್ದರು. ಮತದಾನ ಅನಿವಾರ್ಯವಾಗಿರುವುದರಿಂದ ಮೂರೂ ಪಕ್ಷಗಳಲ್ಲಿ ತಮ್ಮ ಅಭ್ಯರ್ಥಿಗಳ ಗೆಲುವಿಗೆ ಚುನಾವಣಾ ತಂತ್ರಗಾರಿಕೆಗಳು ರೂಪಿಸಲಾಗುತ್ತದೆ. ಜೊತೆಗೆ ತಮ ಶಾಸಕರ ಮತಗಳು ಬೇರೆ ಪಕ್ಷದ ಅಭ್ಯರ್ಥಿಗಳಿಗೆ ದೊರೆಯದಂತೆ ಮಾಡಲು ವಿಪ್ ನೀಡುವುದು ಸೇರಿ ಹಲವು ಕ್ರಮಗಳನ್ನು ಕೈಗೊಳ್ಳುವ ಸಾಧ್ಯತೆಗಳಿವೆ.

**ಕಣದಲ್ಲಿರುವವರು:**
**ಕಾಂಗ್ರೆಸ್: ತಿಪ್ಪಣ್ಣಪ್ಪ ಕನಕನೂರು, ಪಿ.ವಿ.ಮೋಹನ್, ಕೆಪಿಸಿಸಿ ಅಧ್ಯಕ್ಷ ಬಿ. ಕೆ.ಹರಿಪ್ರಸಾದ್, ಶಿವಣ್ಣ.ಬಿ.ಎಸ್ ಹಾಗೂ ವಿನಯ್ ಕಾರ್ತಿಕ್.**
**ಬಿಜೆಪಿ: ಲಿಂಗರಾಜ್ ಪಾಟೀಲ್, ರಘು ಕೌಟಿಲ್ಯ ಹಾಗೂ ಜೆಡಿಎಸ್ ಅಭ್ಯರ್ಥಿ ಗೋವಿಂದರಾಜ್.**

ವಿಧಾನಸಭೆಯಲ್ಲಿ ಕಾಂಗ್ರೆಸ್ ಹೊಂದಿರುವ ಶಾಸಕರ ಸಂಖ್ಯಾಬಲದ ಆಧಾರದ ಮೇಲೆ 4 ಸ್ಥಾನ ಹಾಗೂ ಬಿಜೆಪಿ ಹೊಂದಿರುವ ಶಾಸಕರ ಸಂಖ್ಯಾ ಬಲದ ಆಧಾರದ ಮೇಲೆ 2 ಸ್ಥಾನಗಳನ್ನು ಸುಲಭವಾಗಿ ಗೆಲ್ಲಬಹುದಾಗಿದೆ. ಆದರೆ ಜೆಡಿಎಸ್ 18 ಶಾಸಕರನ್ನು ಹೊಂದಿರುವುದರಿಂದ ಸುಲಭವಾಗಿ ಗೆಲ್ಲಲು ಸಾಧ್ಯವಾಗುವುದಿಲ್ಲ. ಬಿಜೆಪಿಯ ಹೆಚ್ಚುವರಿ ಮತಗಳನ್ನು ಪಡೆದರೂ ಗೆಲುವಿನ ದಡ ಸೇರುವುದು ಕಷ್ಟವಾಗಲಿದೆ. ಆದರೆ ಕಾಂಗ್ರೆಸ್ ಕೂಡ 5ನೇ ಅಭ್ಯರ್ಥಿಯನ್ನು ಸ್ಪರ್ಧೆಗಿಳಿಸಿದೆ. ಈ ಅಭ್ಯರ್ಥಿಯ ಗೆಲುವು ಸುಲಭವಲ್ಲ. ಹೀಗಾಗಿ ಕಾಂಗ್ರೆಸ್ ಮತ್ತು ಜೆಡಿಎಸ್ ಅಭ್ಯರ್ಥಿಗಳ ನಡುವೆ ತೀವ್ರ ಹಣಾಹಣಿ ಏರ್ಪಡುವ ಸಾಧ್ಯತೆಗಳು ಗೋಚರಿಸುತ್ತಿವೆ.

ನಾಳೆ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಜೂ.11ರಂದು ನಾಮಪತ್ರ ವಾಪಸ್ ಪಡೆಯಲು ಕಡೆಯ ದಿನವಾಗಿದ್ದು ಅಂದು ಅಂತಿಮ ಕಣದಲ್ಲಿ ಉಳಿಯುವ ಅಭ್ಯರ್ಥಿಗಳನ್ನು ಪ್ರಕಟಿಸಲಾಗುತ್ತದೆ. ಕಾಂಗ್ರೆಸ್‌ನ 5ನೇ ಅಭ್ಯರ್ಥಿ ಉಮೇದುವಾರಿಕೆ ಹಿಂಪಡೆಯದಿದ್ದರೆ ಜೂ.18ರಂದು ಮತದಾನ ನಡೆದು ಅಂದು ಸಂಜೆ ಲಿತಾಂಶ ಪ್ರಕಟವಾಗಲಿದೆ.

ನಾಮಪತ್ರ ಸಲ್ಲಿಕೆಗೆ ಕಡೆಯ ದಿನವಾಗಿದ್ದ ಸೋಮವಾರ ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕಾರ್ತಿಕ್, ಬಿಜೆಪಿ ಅಭ್ಯರ್ಥಿಗಳಾದ ಲಿಂಗರಾಜ್ ಪಾಟೀಲ್, ರಘು ಕೌಟಿಲ್ಯ ಹಾಗೂ ಜೆಡಿಎಸ್ ಅಭ್ಯರ್ಥಿ ಗೋವಿಂದರಾಜ್ ಅವರು ಉಮೇದುವಾರಿಕೆಯನ್ನು ಸಲ್ಲಿಸಿದರು. ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜು, ನಸೀರ್ ಅಹದ್, ಎಂ.ಟಿ.ಬಿ.ನಾಗರಾಜು, ಪ್ರತಾಪಸಿಂಹ ನಾಯಕ್ ಕೆ., ತಿಪ್ಪಣ್ಣಪ್ಪ, ಸುನೀಲ್ ವಲ್ಯಾಪುರ್, ಬಿ.ಕೆ.ಹರಿಪ್ರಸಾದ್ ಅವರು ಜೂ.30ರಂದು ನಿವೃತ್ತಿಯಾಗಲಿದ್ದಾರೆ. ಇವರ ನಿವೃತ್ತಿಯಿಂದ ತೆರವಾಗುವ ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಸದಸ್ಯ ಸ್ಥಾನಗಳ ಆಯ್ಕೆಗೆ ಭಾರತದ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ.

# ಖಾತೆಗಾಗಿ ಕ್ಯಾತೆ ಬಿಟ್ಟು ರಾಜ್ಯದ ಅಭಿವೃದ್ಧಿಯತ್ತ ಗಮನಹರಿಸಿ



**ಕಾಂಗ್ರೆಸ್ ಸಚಿವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಲಹೆ**

**ಬೆಂಗಳೂರು, ಜೂ.8:** ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಕಾಂಗ್ರೆಸ್ ಸಚಿವರು ಖಾತೆಗಾಗಿ ಕ್ಯಾತೆ ಬಿಟ್ಟು ಕೆಲಸ ಮಾಡಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಲಹೆ ನೀಡಿದ್ದಾರೆ.

ನಗರದಲ್ಲಿ ಮಾಧ್ಯಮಗಳ ಜತೆ ಮಾತನಾಡಿ, ಮುಖ್ಯಮಂತ್ರಿ ಶಿವಕುಮಾರ್ ಅವರಿಗೆ ಖಾತೆ ಹಂಚಿಕೆಯೇ ಸವಾಲಾಗಿದೆ. ಮೂರು ವರ್ಷ ಅಭಿವೃದ್ಧಿ ಏನೂ ಮಾಡಿಲ್ಲ. ಇನ್ನಾದರೂ ಖಾತೆಗಳಿಗೆ ಕ್ಯಾತೆ ಬಿಟ್ಟು ಕೆಲಸ ಮಾಡಲಿ. ಮುಖ್ಯಮಂತ್ರಿ ಬದಲಾಗಿರುವುದು ಬಿಟ್ಟರೆ ಈ ಸರ್ಕಾರದಿಂದ ಅಭಿವೃದ್ಧಿ ನಿರೀಕ್ಷೆ ಮಾಡಲಾಗದು. ಸಾಲದ ಹೊರೆ ಹತ್ತು ಲಕ್ಷ ಕೋಟಿ ತಲುಪಿದೆ. ಪೂರ್ಣ ಪ್ರಮಾಣದಲ್ಲಿ ಸಂಪುಟ ರಚನೆಯಾಗಿಲ್ಲ. ಜಿಲ್ಲಾ ಉಸ್ತುವಾರಿ ಹಂಚಿಕೆ ಆಗಿಲ್ಲ ಎಂದು ಬಿವೈವಿ ವಾಗ್ದಾಳಿ ನಡೆಸಿದರು.

ರಾಜ್ಯಸಭೆ, ಪರಿಷತ್ ಅಭ್ಯರ್ಥಿಗಳ ಆಯ್ಕೆ ಸಂತೋಷ ತಂದಿದೆ

ರಾಜ್ಯಸಭೆಗೆ ಪ್ರೊ ಎಂ. ನಾಗರಾಜ್ ಅವರನ್ನು ಹಾಗೂ ವಿಧಾನ ಪರಿಷತ್‌ಗೆ ಲಿಂಗರಾಜ್ ಪಾಟೀಲ್ ಹಾಗೂ ರಘು ಕೌಟಿಲ್ಯ ಹೆಸರನ್ನು ಘೋಷಣೆ ಮಾಡಲಾಗಿದೆ. ಈ ಎಲ್ಲಾ ಮುಖಂಡರು ಪಕ್ಷದ ಸಂಘಟನೆಗೆ ವಿವಿಧ ರೀತಿಯಲ್ಲಿ ತೊಡಗಿಸಿಕೊಂಡಿದ್ದವರು. ಈ ಎಲ್ಲರ ಆಯ್ಕೆ ಸಂತೋಷ ತಂದಿದೆ. ರಾಜ್ಯಸಭೆಗೆ ಸುಮಲತಾ ಅಂಬರೀಶ್ ಅವರ ಹೆಸರು ಪ್ರಸ್ತಾಪವಾಗಿತ್ತು. ಈ ಹಿಂದೆ ಮಂಡ್ಯದಿಂದ ಅವರು ಸ್ವತಂತ್ರ ಸ್ಪರ್ಧೆ ಮಾಡಿದ್ದಾಗ ಬಿಜೆಪಿ ಬೆಂಬಲ ನೀಡಿತ್ತು. ಒಳ್ಳೆಯ ಅಂತರದಿಂದ ಗೆಲುವು ಸಾಧಿಸಿದ್ದರು. ಕಳೆದ ಚುನಾವಣೆಯಲ್ಲಿ ಕುಮಾರಸ್ವಾಮಿ ಅವರಿಗೆ ಕ್ಷೇತ್ರ ಬಿಟ್ಟು ಕೊಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಸುಮಲತಾ ಅವರಿಗೆ ಮುಂದೆ ಸೂಕ್ತ ಸ್ಥಾನಮಾನ ಕೊಡಲಾಗುವುದು ಎಂದರು.

**ದೇವೇಗೌಡರ ಬಗ್ಗೆ ರಾಜ್ಯಮಟ್ಟದಲ್ಲಿ ಚರ್ಚೆ ನಡೆದಿರಲಿಲ್ಲ**

**ರಾಜ್ಯಸಭೆಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಹೆಸರು ಪ್ರಸ್ತಾಪ ಕುರಿತ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ ಅವರು, ದೇವೇಗೌಡರು ಮೋದಿ ಅವರ ಕೈಬಲಪಡಿಸಿದ್ದಾರೆ. ಎನ್‌ಡಿಎಗೆ ಬೆಂಬಲ ನೀಡಿದ್ದಾರೆ. ಅವರ ಬಗ್ಗೆ ಪಕ್ಷಕ್ಕೆ ಅಪಾರ ಗೌರವ ಇದೆ. ರಾಜ್ಯಸಭೆಗೆ ಅವರನ್ನು ಕಳುಹಿಸುವ ಬಗ್ಗೆ ರಾಜ್ಯಮಟ್ಟದಲ್ಲಿ ಯಾವುದೇ ರೀತಿಯ ಚರ್ಚೆ ನಡೆದಿರಲಿಲ್ಲ. ಇತ್ತೀಚಿನ ರಾಜಕೀಯ ಸ್ಥಿತಿಗತಿ ನೋಡಿ ಸೂಕ್ತ ಅಭ್ಯರ್ಥಿಗೆ ಅವಕಾಶ ಮಾಡಿಕೊಟ್ಟಿದ್ದಾರೆ. ಪ್ರಾಮಾಣಿಕವಾಗಿ ದುಡಿದ ಪಕ್ಷದ ಕಾರ್ಯಕರ್ತರಿಗೆ ಅವಕಾಶ ನೀಡಿದ್ದಾರೆ ಎಂದರು.**

# ಶಾಲಾ–ಕಾಲೇಜುಗಳ ಬಳಿ ಹೆಚ್ಚುತ್ತಿರುವ ಮಾದಕದ್ರವ್ಯ ಪಿಡುಗು: ಬೇರುಸಮೇತ ಕಿತ್ತೊಗೆಯಲು ವಿಶೇಷ ದಳ ರಚಿಸಿ

**ಪೊಲೀಸ್ ಗಸ್ತು ಹೆಚ್ಚಳ, ತಂಬಾಕು ಉತ್ಪನ್ನಗಳ ನಿಷೇಧ ಹಾಗೂ ಪುನರ್ವಸತಿ ಕಲ್ಪಿಸುವ ಹಾಗೂ 'ಕೋಟ್ಪಾ' (COTPA) ಕಾಯ್ದೆಯಡಿ ಕ್ರಮ ಕೈಗೊಳ್ಳಲು ದಿನೇಶ್ ಗೂಳಿಗೌಡ ಮನವಿ**

**ಬೆಂಗಳೂರು, ಜೂ.8:** ಮಕ್ಕಳು ದೇವರ ರಾಜ್ಯದ ಪ್ರಜೆಗಳು" ಎಂಬ ರಾಷ್ಟ್ರಕವಿ ಕುವೆಂಪು ಅವರ ಮಾತು ಅಕ್ಷರಶಃ ಸತ್ಯ. ಆದರೆ, ಇತ್ತೀಚಿನ ದಿನಗಳಲ್ಲಿ ಶಾಲಾ–ಕಾಲೇಜುಗಳ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಡ್ರಗ್ಸ್ ಮತ್ತು ಗಾಂಜಾದಂತಹ ಮಾದಕ ದ್ರವ್ಯಗಳ ಹಾವಳಿ ಮಿತಿಮೀರುತ್ತಿದ್ದು, ನಮ್ಮ ಯುವಜನತೆ ದಾರಿ ತಪ್ಪುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ. ಜೂನ್ ಮೊದಲ ವಾರದಿಂದ ಹೊಸ ಶೈಕ್ಷಣಿಕ ವರ್ಷದ ಶಾಲಾ–ಕಾಲೇಜುಗಳು ಪುನರಾರಂಭಗೊಳ್ಳುತ್ತಿದ್ದು, ಮಕ್ಕಳ ಸುರಕ್ಷತೆಯ ಕುರಿತು ಪೋಷಕರಲ್ಲಿ ತೀವ್ರತರವಾದ ಆತಂಕ ಮನೆಮಾಡಿದೆ.

ಇದು ಗಂಭೀರವಾಗಿ ಪರಿಗಣಿಸಬೇಕಾದ ವಿಷಯವಾಗಿದೆ. ಗಾಂಜಾ ಹಾವಳಿಯು ದೊಡ್ಡ ಪಿಡುಗಿನಂತೆ ವ್ಯಾಪಿಸಿದ್ದು, ಖರೀದಿಗೆ ಹಣವಿಲ್ಲದೆ ವಿದ್ಯಾರ್ಥಿಗಳು ಕಾನೂನು ಬಾಹಿರ ಕೃತ್ಯಗಳಿಗಿಳಿಯುತ್ತಿರುವ ನಿದರ್ಶನಗಳೂ ಕೆಲವೆಡೆ ಕಂಡುಬರುತ್ತಿವೆ. ಬದುಕನ್ನು ಕಟ್ಟಿಕೊಳ್ಳಬೇಕಾದ ವಯಸ್ಸಿನಲ್ಲಿ ಯುವಜನತೆ ಮಾದಕ ಜಾಲಕ್ಕೆ ಬಲಿಯಾಗುತ್ತಿರುವುದನ್ನು ತಡೆಯಲು ಸರ್ಕಾರ ಈಗ ಕಠಿಣ ನಿರ್ಣಯವನ್ನು ಕೈಗೊಳ್ಳಬೇಕಾದ ತುರ್ತು ಅಗತ್ಯವಿದೆ.

ಆದ್ದರಿಂದ, ಮುಗ್ಧ ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ಹಾಗೂ ಪೋಷಕರ ಆತಂಕವನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರವು ತಕ್ಷಣವೇ ಈ ಕೆಳಗಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾಗಿ ಈ ಮೂಲಕ ಮನವಿ ಮಾಡುತ್ತೇನೆ.

**1. ಕಡ್ಡಾಯ ಪೊಲೀಸ್ ಗಸ್ತು ವ್ಯವಸ್ಥೆ:** ಜೂನ್ ಮೊದಲ ವಾರದಿಂದಲೇ ಎಲ್ಲ ಶಾಲಾ, ಕಾಲೇಜು ಮತ್ತು ಶಿಕ್ಷಣ ಸಂಸ್ಥೆಗಳ ಸುತ್ತಮುತ್ತಲಿನ ಕನಿಷ್ಠ ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಪೊಲೀಸರು ನಿರಂತರವಾಗಿ ಗಸ್ತು ತಿರುಗುವಂತೆ ಕಟ್ಟುನಿಟ್ಟಿನ ಆದೇಶ ಹೊರಡಿಸಬೇಕು.

**2. ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಕಟ್ಟುನಿಟ್ಟಿನ ತಡೆ ಮತ್ತು 'ಕೋಟ್ಪಾ' ಕಾಯ್ದೆಯಡಿ ಕ್ರಮ:** ಮಾದಕ ವ್ಯಸನಕ್ಕೆ ಆರಂಭಿಕ ಹೆಜ್ಜೆಯಾಗುತ್ತಿರುವ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಬ್ರೇಕ್ ಹಾಕಬೇಕಿದೆ. ಶಾಲಾ – ಕಾಲೇಜುಗಳ ಸುತ್ತಮುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಬಿಡಿ ಸಿಗರೇಟ್, ಗುಟ್ಕಾ ಮತ್ತು ಪಾನ್ ಮಸಾಲಾದಂತಹ ತಂಬಾಕು ಉತ್ಪನ್ನಗಳ ಮಾರಾಟವನ್ನು ಸಂಪೂರ್ಣವಾಗಿ ತಡೆಗಟ್ಟಲು ಶಾಲಾ ಅವಧಿಯಲ್ಲಿ ಪ್ರತಿದಿನ ಕಡ್ಡಾಯವಾಗಿ ಗಸ್ತು ನಡೆಸಬೇಕು. ನಿಯಮ ಉಲ್ಲಂಘಿಸಿ ಇವುಗಳನ್ನು ಮಾರಾಟ ಮಾಡುವವರ ವಿರುದ್ಧ ಕೇವಲ ಎಚ್ಚರಿಕೆ ನೀಡುವುದರ ಬದಲಾಗಿ, ಹೆಚ್ಚಿನ ಸಂಖ್ಯೆಯಲ್ಲಿ 'ಕೋಟ್ಪಾ' (COTPA) ಕಾಯ್ದೆಯಡಿ ಕಟ್ಟುನಿಟ್ಟಾಗಿ ಪ್ರಕರಣಗಳನ್ನು ದಾಖಲಿಸಬೇಕು.

**3. ಮಾಸಿಕ ಕ್ರೈಮ್ ಮೀಟಿಂಗ್‌ನಲ್ಲಿ ಕಡ್ಡಾಯ ಪರಿಶೀಲನೆ:** ಶಾಲಾ–ಕಾಲೇಜುಗಳ ಬಳಿ ದಾಖಲಾಗುವ ಇಂತಹ 'ಕೋಟ್ಪಾ' ಹಾಗೂ ಮಾದಕದ್ರವ್ಯ ಮಾರಾಟದ ಪ್ರಕರಣಗಳನ್ನು ಪೊಲೀಸ್ ಆಯುಕ್ತರು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮ ಮಾಸಿಕ ಕ್ರೈಮ್ ರಿವ್ಯೂ ಮೀಟಿಂಗ್‌ನಲ್ಲಿ ಕಡ್ಡಾಯವಾಗಿ ಪರಿಶೀಲನೆ ನಡೆಸುವಂತೆ ಆದೇಶಿಸಬೇಕು.

**4. ಜಿಲ್ಲಾ ಮಟ್ಟದಲ್ಲಿ ವಿಶೇಷ ದಳ ರಚನೆ:** ಮಾದಕ ದ್ರವ್ಯ ಮಾರಾಟ ಹಾಗೂ ಸೇವನೆಯ ಜಾಲವನ್ನು ಪತ್ತೆಹಚ್ಚಲು ಜಿಲ್ಲಾ ಮಟ್ಟದಲ್ಲಿ ವಿಶೇಷ ಪೊಲೀಸ್ ದಳವನ್ನು ರಚಿಸಿ, ಈ ದಳಕ್ಕೆ ಮುಕ್ತ ಅಧಿಕಾರ ಮತ್ತು ಸಂಪೂರ್ಣ ಬೆಂಬಲವನ್ನು ನೀಡಬೇಕು.

**5. ವೈದ್ಯಕೀಯ ಪುನರ್ವಸತಿ ಮತ್ತು ಕೌನ್ಸೆಲಿಂಗ್ ವ್ಯವಸ್ಥೆ:** ಈಗಾಗಲೇ ಮಾದಕ ವ್ಯಸನದ ಜಾಲಕ್ಕೆ ಸಿಲುಕಿ ಬಲಿಯಾಗಿರುವ ವಿದ್ಯಾರ್ಥಿಗಳನ್ನು ಆ ಪಿಡುಗಿನಿಂದ ಹೊರತರಲು ಸರ್ಕಾರ ಮಾನವೀಯ ನೆಲೆಯ ಕ್ರಮಗಳನ್ನು ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಅನುಬಂಧಿತ ಎನ್.ಜಿ.ಓ ಸಂಸ್ಥೆಗಳ ನೆರವಿನೊಂದಿಗೆ ಆ ವಿದ್ಯಾರ್ಥಿಗಳಿಗೆ ನಿರಂತರ ಕೌನ್ಸೆಲಿಂಗ್, ಸೂಕ್ತ ಕಣ್ಗಾವಲು ಮತ್ತು ವೈದ್ಯಕೀಯ ಪುನರ್ವಸತಿ ವ್ಯವಸ್ಥೆಯನ್ನು ಕಲ್ಪಿಸುವುದು ಅತ್ಯಗತ್ಯವಾಗಿದೆ.

**6. ಗೌಪ್ಯ ಸಹಾಯ ವಾಣಿ ಆರಂಭ:** ಈ ಮಾದಕಜಾಲದ ಬಗ್ಗೆ ಸಾರ್ವಜನಿಕರು ಮುಕ್ತವಾಗಿ ಮಾಹಿತಿ ನೀಡಲು ವಿಶೇಷ ಸಹಾಯವಾಣಿಯನ್ನು ಆರಂಭಿಸಬೇಕು. ಜೊತೆಗೆ ಮಾಹಿತಿ ನೀಡುವ ಸಾರ್ವಜನಿಕರ ಹೆಸರು ಮತ್ತು ವಿಳಾಸವನ್ನು ಸಂಪೂರ್ಣವಾಗಿ ಗೌಪ್ಯವಾಗಿಡುವ ಭರವಸೆ ನೀಡಬೇಕು.

**7. ಶೈಕ್ಷಣಿಕ ಸಂಸ್ಥೆಗಳಲ್ಲಿ ಜಾಗೃತಿ:** ರಾಜ್ಯಾದ್ಯಂತ ಎಲ್ಲ ಶಾಲಾ–ಕಾಲೇಜುಗಳಲ್ಲಿ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಇಂತಹ ಜಾಲಗಳು ಗಮನಕ್ಕೆ ಬಂದರೆ ಅಥವಾ ಮಕ್ಕಳು ಇಂಥದ್ದಕ್ಕೆ



ಬಲಿಯಾಗುತ್ತಿದ್ದಾರೆಂದು ಕಂಡುಬಂದರೆ ಶಾಲಾ ಮುಖ್ಯಸ್ಥರು ತಕ್ಷಣವೇ ಪೋಷಕರ ಅಥವಾ ಪೊಲೀಸರ ಗಮನಕ್ಕೆ ತರುವಂತೆ ಮನವರಿಕೆ ಮಾಡಿಕೊಡಬೇಕು.

ತಾವು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಶಾಲಾ–ಕಾಲೇಜುಗಳ ಪುನರಾರಂಭದ ದಿನದಿಂದಲೇ ರಾಜ್ಯಾದ್ಯಂತ ಕಟ್ಟುನಿಟ್ಟಿನ ಪೊಲೀಸ್ ಕಣ್ಗಾವಲು ಇಡುವಂತೆ ಸಂಬಂಧಪಟ್ಟ ಉನ್ನತ ಪೊಲೀಸ್ ಅಧಿಕಾರಿಗಳಿಗೆ ಸೂಕ್ತ ಆದೇಶ ನೀಡಬೇಕಾಗಿ ವಿದ್ಯಾರ್ಥಿಗಳ ಹಾಗೂ ಪೋಷಕರ ಪರವಾಗಿ ವಿನಂತಿಸುತ್ತೇನೆ ಎಂದು ಶಾಸಕ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಪತ್ರ ಮುಖೇನ ಮನವಿ ಮಾಡಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# 2028ರ ಚುನಾವಣೆ ಗೆಲ್ಲಲು ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯಿರಿ

**ಹುಣಸೂರು ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ಕರೆ**



**ಬೆಂಗಳೂರು, ಜೂ.8:** ಪಕ್ಷಬೇಧ ಮರೆತು ಎಲ್ಲರನ್ನೂ ಒಟ್ಟಿಗೇ ಕರೆದುಕೊಂಡು ಹೋಗಿ. 2028ರ ವಿಧಾನಸಭೆ ಚುನಾವಣೆ ಗೆಲ್ಲುವುದು ನಿಮ್ಮ ಗುರಿಯಾಗಿರಲಿ ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಮಾಜಿ ಶಾಸಕ ಮಂಜುನಾಥ್ ಹಾಗೂ ಮೈಸೂರು ಮುಖಂಡ, ವಕ್ತಾರ ಲಕ್ಷ್ಮಣ್ ಅವರ ನೇತೃತ್ವದಲ್ಲಿ ಹುಣಸೂರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಕುಮಾರಪಾರ್ಕ್ ಸರಕಾರಿ ಅತಿಥಿ ಗೃಹದಲ್ಲಿ ತಮ್ಮನ್ನು ಅಭಿನಂದಿಸಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾತನಾಡಿದರು.

ಹಿಂದೆ ಆಗಿದ್ದು, ದ್ವೇಷ, ಅಸೂಯೆ, ಪ್ರತೀಕಾರ ಎಂಬುದನ್ನು ಮರೆಯಿರಿ. ಕೆಲವೊಮ್ಮೆ ತಪ್ಪು ಮಾಹಿತಿ, ಅಭಿಪ್ರಾಯಗಳಿಂದ ಯಡವಟ್ಟು ಆಗಿರಬಹುದು. ಆದರೆ ಅದನ್ನೇ ಮನಸ್ಸಿನಲ್ಲಿ ಇಟ್ಟುಕೊಂಡು ಭವಿಷ್ಯದ ಗುರಿ ಮರೆಯಬೇಡಿ ಎಂದರು.

ಇವತ್ತು ಬಂದಿರುವ ಸಿಎಂ ಹುದ್ದೆ ನನ್ನದಲ್ಲ. ನಿಮ್ಮದು, ರಾಜ್ಯದ ಜನರದು. ನೀವು ಇಲ್ಲ ಅಂದ್ರೆ ನಾನು ಇಲ್ಲ. ನನಗೆ ಬಂದಿರುವ ಈ ಹುದ್ದೆ ಹಿಂದೆ ನಿಮ್ಮ ಪರಿಶ್ರಮ, ಪ್ರೀತಿ, ವಿಶ್ವಾಸ, ಹೋರಾಟ ಕೆಲಸ ಮಾಡಿದೆ. ನಿಮ್ಮ ಸಹಕಾರವನ್ನು ಎಂದಿಗೂ ಮರೆಯುವುದಿಲ್ಲ ಎಂದರು.

ಈಗ ಯಾವುದೇ ಕಾರಣಕ್ಕೂ ಮೈಮರೆಯಬೇಡಿ. ಎಸ್‌ಐಆರ್ ಸಂಚಿಗೆ ನಿಮ್ಮ ಮತ ಬಲಿ ಆಗಲು ಬಿಡಬೇಡಿ. ಎಚ್ಚರಿಕೆಯಿಂದ ಇರಿ. ನಿಮ್ಮ ಮತಗಳನ್ನು ಕಾಪಾಡಿಕೊಳ್ಳಿ ಎಂದರು.

## ಕಲುಷಿತ ನೀರು ಸರಬರಾಜಾಗದಂತೆ ಕಟ್ಟೆಚ್ಚರ ವಹಿಸಿ: ಈಶ್ವರ ಖಂಡ್ರೆ

**ಬೆಂಗಳೂರು, ಜೂ.8:** ಗ್ರಾಮೀಣ ಕರ್ನಾಟಕದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಎಲ್ಲ ಪಂಚಾಯ್ತಿಗಳ ಆದ್ಯ ಕರ್ತವ್ಯವಾಗಿದ್ದು, ಯಾವುದೇ ಕಾರಣಕ್ಕೂ ಕಲುಷಿತ ನೀರು ಸರಬರಾಜಾಗದಂತೆ ಎಚ್ಚರ ವಹಿಸಿ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಇಲಾಖೆ ಅಧಿಕಾರಿಗಳ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಲುಷಿತ ನೀರು ಸೇವನೆಯಿಂದ ಮುಗ್ಧ ಜನರು ಮೃತಪಟ್ಟ ಘಟನೆಗಳು ಹಲವೆಡೆ ನಡೆದಿವೆ. ಇಂತಹ ಘಟನೆ ಮರುಕಳಿಸದಂತೆ ನೀರಿನ ಪರೀಕ್ಷೆಯನ್ನು ಎನ್.ಎ.ಬಿ.ಎಲ್. ಮಾನ್ಯತೆ ಪಡೆದ ಪ್ರಯೋಗಾಲಯಗಳಲ್ಲಿ ನಿಯಮಿತವಾಗಿ ಮಾಡುವಂತೆ ಆದೇಶಿಸಿರುವುದಾಗಿ ತಿಳಿಸಿದರು. ಎಲ್ಲ ನಾಗರಿಕತೆಗಳೂ ಹುಟ್ಟಿದ್ದು ನದಿಗಳ ತಟದಲ್ಲಿ. ನೀರು ಜೀವಜಲ. ನೀರಿಲ್ಲದೆ ಬದುಕಲು ಸಾಧ್ಯವಿಲ್ಲ. ಹೀಗಾಗಿ ಪಂಚಾಯ್ತಿಗಳಿಂದ ಪೂರೈಕೆ ಮಾಡುವ ಕುಡಿಯುವ ನೀರಿನಲ್ಲಿ ಯಾವುದೇ ಲೋಪ ಆಗದಂತೆ ಬಹು ಹಂತದ ಪರಿಶೀಲನೆ ನಡೆಸಲು ಸೂಚಿಸಿರುವುದಾಗಿ ತಿಳಿಸಿದರು.





ವಿಧಾಸೌಧದಲ್ಲಿ ಸೋಮವಾರ ನಡೆದ ಸಭೆಯಲ್ಲಿ ಕ್ರೆಡಾಯ್ ಕರ್ನಾಟಕದ ಪದಾಧಿಕಾರಿಗಳು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಅಭಿನಂದಿಸಿದರು. ಕ್ರೆಡಾಯ್ ಅಧ್ಯಕ್ಷ ಜೈದ್ ನೋಮ್ಯಾನ್, ಕಾರ್ಯದರ್ಶಿ ನಿಶ್ಚಯ್ ಜಯಶಂಕರ್, ಮೆಂಟರ್ ಇರ್ಫಾನ್ ರಜಾಕ್, ಸಲಹೆಗಾರ ಶಂಕರ್ ಶಾಸ್ತ್ರಿ ಮತ್ತಿತರರು ಉಪಸ್ಥಿತರಿದ್ದರು.

# ಜಮೀರ್ ಅಹ್ಮದ್ ಸಮರ್ಥ ನಾಯಕ ಸಚಿವ ಸ್ಥಾನ ನೀಡಿದರೆ ತಪ್ಪಿಲ್ಲ




**ತುಮಕೂರು, ಜೂ.8:** ಕಾಂಗ್ರೆಸ್ ಶಾಸಕ ಬಿ.ಜಡ್. ಜಮೀರ್ ಅಹ್ಮದ್ ಖಾನ್ ಅವರು ಸಮರ್ಥ ನಾಯಕ ಆಗಿದ್ದು, ಅವರಿಗೆ ಸಚಿವ ಸ್ಥಾನ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ ಹೇಳಿದ್ದಾರೆ.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅವರೊಬ್ಬ ಸಮರ್ಥ ಹಾಗೂ ವಿಶೇಷವಾಗಿ ಅಲ್ಪಸಂಖ್ಯಾತ ಸಮುದಾಯದ ನಾಯಕ. ಮೊದಲ ಹಂತದಲ್ಲಿ ಸಚಿವ ಸ್ಥಾನ ತಪ್ಪಿದ್ದೇಕೆ ಎಂಬುದು ತಿಳಿದಿಲ್ಲ. ಎರಡನೇ ಹಂತದಲ್ಲಿ ಅವರಿಗೆ ಸಚಿವ ಸ್ಥಾನ ನೀಡುವಂತೆ ರಾಜ್ಯದಾದ್ಯಂತ ಬೇಡಿಕೆ ಇದೆ. ಹೈಕಮಾಂಡ್ ಇದನ್ನು ಪರಿಗಣಿಸುತ್ತದೆ ಎಂದು ಹೇಳಿದರು.

ಅವರು ಸಮರ್ಥ ಸಚಿವರಾಗಿದ್ದರು ಮತ್ತು ಉತ್ತಮ ಕೆಲಸ ಮಾಡಿದರು. ಅವರಿಗೆ ಸಚಿವ ಸ್ಥಾನ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ. ಹೈಕಮಾಂಡ್ ಶೀಘ್ರದಲ್ಲೇ ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯನ್ನು ಘೋಷಿಸುವುದಾಗಿ ಹೇಳಿದೆ ಎಂದು ಪರಮೇಶ್ವರ್ ತಿಳಿಸಿದರು. ನನ್ನನ್ನು ಉಪಮುಖ್ಯಮಂತ್ರಿಯನ್ನಾಗಿ ಮಾಡಿದ್ದಕ್ಕಾಗಿ ಹೈಕಮಾಂಡ್‌ಗೆ ಧನ್ಯವಾದ ಹೇಳಲು ದೆಹಲಿಗೆ ಹೋಗುತ್ತಿದ್ದೇನೆ

**ಹೇಮಾವತಿ ಲಿಂಕ್ ಕೆನಾಲ್: ಪ್ರಕ್ರಿಯೆ ಮುಂದುವರಿಸುತ್ತೇವೆ:** ಈ ಮಧ್ಯೆ, ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕಾಲುವೆ ಯೋಜನೆಗೆ ವಿರೋಧ ವ್ಯಕ್ತಪಡಿಸಿದ ಪ್ರತಿಭಟನೆಗಳನ್ನು ಉದ್ದೇಶಿಸಿ ಮಾತನಾಡಿದ ಡಿಸಿಎಂ ಡಾ.ಜಿ. ಪರಮೇಶ್ವರ್, ರಾಜ್ಯ ಸರ್ಕಾರ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರೆಸುತ್ತದೆ ಮತ್ತು ಕೆಲಸವನ್ನು ಪುನರಾರಂಭಿಸುತ್ತದೆ ಎಂದು ಹೇಳಿದರು.'ನಾವು ಅವರೆಲ್ಲರ ಮನವೊಲಿಸಲು ಪ್ರಯತ್ನಿಸುತ್ತೇವೆ. ಭೂಸ್ವಾಧೀನ ಪ್ರಕ್ರಿಯೆ ಸ್ವಲ್ಪ ಸ್ಥಗಿತಗೊಂಡಿತ್ತು. ಮುಖ್ಯಮಂತ್ರಿಗಳು ಈಗ ಅದನ್ನು ತ್ವರಿತವಾಗಿ ಪೂರ್ಣಗೊಳಿಸಲು ನಮಗೆ ಸೂಚನೆ ನೀಡಿದ್ದಾರೆ. ನಾವು ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರಿಸುತ್ತೇವೆ ಮತ್ತು ಕೆಲಸವನ್ನು ಪುನರಾರಂಭಿಸುತ್ತೇವೆ. ನಾವು ರೈತ ಸಮುದಾಯವನ್ನು ಮನವೊಲಿಸುತ್ತೇವೆ' ಎಂದು ಉಪಮುಖ್ಯಮಂತ್ರಿ ಹೇಳಿದರು.

## ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಬಿಎಂಆರ್‌ಡಿಎ, ಬಿಡಿಎ ಸೇರಿಸದಿದ್ದರೆ ಅಧಿಕಾರ ಸ್ವೀಕರಿಸಲ್ಲ



- ಸುರ್ಜೇವಾಲ ಎದುರು ಅಸಮಾಧಾನ ಹೊರಹಾಕಿದ ಸಚಿವ ಕೃಷ್ಣಬೈರೇಗೌಡ

**ಬೆಂಗಳೂರು, ಜೂ.8:** ಬಿಡಿಎ ಮತ್ತು ಬಿಎಂಆರ್‌ಡಿಎ ಇಲಾಖೆಗಳನ್ನು ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಸೇರಿಸದೆ ಇದ್ದರೆ ಅಧಿಕಾರ ಸ್ವೀಕಾರ ಮಾಡುವುದಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಪಟ್ಟು ಹಿಡಿದಿದ್ದಾರೆ. ಈ ಸಂಬಂಧ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಬಳಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ವರದಿಯಾಗಿದೆ.

ಬೆಂಗಳೂರು ಅಭಿವೃದ್ಧಿ ಇಲಾಖೆಗೆ ರಾಮಲಿಂಗಾರೆಡ್ಡಿ ಆಕಾಂಕ್ಷಿಯಾಗಿದ್ದರು. ಆದರೆ ಕೃಷ್ಣ ಬೈರೇಗೌಡ ಅವರಿಗೆ ನೀಡಲಾಗಿತ್ತು. ಇದೀಗ ಖಾತೆಯಲ್ಲಿ ಬಿಡಿಎ ಮತ್ತು ಬಿಎಂಆರ್‌ಡಿಎ ಇಲ್ಲದೆ ಇರುವುದು ಬೈರೇಗೌಡ ಅಸಮಾಧಾನಕ್ಕೆ ಕಾರಣವಾಗಿದೆ. ಹೀಗಾಗಿ ಕೃಷ್ಣ ಬೈರೇಗೌಡ ಅಧಿಕಾರ ಸ್ವೀಕರಿಸಲು ನಿರಾಕರಿಸಿದ್ದಾರೆ. ಬೆಂಗಳೂರು ನಗರಾಭಿವೃದ್ಧಿ ಖಾತೆಯು ಬಿಡಿಎ ಮತ್ತು ಬಿಎಂಆರ್‌ಡಿಎ ಇಲ್ಲದೆ ಪರಿಪೂರ್ಣವಲ್ಲ ಎಂಬುವುದು ಅವರ ವಾದವಾಗಿದೆ. ಈ ಎರಡನ್ನೂ ಹೊರತುಪಡಿಸಿದರೆ ನನಗೆ ನೀಡಿದ ಖಾತೆ ಕೇವಲ ಕಾರ್ಪೊರೇಷನ್ ವಿಷಯಗಳಿಗೆ ಸೀಮಿತವಾಗುತ್ತದೆ ಎಂದು ಹೇಳಿಕೊಂಡಿದ್ದಾರೆ.

ಖಾತೆಯಲ್ಲಿ ಇವೆರಡು ಪ್ರಾಧಿಕಾರವನ್ನು ಸೇರಿಸದೆ ಇದ್ದರೆ ನಾನು ಅಧಿಕಾರ ಸ್ವೀಕಾರ ಮಾಡುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ ಈ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಅವರು ಪಟ್ಟು ಹಿಡಿದಿದ್ದಾರೆ. ಒಂದು ವೇಳೆ ಇದು ಸಾಧ್ಯವಾಗದೆ ಇದ್ದರೆ ಗೊಂದಲ ಬಗೆಹರಿಯುವ ವರೆಗೂ ನಾನು ಇಲಾಖೆಯ ಜವಾಬ್ದಾರಿಯನ್ನು ವಹಿಸುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಶಕ್ತಿ ಯೋಜನೆ ಪರಿಣಾಮಕಾರಿಯಾಗಿಸಲು ಮಹಿಳೆಯರಿಗೆ ಸ್ಮಾರ್ಟ್‌ಕಾರ್ಡ್



- ಸಾರಿಗೆ ಸಚಿವ ಬೈರತಿ ಸುರೇಶ್ ಹೇಳಿಕೆ
- ಸಾರಿಗೆ ನಿಗಮಗಳ ಮುಖ್ಯಸ್ಥರ ಜತೆ ಸಭೆ

**ಬೆಂಗಳೂರು, ಜೂ.8:** ಶಕ್ತಿ ಯೋಜನೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿಸುವ ನಿಟ್ಟಿನಲ್ಲಿ ರಾಜ್ಯದ ಮಹಿಳೆಯರಿಗೆ ಸಾರಿಗೆ ನಿಗಮಗಳ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡಲು ಸ್ಮಾರ್ಟ್‌ಕಾರ್ಡ್ ವಿತರಿಸಲು ನಿರ್ಧರಿಸಲಾಗಿದೆ ಎಂದು ನೂತನ ಸಾರಿಗೆ ಸಚಿವ ಬೈರತಿ ಸುರೇಶ್ ಹೇಳಿದರು.

ವಿಧಾನಸೌಧದಲ್ಲಿ ಸೋಮವಾರ ಕಾರ್ಯಾರಂಭ ಮಾಡಿದ ಸಚಿವರು ನಂತರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಗೆ ಭೇಟಿ ನೀಡಿದ ಸಚಿವರು, ಕೆಎಸ್‌ಆರ್‌ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ ಮತ್ತು ವಾಯವ್ಯ ಸಾರಿಗೆ ನಿಗಮಗಳ ಮುಖ್ಯಸ್ಥರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖೆಗಳ ಬಗ್ಗೆ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿಗಳ ಮೂಲಕ ಜನತೆಯ ಬದುಕು ಹಸನಾಗುವಂತೆ ಮಾಡಲಾಗಿದೆ. ಶಕ್ತಿ ಯೋಜನೆಯನ್ನು ಕೋಟ್ಯಂತರ ಮಹಿಳೆಯರು ಸದುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಈ ಯೋಜನೆ ಜಾರಿಯಾದ ಬಳಿಕ ಪ್ರಯಾಣಿಕರ ಸಂಖ್ಯೆಯಲ್ಲಿ ಶೇ.40ರಷ್ಟು ಹೆಚ್ಚಳವಾಗಿದೆ ಎಂದರು.

ರಾಜ್ಯದ ಮೂರು ಕೋಟಿಗೂ ಅಧಿಕ ಜನರಿಗೆ ಈ ಸ್ಮಾರ್ಟ್ ಕಾರ್ಡ್‌ನ್ನು ವಿತರಿಸುವ ನಿರೀಕ್ಷೆಯಿದೆ. ಮಹಿಳೆಯರಿಗೆ ಉಚಿತವಾಗಿ ಸ್ಮಾರ್ಟ್‌ಕಾರ್ಡ್ ಸಿಗಲಿದ್ದು, ಪುರುಷರು ಮೆಟ್ರೋ ಕಾರ್ಡ್ ರೀತಿಯಲ್ಲಿ ಹಣ ಪಾವತಿಸಿ ಸ್ಮಾರ್ಟ್‌ಕಾರ್ಡ್ ಪಡೆಯಬಹುದು ಈ ಕಾರ್ಡ್‌ನ್ನು ಅದರಲ್ಲಿ ಹಣ ಖಾಲಿಯಾದ ನಂತರ ರೀಚಾರ್ಜ್ ಮಾಡಬೇಕಾಗುತ್ತದೆ.

ಸುಮಾರು 3 ಕೋಟಿ ಸ್ಮಾರ್ಟ್‌ಕಾರ್ಡುಗಳನ್ನು ವಿತರಿಸುವ ಅಗತ್ಯವಿರುವುದರಿಂದ ಸ್ಮಾರ್ಟ್ ಕಾರ್ಡ್ ಸಿದ್ಧಪಡಿಸಲು ಜಾಗತಿಕ ಟೆಂಡರ್ ಕರೆದು ಸದ್ಯದಲ್ಲಿಯೇ ಸ್ಮಾರ್ಟ್ ಕಾರ್ಡ್ ಗಳನ್ನು ವಿತರಿಸುವ ಪ್ರಕ್ರಿಯೆಯನ್ನು ಪೈಲಟ್ ಯೋಜನೆಯಡಿ ಆರಂಭಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಸಭೆಯಲ್ಲಿ ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ಆಯುಕ್ತ ಸೆಲ್ವಮಣಿ ಸೇರಿದಂತೆ ನಾಲ್ಕೂ ನಿಗಮಗಳ ಹಿರಿಯ ಅಧಿಕಾರಿಗಳು ಹಾಜರಿದ್ದರು.

**1000 ಬಸ್ ಖರೀದಿ:** ರಾಜ್ಯ ಸರ್ಕಾರದ ಅನುದಾನದಡಿಯಲ್ಲಿ 1000 ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತದೆ. ಇದೇ ವೇಳೆ, ಕೇಂದ್ರ ಸರ್ಕಾರದ ಅನುದಾನದಲ್ಲಿ 4 ಸಾವಿರ ಎಲೆಕ್ಟ್ರಿಕ್ ಬಸ್ ಗಳನ್ನು ಖರೀದಿಸಲು ನಿರ್ಧರಿಸಲಾಗಿದೆ. ಹಂತಹಂತವಾಗಿ ಬಸ್ ಗಳನ್ನು ಖರೀದಿಸಿ ನಾಲ್ಕೂ ನಿಗಮಗಳಿಗೆ ಹಂಚಿಕೆ ಮಾಡಲಾಗುತ್ತದೆ ಎಂದು ಬೈರತಿ ಸುರೇಶ್ ಹೇಳಿದರು.

**ನಿರ್ಭಯಕ್ಕೆ ಹೆಚ್ಚು ಆದ್ಯತೆ:** ಮಹಿಳೆಯರು ಮತ್ತು ಹೆಣ್ಣು ಮಕ್ಕಳ ಸುರಕ್ಷತೆಗೆ ಆದ್ಯತೆಯನ್ನು ನೀಡಲಾಗುತ್ತಿದೆ. ಖಾಸಗಿ ಪ್ರಯಾಣಿಕರ ವಾಹನಗಳು ಅಂದರೆ, ವಾಣಿಜ್ಯ ಕಾರುಗಳು, ಟ್ಯಾಕ್ಸಿಗಳು ಸೇರಿದಂತೆ ಇನ್ನಿತರ ವಾಹನಗಳಿಗೆ ವೆಹಿಕಲ್ ಲೊಕೇಶನ್ ಟ್ರ್ಯಾಕಿಂಗ್ ಸಿಸ್ಟಂ ಅಳವಡಿಕೆಯನ್ನು ಕ್ಷಿಪ್ರಗತಿಯಲ್ಲಿ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇದುವರೆಗೆ 1 ಲಕ್ಷಕ್ಕೂ ಅಧಿಕ ವಾಹನಗಳಿಗೆ ಈ ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಇನ್ನುಳಿದ 4–5 ಲಕ್ಷ ವಾಹನಗಳಿಗೆ ಮುಂದಿನ ಮೂರ್ನಾಲ್ಕು ತಿಂಗಳಲ್ಲಿ ಅಳವಡಿಸಬೇಕೆಂದು ಅಧಿಕಾರಿಗಳಿಗೆ ಆದೇಶ ನೀಡಿದರು.

## ಸಂಪುಟದಲ್ಲಿ ನನಗೆ ಅವಕಾಶ ಸಿಗದಿದ್ದರೆ ಶಾಸಕ ಭರತ್‌ರೆಡ್ಡಿಗೆ ಸ್ಥಾನ ನೀಡಿ



- ಸಂಪುಟ ಸೇರ್ಪಡೆ ಅನುಮಾನ ಹಿನ್ನೆಲೆಯಲ್ಲಿ ಹೈಕಮಾಂಡ್‌ಗೆ ನಾಗೇಂದ್ರ ಮನವಿ

**ಬೆಂಗಳೂರು/ನವದೆಹಲಿ, ಜೂ.8:** ಮುಂದಿನ ಸಂಪುಟ ವಿಸ್ತರಣೆ ವೇಳೆ ಮಂತ್ರಿಯಾಗಲು ಕಸರತ್ತು ತೀವ್ರಗೊಂಡಿದೆ. ಎಸ್‌ಟಿ ಕೋಟಾದಲ್ಲಿ ಸಚಿವ ಸ್ಥಾನಕ್ಕೆ ಮಾಜಿ ಸಚಿವ ನಾಗೇಂದ್ರ ಪ್ರಯತ್ನಿಸುತ್ತಿದ್ದು ವಾಲ್ಮೀಕಿ ಹಗರಣ ಹಿನ್ನೆಲೆ ಹೈಕಮಾಂಡ್ ಸಮ್ಮತಿ ಸೂಚಿಸಿಲ್ಲ ಎನ್ನಲಾಗಿದೆ.

ಮಂತ್ರಿ ಸ್ಥಾನಕ್ಕೆ ಲಾಬಿ ನಡೆಸುತ್ತಿರುವ ನಾಗೇಂದ್ರ ದೆಹಲಿಯಲ್ಲಿ ವರಿಷ್ಠರನ್ನು ಭೇಟಿಯಾಗಿ ಕ್ಯಾಬಿನೆಟ್ ಸೇರ್ಪಡೆಗೆ ಮನವಿ ಮಾಡಿದ್ದರು. ಆದರೆ, ವಾಲ್ಮೀಕಿ ಪ್ರಕರಣವನ್ನು ಸ್ಪಷ್ಟವಾಗಿ ಪ್ರಸ್ತಾಪಿಸಿ, ಈಗ ಸಚಿವ ಸ್ಥಾನಕ್ಕೆ ಒತ್ತಡ ಹಾಕಬೇಡಿ, ಕಾದು ನೋಡೋಣ ಎಂದು ಮನವೊಲಿಸಿದೆ ಎನ್ನಲಾಗಿದೆ.

ವಾಲ್ಮೀಕಿ ಕೋಟಾದಡಿ ಚಳ್ಳಕೆರೆ ಶಾಸಕ ರಘುಮೂರ್ತಿಗೆ ಸಚಿವ ಸ್ಥಾನ ಸಿಗುವ ಸಾಧ್ಯತೆ ಇದೆ ಎಂದು ಹೈಕಮಾಂಡ್ ವಲಯದಲ್ಲಿ ಚರ್ಚೆ ನಡೆಯುತ್ತಿದೆ. ಈ ಮಧ್ಯೆ ತಮಗೆ ಅವಕಾಶ ಸಿಗದಿದ್ದರೆ ಬಳ್ಳಾರಿ ಜಿಲ್ಲಾ ಕೋಟಾದಿಂದ ಭರತ್ ರೆಡ್ಡಿ ಅವರಿಗೆ ಸಚಿವ ಸ್ಥಾನ ನೀಡುವಂತೆ ನಾಗೇಂದ್ರ ಪ್ರಸ್ತಾಪವಿಟ್ಟಿದ್ದಾರೆ ಎನ್ನಲಾಗಿದೆ.

ಕ್ಲೀನ್ ಇಮೇಜ್ ಹೊಂದಿರುವ ಹೊಸ ಯುವ ಮುಖಗಳಿಗೆ ಆದ್ಯತೆ ನೀಡಲು ರಾಹುಲ್ ಗಾಂಧಿ ಕೂಡಾ ಸಲಹೆ ನೀಡಿರುವ ಹಿನ್ನೆಲೆ ಭರತ್ ರೆಡ್ಡಿ ಉತ್ತಮ ಆಯ್ಕೆಯಾಗಬಹುದು ಎಂದು ನಾಗೇಂದ್ರ ಅಭಿಪ್ರಾಯಪಟ್ಟಿದ್ದಾರೆ.

**ಭರತ್ ರೆಡ್ಡಿ ಪ್ರಸ್ತಾಪವೇಕೆ?:** ತುಕಾರಾಂ ಪತ್ನಿ ಅನ್ನಪೂರ್ಣ ಮೊದಲ ಬಾರಿ ಶಾಸಕಿಯಾಗಿ ಜಿಲ್ಲಾ ಮಟ್ಟದಲ್ಲಿ ಪಕ್ಷ ಸಂಘಟಿಸೋದು ಅಸಾಧ್ಯ. ಜನಾರ್ದನ ರೆಡ್ಡಿ ಬಳ್ಳಾರಿಗೆ ಎಂಟ್ರಿ ಪಡೆದುಕೊಂಡಿದ್ದಾರೆ. ಶ್ರೀರಾಮುಲು ಸೇರಿ ಜನಾರ್ದನ ರೆಡ್ಡಿ ಬಿಜೆಪಿ ಕಟ್ಟಲು ಜಿಲ್ಲೆಯಲ್ಲಿ ಪ್ಲಾನ್ ಮಾಡುತ್ತಿದ್ದು ಈ ನಾಯಕರಿಗೆ ಕೌಂಟರ್ ಕೊಡುವ ಕಾಂಗ್ರೆಸ್ ನಾಯಕತ್ವ ಹುಟ್ಟು ಹಾಕಬೇಕಿದೆ ಹೀಗಾಗಿ ಜಿಲ್ಲೆಯಲ್ಲಿ ವಾಲ್ಮೀಕಿ ಸಮುದಾಯದ ಹಿಡಿತ ಹೊಂದಿರುವ ಭರತ್ ರೆಡ್ಡಿ ಜೊತೆಗೆ ಲಿಂಗಾಯತ ಸಮುದಾಯದ ವಿಶ್ವಾಸ ಗಳಿಸುವಲ್ಲಿಯೂ ಯಶಸ್ವಿಯಾಗಿದ್ದಾರೆ. ಜನಾರ್ದನ ರೆಡ್ಡಿ ಎದುರಿಸಿ ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಘಟನೆ ಮಾಡಲು ಭರತ್ ರೆಡ್ಡಿ ಸೂಕ್ತ ಎಂಬ ಲೆಕ್ಕಾಚಾರ ಎಂದು ಮನವರಿಕೆ ಮಾಡಲಾಗಿದೆ.

# ಆಯುಷ್ಮಾನ್ ಕರ್ನಾಟಕ ಫಲಾನುಭವಿಗಳಿಂದ ಚಿಕಿತ್ಸಾ ವೆಚ್ಚ ಪಡೆಯಬೇಡಿ

**ಮಂಗಳೂರು, ಜೂ.8:** ಬಿಪಿಎಲ್ ಕಾರ್ಡ್ ಹೊಂದಿರುವ ರೋಗಿಗಳಿಂದ ಆಯುಷ್ಮಾನ್ ಕರ್ನಾಟಕ ಯೋಜನೆಯಡಿ ಖಾಸಗಿ ಆಸ್ಪತ್ರೆಯವರು ಚಿಕಿತ್ಸಾ ವೆಚ್ಚ ಪಡೆಯಬಾರದು. ಒಂದು ವೇಳೆ ಹೆಚ್ಚುವರಿ ಶುಲ್ಕ ಪಡೆದರೆ ಆರೋಗ್ಯ ಮಿತ್ರರು ಈ ಬಗ್ಗೆ ಗಮನಹರಿಸಿ ಉಚಿತ ಚಿಕಿತ್ಸೆಗೆ ಕ್ರಮ ವಹಿಸಬೇಕು. ಒಂದು ವೇಳೆ ಈ ಕಾರ್ಯದಲ್ಲಿ ವಿಫಲ ರಾಗುವ ಆರೋಗ್ಯ ಮಿತ್ರರ ವಿರುದ್ಧ ಇಲಾಖೆಯಿಂದ ಕ್ರಮ ವಹಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ಎಚ್ಚರಿಕೆ ನೀಡಿದ್ದಾರೆ.

ಆರೋಗ್ಯ ಸಚಿವರಾದ ಬಳಿಕ ಅವರು ಆರೋಗ್ಯ ಇಲಾಖೆಯ. ಜಿಲ್ಲಾ ಮಟ್ಟದ ಪ್ರಥಮ ಸಭೆಯನ್ನು ನಡೆಸಿದ ಬಳಿಕ ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು.

ಅತ್ಯುತ್ತಮ ಆರೋಗ್ಯ ವ್ಯವಸ್ಥೆ ಜನಸಾಮಾನ್ಯರಿಗೂ ಲಭ್ಯವಾಗುವುದನ್ನು ಖಾತರಿ ಪಡಿಸುವುದಕ್ಕಾಗಿಯೇ ಆರೋಗ್ಯ ಮಿತ್ರರನ್ನು ನೇಮಕ ಮಾಡಿರುವುದು. ಅವರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕು. ಇದರ ಜೊತೆಯಲ್ಲೇ ಅಗತ್ಯ ಕೆಲವೊಂದು ಯೋಜನೆಗಳನ್ನು ಜಾರಿಗೊಳಿಸುವುದು ಹಾಗೂ ಅನಗತ್ಯ ಕಾರ್ಯಕ್ರಮಗಳನ್ನು ಕೈಬಿಡುವ ಬಗ್ಗೆಯೂ ಮುಂದಿನ ದಿನಗಳಲ್ಲಿ ರಾಜ್ಯವ್ಯಾಪಿಯಾಗಿ ಪರಿಶೀಲಿಸಿ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ನಮ್ಮ ಸರಕಾರ ರಾಜ್ಯದ ಜನರಿಗೆ ಅತ್ಯುತ್ತಮ ಆರೋಗ್ಯ ಸೇವೆಯನ್ನು ನೀಡುವ ವಾತಾವರಣ ನಿರ್ಮಿಸಬೇಕಾಗಿದೆ. ಆಯುಷ್ಮಾನ್ ಸೇರಿದಂತೆ ಸರಕಾರಿ ಯೋಜನೆಗಳಿಗೆ ಒಳಪಟ್ಟ ಖಾಸಗಿ ಆಸ್ಪತ್ರೆಗಳು ಜನಸಾಮಾನ್ಯರಿಗೆ ನೀಡಿರುವ ಸೌಕರ್ಯಗಳನ್ನು ನೀಡದೆ ನಿಯಮ ಉಲ್ಲಂಘಿಸುವ, ದುರುಪಯೋಗಪಡಿಸಿದರೆ ಅವರಿಗೆ ನೀಡಿರುವ ಅನುಮತಿಯನ್ನು ರದ್ದುಪಡಿಸಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಸ್ಪಷ್ಟಪಡಿಸಿದರು.

ಹಿಂದೆ ನಾನು ಆರೋಗ್ಯ ಸಚಿವನಾಗಿದ್ದ ವೇಳೆ ಆರೋಗ್ಯ ಕರ್ನಾಟಕದಲ್ಲಿ ಬಿಪಿಎಲ್ ಕಾರ್ಡ್ ದಾರರಿಗೆ ಉಚಿತವಾಗಿ ಹಾಗೂ ಎಪಿಎಲ್ ನವರಿಗೆ ಶೇ.70ರಷ್ಟು ಉಚಿತ, ಶೇ. 30ರಷ್ಟು ವೆಚ್ಚ ರೋಗಿ ಭರಿಸುವ ವ್ಯವಸ್ಥೆ ಇತ್ತು. ಬಳಿಕ ಅದೀಗ ಶೇ.70ರಷ್ಟು ರೋಗಿ ಭರಿಸುತ್ತಿದ್ದು, ಶೇ.30 ಸರಕಾರ ಎಂಬಂತಾಗಿದೆ. ಈ ಬಗ್ಗೆ ಪುನರ್ ಪರಿಶೀಲನೆ ಮಾಡಲಾಗುವುದು. ಎಪಿಎಲ್ ಹಾಗೂ ಬಿಪಿಎಲ್ ನವರಿಗೆ ಕಡಿಮೆ ದರದಲ್ಲಿ ಚಿಕಿತ್ಸೆ ಒದಗಿಸುವ ಬಗ್ಗೆ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಹೇಳಿದರು.

ರಾಜ್ಯದ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ನೀಗಿಸುವ ನಿಟ್ಟಿನಲ್ಲಿ ಚರ್ಚಿಸಿ ಮುಂದಿನ ದಿನಗಳಲ್ಲಿ ಅಗತ್ಯ ರೂಪುರೇಷೆಗಳನ್ನು ಮಾಡಿಕೊಂಡು ವೈದ್ಯರು ಸರಕಾರಿ ಆಸ್ಪತ್ರೆಗಳಲ್ಲಿ ಸೇವೆ ಮಾಡಲು ಆಕರ್ಷಿಸುವ ಹಾಗೂ ಪ್ರೇರಣೆ ನೀಡುವ ಯೋಜನೆಗಳನ್ನು ಹಮ್ಮಿಕೊಳ್ಳುವ ಬಗ್ಗೆ ಮುಖ್ಯಮಂತ್ರಿ ಜೊತೆ ಚರ್ಚಿಸಿ ಕ್ರಮ ವಹಿಸಲಾಗುವುದು ಎಂದು ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ.

### ಗುತ್ತಿಗೆ ವೈದ್ಯರ ಖಾಯಂ: ಮರುಪರಿಶೀಲನೆ




**ಗುತ್ತಿಗೆ ಆಧಾರದಲ್ಲಿ ನೇಮಕ ಆದ ವೈದ್ಯರು ಮೂರು ವರ್ಷ ಸೇವೆ ಸಲ್ಲಿಸಿದರೆ ಅವರನ್ನು ಖಾಯಂಗೊಳಿಸುವ ಪದ್ಧತಿ ಹಿಂದೆ ಮಾಡಲಾಗಿತ್ತು. ಇದರಿಂದ ಉದ್ಯೋಗ ಭದ್ರತೆಯ ಕಾರಣದಿಂದ ಹೆಚ್ಚಿನ ವೈದ್ಯರ ನೇಮಕವಾಗುತ್ತಿತ್ತು. ಆದರೆ ಅದೀಗ ಬದಲಾಗಿದೆ. ಅದನ್ನು ಮರು ಪರಿಶೀಲಿಸಲಾಗುವುದು. ಗುಡ್ಡಗಾಡು, ಬುಡಕಟ್ಟು ಪ್ರದೇಶ, ಕುಗ್ರಾಮ ಪ್ರದೇಶಗಳಿಗೆ ವೈದ್ಯರು ಹೋಗುವುದು ಕಡಿಮೆ. ಅದಕ್ಕಾಗಿ ಅಲ್ಲಿ ಕೆಲಸ ನಿರ್ವಹಿಸುವವರಿಗೆ ಹೆಚ್ಚುವರಿ ವೇತನ ನೀಡುವ ಬಗ್ಗೆಯೂ ಚರ್ಚಿಸಲಾಗುವುದು. ಇವೆಲ್ಲವೂ ಪ್ರಾಥಮಿಕ ಹಂತದಲ್ಲಿದ್ದು, ಈ ಬಗ್ಗೆ ಚರ್ಚಿಸಿ ನಿಯಮ ರೂಪಿಸಿ, ಮುಖ್ಯಮಂತ್ರಿಯ ಅನುಮೋದನೆ ಪಡೆದುಕೊಂಡು ಕ್ರಮ ವಹಿಸಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಹೇಳಿದರು.**

# ಗುರುತಿನ ಚೀಟಿ ಇಲ್ಲದಿದ್ದರೆ ಪಬ್, ಬಾರ್‌ಗೆ ಪ್ರವೇಶವಿಲ್ಲ: ಅಪ್ರಾಪ್ತ ವಯಸ್ಕರಿಗೆ ಮದ್ಯ ಪೂರೈಕೆ ತಡೆ

### ಪ್ರಮುಖ ನಿರ್ದೇಶನಗಳು

- ವಯಸ್ಸಿನ ಅಧಿಕೃತ ಪುರಾವೆ (ಐಡಿ ಕಾರ್ಡ್) ಇಲ್ಲದೆ ಪಬ್, ಬ್ರೂವರೀಸ್, ಬಾರ್, ಕ್ಲಬ್ ಅಥವಾ ಮದ್ಯ ಸರಬರಾಜು ಮಾಡುವ ಸಂಸ್ಥೆಗಳ ಪ್ರವೇಶ ನಿಷೇಧ
- ಸಂಸ್ಥೆಗಳು ಗ್ರಾಹಕರಿಗೆ ಪ್ರವೇಶ ನೀಡುವ ಮೊದಲು ಅಥವಾ ಮದ್ಯವನ್ನು ಸರಬರಾಜು ಮಾಡುವ ಮುನ್ನ ಸರ್ಕಾರ ನೀಡಿದ ಅಧಿಕೃತ ಗುರುತಿನ ಚೀಟಿ ಪರಿಶೀಲಿಸುವುದು ಕಡ್ಡಾಯ
- ಅಪ್ರಾಪ್ತರಿಗೆ ಮದ್ಯ ಸರಬರಾಜು ಮಾಡುವುದು, ಮದ್ಯ ಸೇವಿಸಲು ಪ್ರಚೋದಿಸಿದರೆ ಕಠಿಣ ಕ್ರಮ
- ಸಂಸ್ಥೆಯ ಆವರಣದೊಳಗೆ ನಡೆಯುವ ನಿಯಮ ಉಲ್ಲಂಘನೆಗಳಿಗೆ ಆಯಾ ಸಂಸ್ಥೆಯ ಮಾಲೀಕರು, ವ್ಯವಸ್ಥಾಪಕರು, ಪರವಾನಗಿದಾರರು ಮತ್ತು ಕಾರ್ಯಕ್ರಮದ ಆಯೋಜಕರೇ ಹೊಣೆಗಾರರು
- ಪ್ರವೇಶ ದ್ವಾರದ ಸಿಸಿಟಿವಿ ಕಾಮರಾಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು ಮತ್ತು ತನಿಖೆಯ ಸಮಯದಲ್ಲಿ ನಿಯಮ ಪಾಲನೆಯನ್ನು ಪರಿಶೀಲಿಸಲು ಸಿಸಿಟಿವಿ ದೃಶ್ಯಾವಳಿಯನ್ನು ನಿಗದಿತ ಅವಧಿಯವರೆಗೆ ಸುರಕ್ಷಿತವಾಗಿ ಸಂಗ್ರಹಿಸಿಡಬೇಕು
- ಅಪ್ರಾಪ್ತ ವಯಸ್ಕರು ಮದ್ಯ, ತಂಬಾಕು ಮತ್ತು ಮಾದಕ ದ್ರವ್ಯಗಳಿಗೆ ಬಲಿಯಾಗುವುದನ್ನು ತಡೆಯಲು ಪೊಲೀಸರು ಶಿಕ್ಷಣ ಸಂಸ್ಥೆಗಳು, ಪೋಷಕರು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು ಮತ್ತು ನಾಗರಿಕ ಗುಂಪುಗಳೊಂದಿಗೆ ಜಂಟಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

### ಮದ್ಯ ಸರಬರಾಜು ಸಂಸ್ಥೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ



**ಬೆಂಗಳೂರು, ಜೂ.8:** ಅಪ್ರಾಪ್ತ ವಯಸ್ಕರ ಪ್ರವೇಶವನ್ನು ಕಟ್ಟುನಿಟ್ಟಾಗಿ ತಡೆಯಲು ಮತ್ತು ಮದ್ಯ ಸರಬರಾಜು ಮಾಡುವುದನ್ನು ನಿಷೇಧಿಸಲು ಬೆಂಗಳೂರಿನ ಎಲ್ಲಾ ಪಬ್, ಬ್ರೂವರೀಸ್, ಬಾರ್, ಕ್ಲಬ್, ಲಾಂಜ್, ರೆಸ್ಟೋರೆಂಟ್ ಹಾಗೂ ಮದ್ಯ ಸರಬರಾಜು ಮಾಡುವ ಇತರ ಸಂಸ್ಥೆಗಳಿಗೆ ನೋಟಿಸ್ ಜಾರಿ ಮಾಡುವಂತೆ ಕರ್ನಾಟಕದ ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಇಲಾಖೆಗಳ ಸಚಿವರಾದ ಪ್ರಿಯಾಂಕ್ ಖರ್ಗೆ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಬೆಂಗಳೂರಿನಲ್ಲಿ ಹದಿಹರೆಯದವರು ಮತ್ತು ಯುವ ಜನರಲ್ಲಿ ಹೆಚ್ಚುತ್ತಿರುವ ಮದ್ಯಪಾನ ಹಾಗೂ ಮಾದಕ ದ್ರವ್ಯಗಳ ಬಳಕೆಯ ಬಗೆಗಿನ ಆತಂಕದ ಹಿನ್ನೆಲೆಯಲ್ಲಿ ಈ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದೆ. ಬೆಂಗಳೂರಿನ ನಾಲ್ಕು ಪ್ರಮುಖ ಶಿಕ್ಷಣ ಸಂಸ್ಥೆಗಳ ಪದವಿಪೂರ್ವ, ಪದವಿ ಮತ್ತು ಉನ್ನತ ಪ್ರೌಢ ತರಗತಿಗಳ 4,093 ವಿದ್ಯಾರ್ಥಿಗಳ ನಡುವೆ ಇತ್ತೀಚೆಗೆ ನಡೆಸಿದ ಸಂಶೋಧನೆಯಲ್ಲಿ, ನಗರದ ಪ್ರತಿ ಮೂವರು ಹದಿಹರೆಯದವರಲ್ಲಿ ಒಬ್ಬರು ಮದ್ಯ ಅಥವಾ ತಂಬಾಕು ಬಳಕೆಯಿಂದಾಗಿ ಆರೋಗ್ಯ ಸಮಸ್ಯೆಗಳನ್ನು ಎದುರಿಸುವ ಅಪಾಯದಲ್ಲಿದ್ದಾರೆ ಎಂಬ ಆಘಾತಕಾರಿ ವಿಷಯ ಬೆಳಕಿಗೆ ಬಂದಿದೆ. ಈ ಅಧ್ಯಯನವನ್ನು ಬೆಂಗಳೂರಿನ ಸೇಂಟ್ ಜಾನ್ಸ್ ಮೆಡಿಕಲ್ ಕಾಲೇಜು, ಕ್ರೈಸ್ಟ್ ವಿಶ್ವವಿದ್ಯಾಲಯ ಮತ್ತು ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜಿನ ಸಂಶೋಧಕರು ನಡೆಸಿದ್ದಾರೆ. ಈ ಅಧ್ಯಯನದ ಪ್ರಕಾರ, ಸಮೀಕ್ಷೆಗೆ ಒಳಪಟ್ಟ ಯುವಕರಲ್ಲಿ ಶೇ. 33 ರಷ್ಟು ಮಂದಿ ಮದ್ಯವನ್ನು ಬಳಸುತ್ತಿದ್ದರೆ, ಶೇ. 18 ರಷ್ಟು ಮಂದಿ ತಂಬಾಕು ಚಟಕ್ಕೆ ದಾಸರಾಗಿದ್ದಾರೆ. ಇದು ತಂಬಾಕು ಬಳಕೆಯ ರಾಷ್ಟ್ರೀಯ ಸರಾಸರಿ (ಶೇ. 8.7) ಮತ್ತು ಮದ್ಯಪಾನದ ರಾಷ್ಟ್ರೀಯ ಸರಾಸರಿಗಿಂತ (ಶೇ. 7.9) ಗಣನೀಯವಾಗಿ ಹೆಚ್ಚಾಗಿದೆ. ಅಷ್ಟೇ ಅಲ್ಲದೆ, ಇದು ಕರ್ನಾಟಕದ ಒಟ್ಟಾರೆ ಸರಾಸರಿಯಾದ ಶೇ. 4.7 (ತಂಬಾಕು) ಮತ್ತು ಶೇ. 8.5 ಕ್ಕಿಂತಲೂ (ಮದ್ಯಪಾನ) ತೀರಾ ಹೆಚ್ಚಾಗಿದೆ. ಬೆಂಗಳೂರಿನಲ್ಲಿ ಹದಿಹರೆಯದವರು ಮದ್ಯಪಾನ ಮಾಡಲು ಪ್ರಾರಂಭಿಸುವ ಸರಾಸರಿ ವಯಸ್ಸು 17 ವರ್ಷವಾಗಿದ್ದು, ಕೆಲವರು ಕೇವಲ 8 ವರ್ಷ ವಯಸ್ಸಿನಲ್ಲೇ ಮದ್ಯಪಾನದ ಹವ್ಯಾಸ ಆರಂಭಿಸಿದ್ದಾರೆ ಎಂದು ವರದಿ ತಿಳಿಸಿದೆ.

ಈ ಗಂಭೀರ ಸಂಶೋಧನಾ ವರದಿಯ ಹಿನ್ನೆಲೆಯಲ್ಲಿ, ಅಪ್ರಾಪ್ತ ವಯಸ್ಕರ ಮದ್ಯಪಾನವನ್ನು ಕೇವಲ ಪರವಾನಗಿ ನಿಯಮಗಳ ಉಲ್ಲಂಘನೆ ಎಂದು ಪರಿಗಣಿಸದೆ, ಇದನ್ನು ಯುವಕರ ಸುರಕ್ಷತೆ ಮತ್ತು ಸಾರ್ವಜನಿಕ ಆರೋಗ್ಯದ ಗಂಭೀರ ಕಾಳಜಿ ಎಂದು ಪರಿಗಣಿಸುವಂತೆ ಪೊಲೀಸರಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದ್ದಾರೆ.

ಮದ್ಯ ಸರಬರಾಜು ಮಾಡುವ ಎಲ್ಲಾ ಸಂಸ್ಥೆಗಳು ಪ್ರವೇಶ ದ್ವಾರದಲ್ಲಿ ಮತ್ತು ಮದ್ಯವನ್ನು ನೀಡುವ ಮೊದಲು ಕಟ್ಟುನಿಟ್ಟಾದ ವಯಸ್ಸಿನ ಪರಿಶೀಲನಾ ನಿಯಮಗಳನ್ನು ಜಾರಿಗೆ ತರಬೇಕು ಎಂದು ಆದೇಶಿಸಿದ್ದಾರೆ.

ಅಪ್ರಾಪ್ತ ವಯಸ್ಕರ ಮದ್ಯಪಾನಕ್ಕೆ ಪ್ರೋತ್ಸಾಹ ನೀಡುವ ಅಥವಾ ಅದಕ್ಕೆ ಕಾರಣವಾಗುವ ಸಂಸ್ಥೆಗಳ ವಿರುದ್ಧ ಕರ್ನಾಟಕ ಸರ್ಕಾರವು ಯಾವುದೇ ಕಾರಣಕ್ಕೂ ರಾಜಿ ಮಾಡಿಕೊಳ್ಳುವುದಿಲ್ಲ ಮತ್ತು 'ಶೂನ್ಯ ಸಹಿಷ್ಣುತೆ' ನೀತಿಯನ್ನು ಅಳವಡಿಸಿಕೊಳ್ಳಲಿದೆ ಎಂದು ಗೃಹ ಸಚಿವರು ಸ್ಪಷ್ಟಪಡಿಸಿದ್ದಾರೆ.

"ಮಕ್ಕಳು ಮತ್ತು ಯುವ ಜನರನ್ನು ಮದ್ಯ ಹಾಗೂ ಮಾದಕ ದ್ರವ್ಯಗಳ ದುರಭ್ಯಾಸದಿಂದ ರಕ್ಷಿಸಬೇಕಾಗಿದೆ. ವಾಣಿಜ್ಯ ಸಂಸ್ಥೆಗಳು ನಮ್ಮ ಯುವ ಪೀಳಿಗೆಯ ಸುರಕ್ಷತೆ ಮತ್ತು ಭವಿಷ್ಯವನ್ನು ಬದಿಗಿಟ್ಟು ಕೇವಲ ಲಾಭ ಗಳಿಕೆಗೆ ಆದ್ಯತೆ ನೀಡಲು ಸಾಧ್ಯವಿಲ್ಲ. ನಮ್ಮ ನಿಯಮ ಸರಳವಾಗಿದೆ: 'ಐಡಿ ಇಲ್ಲದಿದ್ದರೆ, ಪ್ರವೇಶವಿಲ್ಲ'. ಅಪ್ರಾಪ್ತರ ಮದ್ಯಪಾನಕ್ಕೆ ಕುಮ್ಮಕ್ಕು ನೀಡುವ ಯಾವುದೇ ಸಂಸ್ಥೆಯು ತೀವ್ರ ಸ್ವರೂಪದ ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ," ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ನಿಟ್ಟಿನಲ್ಲಿ ಪೋಷಕರು, ಶಿಕ್ಷಕರು, ನಾಗರಿಕರು ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಪೊಲೀಸರೊಂದಿಗೆ ಸಂಪೂರ್ಣವಾಗಿ ಸಹಕರಿಸಬೇಕೆಂದು ಗೃಹ ಸಚಿವರು ಮನವಿ ಮಾಡಿದ್ದಾರೆ.

# 12 ವರ್ಷಗಳ ಆಡಳಿತವು ಕಲ್ಯಾಣ, ಸಬಲೀಕರಣದ ಮೇಲೆ ಕೇಂದ್ರೀಕೃತ: ಮೋದಿ ಬಣ್ಣನೆ

**ನವದೆಹಲಿ, ಜೂ.8:** ಕಳೆದ 12 ವರ್ಷಗಳಲ್ಲಿ ತಮ್ಮ ಸರ್ಕಾರ ಕೈಗೊಂಡ ಕಲ್ಯಾಣ ಉಪಕ್ರಮಗಳನ್ನು ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರು ಎತ್ತಿ ತೋರಿಸಿದರು, ಬಡವರ ಜೀವನವನ್ನು ಸುಧಾರಿಸುವುದು ಮತ್ತು ಅಭಿವೃದ್ಧಿಯ ಪ್ರಯೋಜನಗಳು ದಶಕಗಳಿಂದ ಹಿಂದುಳಿದವರಿಗೆ ತಲುಪುವಂತೆ ನೋಡಿಕೊಳ್ಳುವುದು ಆಡಳಿತದ ಪ್ರಮುಖ ಉದ್ದೇಶವಾಗಿದೆ ಎಂದು ಪ್ರತಿಪಾದಿಸಿದರು.

ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಪೋಸ್ಟ್ ಮಾಡಿದ ಮೋದಿ, ಕಳೆದ 12 ವರ್ಷಗಳಲ್ಲಿ ಭಾರತವು ಬಡವರು ಮತ್ತು ದೀನದಲಿತರ ಕಲ್ಯಾಣಕ್ಕೆ ಬದ್ಧತೆಯಿಂದ ನಡೆಸಲ್ಪಡುವ ಗಮನಾರ್ಹ ಪರಿವರ್ತನೆಗಳಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಸರ್ಕಾರದ ವಿಧಾನವು "ಅಂತ್ಯೋದಯ" ತತ್ವದಿಂದ ಪ್ರೇರಿತವಾಗಿದೆ – ಸಮಾಜದ ಕೊನೆಯ ವ್ಯಕ್ತಿಯನ್ನು ಮೇಲಕ್ಕೆತ್ತುವುದು – ಮತ್ತು ಎಲ್ಲರಿಗೂ ಘನತೆ ಮತ್ತು ಅವಕಾಶವನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ಅವರು ಹೇಳಿದರು.

"ಕಳೆದ 12 ವರ್ಷಗಳಲ್ಲಿ, ಭಾರತವು ಅನೇಕ ಪರಿವರ್ತನೆಗಳಿಗೆ ಸಾಕ್ಷಿಯಾಗಿದೆ, ಮತ್ತು ಈ ಬದಲಾವಣೆಗಳ ತಿರುಳು ಬಡವರು ಮತ್ತು ದೀನದಲಿತರ ಕಲ್ಯಾಣವಾಗಿದೆ. ನಾವು ಯಾವಾಗಲೂ ಅಂತ್ಯೋದಯದಿಂದ ಪ್ರೇರಿತರಾಗಿದ್ದೇವೆ ಮತ್ತು ದಶಕಗಳಿಂದ ಹಿಂದುಳಿದವರಿಗೆ ಅಭಿವೃದ್ಧಿಯ ಪ್ರಯೋಜನಗಳು ತಲುಪುವಂತೆ ನೋಡಿಕೊಳ್ಳುವುದು ನಮ್ಮ ಪ್ರಯತ್ನವಾಗಿದೆ" ಎಂದು ಪ್ರಧಾನಿ ಹೇಳಿದರು.

ಜನಧನ ಯೋಜನೆ, ನೇರ ಲಾಭ ವರ್ಗಾವಣೆ , ಸ್ವಚ್ಛ ಭಾರತ ಮಿಷನ್, ಪ್ರಧಾನ ಮಂತ್ರಿ ಆವಾಸ್ ಯೋಜನೆ, ಜಲ ಜೀವನ ಮಿಷನ್ ಮತ್ತು ಆಯುಷ್ಮಾನ್ ಭಾರತ್ ಸೇರಿದಂತೆ ತಮ್ಮ ಅಧಿಕಾರಾವಧಿಯಲ್ಲಿ ಪ್ರಾರಂಭಿಸಲಾದ ಹಲವಾರು ಪ್ರಮುಖ ಯೋಜನೆಗಳನ್ನು ಮೋದಿ ಉಲ್ಲೇಖಿಸಿದರು, ಪ್ರತಿ ಉಪಕ್ರಮವನ್ನು ಸಾಮಾನ್ಯ ನಾಗರಿಕರ ಜೀವನದ ಗುಣಮಟ್ಟವನ್ನು ಸುಧಾರಿಸುವ ಉದ್ದೇಶದಿಂದ ವಿನ್ಯಾಸಗೊಳಿಸಲಾಗಿದೆ ಎಂದು ಹೇಳಿದರು.

"ಜನ ಧನ ಖಾತೆಗಳು ಮತ್ತು ನೇರ ಲಾಭ ವರ್ಗಾವಣೆಯಿಂದ ಸ್ವಚ್ಛ ಭಾರತ, ಪ್ರಧಾನ ಮಂತ್ರಿ ಆವಾಸ್ ಯೋಜನೆ, ಜಲ ಜೀವನ ಮಿಷನ್, ಆಯುಷ್ಮಾನ್



ಭಾರತ್ ಮತ್ತು ಇನ್ನೂ ಹೆಚ್ಚಿನವುಗಳವರೆಗೆ, ಪ್ರತಿಯೊಂದು ಉಪಕ್ರಮವು ಜನರಿಗೆ ಘನತೆ ಮತ್ತು ಅವಕಾಶವನ್ನು ಖಚಿತಪಡಿಸಿಕೊಳ್ಳುವ ಸರಳ ಉದ್ದೇಶದಿಂದ ನಡೆಸಲ್ಪಟ್ಟಿದೆ" ಎಂದು ಅವರು ಹೇಳಿದರು.

ಜನ ಧನ ಪ್ರಯೋಜನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮತ್ತು ಪಾರದರ್ಶಕವಾಗಿ ತಲುಪಿಸುವಲ್ಲಿ ತಂತ್ರಜ್ಞಾನದ ಪಾತ್ರವನ್ನು ಪ್ರಧಾನಿ ಪ್ರತಿಪಾದಿಸಿದರು.. ಅವರ ಪ್ರಕಾರ, ಡಿಜಿಟಲ್ ವೇದಿಕೆಗಳು ಮತ್ತು ಡಿಬಿಟಿ ಕಾರ್ಯವಿಧಾನಗಳು ಸರ್ಕಾರದ ನೆರವು ಫಲಾನುಭವಿಗಳನ್ನು ನೇರವಾಗಿ ತಲುಪಲು ಅನುವು ಮಾಡಿಕೊಟ್ಟಿವೆ, ಸೋರಿಕೆಗಳನ್ನು ಕಡಿಮೆ ಮಾಡಿ ಆಡಳಿತದಲ್ಲಿ ನಂಬಿಕೆಯನ್ನು ಹೆಚ್ಚಿಸಿವೆ.

"ಬಡವರಿಗೆ ಉತ್ತಮ ಗುಣಮಟ್ಟದ ಜೀವನವನ್ನು ಖಾತ್ರಿಪಡಿಸುವಲ್ಲಿ ತಂತ್ರಜ್ಞಾನವು ಪ್ರಮುಖ ಪಾತ್ರ ವಹಿಸಿದೆ ಎಂಬುದು ಸಂತೋಷದ ಸಂಗತಿ. ನೇರ ಲಾಭ ವರ್ಗಾವಣೆ ಮತ್ತು ಡಿಜಿಟಲ್ ವೇದಿಕೆಗಳ ಮೂಲಕ, ಬೆಂಬಲವು ಜನರನ್ನು ನೇರವಾಗಿ ಮತ್ತು ಪಾರದರ್ಶಕವಾಗಿ ತಲುಪುತ್ತಿದೆ. ಇದು ಸೋರಿಕೆಗಳನ್ನು ಕಡಿಮೆ ಮಾಡಿದೆ, ದಕ್ಷತೆಯನ್ನು ಸುಧಾರಿಸಿದೆ ಮತ್ತು ಆಡಳಿತದಲ್ಲಿ ನಂಬಿಕೆಯನ್ನು ಬಲಪಡಿಸಿದೆ" ಎಂದು ಮೋದಿ ಹೇಳಿದರು.

ಸರ್ಕಾರದ ಕಲ್ಯಾಣ ಪ್ರಯತ್ನಗಳನ್ನು 2047ರ ವೇಳೆಗೆ ನಾಗರಿಕರನ್ನು ಸಬಲೀಕರಣ ಗೊಳಿಸುವ ಮತ್ತು ಅಭಿವೃದ್ಧಿ ಹೊಂದಿದ ಭಾರತಕ್ಕೆ ಅಡಿಪಾಯವನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ವಿಶಾಲ ಚಳುವಳಿ ಎಂದು ಪ್ರಧಾನಿ ಬಣ್ಣಿಸಿದರು.

ಗರೀಬ್ ಕಲ್ಯಾಣ್ ಅನ್ನು ಮುಂದುವರಿಸುವ ಪ್ರಯಾಣವು ಮಾನವ ಸಬಲೀಕರಣದ ಕಡೆಗೆ ಸಾಮೂಹಿಕ ಚಳುವಳಿಯಾಗಿ ಮಾರ್ಪಟ್ಟಿದೆ ಮತ್ತು ವಿಕ್ಸಿತ್ ಭಾರತದ ನಮ್ಮ ಕನಸನ್ನು ನನಸಾಗಿಸಿದೆ" ಎಂದು ಅವರು ಹೇಳಿದರು.

ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ ಸರ್ಕಾರವು 12 ವರ್ಷಗಳನ್ನು ಪೂರೈಸುತ್ತಿರುವ ಸಂದರ್ಭದಲ್ಲಿ ಈ ಹೇಳಿಕೆಗಳು ಬಂದಿವೆ, ಈ ಅವಧಿಯಲ್ಲಿ ಕೇಂದ್ರವು ಕಲ್ಯಾಣ ವಿತರಣೆ, ಆರ್ಥಿಕ ಸೇರ್ಪಡೆ, ವಸತಿ, ನೈರ್ಮಲ್ಯ, ಆರೋಗ್ಯ ರಕ್ಷಣೆ ಮತ್ತು ಮೂಲಭೂತ ಸೇವೆಗಳ ಪ್ರವೇಶವನ್ನು ತನ್ನ ಆಡಳಿತ ಕಾರ್ಯಸೂಚಿಯ ಪ್ರಮುಖ ಆಧಾರಸ್ತಂಭಗಳಾಗಿ ನಿರಂತರವಾಗಿ ಎತ್ತಿ ತೋರಿಸಿದೆ.

ತಂತ್ರಜ್ಞಾನ ಮತ್ತು ಡಿಜಿಟಲ್ ಮೂಲಸೌಕರ್ಯಗಳ ಬಳಕೆಯು ಪಾರದರ್ಶಕತೆಯನ್ನು ಸುಧಾರಿಸಲು ಮತ್ತು ಪ್ರಯೋಜನಗಳ ಗುರಿ ವಿತರಣೆಯನ್ನು ಖಚಿತಪಡಿಸಿಕೊಳ್ಳಲು ಸಹಾಯ ಮಾಡಿದೆ ಎಂದು ಸರ್ಕಾರ ಸಮರ್ಥಿಸಿಕೊಂಡಿದೆ, ಆದರೆ ವಿರೋಧ ಪಕ್ಷಗಳು ಉದ್ಯೋಗ, ಹಣದುಬ್ಬರ ಮತ್ತು ಸಾಮಾಜಿಕ ಕಲ್ಯಾಣ ಫಲಿತಾಂಶಗಳಲ್ಲಿ ಅದರ ಒಟ್ಟಾರೆ ದಾಖಲೆಯನ್ನು ಹೆಚ್ಚಾಗಿ ಪ್ರಶ್ನಿಸಿವೆ.

## ಕಾಂಗ್ರೆಸ್ ನಡೆಯನ್ನು ಟೀಕಿಸಿ ಬಹಿರಂಗವಾಗಿ ಫ್ಲೆಕ್ಸ್

**ನವದೆಹಲಿ, ಜೂ.8:** ಇಂಡಿಯಾ ಮೈತ್ರಿಕೂಟದ ಮಹತ್ವದ ಸಭೆ ನಡುವೆ ಮೈತ್ರಿಕೂಟದಲ್ಲಿ ಬಿನ್ನಾಭಿಪ್ರಾಯಗಳು ವ್ಯಕ್ತವಾಗಿದೆ. ಕಾಂಗ್ರೆಸ್ ವಿರುದ್ಧ ಮೈತ್ರಿ ಪಕ್ಷಗಳು ಬಹಿರಂಗವಾಗಿ ಆಕ್ಷೇಪ ವ್ಯಕ್ತಪಡಿಸುತ್ತಾ ದೆಹಲಿಯ ಪ್ರಮುಖ ರಸ್ತೆಗಳಲ್ಲಿ ಬ್ಯಾನರ್ಗಳನ್ನು ಹಾಕಿ ಪ್ರತಿಭಟನೆ ನಡೆಸಿವೆ. ಡಿಎಂಕೆ, ಟಿಎಂಸಿ, ಆಪ್, ಎನ್‌ಸಿಪಿ, ಎಲ್‌ಡಿಎಫ್‌ನಂತಹ ಪಕ್ಷಗಳು ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿವೆ.

**ದೆಹಲಿಯಲ್ಲಿ INDIA ಮೈತ್ರಿಕೂಟದ ಸಭೆ ಸಭೆಯ ನಡುವೆ ವಿಪಕ್ಷಗಳಲ್ಲಿ ಭಿನ್ನಾಭಿಪ್ರಾಯ**

ಸಭೆಗೆ ಮುನ್ನ ಡಿಎಂಕೆ ಪಕ್ಷವು ಸಭೆಯಿಂದ ಹಿಂದೆ ಸರಿಯಿತು ತಮಿಳುನಾಡು ವಿಧಾನಸಭಾ ಚುನಾವಣೆಯ ನಂತರ ಕಾಂಗ್ರೆಸ್ ತನ್ನೊಂದಿಗೆ ಮಾಡಿದ ವಿಶ್ವಾಸಘಾತುಕತೆಯನ್ನು ಉಲ್ಲೇಖಿಸಿ ಡಿಎಂಕೆ ತನ್ನ ಕಾರ್ಯಕರ್ತರ ಭಾವನೆಗಳನ್ನು ಗೌರವಿಸುವುದಾಗಿ ಹೇಳಿ ಸಭೆಗೆ ಬರದಿರುವುದಾಗಿ ಘೋಷಿಸಿತು. ಕಾಂಗ್ರೆಸ್ ಟಿವಿಕೆ ನೇತೃತ್ವದ ಸರ್ಕಾರಕ್ಕೆ ಬೆಂಬಲ ನೀಡಿದ್ದು ಡಿಎಂಕೆಅನ್ನು ತೀವ್ರವಾಗಿ ಕೆರಳಿಸಿದೆ. ಇಪ್ಪತ್ತು ವರ್ಷಗಳಿಂದ ನಮ್ಮ ಆಸರೆ ಪಡೆದಿದ್ದ ಕಾಂಗ್ರೆಸ್ ಇಂದು ನಮ್ಮ ಬೆನ್ನಿಗೆ ಚೂರಿ ಇರಿದಿದೆ ಎಂದು ಆಎಪಿ ನಾಯಕರು ಆರೋಪಿಸಿದ್ದಾರೆ.

ದೆಹಲಿಯ ರಸ್ತೆಗಳಲ್ಲಿ ಹಾಕಲಾದ ಬ್ಯಾನರ್‌ಗಳಲ್ಲಿ ನಾವು ಕಾಂಗ್ರೆಸ್ ಮೇಲೆ ಅವಲಂಬನೆಯಾಗುವುದಿಲ್ಲ ಎಂದು ಟಿಎಂಸಿ ಸ್ಪಷ್ಟಪಡಿಸಿದೆ. ಎಲ್‌ಡಿಎಫ್ ಸಾಮಾನ್ಯ ಕಾರ್ಯಕರ್ತರಿಗೂ ಇರುವ ಕನಿಷ್ಠ ಜ್ಞಾನ ರಾಹುಲ್ ಗಾಂಧಿಗೆ ಇಲ್ಲ ಎಂದು ಟೀಕಿಸಿದೆ. ಎನ್‌ಸಿಪಿ ರಾಹುಲ್ ಗಾಂಧಿ ನಿರಂತರ ನಾಯಕತ್ವದ ಕೊರತೆ ಇದೆ ಎಂದು ಆಕ್ಷೇಪಿಸಿದೆ. ಈ ಬ್ಯಾನರ್ಗಳು ಸಭೆಗೆ ಮುನ್ನ ಮೈತ್ರಿಕೂಟದ ಒಳಗಿನ ಅಸಮಾಧಾನವನ್ನು ಬಹಿರಂಗಗೊಳಿಸಿವೆ.

ಸಿಪಿಐಎಂ ಮತ್ತು ಎಒಪ ಪಕ್ಷಗಳು ಸಹ ಕಾಂಗ್ರೆಸ್‌ನ ವರ್ತನೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿವೆ. ಕಾಂಗ್ರೆಸ್ ಮೈತ್ರಿಕೂಟದಲ್ಲಿ ಎಲ್ಲರನ್ನು ಒಟ್ಟಿಗೆ ಕರೆದೊಯ್ಯುವ ಪ್ರಬುದ್ಧತೆ ತೋರಿಸುತ್ತಿಲ್ಲ ಎಂದು ಅವುಗಳ ನಾಯಕರು ಹೇಳಿದ್ದಾರೆ. ಆಪ್ ಮತ್ತು ಟಿಎಂಸಿಯಯ ಕಾಂಗ್ರೆಸ್ ವಿಶ್ವಾಸಾರ್ಹತೆ ಕಳೆದುಕೊಳ್ಳುತ್ತಿದೆಯೇ ಎಂದು ಹೇಳಿವೆ.

ತಮಿಳುನಾಡು, ಪಶ್ಚಿಮ ಬಂಗಾಳ, ದೆಹಲಿ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಕಾಂಗ್ರೆಸ್ನ ನಿರ್ಧಾರಗಳು ಮೈತ್ರಿಕೂಟದ ಒಗ್ಗಟ್ಟಿಗೆ ಧಕ್ಕೆ ತಂದಿವೆ ಎಂಬ ಅಭಿಪ್ರಾಯಗಳು ಬಲಗೊಳ್ಳುತ್ತಿವೆ. ಸಭೆಯಲ್ಲಿ ಒಗ್ಗಟ್ಟನ್ನು ಮರುಸ್ಥಾಪಿಸುವ ಪ್ರಯತ್ನ ನಡೆದಿದ್ದರೂ, ಈ ಬಿರುಕುಗಳು 2029 ಲೋಕಸಭಾ ಚುನಾವಣೆಗೆ ಮುನ್ನ ಮೈತ್ರಿಕೂಟದ ಭವಿಷ್ಯವನ್ನು ಅನಿಶ್ಚಿತಗೊಳಿಸಿವೆ.

## ರಾಜ್ಯಸಭಾ ಸ್ಥಾನಕ್ಕೆ ಟಿಎಂಸಿಯ ಸುಖೇಂದು ರಾಜೀನಾಮೆ

**ಕೋಲ್ಕತ್ತಾ, ಜೂ. 8:** ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯ ಸೋಲಿನಿಂದ ಕಂಗೆಟ್ಟಿರುವ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷಕ್ಕೆ ಮತ್ತೊಂದು ಬಹುದೊಡ್ಡ ಆಘಾತ ಎದುರಾಗಿದೆ.

ಪಕ್ಷದ ಹಿರಿಯ ನಾಯಕ ಹಾಗೂ ದೀರ್ಘಕಾಲದ ರಾಜ್ಯಸಭಾ ಸದಸ್ಯ ಸುಖೇಂದು ಶೇಖರ್ ರಾಯ್ ಅವರು ಸೋಮವಾರ ರಾಜ್ಯಸಭಾ ಸದಸ್ಯತ್ವ ಹಾಗೂ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಜೊತೆಗೆ, ರಾಜ್ಯದಲ್ಲಿ ಹೊಸದಾಗಿ ಆಯ್ಕೆಯಾಗಿರುವ ಬಿಜೆಪಿ ಸರ್ಕಾರವನ್ನು ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

ತಮ್ಮ ರಾಜೀನಾಮೆ ಪತ್ರದಲ್ಲಿ ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ



ಸುಖೇಂದು ಶೇಖರ್ ರಾಯ್, ಕಳೆದ 15 ವರ್ಷಗಳ ಟಿಎಂಸಿಯ ಅರಾಜಕತೆಯ ಆಡಳಿತಕ್ಕೆ ಬೇಸತ್ತು ಬಂಗಾಳದ ಜನತೆ, ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ಬಿಜೆಪಿಗೆ ಅಭೂತಪೂರ್ವ ಜನಾದೇಶ ನೀಡಿದ್ದಾರೆ.

ಟಿಎಂಸಿ ಆಡಳಿತದಲ್ಲಿ ವ್ಯಾಪಕ ಭ್ರಷ್ಟಾಚಾರ, ಮಹಿಳೆಯರ ಮೇಲಿನ ಮಿತಿಮೀರಿದ ದೌರ್ಜನ್ಯವಿತ್ತು. ಆರೋಗ್ಯ, ಶಿಕ್ಷಣ, ಕೈಗಾರಿಕೆ, ಕಾನೂನು ಸುವ್ಯವಸ್ಥೆ ಮತ್ತು ಉದ್ಯೋಗ ಸೃಷ್ಟಿಯಲ್ಲಿ ಪಕ್ಷವು ಸಂಪೂರ್ಣವಾಗಿ ವಿಫಲವಾಗಿತ್ತು ಎಂದು ಟೀಕಿಸಿದ್ದಾರೆ.

ಅದೇ ವೇಳೆ, ನೂತನವಾಗಿ ರಚನೆಯಾಗಿರುವ ಬಿಜೆಪಿ ಸರ್ಕಾರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಅವರು, ಹೊಸ ಜನಪರ ಸರ್ಕಾರವು ತನ್ನ ಚುನಾವಣಾ ಪ್ರಣಾಳಿಕೆಯಂತೆ ಪಶ್ಚಿಮ ಬಂಗಾಳದ ಸಮಗ್ರ ಅಭಿವೃದ್ಧಿ ಮತ್ತು ಪುನರ್ನಿರ್ಮಾಣಕ್ಕಾಗಿ ಈಗಾಗಲೇ ಕಾರ್ಯಕ್ರಮಗಳನ್ನು ಜಾರಿಗೊಳಿಸಲು ಮುಂದಾಗಿದೆ. ಜನತೆಯ ಈ ಐತಿಹಾಸಿಕ ತೀರ್ಪನ್ನು ಗೌರವಿಸಿ ನಾನು ರಾಜ್ಯಸಭೆಗೆ ಹಾಗೂ ಪಕ್ಷಕ್ಕೆ ರಾಜೀನಾಮೆ ನೀಡುವ ನಿರ್ಧಾರ ಕೈಗೊಂಡಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

# ಟಿಎಂಸಿ ಆಂತರಿಕ ಕಚ್ಚಾಟ ಉಲ್ಬಣ: ಪ್ರತ್ಯೇಕ ಆಸನಕ್ಕೆ 20 ಸಂಸದರಿಂದ ಸ್ಪೀಕರ್‌ಗೆ ಮನವಿ

**ನವದೆಹಲಿ, ಜೂ.8:** ತೃಣಮೂಲ ಕಾಂಗ್ರೆಸ್‌ನಲ್ಲಿ ಆಂತರಿಕ ಅಶಾಂತಿಯ ಹೊಸ ಲಕ್ಷಣಗಳು ಹೊರಹೊಮ್ಮಿವೆ (ಪಕ್ಷದ ಸಂಸದರ ಗುಂಪು 20 ಸಂಸದರು ಸಹಿ ಮಾಡಿದ ಪತ್ರವನ್ನು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಸಲ್ಲಿಸಿದ ನಂತರ, ಇದು ಪಕ್ಷದೊಳಗಿನ ಕಳವಳಗಳನ್ನು ಎತ್ತಿ ತೋರಿಸಿತು ಮತ್ತು ಅದರ ಸಂಸದೀಯ ಶ್ರೇಣಿಯ ಒಂದು ವಿಭಾಗದಲ್ಲಿ ಬೆಳೆಯುತ್ತಿರುವ ಅಸಮಾಧಾನದ ಬಗ್ಗೆ ಊಹಾಪೋಹಗಳಿಗೆ ಕಾರಣವಾಯಿತು. ಈ ಉಪಕ್ರಮವನ್ನು ಟಿಎಂಸಿ ಲೋಕಸಭಾ ಸದಸ್ಯ ಕಾಕೋಲಿ ಘೋಷ್ ದಸ್ತಿದಾರ್ ನೇತೃತ್ವ ವಹಿಸಿದ್ದಾರೆ, ಅವರು ಸಲ್ಲಿಕೆಗಾಗಿ ಸಹ ಸಂಸದರಲ್ಲಿ ಬೆಂಬಲವನ್ನು ಕ್ರೋಢೀಕರಿಸಿದ್ದಾರೆ ಎಂದು ಹೇಳಿಕೊಳ್ಳುತ್ತಾರೆ. ಪತ್ರದ ವಿಷಯಗಳನ್ನು ಸಾರ್ವಜನಿಕವಾಗಿ ಪ್ರಕಟಿಸಲಾಗಿಲ್ಲವಾದರೂ, ಅದರ ವರದಿ ಸಲ್ಲಿಕೆ ತೀವ್ರ ರಾಜಕೀಯ ಚರ್ಚೆಗೆ ನಾಂದಿ ಹಾಡಿದೆ ಮತ್ತು ಮಮತಾ ಬ್ಯಾನರ್ಜಿ ನೇತೃತ್ವದ ಪಕ್ಷದ ಆಂತರಿಕ ಚಲನಶೀಲತೆಯ ಮೇಲೆ ಹೊಸ ಗಮನವನ್ನು ಕೇಂದ್ರೀಕರಿಸಿದೆ. "ನಾನು ಸೇರಿದಂತೆ ಸುಮಾರು 20 ಟಿಎಂಸಿ ಸಂಸದರು ಎನ್ಡಿಎಗೆ ಬೆಂಬಲ ನೀಡುವ ನಮ್ಮ ನಿರ್ಧಾರದ ಬಗ್ಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದಿದ್ದೇವೆ" ಎಂದು



ಕಾಕೋಲಿ ಘೋಷ್ ದಸ್ತಿದಾರ್ ಹೇಳಿದ್ದಾರೆ ಎಂದು ವರದಿಯಾಗಿದೆ.

ಈ ಬೆಳವಣಿಗೆ ರಾಜಕೀಯವಾಗಿ ಮಹತ್ವದ ಕ್ಷಣದಲ್ಲಿ, ನ್ಯೂ ಇಂಡಿಯಾ ಅಲೈಯನ್ಸ್ ಬ್ಯಾನರ್ ಅಡಿಯಲ್ಲಿ ವಿರೋಧ ಪಕ್ಷಗಳ ಸಭೆಯೊಂದಿಗೆ ಹೊಂದಿಕೆಯಾಗುತ್ತದೆ. ಸೋಮವಾರ ದೆಹಲಿಯಲ್ಲಿ ನಡೆದ ಸಭೆಯಲ್ಲಿ ಟಿಎಂಸಿ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಭಾಗವಹಿಸಿದ್ದರು, ಅಲ್ಲಿ ವಿರೋಧ ಪಕ್ಷದ ನಾಯಕರು ಮುಂಬರುವ ಸಂಸತ್ತಿನ ಮುಂಗಾರು ಅಧಿವೇಶನಕ್ಕೆ ಮುಂಚಿತವಾಗಿ ಏಕತೆಯನ್ನು ಪ್ರದರ್ಶಿಸಲು ಮತ್ತು ಸಂಘಟಿತ ಕಾರ್ಯತಂತ್ರವನ್ನು ರೂಪಿಸಲು ಪ್ರಯತ್ನಿಸಿದರು. "ನಾವು ಲೋಕಸಭಾ ಸ್ಪೀಕರ್‌ಗೆ ಪತ್ರವನ್ನು ಕಳುಹಿಸಿದ್ದೇವೆ ಮತ್ತು ನಾವು ಎನ್‌ಡಿಎ ಗೆ ಬೆಂಬಲ ನೀಡಲು ಬಯಸುತ್ತೇವೆ ಎಂದು ಹೇಳಿದ್ದೇವೆ." "ನಾವು ಜನರ ತೀರ್ಪನ್ನು ಒಪ್ಪಿಕೊಂಡಿದ್ದೇವೆ ಮತ್ತು ನಮ್ಮ ಭವಿಷ್ಯದ ರಾಜಕೀಯ ಹಾದಿಯು ಎನ್‌ಡಿಎ ಯೊಂದಿಗೆ ಹೊಂದಿಕೆಯಾಗಬೇಕು ಎಂದು ನಂಬುತ್ತೇವೆ" ಎಂದು ಕಾಕೋಲಿ ಹೇಳಿದರು. ಟಿಎಂಸಿ ನಾಯಕತ್ವ ಅಥವಾ ಪತ್ರದೊಂದಿಗೆ ಸಂಬಂಧ ಹೊಂದಿರುವ ಸಂಸದರು ಈ ವಿಷಯದ ಬಗ್ಗೆ ಸಾರ್ವಜನಿಕವಾಗಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ವರದಿಯಾದ ಸಲ್ಲಿಕೆಗೆ ಸಂಬಂಧಿಸಿದಂತೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರ ಕಚೇರಿಯಿಂದ ತಕ್ಷಣದ ಪ್ರತಿಕ್ರಿಯೆಯೂ ಬಂದಿಲ್ಲ.

ತೃಣಮೂಲ ಕಾಂಗ್ರೆಸ್ ಬ್ಯಾನರ್ಜಿ ನಾಯಕತ್ವದಲ್ಲಿ ಒಂದು ದಶಕಕ್ಕೂ ಹೆಚ್ಚು ಕಾಲ ಪಶ್ಚಿಮ ಬಂಗಾಳ ರಾಜಕೀಯದಲ್ಲಿ ಪ್ರಾಬಲ್ಯ ಸಾಧಿಸಿದೆ ಮತ್ತು ದೇಶದ ಪ್ರಬಲ ಪ್ರಾದೇಶಿಕ ಪಕ್ಷಗಳಲ್ಲಿ ಒಂದಾಗಿದೆ. ಆದಾಗ್ಯೂ, ಇತ್ತೀಚಿನ ವಿಧಾನಸಭಾ ಚುನಾವಣೆಗಳಲ್ಲಿ ನಿರಾಶಾದಾಯಕ ಪ್ರದರ್ಶನದ ನಂತರ ಪಕ್ಷವು ಹೆಚ್ಚುತ್ತಿರುವ ಆಂತರಿಕ ಅಸಮಾಧಾನವನ್ನು ಎದುರಿಸುತ್ತಿದೆ. ಸಾಂಸ್ಥಿಕ ಕಾರ್ಯನಿರ್ವಹಣೆ, ಸಂಸದೀಯ ಕಾರ್ಯತಂತ್ರ ಮತ್ತು ನಾಯಕತ್ವದ ನಿರ್ಧಾರಗಳ ಬಗ್ಗೆ ಭಿನ್ನಾಭಿಪ್ರಾಯಗಳು ಇತ್ತೀಚಿನ ತಿಂಗಳುಗಳಲ್ಲಿ ಹೆಚ್ಚಾಗಿ ಹೊರಹೊಮ್ಮಿವೆ, ಇದು ಪಕ್ಷದ ಶ್ರೇಣಿ ಮತ್ತು ಕಡತದ ವಿಭಾಗಗಳಲ್ಲಿ ಅಸಮಾಧಾನದ ಬಗ್ಗೆ ಊಹಾಪೋಹಗಳಿಗೆ ಕಾರಣವಾಗಿದೆ. ಸುಮಾರು 20 ಸಂಸದರ ವರದಿಯಾದ ಸಾಮೂಹಿಕ ಕ್ರಮವು ಮಹತ್ವದ್ದಾಗಿದೆ ಎಂದು ರಾಜಕೀಯ ವೀಕ್ಷಕರು ಗಮನಿಸುತ್ತಾರೆ. ಪಕ್ಷದ ಸಾಂಪ್ರದಾಯಿಕ ಕೇಂದ್ರೀಕೃತ ನಾಯಕತ್ವ ರಚನೆ. ಸಂಸದೀಯ ಪಕ್ಷದೊಳಗಿನ ವಿಭಜನೆಯ ಯಾವುದೇ ಗೋಚರ ಚಿಹ್ನೆಗಳು ಟಿಎಂಸಿಯ ಆಂತರಿಕ ಕಾರ್ಯಚಟುವಟಿಕೆಗೆ ಮಾತ್ರವಲ್ಲದೆ ವಿಶಾಲ ವಿರೋಧ ಪಕ್ಷದ ಮೈತ್ರಿಕೂಟದೊಳಗಿನ ಅದರ ಪಾತ್ರದ ಮೇಲೂ ಪರಿಣಾಮ ಬೀರಬಹುದು.



ಪೂರ್ವ ಲಡಾಖ್‌ಗೆ ಭೇಟಿ ನೀಡಿ, ಲೇಹ್ ವಲಯದಲ್ಲಿ ಕಾರ್ಯಾಚರಣೆಯ ಸನ್ನದ್ಧತೆ ಮತ್ತು ಮೂಲಸೌಕರ್ಯ ಅಭಿವೃದ್ಧಿಯ ಪರಿಶೀಲನೆಯ ಸಂದರ್ಭದಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್. ಮುಂಚೂಣಿಯಲ್ಲಿರುವ ಸೈನಿಕರೊಂದಿಗೆ ಸಂವಾದ ನಡೆಸಿದರು.

## ಯೋಗಿ ಸರ್ಕಾರದ ಎನ್‌ಕೌಂಟರ್ ನೀತಿಗೆ ಮೈತ್ರಿಪಕ್ಷ ಆಕ್ರೋಶ

**ಲಖನೌ, ಜೂ.8:** ಜೂ.4ರಂದು, ಉತ್ತರ ಪ್ರದೇಶದ ಗಾಜಿಪುರದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಕೊಲೆ ಆರೋಪಿ ಕಮಲೇಶ್ ಬಿಂದ್ ಹತನಾಗಿರುವ ಘಟನೆ ಆ ರಾಜ್ಯದಲ್ಲಿ ಭಾರಿ ರಾಜಕೀಯ ಬಿರುಗಾಳಿ ಎಬ್ಬಿಸಿದೆ. ಅಪರಾಧಗಳ ವಿರುದ್ಧ ಯೋಗಿ ಆದಿತ್ಯನಾಥ್ ಸರ್ಕಾರ ಅನುಸರಿಸುತ್ತಿರುವ ಕಠಿಣ ಎನ್‌ಕೌಂಟರ್ ನೀತಿ ವಿರುದ್ಧ ವಿರೋಧ ಪಕ್ಷಗಳು ಮಾತ್ರವಲ್ಲದೆ, ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದ ಒಳಗಿನಿಂದಲೇ ತೀವ್ರ ವಿರೋಧ ವ್ಯಕ್ತವಾಗಿದೆ.

ಕೊಲೆ ಆರೋಪಿ ಕಮಲೇಶ್ ಬಿಂದ್ ಎಂಬಾತನನ್ನು ಎನ್‌ಕೌಂಟರ್‌ನಲ್ಲಿ ಹತ್ಯೆಗೈದಿರುವುದನ್ನು ಎನ್‌ಡಿಎ ಮೈತ್ರಿಕೂಟದ ಭಾಗವಾಗಿರುವ ನಿಶಾದ್ ಪಕ್ಷದ ಮುಖ್ಯಸ್ಥ, ರಾಜ್ಯ ಮೀನುಗಾರಿಕೆ ಸಚಿವ ಸಂಜಯ್ ನಿಶಾದ್ ಖಂಡಿಸಿದ್ದಾರೆ. ಪೊಲೀಸರ ಕ್ರಮದ ಬಗ್ಗೆ ಬಹಿರಂಗವಾಗಿ ಅಸಮಾಧಾನ ಹೊರಹಾಕಿದ್ದಾರೆ. ಘಟನೆಯ ಬಗ್ಗೆ ಸ್ವತಂತ್ರ ತನಿಖೆಗೆ ಒತ್ತಾಯಿಸಿದ್ದಾರೆ.

ಅಪರಾಧ ಎಷ್ಟೇ ಗಂಭೀರವಾಗಿದ್ದರೂ ಆರೋಪಿಗೆ ನ್ಯಾಯಾಲಯದಲ್ಲಿ ತನ್ನನ್ನು ರಕ್ಷಿಸಿಕೊಳ್ಳುವ ಅವಕಾಶ ನೀಡಬೇಕು. ನ್ಯಾಯ ಒದಗಿಸುವುದು ನ್ಯಾಯಾಂಗದ ಕೆಲಸವೇ ಹೊರತು ಪೊಲೀಸರದ್ದಲ್ಲ ಎಂದು ನಿಶಾದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಕಠಿಣ ಠೋಕ್ ದೇಂಗೇ ಎಂಬ ಪ್ರಚಾರದ ನೀತಿಗೆ ಮಿತಿಗಳಿವೆ. ಸಾರ್ವಜನಿಕರಲ್ಲಿ ಅನುಮಾನಗಳು ಹೆಚ್ಚಾದರೆ ಈ ತಕ್ಷಣದ ನ್ಯಾಯದ ಸಿದ್ಧಾಂತವು ತಿರುಗುಬಾಣವಾಗಬಹುದು. ಉತ್ತರ ಪ್ರದೇಶದಲ್ಲಿ ಎನ್‌ಡಿಎ ಮೈತ್ರಿಕೂಟದ ಲೋಕಸಭಾ ಸ್ಥಾನಗಳ ಸಂಖ್ಯೆ ಕುಸಿದಿರುವುದೇ ಇದಕ್ಕೆ ಸಾಕ್ಷಿ ಎಂದು ಅವರು ನೆನಪಿಸಿದ್ದಾರೆ.

ಹತನಾದ ಕಮಲೇಶ್ ಬಿಂದ್‌ನನ್ನು ಸಾರ್ವಜನಿಕವಾಗಿ ವಶಕ್ಕೆ ಪಡೆದು ನಂತರ ನಕಲಿ ಎನ್ಕೌಂಟರ್ ಮಾಡಲಾಗಿದೆ ಎಂದು ಬಿಂದ್ ಸಮುದಾಯದ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಚಿವ ನಿಶಾದ್ ಮನೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದ್ದಾರೆ. ಈ ಹಿನ್ನೆಲೆಯಲ್ಲಿ, ಸಚಿವ ನಿಶಾದ್ ಅವರು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಖುದ್ದಾಗಿ ಭೇಟಿಯಾಗಿ ಉನ್ನತ ಮಟ್ಟದ ನಿಷ್ಪಕ್ಷಪಾತ ತನಿಖೆಗೆ ಒತ್ತಾಯಿಸಿದ್ದಾರೆ.

ಆದಾಗ್ಯೂ, ತಮ್ಮ ಕೃತ್ಯವನ್ನು ಪೊಲೀಸರು ಸಮರ್ಥಿಸಿಕೊಂಡಿದ್ದಾರೆ. ಕೊಲೆ ಆರೋಪಿಯಾಗಿದ್ದ ಕಮಲೇಶ್ ಬಿಂದ್ನನ್ನು ಬಂಧಿಸಲು ಹೋದಾಗ ಆತ ಪೊಲೀಸರ ಮೇಲೆ ಗುಂಡು ಹಾರಿಸಿ ತಪ್ಪಿಸಿಕೊಳ್ಳಲು ಯತ್ನಿಸಿದ. ಆತ್ಮರಕ್ಷಣೆಗಾಗಿ ಪೊಲೀಸರು ನಡೆಸಿದ ಪ್ರತಿದಾಳಿಯಲ್ಲಿ ಆತನ ಎದೆಗೆ ಗುಂಡು ತಗುಲಿ ಮೃತಪಟ್ಟಿದ್ದಾನೆ. ಈ ಗುಂಡಿನ ಚಕಮಕಿಯಲ್ಲಿ ಒಬ್ಬ ಪೊಲೀಸ್ ಅಧಿಕಾರಿಯೂ ಗಾಯಗೊಂಡಿದ್ದಾರೆ ಎಂದು ಹೇಳಿಕೊಂಡಿದ್ದಾರೆ.

ಆದರೆ, ಮೃತನ ಕುಟುಂಬಸ್ಥರು ಮತ್ತು ಸ್ಥಳೀಯರು ಪೊಲೀಸರ ವಾದವನ್ನು ಸಂಪೂರ್ಣವಾಗಿ ನಿರಾಕರಿಸಿದ್ದಾರೆ. ಬಿಂದ್ನನ್ನು ಮೊದಲೇ ವಶಕ್ಕೆ ಪಡೆದು, ಯೋಜಿತವಾಗಿ ಕಸ್ಟಡಿಯಲ್ಲಿ ಕೊಲ್ಲಲಾಗಿದೆ ಎಂದು ದೂರಿದ್ದಾರೆ.

ಎನ್‌ಕೌಂಟರ್ ನೀತಿಯನ್ನು ಟೀಕಿಸಿರುವ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಉತ್ತರ ಪ್ರದೇಶದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ. ರಾಜಕೀಯ ಅನುಕೂಲಕ್ಕೆ ತಕ್ಕಂತೆ, ವ್ಯಕ್ತಿಯ ಜಾತಿ ಮತ್ತು ಧರ್ಮವನ್ನು ನೋಡಿ ನಕಲಿ ಎನ್‌ಕೌಂಟರ್‌ಗಳನ್ನು ಮಾಡಲಾಗುತ್ತಿದೆ. ಬಿಜೆಪಿ ಸರ್ಕಾರವು ಪಿಡಿಎ ಸಮುದಾಯವನ್ನು ಹೆದರಿಸಿ ಅವರ ಹಕ್ಕುಗಳನ್ನು ಕಸಿದುಕೊಳ್ಳಲು ಯತ್ನಿಸುತ್ತಿದೆ. ಭಯದ ಮೂಲಕ ಆಡಳಿತ ನಡೆಸಲು ಹಿಂಸಾಚಾರವನ್ನು ಸಾಮಾನ್ಯೀಕರಣ ಮಾಡುತ್ತಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ.

ವಿರೋಧ ಪಕ್ಷಗಳು ಮತ್ತು ಮೈತ್ರಿಕೂಟದ ಆಕ್ಷೇಪಣೆಗಳ ನಡುವೆಯೂ ಬಿಜೆಪಿ ತನ್ನ ನಿಲುವನ್ನು ಸಮರ್ಥಿಸಿಕೊಂಡಿದೆ. ಸರ್ಕಾರಕ್ಕೆ ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆಯೇ ಮೊದಲ ಆದ್ಯತೆಯಾಗಿದ್ದು, ಯಾವುದೇ ಜಾತಿ ಅಥವಾ ರಾಜಕೀಯ ಪ್ರೇರಿತವಾಗಿ ಎನ್‌ಕೌಂಟರ್ ಮಾಡಲಾಗುತ್ತಿಲ್ಲ. ಸಶಸ್ತ್ರ ಅಪರಾಧಿಗಳು ಕಾನೂನಿಗೆ ಸವಾಲೊಡ್ಡಿದಾಗ ಮಾತ್ರ ಪೊಲೀಸರು ಕಾನೂನು ಚೌಕಟ್ಟಿನಲ್ಲೇ ಕ್ರಮ ಕೈಗೊಂಡಿದ್ದಾರೆ ಎಂದು ಹೇಳಿಕೊಂಡಿದೆ.

## ಮೂಡಬಿದಿರೆಯ ಜೈನಮಠಕ್ಕೆ ಚಲನಚಿತ್ರ ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು ಭೇಟಿ



**ಮುಂಬಯಿ, ಜೂ.8:** ಹಿರಿಯ ಕನ್ನಡ ದ ಹೆಸರಾಂತ ಸಿನಿಮಾ ನಿರ್ದೇಶಕ ಶ್ರೀ ರಾಜೇಂದ್ರ ಸಿಂಗ್ ಬಾಬು ಅವರು ಇಂದಿಲ್ಲಿ ಸೋಮವಾರ ಜೈನಕಾಶಿ ಮೂಡಬಿದಿರೆ ಪ್ರಸಿದ್ಧಿಯ ಶ್ರೀ ದಿಗಂಬರ ಜೈನ ಮಠಕ್ಕೆ ಭೇಟಿಯನ್ನೀಡಿ ಜೈನ ಮಹಾಸಂಸ್ಥಾನದ ಪೀಠಾಧ್ಯಕ್ಷ ಭಾರತ ಭೂಷಣ ಜಗದ್ಗುರು ಸ್ವಸ್ತಿಶ್ರೀ ಜಗದ್ಗುರು ಸ್ವಸ್ತಿಶ್ರೀ ಡಾ। ಭಟ್ಟಾರಕ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಮಹಾ ಸ್ವಾಮೀಜಿ ಅವರನ್ನು ಭೇಟಿ ಮಾಡಿದರು.

ವಿದೇಶಿ ಅಕ್ರಮಣವನ್ನು 15ನೇ ಶತಮಾನದಲ್ಲಿ ದಿಟ್ಟತನದಿಂದ ಎದುರಿಸಿದ ಕರಿಮೆಣಸಿನ ರಾಣಿ ಎಂದು ಪ್ರಸಿದ್ಧರಾಗಿದ್ದ ಚೆನ್ನಭೈರಾದೇವಿ ಕುರಿತ ರೋಚಕ ಕಥೆ ತಾನು ಓದಿದ್ದು ರಾಷ್ಟ್ರಪ್ರೇಮ ಜಾಗೃತಿ ಉಂಟುಮಾಡುವ ಐತಿಹಾಸಿಕ ಚಿತ್ರಕ್ಕೆ ನಿರ್ದೇಶನ ಮಾಡುವ ಇಂಗಿತ ವ್ಯಕ್ತ ಪಡಿಸಿದರು.

ಭಟ್ಟಾರಕ ಶ್ರೀಗಳು ಶಾಲು ಹೊದಿಸಿ ಸ್ಮರಣಿಕೆ ನೀಡಿ ಹರಸಿ ಆಶೀರ್ವದಿಸಿದರು. ಈ ಸಂಧರ್ಭ ಶಿಕ್ಷಕ ಲೋಕ ರಾಜ್, ಕಲಾವಿದ ಚಿತ್ತ ಜಿನೇಂದ್ರ ವಕೀಲೆ ಶ್ವೇತಾ ಜೈನ್ ಸಹಾಯಕ ಪ್ರವೀಣ್ ಬೆಂಗಳೂರು ಉಪಸ್ಥಿತರಿದ್ದರು.

## ನೀಟ್ ಪೇಪರ್ ಸೋರಿಕೆ ಪರಿಣಾಮ ಪ್ರಶ್ನೆಪತ್ರಿಕೆ ಸಿದ್ಧಪಡಿಸುವವರಿಗೆ ನಿರ್ಬಂಧ

**ನವದೆಹಲಿ, ಜೂ.8:** ಇತ್ತೀಚಿನ ವರ್ಷಗಳಲ್ಲೇ ಅತ್ಯಂತ ಕಠಿಣವಾದ ಪರೀಕ್ಷಾ ಭದ್ರತಾ ಕ್ರಮಗಳ ಭಾಗವಾಗಿ, NEET-UG2026 ರ ಮರುಪರೀಕ್ಷೆಯ ಪ್ರಶ್ನೆಪತ್ರಿಕೆ ಸಿದ್ಧಪಡಿಸುವಿಕೆ, ಪರಿಶೀಲನೆ ಮತ್ತು ಅನುವಾದ ಪ್ರಕ್ರಿಯೆಯಲ್ಲಿ ತೊಡಗಿರುವ ಎಲ್ಲಾ ತಜ್ಞರನ್ನು ಅತ್ಯಂತ ಸುರಕ್ಷಿತ, ಅಜ್ಞಾತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಅಲ್ಲದೆ, ಅವರನ್ನು ಕಟ್ಟುನಿಟ್ಟಾದ ಐಸೊಲೇಶನ್ ನಿಯಮಗಳ ಅಡಿಯಲ್ಲಿ ಇರಿಸಲಾಗಿದ್ದು, ಪ್ರಶ್ನೆಪತ್ರಿಕೆ ಸಿದ್ಧತೆಯ ಅಂತಿಮ ಹಂತದಲ್ಲಿ ಹೊರಗಿನ ಪ್ರಪಂಚದೊಂದಿಗಿನ ಅವರ ಸಂಪರ್ಕವನ್ನು ಸಂಪೂರ್ಣವಾಗಿ ಕಡಿತಗೊಳಿಸಲಾಗಿದೆ. ಈ ಕಠಿಣ ಲಾಕ್‌ಡೌನ್ ಪ್ರಕ್ರಿಯೆಯು ಜೂನ್ 21ರಂದು ಪರೀಕ್ಷೆ ಮುಗಿಯುವವರೆಗೂ ಜಾರಿಯಲ್ಲಿರಲಿದೆ ಎಂದು ವರದಿಯಾಗಿದೆ. ಕಳೆದ ಮೇ ತಿಂಗಳಿನಲ್ಲಿ ನಡೆದಿದ್ದ ನೀಟ್ ಪರೀಕ್ಷೆಯ ಪೇಪರ್ ಲೀಕ್ ವಿವಾದದ ನಂತರ, ದೇಶದಾದ್ಯಂತ 22 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳಲ್ಲಿ ಆತಂಕ ಮೂಡಿತ್ತು.

ಈ ಹಿನ್ನೆಲೆಯಲ್ಲಿ ಇಡೀ ಪರೀಕ್ಷಾ ಭದ್ರತಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಪುನರ್ ರಚಿಸಲಾಗಿದೆ. ಪ್ರಶ್ನೆ ಪತ್ರಿಕೆ ಅಭಿವೃದ್ಧಿಯ ಅತ್ಯಂತ ಗೌಪ್ಯ ಹಂತಗಳಲ್ಲಿ ತೊಡಗಿಸಿಕೊಂಡಿರುವ ಪೇಪರ್ ಸೆಟ್ಟರ್‌ಗಳು, ಮಾಡರೇಟರ್‌ಗಳು ಮತ್ತು ಅನುವಾದಕರು ಸದ್ಯ ಕಠಿಣ ಕಣ್ಗಾವಲಿನಲ್ಲಿ ಸುರಕ್ಷಿತ ಕೇಂದ್ರವೊಂದರಲ್ಲಿ ತಂಗಿದ್ದಾರೆ ಎಂದು ಸಿದ್ಧತೆಗಳ ನಿಕಟ ಪರಿಚಯವಿರುವ ಅಧಿಕಾರಿಗಳು ತಿಳಿಸಿದ್ದಾರೆ. ಈ ಕೇಂದ್ರದಲ್ಲಿ ಮೊಬೈಲ್ ಫೋನ್, ಲ್ಯಾಪ್‌ಟಾಪ್‌ಗಳು ಮತ್ತು ವೈಯಕ್ತಿಕ ಸಂಪರ್ಕ ಸಾಧನಗಳ ಬಳಕೆಯನ್ನು ನಿರ್ಬಂಧಿಸಲಾಗಿದೆ. ಇಂಟರ್ನೆಟ್ ಪ್ರವೇಶ ಮತ್ತು ಹೊರಗಿನವರ ಸಂಪರ್ಕವನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲಾಗಿದೆ. ಸ್ಮಾರ್ಟ್‌ವಾಚ್ ಸೇರಿದಂತೆ ಯಾವುದೇ ಡಿಜಿಟಲ್ ಸಾಧನಗಳನ್ನು ಒಳಗೆ ಬಿಟ್ಟುಕೊಳ್ಳುತ್ತಿಲ್ಲ. ಕೇವಲ ಅಧಿಕೃತ ಸಿಬ್ಬಂದಿಗೆ ಮಾತ್ರ ಪ್ರವೇಶವಿದ್ದು, ಪ್ರತಿಯೊಬ್ಬರ ಬರುವಿಕೆ ಮತ್ತು ಹೋಗುವಿಕೆಯನ್ನು ಸತತವಾಗಿ ದಾಖಲಿಸಲಾಗುತ್ತಿದೆ. ಕೇಂದ್ರ ಶಿಕ್ಷಣ ಸಚಿವಾಲಯ ಮತ್ತು ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ಜೂನ್ 21ರಂದು ನಡೆಸಲಿರುವ ಮರುಪರೀಕ್ಷೆಗಾಗಿ ಸಿದ್ಧಪಡಿಸಿರುವ ಬಹುಸ್ತರದ ಭದ್ರತಾ ಕೋಟೆಯ ಮೊದಲ ಹಂತವೇ ಈ ಲಾಕ್‌ಡೌನ್ ಆಗಿದೆ. ಈ ಮರುಪರೀಕ್ಷೆಯು ಭಾರತದ 551 ನಗರಗಳು ಹಾಗೂ ವಿದೇಶದ 14 ನಗರಗಳಲ್ಲಿ ಮಧ್ಯಾಹ್ನ 2 ಗಂಟೆಯಿಂದ ಸಂಜೆ 5.15 ರವರೆಗೆ ಪೆನ್ ಮತ್ತು ಪೇಪರ್ ಮಾದರಿಯಲ್ಲಿ ನಡೆಯಲಿದೆ.

# ಕೊನೆಗೂ ಜಲಸಂಪನ್ಮೂಲ ಇಲಾಖೆಗೆ ಬದ್ಧರಾದ ರಾಮಲಿಂಗಾರೆಡ್ಡಿ

**ಬೆಂಗಳೂರು, ಜೂ.8:** ಈ ಹಿಂದೆ ಮುನಿಸಿಕೊಂಡು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ರಾಮಲಿಂಗಾರೆಡ್ಡಿ ಅವರು ತಮ್ಮ ನಿಲುವನ್ನು ಬದಲಿಸಿದ್ದು, ತಮಗೆ ಹಂಚಿಕೆಯಾಗಿರುವ ಜಲಸಂಪನ್ಮೂಲ ಹಾಗೂ ಸಣ್ಣ ನೀರಾವರಿ ಇಲಾಖೆಯಲ್ಲೇ ಮುಂದುವರಿಯುವುದಾಗಿ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರು ಉಸ್ತುವಾರಿ ನನಗೆ ಬೇಡ, ಕೊಟ್ಟರೂ ಬೇಡ. ತಮಗೆ ಬೇರೆ ಯಾವುದೇ ಇಲಾಖೆಯ ಅಗತ್ಯವಿಲ್ಲ ಎಂದು ಖಡಾಖಂಡಿತವಾಗಿ ಹೇಳಿದ್ದಾರೆ. ವಿಧಾನಸೌಧದಲ್ಲಿ ಜಲಸಂಪನ್ಮೂಲ ಮತ್ತು ಸಣ್ಣ ನೀರಾವರಿ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ಮೊದಲ ಅಧಿಕೃತ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಖಾತೆ ಹಂಚಿಕೆ ಹಾಗೂ ಬೆಂಗಳೂರು ಉಸ್ತುವಾರಿಯ ಕುರಿತು ಕೇಳಲಾದ ಪ್ರಶ್ನೆಗಳಿಗೆ ಅತ್ಯಂತ ನೇರವಾಗಿಯೇ ಉತ್ತರಿಸಿದರು.

ನನಗೆ ಇನ್ನೊಂದು ಖಾತೆ ಬೇಡವೇ ಬೇಡ. ಖಾತೆಗಾಗಿ ಕಾಯುತ್ತಿರುವ ಇತರರಿಗೆ ಕೊಡಲಿ. ನಾನು ಯಾವತ್ತೂ ಬೆಂಗಳೂರು ಉಸ್ತುವಾರಿಗಾಗಿ ಬೇಡಿಕೆ ಇಟ್ಟಿಲ್ಲ. ಒಂದು ವೇಳೆ ಅವರಾಗಿಯೇ ಕೊಟ್ಟರೂ ತಿರಸ್ಕರಿಸುತ್ತೇನೆ, ನನಗೆ ಉಸ್ತುವಾರಿ ಹುದ್ದೆ ಬೇಡ ಎಂದು ಸ್ಪಷ್ಟಪಡಿಸಿದರು. ಈ ಇಲಾಖೆಯು ದೇಶದ ಬೆನ್ನೆಲುಬಾದ ರೈತರಿಗೆ ನೇರವಾಗಿ ಸಂಬಂಧಿಸಿದ್ದಾಗಿದೆ. ನಾನು ಈ ಹಿಂದೆಯೂ ಕೃಷಿ ಸಚಿವನಾಗಿ ಯಶಸ್ವಿಯಾಗಿ ಕೆಲಸ ಮಾಡಿದ ಅನುಭವ ಹೊಂದಿದ್ದೇನೆ. ಹೈಕಮಾಂಡ್ ಮುಂದೆ ಇಂತಹದೇ ಇಲಾಖೆ ಬೇಕು ಎಂದು ಯಾವತ್ತೂ ಕೇಳಿದವನಲ್ಲ. ಖಾತೆಗಳ ಬದಲಾವಣೆಗಾಗಿ ದೆಹಲಿಗೆ ಹೋದವನೂ ಅಲ್ಲ ಎಂದರು.

ಈ ಹಿಂದೆ ತಾವು ನಿಭಾಯಿಸಿದ ಸಾರಿಗೆ ಹಾಗೂ ಮುಜರಾಯಿ ಇಲಾಖೆಗಳ ದಿನಗಳನ್ನು ನೆನಪಿಸಿಕೊಂಡ ಸಚಿವರು, ತಮಗೆ ಯಾವುದೇ ಜವಾಬ್ದಾರಿ ಕೊಟ್ಟರೂ ಪ್ರಾಮಾಣಿಕವಾಗಿ ಕೆಲಸ ಮಾಡುವುದಾಗಿ ಹೇಳಿದರು. ನನಗೆ ಹಿಂದೆ ಸಾರಿಗೆ ಇಲಾಖೆಯ ಜವಾಬ್ದಾರಿ ನೀಡಿದಾಗ ಸಂಸ್ಥೆಯು ತೀವ್ರ ಸಾಲದ ಸುಳಿಯಲ್ಲಿ ಸಿಲುಕಿತ್ತು. ಆದರೆ, ನನ್ನ ಅವಧಿಯಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಸಂಘಟಿತ ಶ್ರಮದಿಂದಾಗಿ ಸಾರಿಗೆ ಸಂಸ್ಥೆಗೆ ಬರೋಬ್ಬರಿ 425 ಕ್ಕಿಂತಲೂ ಹೆಚ್ಚು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಪ್ರಶಸ್ತಿಗಳು ಒಲಿದು ಬಂದವು.



ನಾನು ಈವರೆಗೆ ಕೆಲಸ ಮಾಡಿದ ಎಲ್ಲಾ ಇಲಾಖೆಗಳಲ್ಲೂ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದೇನೆ. ಯಾವುದೇ ಇಲಾಖೆಯಲ್ಲೂ ಕೆಟ್ಟ ಹೆಸರು ತಂದ ಉದಾಹರಣೆ ಇಲ್ಲ ಎಂದು ರಾಮಲಿಂಗಾರೆಡ್ಡಿ ಹೆಮ್ಮೆಯಿಂದ ನುಡಿದರು.

### ಭದ್ರಾ ನೀರು ಬಿಡುಗಡೆಗೆ ಸಜ್ಜು

ವಿಧಾನಸೌಧದ ಕಚೇರಿಯಲ್ಲಿ ಜಲಸಂಪನ್ಮೂಲ ಮತ್ತು ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳೊಂದಿಗೆ ಸುದೀರ್ಘ ಪರಿಶೀಲನಾ ಸಭೆ ನಡೆಸಿದರು. ಇಲಾಖೆಯ ಇಲಾಖಾ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ರಾಜ್ಯದ ನಾಲ್ಕು ಪ್ರಮುಖ ನೀರಾವರಿ ನಿಗಮಗಳ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಸಭೆ ನಡೆಸಿದ ಸಚಿವರು, ಪ್ರಸ್ತುತ ಚಾಲ್ತಿಯಲ್ಲಿರುವ ನೀರಾವರಿ ಯೋಜನೆಗಳು ಹಾಗೂ ವಿವಿಧ ಕಾಮಗಾರಿಗಳ ಪ್ರಗತಿಯ ವಿವರವಾದ ಮಾಹಿತಿಯನ್ನು ಪಡೆದುಕೊಂಡರು.

### ಸಭೆಯ ನಿರ್ಧಾರಗಳು

ಕೃಷ್ಣಾ ಜಲಭಾಗ್ಯ, ಕರ್ನಾಟಕ ನೀರಾವರಿ ನಿಗಮ, ವಿಶ್ವೇಶ್ವರಯ್ಯ ಜಲಶಕ್ತಿ ಹಾಗೂ ಕಾವೇರಿ ನೀರಾವರಿ ನಿಗಮಗಳ ಪ್ರಗತಿ ಪರಿಶೀಲನೆಗಾಗಿ ಈ ವಾರದ ಶುಕ್ರವಾರ ಹಾಗೂ ಮುಂದಿನ ವಾರ ಎರಡು ಹಂತಗಳಲ್ಲಿ ಪ್ರತ್ಯೇಕ ನಿಗಮವಾರು ಸಭೆಗಳನ್ನು ಕರೆಯಲಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ತಲೆದೋರುತ್ತಿರುವ ಕುಡಿಯುವ ನೀರಿನ ಅಭಾವವನ್ನು ಕಾಯಂ ಆಗಿ ತಗ್ಗಿಸುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ಗಂಭೀರ ಚರ್ಚೆ ನಡೆಸಲಾಗಿದ್ದು, ಸೂಕ್ತ ನೀಲನಕ್ಷೆ ಸಿದ್ಧಪಡಿಸಲಾಗುತ್ತಿದೆ. ರಾಜ್ಯದ ಬಹುನಿರೀಕ್ಷಿತ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳು ಕೊನೆಯ ಹಂತದಲ್ಲಿದ್ದು, ಮುಂದಿನ ಎರಡು ತಿಂಗಳ ಒಳಗಾಗಿ ರೈತರ ಜಮೀನುಗಳಿಗೆ ನೀರು ಹರಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

### ರಾಮಲಿಂಗಾರೆಡಿ ಶೀಘ್ರ ದೆಹಲಿಗೆ

ಇಲಾಖೆಯ ಪ್ರಮುಖ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದ ಸಹಕಾರ ಅಗತ್ಯವಾಗಿರುವುದರಿಂದ, ಮುಂದಿನ ವಾರ ದೆಹಲಿಗೆ ಪ್ರವಾಸ ಕೈಗೊಳ್ಳುತ್ತಿರುವುದಾಗಿ ಸಚಿವರು ಪ್ರಕಟಿಸಿದರು. ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿಯಾಗಿ ರಾಜ್ಯದ ಯೋಜನೆಗಳಿಗೆ ಅನುಮೋದನೆ ಹಾಗೂ ಅನುದಾನ ಕೋರಲಿದ್ದೇನೆ. ಇದೇ ವೇಳೆ ಕರ್ನಾಟಕ ಪ್ರತಿನಿಧಿಸುವ ಕೇಂದ್ರ ಸಚಿವರು ಹಾಗೂ ಸಂಸದರನ್ನು ಭೇಟಿಯಾಗಿ, ರಾಜ್ಯದ ನೀರಾವರಿ ಹಿತರಕ್ಷಣೆಗಾಗಿ ಪಕ್ಷಾತೀತವಾಗಿ ಒಟ್ಟಾಗಿ ಧ್ವನಿ ಎತ್ತುವಂತೆ ಮನವಿ ಮಾಡುವುದಾಗಿ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

# ಬಿಡಿಎ ತನ್ನ ಲೋಪಕ್ಕೆ ನೆಪ ಹುಡುಕುವ ಬದಲು ಹಂಚಿಕೆದಾರರ ಜವಾಬ್ದಾರಿ ಪೂರೈಸಿ: ಶಾಸಕ ಸುರೇಶ್ ಕುಮಾರ್ ಸಲಹೆ

**ಬೆಂಗಳೂರು, ಜೂ.8:** ಬೆಂಗಳೂರಿನಲ್ಲಿ ಹೊಸ ಬಡಾವಣೆಗಳನ್ನು ನಿರ್ಮಿಸಿ, ಬೆಂಗಳೂರು ನಗರವನ್ನು ವಿಸ್ತರಿಸುವ ಯೋಜನೆ ಹೊಂದಿರುವ ಬಿಡಿಎ, ಬಿಎಸ್‌ಕೆ 6ನೇ ಹಂತ, ಅರ್ಕಾವತಿ ಮತ್ತು ನಾಡಪ್ರಭು ಕೆಂಪೇಗೌಡ ಬಡಾವಣೆ ಅಭಿವೃದ್ಧಿ ಯೋಜನೆಗಳಲ್ಲಿ ದಯನೀಯವಾಗಿ ವಿಫಲವಾಗಿ, ಕೆಟ್ಟ ಹೆಸರು ಸಂಪಾದಿಸಿದೆ ಎಂದು ಶಾಸಕ ಸುರೇಶ್ ಕುಮಾರ್ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಫೇಸ್‌ಬುಕ್‌ನಲ್ಲಿ ಪತ್ರ ಬರೆದಿದ್ದು, ಕರ್ನಾಟಕ ಹೈಕೋರ್ಟ್ ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಕಾಯ್ದೆ, 2016 (ರೇರಾ) ವನ್ನು ಬಿಡಿಎ ವಸತಿ ಲೇಔಟ್ ಗಳಿಗೆ ಅದರಲ್ಲೂ ವಿಶೇಷವಾಗಿ ಎನ್.ಪಿಕೆಎಲ್‌ಗೆ ಅನ್ವಯಿಸದಂತೆ ತಡೆಯಾಜ್ಞೆ ನೀಡಿದೆ ಎಂದು ಪತ್ರಿಕೆಗಳಲ್ಲಿ ಓದಿದ್ದೇನೆ. ಈ ಸುದ್ದಿ ಓದಿದಾಗ ಆಘಾತ ಎನಿಸಿತು. ತಾಂತ್ರಿಕ ಅಂಶಗಳಿಗಿಂತ ಹೆಚ್ಚಾಗಿ ಪ್ರತಿ ಬಾಧ್ಯಸ್ಥರೂ ಗ್ರಾಹಕರನ್ನು ರಕ್ಷಿಸಬೇಕು ಎಂಬ ಮನೋಭಾವದಿಂದ ರೇರಾ ಕಾಯ್ದೆಯನ್ನು ತರಲಾಗಿದ್ದು, ಇದೇ ದೃಷ್ಟಿಕೋನದಲ್ಲಿಯೇ ಉಚ್ಚ ನ್ಯಾಯಾಲಯ ನೋಡಬೇಕಾಗಿತ್ತು ಎಂದಿದ್ದಾರೆ.

ರೇರಾ ವ್ಯಾಪ್ತಿಯಿಂದ ತನಗೆ ವಿನಾಯಿತಿ ನೀಡುವಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕೇಳಿಕೊಂಡಿದೆ. ಇದು ನಿಜಕ್ಕೂ ಆಘಾತಕಾರಿ ವಿಚಾರ. ಬಿಡಿಎ ಒಂದು ಸರ್ಕಾರಿ ಸಂಸ್ಥೆಯಾಗಿದ್ದು, ಖಾಸಗಿ ಡೆವಲಪರ್‌ಗಳಂತೆ ಸ್ವತಃ ನಾಗರಿಕ ವಿರೋಧಿ ಮತ್ತು ಗ್ರಾಹಕ ವಿರೋಧಿ ಎಂದು ಪರಿಗಣಿಸುವುದು ಸೂಕ್ತವಲ್ಲ ಎಂದು ಕೇಳಿಕೊಂಡಿದೆ. ಬಿಡಿಎ ತನ್ನ



ಕಾರ್ಯಕ್ಷಮತೆಯ ಲೋಪಕ್ಕೆ ನೆಪ ಹುಡುಕುವ ಬದಲು ಹಂಚಿಕೆದಾರರ ಜವಾಬ್ದಾರಿಗಳನ್ನು ಪೂರೈಸಬೇಕು ಎಂದು ತಿಳಿಸಿದ್ದಾರೆ.

ಬೆಂಗಳೂರು ನಗರಕ್ಕೆ ನಿಯಂತ್ರಕ ಮತ್ತು ಮೂಲಸೌಕರ್ಯ ಅಭಿವೃದ್ಧಿದಾರ ಅಥವಾ ವಸತಿ ಬಡಾವಣೆಗಳ ಮತ್ತು ವಸತಿ ಸಮುಚ್ಚಯಗಳ ನಿರ್ಮಾಣದಾರ ತಾನು ಎಂಬುದನ್ನು ಬಿಡಿಎ ಮೊದಲು ತಿಳಿಯಬೇಕು ಮತ್ತು ಘೋಷಿಸಿಕೊಳ್ಳಬೇಕು.ಇದು ನಾಗರಿಕರು, ರಿಯಲ್ ಎಸ್ಟೇಟ್ ನಿಯಂತ್ರಕರು ಮತ್ತು ಕಾನೂನು ನಿರೂಪಕರು ಇಬ್ಬರಿಗೂ ಒಂದು ನಿರ್ದಿಷ್ಟ ಮಟ್ಟದ ಸ್ಪಷ್ಟತೆಯನ್ನು ನೀಡುತ್ತದೆ. ಬೆಂಗಳೂರಿನಲ್ಲಿ ಹೊಸ ಬಡಾವಣೆಗಳನ್ನು ನಿರ್ಮಿಸಿ, ಬೆಂಗಳೂರು ನಗರವನ್ನು ವಿಸ್ತರಿಸುವ ಯೋಜನೆ ಹೊಂದಿರುವ ಬಿಡಿಎ, ಬಿಎಸ್‌ಕೆ 6ನೇ ಹಂತ, ಅರ್ಕಾವತಿ ಮತ್ತು ನಾಡಪ್ರಭು ಕೆಂಪೇಗೌಡ ಬಡಾವಣೆ ಅಭಿವೃದ್ಧಿ ಯೋಜನೆಗಳಲ್ಲಿ ದಯನೀಯವಾಗಿ ವಿಫಲವಾಗಿ, ಕೆಟ್ಟ ಹೆಸರು ಸಂಪಾದಿಸಿದೆ ಎಂದು ಟೀಕಿಸಿದ್ದಾರೆ.

ಬಿಎಸ್‌ಕೆ 6ನೇ ಹಂತ ಮತ್ತು ಅರ್ಕಾವತಿ ಬಡಾವಣೆ 20 ವರ್ಷಕ್ಕಿಂತ ಹಳೆಯದಾಗಿದ್ದು, ಅಲ್ಲಿನ ನಿವೇಶನ ಹಂಚಿಕೆದಾರರು ಮತ್ತು ಭೂಮಾಲೀಕ ವಿವಾದ, ರಸ್ತೆಗಳ ಕೊರತೆ, ಒಳಚರಂಡಿ ಮತ್ತು ಕುಡಿಯುವ ನೀರು ಪೂರೈಕೆಯಲ್ಲಿ ಅಸಮರ್ಪಕತೆ ಸೇರಿದಂತೆ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಬಿಡಿಎ ಸಂಕುಚಿತ ದೃಷ್ಟಿಕೋನ ಬಿಟ್ಟು, ರಾಷ್ಟ್ರೀಯ ದೃಷ್ಟಿಕೋನದಲ್ಲಿ ತನ್ನನ್ನು ತಾನು ನೋಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಒಡೆತನದ ಬಿಎಸ್‌ಎನ್‌ಎಲ್ –ಟ್ರಾಯ್ ವ್ಯಾಪ್ತಿಗೆ ಒಳಪಡುತ್ತದೆ. ಅದೇ ರೀತಿ ಸಾರ್ವಜನಿಕ ವಲಯದ ವಿಮಾ ಕಂಪನಿಗಳು (ಯುನೈಟೆಡ್, ಓರಿಯಂಟಲ್, ಐಆರ್.ಡಿಎಐ, ನ್ಯೂ ಇಂಡಿಯಾ) ನಿಯಂತ್ರಕರಿಂದ ನಿಯಂತ್ರಿಸಲ್ಪಡುತ್ತವೆ. ಆದರೆ ಬಿಡಿಎ ತನ್ನ ಹೊಣೆಗಾರಿಕೆಯಿಂದ ನುಣುಚಿಕೊಳ್ಳಲು ಮತ್ತು ರೇರಾ ವ್ಯಾಪ್ತಿಯಿಂದ ಹೊರಗುಳಿಯಬೇಕು ಎಂದು ಕೇಳುವುದು ಸೂಕ್ತವಲ್ಲ. ಬಿಡಿಎಯಿಂದ ಭೂಮಿ ಅಥವಾ ಫ್ಲ್ಯಾಟ್ ಖರೀದಿಸುವ ನಾಗರಿಕರು ಗ್ರಾಹಕರೇ ಆಗಿದ್ದಾರೆ ಮತ್ತು ಬಿಡಿಎ ಖರೀದಿದಾರರನ್ನು ಅಥವಾ ಹಂಚಿಕೆದಾರರನ್ನು ಗ್ರಾಹಕರಂತೆಯೇ ಪರಿಗಣಿಸಬೇಕು. ಬಿಡಿಎ ಸರ್ಕಾರಿ ಸಂಸ್ಥೆಯಾಗಿದ್ದು, ತನ್ನ ಹಂಚಿಕೆದಾರರಿಗೆ ಅನಾನುಕೂಲವಾದರೂ ಅವರು ತನ್ನನ್ನು ಪ್ರಶ್ನಿಸಲು ಬರುವುದಿಲ್ಲ ಎಂದು ಹೇಳಲು ಸಾಧ್ಯವಿಲ್ಲ ಮತ್ತು ಆದ್ದರಿಂದ ಇದು ನೆಲದ ಕಾನೂನಿಗಿಂತ ಮೇಲಿದೆ ಎಂದು ಪರಿಭಾವಿಸಬೇಕಿಲ್ಲ ಎಂದಿದ್ದಾರೆ.

ಎನ್‌ಪಿಕೆಎಲ್ ಬಡಾವಣೆಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಿ ಎಂಟು–ಒಂಬತ್ತು ವರ್ಷಗಳೇ ಕಳೆದಿದ್ದರೂ, ಬಿಡಿಎ ಮೂಲಸೌಕರ್ಯವನ್ನು ಒದಗಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ರೇರಾ ಮತ್ತು ವಿಧಾನಸಭೆಯ ಅರ್ಜಿಗಳ ಸಮಿತಿಯು ಬಿಡಿಎಯನ್ನು ಹೊಣೆಗಾರಿಕೆಯನ್ನು ಅರ್ಥ ಮಾಡಿಸಿ, ಹಂಚಿಕೆದಾರರಿಗೆ ಆಶಾಕಿರಣವಾಗಿದೆ.ಬಿಡಿಎ ಲಾಭದಾಯಕ ಸಂಸ್ಥೆಯಲ್ಲ ಎಂಬುದನ್ನು ನಾನೂ ಒಪ್ಪುತ್ತೇನೆ. ಆದರೆ ಅದು ಮಾರಾಟ ಮಾಡುತ್ತಿರುವ ನಿವೇಶನ ಮತ್ತು ವಸತಿ ಸಮುಚ್ಚಯದ ಮನೆಗಳು ಖಾಸಗಿ ಡೆವಲಪರ್ ಗಳ ದರಕ್ಕೆ ಸಮಾನವಾಗಿದೆ ಅಥವಾ ಅದಕ್ಕಿಂತ ಹೆಚ್ಚಾಗಿಯೇ ಇದೆ. ಹೀಗಾಗಿ ಬಿಡಿಎ ಇನ್ನು ಮುಂದೆ ಅವುಗಳನ್ನು 'ಅಗ್ಗದ ವಸತಿ' ಎಂದು ಕರೆಯಲು ಸಾಧ್ಯವಿಲ್ಲ. ಬಿಡಿಎ ಬಡಾವಣೆಯ ಅಭಿವೃದ್ಧಿ ಕಾರ್ಯಗತಗೊಳಿಸುವ ವೇಗವು ಖಾಸಗಿ ವಲಯಕ್ಕಿಂತ ಕಡಿಮೆಯಾಗಿದೆ. ಬಿಡಿಎ ತಾಂತ್ರಿಕ ಅಂಶಗಳನ್ನು ಮುಂದಿಟ್ಟುಕೊಂಡು ತನ್ನ ಹೊಣೆಗಾರಿಕೆಯಿಂದ ನುಣುಚಿಕೊಳ್ಳುವ ಬದಲು ತನ್ನ ನಿವೇಶನ ಹಂಚಿಕೆದಾರರಿಗೆ ಸೂಕ್ತ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ರೇರಾ ಕಾಯಿದೆಯ ಮೂಲ ಉದ್ದೇಶ ಅರ್ಥೈಸಿಕೊಂಡು ಕಾರ್ಯನಿರ್ವಹಿಸುವುದು ಉತ್ತಮ. ಉಚ್ಚ ನ್ಯಾಯಾಲಯವೂ ಸಹ ಇಂತಹ ಪ್ರಕರಣಗಳಲ್ಲಿ ತಾಂತ್ರಿಕ ಅಂಶಗಳಿಗಿಂತ ವಾಸ್ತವ ಅಂಶಗಳಿಗೆ ಗಮನ ಕೊಡಬೇಕಿರುವುದು ಅಗತ್ಯವಿದೆ ಎಂದು ಅವರು ತಿಳಿಸಿದ್ದಾರೆ.



ಬೆಂಗಳೂರಿನ ವಿಧಾನಸೌಧದಲ್ಲಿ ಸೋಮವಾರ ಬಿಜೆಪಿ ನಾಯಕ ಬಿ.ಎಸ್.ಯಡಿಯೂರಪ್ಪ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರಾಜ್ಯಸಭಾ ಚುನಾವಣೆ ಅಭ್ಯರ್ಥಿ ಪ್ರೊ.ಎಂ.ನಾಗರಾಜ ಅವರೊಂದಿಗೆ ನಾಮಪತ್ರ ಸಲ್ಲಿಸಿದರು.

# ಪೋಕ್ಸೋ ಪ್ರಕರಣದಲ್ಲಿ ಮಾಜಿ ಸಿಎಂ ಬಿಎಸ್‌ವೈಗೆ ಬಿಗ್ ರಿಲೀಫ್

**ಬೆಂಗಳೂರು, ಜೂ.8:** ಮಾಜಿ ಸಿಎಂ ಹಾಗೂ ಬಿಜೆಪಿ ಕೇಂದ್ರ ಚುನಾವಣಾ ಸಮಿತಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಅವರಿಗೆ ಕರ್ನಾಟಕ ಹೈಕೋರ್ಟ್‌ನಿಂದ ದೊಡ್ಡಮಟ್ಟದ ಕಾನೂನು ಪರಿಹಾರ ಸಿಕ್ಕಿದೆ. ತಮ್ಮ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಿಸಲಾಗಿದ್ದ ಪ್ರಮುಖ ಜಾಮೀನು ಷರತ್ತನ್ನು ಸಡಿಲಗೊಳಿಸುವಂತೆ ಕೋರಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿರುವ ನ್ಯಾಯಾಲಯ, ಬಿಎಸ್‌ವೈ ಪರವಾಗಿ ಮಹತ್ವದ ಆದೇಶ ಹೊರಡಿಸಿದೆ.

ಕೆಲವು ತಿಂಗಳುಗಳ ಹಿಂದೆ ಈ ಪ್ರಕರಣದಲ್ಲಿ ಬಿ.ಎಸ್. ಯಡಿಯೂರಪ್ಪ ಅವರಿಗೆ ನ್ಯಾಯಾಲಯವು ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಆ ವೇಳೆ ವಿಧಿಸಲಾಗಿದ್ದ ಕಠಿಣ ಷರತ್ತುಗಳಲ್ಲಿ, "ನ್ಯಾಯಾಲಯದ ಅಥವಾ ತನಿಖಾ ಸಂಸ್ಥೆಯ ಪೂರ್ವ ಅನುಮತಿ ಇಲ್ಲದೆ ನಿಗದಿತ ವ್ಯಾಪ್ತಿಯನ್ನು (ಬೆಂಗಳೂರು ಅಥವಾ ರಾಜ್ಯ) ಬಿಟ್ಟು ಹೊರಗೆ ತೆರಳಬಾರದು" ಎಂಬ ನಿಯಮವೂ ಸೇರಿತ್ತು. ಹಿರಿಯ ರಾಜಕಾರಣಿಯಾಗಿ ದೇಶಾದ್ಯಂತ ಸಕ್ರಿಯವಾಗಿರಬೇಕಾದ ಯಡಿಯೂರಪ್ಪ ಅವರಿಗೆ ಈ ನಿಯಮವು ರಾಜಕೀಯ ಮತ್ತು ವೈಯಕ್ತಿಕ ಪ್ರವಾಸಗಳಿಗೆ ದೊಡ್ಡ ತಡೆಯೊಡ್ಡಿತ್ತು. ಸುಪ್ರೀಂ ಕೋರ್ಟ್ ತಡೆಯಾಜ್ಞೆ ಆಧರಿಸಿ ವಾದ ಮಂಡನೆ ಹೈಕೋರ್ಟ್‌ನಲ್ಲಿ ನಡೆದ ಈ ಅರ್ಜಿಯ ವಿಚಾರಣೆ ವೇಳೆ ಬಿ.ಎಸ್. ಯಡಿಯೂರಪ್ಪ ಅವರ ಪರ ವಕೀಲರು ನ್ಯಾಯಪೀಠದ ಮುಂದೆ ಬಲವಾದ ವಾದ ಮಂಡಿಸಿದರು. "ಈಗಾಗಲೇ ಈ ಪೋಕ್ಸೋ ಪ್ರಕರಣದ ವಿಚಾರಣೆಗೆ ದೇಶದ ಅತ್ಯುನ್ನತ ನ್ಯಾಯಾಲಯವಾದ ಸುಪ್ರೀಂಕೋರ್ಟ್ ಸಂಪೂರ್ಣ ತಡೆಯಾಜ್ಞೆ ನೀಡಿದೆ. ಸುಪ್ರೀಂ ಕೋರ್ಟ್‌ನಲ್ಲೇ ಪ್ರಕರಣದ ಮುಂದಿನ ಪ್ರಕ್ರಿಯೆಗಳು ಸ್ಥಗಿತಗೊಂಡಿರುವುದರಿಂದ, ಹೈಕೋರ್ಟ್‌ನಲ್ಲಿ ಹಿಂದೆ ವಿಧಿಸಲಾಗಿದ್ದ ಕಠಿಣ ಷರತ್ತುಗಳನ್ನು ಹಾಗೇ ಮುಂದುವರಿಸುವ ಅಗತ್ಯವಿಲ್ಲ" ಎಂದು ನ್ಯಾಯಾಧೀಶರಿಗೆ ಮನವರಿಕೆ ಮಾಡಿಕೊಟ್ಟರು. ಯಡಿಯೂರಪ್ಪ ಅವರ ಪರ ವಕೀಲರ ವಾದವನ್ನು ಆಲಿಸಿದ ಹೈಕೋರ್ಟ್ ಏಕಸದಸ್ಯ ಪೀಠವು, ಸುಪ್ರೀಂಕೋರ್ಟ್‌ನ ತಡೆಯಾಜ್ಞೆ ಆದೇಶವನ್ನು ಗಣನೆಗೆ ತೆಗೆದುಕೊಂಡಿತು. ಪ್ರಕರಣದ ವಿಚಾರಣೆಗಳು ಸದ್ಯಕ್ಕೆ ಸ್ಥಗಿತಗೊಂಡಿರುವುದರಿಂದ ಆರೋಪಿಗೆ ಓಡಾಟದ ಸ್ವಾತಂತ್ರ್ಯ ನೀಡಬಹುದು ಎಂದು ಅಭಿಪ್ರಾಯಪಟ್ಟ ನ್ಯಾಯಾಲಯ, "ಅನುಮತಿ ಇಲ್ಲದೆ ವ್ಯಾಪ್ತಿ ಬಿಟ್ಟು ಹೊರಗೆ ತೆರಳಬಾರದು" ಎಂಬ ಜಾಮೀನು ಷರತ್ತನ್ನು ಸಡಿಲಗೊಳಿಸಿ ಅಧಿಕೃತ ಆದೇಶ ಹೊರಡಿಸಿತು.

ಹೈಕೋರ್ಟ್‌ನ ಈ ನಿರ್ಧಾರದಿಂದಾಗಿ ಬಿ. ಎಸ್. ಯಡಿಯೂರಪ್ಪ ಅವರಿಗೆ ಕಾನೂನು ಹೋರಾಟದಲ್ಲಿ ದೊಡ್ಡ ರಿಲೀಫ್ ಸಿಕ್ಕಂತಾಗಿದೆ. ತನಿಖೆಗೆ ಸದಾ ಸಹಕರಿಸುವ ಭರವಸೆಯೊಂದಿಗೆ ಈ ಸಡಿಲಿಕೆ ಸಿಕ್ಕಿರುವುದರಿಂದ, ಈಗ ಅವರು ಯಾವುದೇ ಕಾನೂನಾತ್ಮಕ ಅಡೆತಡೆ ಅಥವಾ ಮುಂಚಿತ ಅನುಮತಿಯ ಕಿರಿಕಿರಿ ಇಲ್ಲದೆ ಮುಕ್ತವಾಗಿ ದೇಶಾದ್ಯಂತ ಪ್ರವಾಸ ಕೈಗೊಳ್ಳಬಹುದು. ಜೊತೆಗೆ ಮುಂಬರುವ ರಾಜಕೀಯ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಲು ಅವರಿಗೆ ಹಾದಿ ಸುಗಮವಾಗಿದ್ದು, ಈ ಆದೇಶ ಬಿಎಸ್‌ವೈ ಮತ್ತು ಅವರ ಬೆಂಬಲಿಗರಲ್ಲಿ ನಿರಾಳತೆ ತಂದಿದೆ.

# ಮುಂಗಾರು ಅಬ್ಬರ: ಕರಾವಳಿ, ಮಲೆನಾಡು ಸೇರಿ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆ ಎಚ್ಚರಿಕೆ

**ಬೆಂಗಳೂರು, ಜೂ.8:** ರಾಜ್ಯದಲ್ಲಿ ಮುಂಗಾರು ಮಳೆ ಅಬ್ಬರ ಜೋರಾಗಿದ್ದು, ಕರಾವಳಿ ಮತ್ತು ಮಲೆನಾಡು ಸೇರಿ ರಾಜ್ಯದ ಹಲವು ಜಿಲ್ಲೆಗಳಲ್ಲಿ 1 ವಾರ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೆಲವು ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಹಾಗೂ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಬೆಂಗಳೂರು, ಕೊಡಗು, ಧಾರವಾಡ, ಹಾವೇರಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಸಾಧಾರಣದಿಂದ ಗುಡುಗು ಸಹಿತ ಮಳೆಯಾಗುವ ಎಚ್ಚರಿಕೆಯನ್ನು ನೀಡಲಾಗಿದೆ.

ಕರಾವಳಿ ತೀರದಲ್ಲಿ ಬಿರುಗಾಳಿ ಜೋರಾಗಿರುವ ಕಾರಣ ಮೀನುಗಾರರಿಗೆ ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಹಾಗೂ ರೈತರು ಎಚ್ಚರಿಕೆಯಿಂದ ಇರುವಂತೆ ಸೂಚನೆ ನೀಡಲಾಗಿದೆ. ಶಿವಮೊಗ್ಗ ಭಾರತೀಯ ಹವಾಮಾನ ಇಲಾಖೆಯು ಕರ್ನಾಟಕದ ಕರಾವಳಿ ಮತ್ತು ಮಲೆನಾಡಿನ ಶಿವಮೊಗ್ಗ ಜಿಲ್ಲೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯ ಎಚ್ಚರಿಕೆ ಘೋಷಿಸಿದೆ.

ಈಗಾಗಲೇ ರಾಜ್ಯಕ್ಕೆ ಮುಂಗಾರು ಪ್ರವೇಶಿಸಿದ್ದು, ನಾಳೆಯಿಂದ ಎರಡು ದಿನಗಳ ಕಾಲ ಶಿವಮೊಗ್ಗ ಜಿಲ್ಲೆಯಲ್ಲಿ ಸಾಮಾನ್ಯದಿಂದ ಭಾರೀ ಪ್ರಮಾಣದ ಮಳೆ ಬೀಳುವ ಸಾಧ್ಯತೆಯಿದ್ದು, ಜಿಲ್ಲೆಯ ಜನರು ಸಾಂದರ್ಭಿಕವಾಗಿ ತಕ್ಷಣ ಕ್ರಮ ಕೈಗೊಳ್ಳಬೇಕಾದ ತುರ್ತು ಪರಿಸ್ಥಿತಿಯಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸದಾ ಸಿದ್ಧರಿರುವಂತೆ ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ಮನವಿ ಮಾಡಿದ್ದಾರೆ.

ಸೋಮವಾರ ತಮ್ಮ ಕಚೇರಿಯಲ್ಲಿ ಇಲಾಖಾ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇಂತಹ ತುರ್ತು ಸಂದರ್ಭದಲ್ಲಿ ಕಂದಾಯ, ಅರಣ್ಯ, ಅಗ್ನಿಶಾಮಕ, ಪಂಚಾಯತ್‌ರಾಜ್, ಲೋಕೋಪಯೋಗಿ, ಸ್ಥಳೀಯ ಸಂಸ್ಥೆಗಳು ಸೇರಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು, ರಜೆಯ ಮೇಲೆ ತೆರಳದಂತೆ ಹಾಗೂ ತಮ್ಮ ಕಾರ್ಯಕ್ಷೇತ್ರದಲ್ಲಿದ್ದು, ಸಕಾಲದಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ತುರ್ತು ಸಂದರ್ಭದಲ್ಲಿ ಪ್ರಾಣ ಮತ್ತು ಆಸ್ತಿಪಾಸ್ತಿ ರಕ್ಷಣೆಗೆ ಅಗತ್ಯವಿರುವ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದರ ಜೊತೆಗೆ ಟಾರ್ಚ್‌ಗಳು, ಬ್ಯಾಟರಿಗಳು, ಮೊಬೈಲ್ ಪವರ್ ಬ್ಯಾಂಕ್‌ಗಳು ಮತ್ತು ಹೆಚ್ಚುವರಿ ಬ್ಯಾಟರಿಗಳನ್ನು ಸಿದ್ಧವಾಗಿಟ್ಟುಕೊಳ್ಳುವುದರ ಜೊತೆಗೆ ತುರ್ತು ಬಳಕೆಗೆ ಅಗತ್ಯವಿರುವ ಕುಡಿಯುವ



ನೀರು, ಒಣ ಆಹಾರ, ಪ್ರಥಮ ಚಿಕಿತ್ಸಾ ಪೆಟ್ಟಿಗೆ ಮತ್ತು ವೈದ್ಯಕೀಯ ಚೀಟಿಗಳನ್ನು ಜೊತೆಯಲ್ಲಿಟ್ಟುಕೊಳ್ಳುವಂತೆ ಅವರು ಸಲಹೆ ನೀಡಿದ್ದಾರೆ.ಹವಾಮಾನ ಇಲಾಖೆ ಸೂಚನೆಗಳನ್ನು ನಿರಂತರವಾಗಿ ಗಮನಿಸುತ್ತಿರಬೇಕು. ಮನೆ ಅಥವಾ ಕಟ್ಟಡದ ಸೋರಿಕೆಯನ್ನು ತಡೆಗಟ್ಟಿ, ವಿದ್ಯುತ್ ವೈರಿಂಗ್ ಅನ್ನು ಸುರಕ್ಷಿತವಾಗಿರಿಸಿಕೊಳ್ಳಬೇಕು. ಬಲವಾದ ಗಾಳಿ ಮತ್ತು ಗುಡುಗು–ಸಿಡಿಲು ಇರುವಾಗ ಮನೆಯಲ್ಲೇ ಇರಿ, ಮರಗಳು ಅಥವಾ ವಿದ್ಯುತ್ ಕಂಬಗಳ ಕೆಳಗೆ ಹೋಗದಂತೆ ಸೂಚನೆ ನೀಡಿರುವ ಅವರು ತಗ್ಗು ಪ್ರದೇಶದಲ್ಲಿರುವವರು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ಹಾಗೂ ಪ್ರವಾಹ ಪೀಡಿತ ರಸ್ತೆಗಳು, ಜಲಾವೃತವಾದ ಸೇತುವೆಗಳು ಮತ್ತು ಮಲೆನಾಡಿನ ಕಣಿವೆ ಪ್ರದೇಶಗಳಲ್ಲಿ ವಾಹನಗಳನ್ನು ಚಲಾಯಿಸುವುದು ಬೇಡ ಎಂದವರು ಎಚ್ಚರಿಕೆ ನೀಡಿದ್ದಾರೆ.ಈ ಅವಧಿಯಲ್ಲಿ ನಗರದಲ್ಲಿ ನಾಗರೀಕರಿಗೆ ಶುದ್ಧ ಕುಡಿಯುವ ನೀರು ಪೂರೈಸಲು, ಚರಂಡಿ ಮತ್ತು ರಾಜಾ ಕಾಲುವೆಗಳಲ್ಲಿ ನೀರು ನಿಲ್ಲದಂತೆ ಪಾಲಿಕೆ ಅಧಿಕಾರಿಗಳು ಗಮನಹರಿಸಬೇಕು. ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದು, ಅಗತ್ಯ ಆರೋಗ್ಯ ನೀಡಬೇಕು. ಅಗತ್ಯವಾಗಿರುವ ಔಷಧಗಳನ್ನು ದಾಸ್ತಾನು ಮಾಡಿಟ್ಟುಕೊಳ್ಳಬೇಕು ಎಂದು ಸೂಚಿಸಿದ ಅವರು, ಈ ಸಂದರ್ಭದಲ್ಲಿ ಹಾವುಗಳ ಕಡಿತಕ್ಕೆ ಸೂಕ್ತ ಚಿಕಿತ್ಸೆ ನೀಡಲು ಸಿದ್ಧರಾಗಿರುವಂತೆ ಅವರು ಸೂಚಿಸಿದರು.


ಕಂದಾಯ ಇಲಾಖೆಯ ಅಧಿಕಾರಿಗಳು ಅಗತ್ಯವಿದ್ದಲ್ಲಿ ನಿರಾಶ್ರಿತರ ವಸತಿಗೆ ಸೂಕ್ತವಾದ ಸ್ಥಳಗಳನ್ನು ಗುರುತಿಸಿಕೊಂಡಿರಬೇಕು. ಅರಣ್ಯ ಇಲಾಖೆಯ ಅಧಿಕಾರಿಗಳು ದುರ್ಬಲ ಮತ್ತು ಒಣಗಿದ ಮರಗಳನ್ನು ತೆರವುಗೊಳಿಸಲು, ರೆಂಬೆ–ಕೊಂಬೆಗಳನ್ನು ಕತ್ತರಿಸಲು ಕ್ರಮ ಕೈಗೊಳ್ಳಬೇಕು. ಅಗ್ನಿಶಾಮಕದಳ, ಗ್ರಾಮ ಪಂಚಾಯಿತಿ, ಮೆಸ್ಕಾಂ ಸಿಬ್ಬಂಧಿಗಳು ಸನ್ನದ್ಧ ಸ್ಥಿತಿಯಲ್ಲಿರಬೇಕು. ಅತೀವ ಮಳೆಯಿಂದ ಜನ–ಜಾನುವಾರುಗಳ ಸಾವು–ನೋವು, ಆಸ್ತಿ ಹಾನಿಯಾದಲ್ಲಿ, ಕೃಷಿ ಮತ್ತು ತೋಟಗಾರಿಕೆ ಬೆಳೆ ಹಾನಿಯಾದಲ್ಲಿ ತಕ್ಷಣದಲ್ಲಿ ಸರ್ವೇ ನಡೆಸಿ, ಸಕಾಲಿಕ ಪರಿಹಾರ ಕ್ರಮಗಳನ್ನು ಒದಗಿಸಲು ಸಿದ್ಧರಿರುವಂತೆ ಅವರು ಸೂಚಿಸಿದರು.

# ಅನಿವಾಸಿ ಕನ್ನಡಿಗರಿಗೆ ಪ್ರತ್ಯೇಕ ಸಚಿವಾಲಯ: ಸಿಎಂಗೆ ಅಭಿನಂದನೆ

**ಬೆಂಗಳೂರು, ಜೂ.8:** ಅನಿವಾಸಿ ಕನ್ನಡಿಗರಿಗಾಗಿ ಪ್ರತ್ಯೇಕ ಸೆಕ್ರೆಟರಿಯೇಟ್ ಸ್ಥಾಪಿಸುವ ಘೋಷಣೆ ಮಾಡಿರುವ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಎಲ್ಲ ಅನಿವಾಸಿಗಳ ಪರವಾಗಿ ಹಾರ್ದಿಕ ಅಭಿನಂದನೆ ಸಲ್ಲಿಸುತ್ತೇನೆ. ಆದರೆ ಅನಿವಾಸಿಗಳು ಸರಕಾರವನ್ನು ಹಲವು ವರ್ಷಗಳಿಂದ ಆಗ್ರಹಿಸುತ್ತಿರುವುದು ಅವರಿಗಾಗಿ ಪ್ರತ್ಯೇಕ ಖಾತೆ, ಪ್ರತ್ಯೇಕ ಸಚಿವರು ಹಾಗೂ ಸಾವಿರ ಕೋಟಿಯ ಆವರ್ತನ ನಿಧಿಗಳಿಗಾಗಿ.ಸ್ವತಃ ಕಾಂಗ್ರೆಸ್ ಕೂಡ 2023ರ ಚುನಾವಣಾ ಪ್ರಣಾಳಿಕೆಯಲ್ಲೇ ಅನಿವಾಸಿಗಳಿಗೆ ನೀಡಿರುವ ಚುನಾವಣಾ ಭರವಸೆ ಇದು. ಹಾಗಾಗಿ ಇನ್ನು ತಡ ಮಾಡದೇ ಆ ಎರಡೂ ಭರವಸೆಗಳನ್ನು ನೂತನ ಮುಖ್ಯಮಂತ್ರಿ ಈಡೇರಿಸಬೇಕು ಎಂದು ರಾಜ್ಯೋತ್ಸವ ಪುರಸ್ಕೃತ ಖ್ಯಾತ ಅನಿವಾಸಿ ಭಾರತೀಯ ಉದ್ಯಮಿ ಹಾಗೂ ಕರ್ನಾಟಕ ಅನಿವಾಸಿ ಭಾರತೀಯರ ವೇದಿಕೆ–ಸೌದಿ ಅರೇಬಿಯಾ ಇದರ ಅಧ್ಯಕ್ಷ ಝುಕರಿಯಾ ಜೋಕಟ್ಟೆ ಆಗ್ರಹಿಸಿದ್ದಾರೆ.ನೂತನ ಅನಿವಾಸಿ ಸೆಕ್ರೆಟರಿಯೇಟ್ ಸ್ಥಾಪನೆ ಘೋಷಣೆ ಮಾಡಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಾವು ಭೇಟಿಯಾಗಿ ಅಭಿನಂದನೆ ಸಲ್ಲಿಸುತ್ತೇವೆ. ಆದರೆ ಅದರ ಜೊತೆಗೇ ಪ್ರತ್ಯೇಕ ಸಚಿವರು ಇರುವ ಅನಿವಾಸಿ ಖಾತೆ ಹಾಗೂ ಸಾವಿರ ಕೋಟಿ ನಿಧಿಯನ್ನೂ ಕೂಡಲೇ ಸ್ಥಾಪಿಸಬೇಕು ಎಂದು. ಹೇಳಿದ್ದಾರೆ.

# ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ ಹೆಸರಿನ ಕೇರಳ–ಕರ್ನಾಟಕ ಸರಕಾರದ ಜಂಟಿ ಟ್ರಸ್ಟ್ ಸಮಿತಿ ಪುನರ್ ರಚಿಸಲು ಆಗ್ರಹ

**ಬೆಂಗಳೂರು, ಜೂ.8:** ರಾಷ್ಟ್ರ ಮರೆತಿರುವ ರಾಷ್ಟ್ರ ಕವಿಯ ಸ್ಮಾರಕ–ಎಲ್.ಜಿ ಜ್ಯೋತೀಶ್ವರ ಕನ್ನಡದ ಪ್ರಥಮ ರಾಷ್ಟ್ರಕವಿ ಎಂದೇ ಪ್ರಸಿದ್ಧರಾದ ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ ನೆಲೆಸಿದ ಹುಟ್ಟೂರು ಸದ್ಯ ಕೇರಳದಲ್ಲಿರುವ ಮಂಜೇಶ್ವರದ "ರಾಷ್ಟ್ರಕವಿ ನಿವಾಸ"ಕ್ಕೆ,ಅಂತರರಾಷ್ಟ್ರೀಯ ಬಹುಭಾಷಾ ವಿದ್ವಾಂಸ, ಸಾಂಸ್ಕೃತಿಕ ರಾಯಭಾರಿ, ಕೇಂದ್ರ,ರಾಜ್ಯ ಸರ್ಕಾರಕ್ಕೆ ಸಂಬಂಧ ಪಟ್ಟ ಕನ್ನಡ, ಹಿಂದಿ, ಇಂಗ್ಲಿಷ್, ಭಾಷೆಗಳಲ್ಲಿ ಐದು ಸಾವಿರಕ್ಕೂ ಹೆಚ್ಚು ಸಾಕ್ಷ್ಯ ಚಿತ್ರಗಳನ್ನು, ನುಡಿ ಚಿತ್ರಗಳನ್ನು, ಜಾಹೀರಾತುಗಳಿಗೆ ನಿರೂಪಣ ಸಾಹಿತ್ಯವನ್ನು ರಚಿಸಿರುವ ಎಲ್. ಜಿ.ಜ್ಯೋತೀಶ್ವರ ಬೆಂಗಳೂರು ಅವರು ಕಾಸರಗೋಡು, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯ ಸಾಹಿತ್ಯ, ಸಂಸ್ಕೃತಿ,ಐತಿಹಾಸಿಕ ಸ್ಮಾರಕಗಳ ಸಾಕ್ಷ್ಯ ಚಿತ್ರದ ಚಿತ್ರೀಕರಣದ ಪೂರ್ವ ಸಮೀಕ್ಷೆಯ ಸಂದರ್ಭದಲ್ಲಿ 2026 ಜೂನ್ 2ರಂದು ಮಂಜೇಶ್ವರಕ್ಕೆ ಆಗಮಿಸಿ, ರಾಷ್ಟ್ರ ಮರೆತಿರುವ ರಾಷ್ಟ್ರ ಕವಿಯ ಸ್ಮಾರಕ ಎಂದು ವಿಷಾದ ವ್ಯಕ್ತಪಡಿಸಿದರು. ಹಲವು ದಶಕಗಳ ಹಿಂದೆ ಕೇರಳ– ಕರ್ನಾಟಕ ಸರಕಾರಗಳ ಜಂಟಿ ಸಹಭಾಗಿತ್ವದಲ್ಲಿ ರಾಷ್ಟ್ರಕವಿಯ ಹೆಸರಿನಲ್ಲಿ ಟ್ರಸ್ಟ್,ಸಮಿತಿಯನ್ನು ರಚಿಸಿ ಕಾರ್ಯ ಪ್ರವೃತ್ತರಾದರೂ, ಇವುಗಳ ನಿರಾಸಕ್ತಿಯಿಂದ ರಾಷ್ಟ್ರಕವಿ ನಿವಾಸ,ಗ್ರಂಥ ಭಂಡಾರ, ಅತಿಥಿ ಗೃಹ, ಸಭಾಂಗಣದ ಕಾಮಗಾರಿಗಳು



ಪೂರ್ಣಗೊಳ್ಳದೇ,ಇರುವ ಇಬ್ಬರು ನೌಕರರಿಗೆ ಸಂಬಳ ಪಾವತಿಯಾಗದೇ ಶೋಚನೀಯ ಸ್ಥಿತಿಯಲ್ಲಿದೆ. ರಾಷ್ಟ್ರಕವಿ ಸ್ಮಾರಕದ ಸಮಗ್ರ ಅಭಿವೃದ್ಧಿಗಾಗಿ ಕೇರಳ, ಕರ್ನಾಟಕ ಸರಕಾರದ ನೂತನ ಮುಖ್ಯಮಂತ್ರಿಗಳು, ಸಚಿವರು ಹಾಗೂ ಕಾಸರಗೋಡು ದಕ್ಷಿಣ ಕನ್ನಡ ಜಿಲ್ಲೆಯ ಲೋಕಸಭಾ ಸದಸ್ಯರು, ಶಾಸಕರು ಮತ್ತು ಕಾಸರಗೋಡು ಜಿಲ್ಲಾ ಪಂಚಾಯತು, ಬ್ಲೋಕ್ ಪಂಚಾಯತು,ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತು ತಮ್ಮ ವಾರ್ಷಿಕ ಬಜೆಟ್ ನಲ್ಲಿ ವಿಶೇಷ ಅನುದಾನವನ್ನು ನೀಡಬೇಕೆಂದು ಕಾಸರಗೋಡು ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಶಿವರಾಮ ಕಾಸರಗೋಡು ಒತ್ತಾಯಿಸಿದ್ದಾರೆ.

ರಾಷ್ಟ್ರಕವಿ ಗೋವಿಂದ ಪೈ ಟ್ರಸ್ಟ್ ಸಮಿತಿಯನ್ನು ಪುನರ್ ಸಂಘಟಿಸಿ, ಕೇರಳ–ಕರ್ನಾಟಕ ಸರಕಾರದಿಂದ ನಾಮ ನಿರ್ದೇಶಿತ ನೂತನ ಸದಸ್ಯರನ್ನು ಸೇರ್ಪಡೆಗೊಳಿಸಬೇಕೆಂದು ಸಂಬಂಧಪಟ್ಟ ಕೇರಳ– ಕರ್ನಾಟಕ ಸರಕಾರದ ನೂತನ ಮುಖ್ಯಮಂತ್ರಿ,ಸಚಿವರಲ್ಲಿಗೆ ವಿವಿಧ ಸಂಘ ಸಂಸ್ಥೆಗಳ ಪ್ರಾತಿನಿಧಿಕವಾದ ನಿಯೋಗವನ್ನು ಕೊಂಡೊಯ್ಯುವ ಉದ್ದೇಶದಿಂದ ಸಮಾನ ಆಸಕ್ತರ ಸಮ್ಮುಖದಲ್ಲಿ ರೂಪುರೇಷೆ ತಯಾರಿಸಲು ಕಾಸರಗೋಡು, ಮಂಗಳೂರು,ಬೆಂಗಳೂರು, ತಿರುವನಂತಪುರದಲ್ಲಿ ದುಂಡು ಮೇಜಿನ ಪರಿಷತ್ತು ಸಭೆಯನ್ನು ಶೀಘ್ರದಲ್ಲಿ ಕರೆಯಲಾಗುವುದು. ಈ ಕುರಿತು ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಾ. ಎಂ.ವೀರಪ್ಪ ಮೊಯ್ಲಿ ಅವರನ್ನು ಅವರ ಬೆಂಗಳೂರಿನ ನಿವಾಸದಲ್ಲಿ ಭೇಟಿಯಾಗಿ ಚರ್ಚಿಸಲಾಗುವುದು.ಎಂದು ಎಲ್. ಜಿ. ಜ್ಯೋತೀಶ್ವರ ಬೆಂಗಳೂರು ಹಾಗೂ ಕಾಸರಗೋಡು ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಶಿವರಾಮ ಕಾಸರಗೋಡು ತಿಳಿಸಿದ್ದಾರೆ.

ಕನ್ನಡ ನಿಘಂಟಿನ ಪ್ರಥಮ ಸಂಪಾದಕ, ಬಹುಭಾಷಾ ಪಂಡಿತ ಎಲ್.ಗುಂಡಪ್ಪ ಅವರು (ಪುತ್ರ ಎಲ್. ಜಿ. ಜ್ಯೋತೀಶ್ವರ) ಕನ್ನಡ,ಸಂಸ್ಕೃತ, ಇಂಗ್ಲಿಷ್ ಮತ್ತು ತಮಿಳು ಪಂಡಿತರು, ಕನ್ನಡ–ಕನ್ನಡ ಮತ್ತು ಇಂಗ್ಲಿಷ್– ಕನ್ನಡ ನಿಘಂಟುಗಳ ಮೊದಲ ಸಂಪಾದಕರು,ಬಿ.ಎಂ.ಶ್ರೀ ಅವರ ನೇರ ಶಿಷ್ಯರು , ಗೋವಿಂದ ಪೈ ಅವರು ಸ್ವತಹ: ತಾವೇ ತಯಾರಿಸಿದ ನೇರಳೆ ಬಣ್ಣದ ಶಾಯಿಯಲ್ಲಿ ಪೋಸ್ಟ್ ಕಾರ್ಡ್ ನಲ್ಲಿ ಸಾಹಿತ್ಯ ಚರ್ಚೆ ಮಾಡುತ್ತಿದ್ದರು ಎಂದು ಗೋವಿಂದ ಪೈ ನಿವಾಸದ ಗಣ್ಯರ ದಾಖಲೆ ಪುಸ್ತಕದಲ್ಲಿ ತನ್ನ ತಂದೆ ಎಲ್.ಗುಂಡಪ್ಪ ಅವರ ಕುರಿತು ಪುತ್ರ ಎಲ್. ಜಿ ಜ್ಯೋತೀಶ್ವರ ಬರೆದಿದ್ದಾರೆ.

ಕನ್ನಡದ ಪುನಶ್ಚೇತನಕ್ಕಾಗಿ 1500 ನಾಲಿಗೆ ನುಲಿಗಳು, 10 ಪದ ಆಟಗಳು, ಕರ್ನಾಟಕದ ಬಗೆಗೆ 10000 ರಸಪ್ರಶ್ನೆ ರಚಿಸಿದ್ದಾರೆ. ಸಾಕ್ಷ್ಯ ಚಿತ್ರ ನಿರ್ಮಾಣ, ನಿರೂಪಣೆಯ ಪರಿಣಿತರಾಗಿದ್ದಾರೆ. ರಾಷ್ಟ್ರಕವಿ ನಿವಾಸ ಸಮುಚ್ಚಯದ ಕಾಯಕಲ್ಪಕ್ಕೆ ಸೇವೆ ಮಾಡುತ್ತೇನೆ. ಮಹಾಕವಿ ಚೇತನಕ್ಕೆ ಗೌರವ ನಮನ ಎಂದು ಹೇಳಿದ್ದಾರೆ.

# ಬಿತ್ತನೆಬೀಜ-ರಸಗೊಬ್ಬರ ಕೊರತೆ ಇಲ್ಲ

**ಜಿಲ್ಲೆಯಲ್ಲಿ 8.90 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ: ಡಿಸಿ ಇಕ್ರಮ್ ಶರೀಫ್**

**ಕಲಬುರಗಿ, ಜೂ. 8:** ಜಿಲ್ಲೆಯಲ್ಲಿ ಪ್ರಸಕ್ತ 2026-27ನೇ ಸಾಲಿನ ಮುಂಗಾರು ಹಂಗಾಮಿಗೆ ಪ್ರಮುಖ ವಾಣಿಜ್ಯ ಬೆಳೆ ತೊಗರಿ, ಹೆಸರು, ಉದ್ದು, ಹತ್ತಿ, ಸೋಯಾಬೀನ್ ಬೆಳೆ ಸೇರಿದಂತೆ ಒಟ್ಟು 8.90 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದ್ದು, ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಯಾವುದೇ ಕೊರತೆ ಇರುವದಿಲ್ಲ ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಪ್ರಮುಖ ವಾಣಿಜ್ಯ ಬೆಳೆ ತೊಗರಿ 6.3 ಲಕ್ಷ ಹೆಕ್ಟೇರ್, ಹೆಸರು 0.54 ಲಕ್ಷ ಹೆಕ್ಟೇರ್, ಉದ್ದು 0.25 ಲಕ್ಷ ಹೆಕ್ಟೇರ್, ಸೋಯಾಬೀನ್ 0.23 ಲಕ್ಷ ಹೆಕ್ಟೇರ್ ಹಾಗೂ ಹತ್ತಿ ಬೆಳೆಯನ್ನು 1.22 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ ಎಂದು ವಿವರಿಸಿದರು.

ಮುಂಗಾರು ಬಿತ್ತನೆಗೆ ಕೃಷಿ ಇಲಾಖೆಯಿಂದ ವ್ಯಾಪಕ ಸಿದ್ಧತೆ ಕೈಗೊಳ್ಳಲಾಗಿದ್ದು, ಮುಂಗಾರು ಹಂಗಾಮಿಗೆ ಜಿಲ್ಲೆಗೆ ಒಟ್ಟು 22,828.03 ಕ್ವಿಂಟಲ್ ಬಿತ್ತನೆ ಬೀಜಗಳನ್ನು ಹಂಚಿಕೆ ಮಾಡಲಾಗಿದೆ. ಇದರಲ್ಲಿ ತೊಗರಿ 6,011.17 ಕ್ವಿಂಟಲ್, ಹೆಸರು 535.93 ಕ್ವಿಂಟಲ್, ಉದ್ದು 379.40 ಕ್ವಿಂಟಲ್ ಹಾಗೂ ಸೋಯಾಬೀನ್ 15,681.64 ಕ್ವಿಂಟಲ್ ಸೇರಿದೆ. ಈಗಾಗಲೇ ಒಟ್ಟು 22,608.14 ಕ್ವಿಂಟಲ್ ಬೀಜಗಳ ಇಂಡೆಂಟ್ ನೀಡಲಾಗಿದ್ದು, ಜಿಲ್ಲೆಯ ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ (ಆರ್‌ಎಸ್‌ಕೆ) ಸಮರ್ಪಕವಾಗಿ ದಾಸ್ತಾನು ಮಾಡಲಾಗಿದ್ದು, ಯಾವುದೇ ರೀತಿಯ ಬಿತ್ತನೆ ಬೀಜದ ಕೊರತೆ ಇಲ್ಲ. ಹೀಗಾಗಿ ರೈತರು ಆತಂಕಪಡಬೇಕಾದ ಅಗತ್ಯವಿಲ್ಲ ಎಂದು ಇಕ್ರಮ್ ಶರೀಫ್ ಅವರು ಸ್ಪಷ್ಟಪಡಿಸಿದರು.

ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡಿದರೆ ಕ್ರಮ: ಜಿಲ್ಲೆಯಲ್ಲಿ ಯಾವುದೇ ಕೃಷಿ ಪರಿಕರ ಮಾರಾಟ ಅಂಗಡಿಯವರು ರಸಗೊಬ್ಬರವನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡಿದಲ್ಲಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿರುವ ಡಿ.ಸಿ ಅವರು, ಈಗಾಗಲೆ ಕಳೆದ ವಾರ ಜಂಟಿ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಅಧಿಕಾರಿಗಳ ತಂಡವು ಜಿಲ್ಲೆಯ ಜೇವರ್ಗಿ, ಯಡ್ರಾಮಿ, ಚಿತ್ತಾಪುರ, ಸೇಡಂ ತಾಲೂಕಿನಲ್ಲಿ ದಾಳಿ ಮಾಡಿ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡುತ್ತಿದ್ದ 26 ಅಂಗಡಿಗಳಿಗೆ ಶೋಕಾಸ್ ನೋಟಿಸ್ ಜಾರಿಗೊಳಿಸಿದೆ.

ಅಲ್ಲದೆ ಪರವಾನಿಗೆ ಇಲ್ಲದೆ ಮಾರಾಟ ಮಾಡುತ್ತಿದ್ದ ರಸಗೊಬ್ಬರವನ್ನು ಸಂಶಾಯಸ್ಪಗೊಂಡು ಪ್ರಸ್ತುತ ಮಾರಾಟ ಮಾಡದಂತೆ ತಡೆ ಆದೇಶ ನೀಡಿದೆ. ಇದು ನಿರಂತರವಾಗಿ ನಡೆಯುವಂತೆ ನಿರ್ದೇಶನ ನೀಡಿದ್ದೇನೆ ಎಂದರು.

ಜಿಲ್ಲೆಯಲ್ಲಿ ರಸಗೊಬ್ಬರದ ಅಭಾವವಿಲ್ಲದಿದ್ದರೂ, ಡಿಎಪಿ ಹಾಗೂ ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ಗೊಬ್ಬರಗಳನ್ನು ಬಳಸಲು ರೈತರಲ್ಲಿ ಜಾಗೃತಿ ಮೂಡಿಸಲು ಗ್ರಾಮವಾರು ವ್ಯಾಪಕ ಪ್ರಚಾರ ಕಾರ್ಯ ಸಹ ಕೃಷಿ ಇಲಾಖೆಯಿಂದ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹಾಗೂ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಉಪಸ್ಥಿತರಿದ್ದರು.



ಕಲಬುರಗಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಸಂಕನೂರ್, ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹಾಗೂ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ. ಕೃಷಿ ಇಲಾಖೆ ಜಂಟಿ ನಿರ್ದೇಶಕ ಸಮದ್ ಪಟೇಲ್ ಅವರಿದ್ದರು.

# ಡಾ.ಅಜಯಸಿಂಗ್‌ಗೆ ಸಚಿವ ಸ್ಥಾನಕ್ಕೆ ಆಗ್ರಹ

## ಸೊನ್ನ ಕ್ರಾಸ್‌ನಲ್ಲಿ ಅಭಿಮಾನಿಗಳಿಂದ ರಸ್ತೆತಡೆ-ಉರುಳುಸೇವೆ



ಕಲಬುರಗಿ ಜಿಲ್ಲೆಯ ಜೇವರ್ಗಿ ಶಾಸಕ ಡಾ.ಅಜಯಸಿಂಗ್ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಸಚಿವ ಸ್ತಾನ ನಿಡುವಂತೆ ಆಗ್ರಹಿಸಿ ಅವರ ಅಭಿಮಾನಿಗಳು ಮತ್ತು ತಾಲ್ಲೂಕಿನ ಕಾಂಗ್ರೆಸ್ ಕಾರ್ಯಕರ್ತರು ಸೊನ್ನ ಕ್ರಾಸ್‌ನಲ್ಲಿ ಪ್ರತಿಭಟನೆ ನಡೆಸಿ ರಸ್ತೆಯಲ್ಲೇ ಉರುಳು ಸೇವೆಯನ್ನೂ ನಡೆಸಿದರು.

**ಕಲಬುರಗಿ, ಜೂ. 8:** ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಹಾಗೂ ಜೇವರ್ಗಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಅಜಯಸಿಂಗ್ ಅವರಿಗೆ ನೂತನ ಸಚಿವ ಸಂಪುಟದಲ್ಲಿ ಸಂಪುಟ ದರ್ಜೆಯ ಸಚಿವ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿ, ಜೇವರ್ಗಿ ತಾಲ್ಲೂಕಿನ ಸೊನ್ನ ಕ್ರಾಸ್‌ನಲ್ಲಿ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ವಿಶಿಷ್ಟವಾಗಿ ಪ್ರತಿಭಟಿಸಿದರು.

ಡಾ. ಅಜಯಸಿಂಗ್ ಅವರಿಗೆ ಸಚಿವ ಸ್ಥಾನ ನೀಡಲೇಬೇಕೆಂದು ವರಿಷ್ಠರನ್ನು ಒತ್ತಾಯಿಸಿದ ಅಭಿಮಾನಿ ಗಳು, ನಿರಂತರ ಅವರನ್ನು ಅಲಕ್ಷಿಸಲಗುತ್ತಿದೆ ಎಂದು ಆರೋಪಿಸಿ ರಸ್ತೆಯಲ್ಲೇ ಉರುಳುಸೇವೆ ಮಾಡುವ ಮೂಲಕ ತಮ್ಮ ತೀವ್ರ ಆಕ್ರೋಶ ಮತ್ತು ಭಕ್ತಿಯನ್ನು ಪ್ರದರ್ಶಿಸಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಡಾ.ಅಜಯಸಿಂಗ್ ಅನಿವಾರ್ಯ: ಪ್ರತಿಭಟನೆಯ ನೇತೃತ್ವವಹಿಸಿದ್ದ ಪ್ರಮುಖರು ಮಾತನಾಡಿ, ಡಾ. ಅಜಯಸಿಂಗ್ ಅವರು ಜೇವರ್ಗಿ ತಾಲ್ಲೂಕಿನ ಪ್ರಗತಿಗೆ ಹಗಲಿರುಳು ಶ್ರಮಿಸುತ್ತಿದ್ದಾರೆ.

ಕಲ್ಯಾಣ ಕರ್ನಾಟಕ ಭಾಗದ ಸರ್ವಾಂಗೀಣ ಅಭಿವೃದ್ಧಿಗಾಗಿ ಅವರು ಮಂಡಳಿಯ ಅಧ್ಯಕ್ಷರಾಗಿ ಮಾಡುತ್ತಿರುವ ಕೆಲಸಗಳು ಶ್ಲಾಘನೀಯ. ಈ ಹಿನ್ನೆಲೆಯಲ್ಲಿ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡುವುದು ಸೂಕ್ತ. ಇದರಿಂದ ಇಡೀ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ಡಾ. ಅಜಯಸಿಂಗ್ ಅವರು ಸಚಿವರಾಗಬೇಕು ಎನ್ನುವುದು ಕೇವಲ ತಾಲ್ಲೂಕಿನ ಜನರ ಆಸೆಯಷ್ಟೇ ಅಲ್ಲ, ಇಡೀ ಜಿಲ್ಲೆಯ ಜನರ ಆಶಯವಾಗಿದೆ. ಹೀಗಾಗಿ ಪಕ್ಷದ ಹೈಕಮಾಂಡ್ ಮತ್ತು ರಾಜ್ಯದ ನಾಯಕರು ತಕ್ಷಣವೇ ಗಮನಹರಿಸಿ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಕಲ್ಪಿಸಬೇಕು" ಎಂದು ಉರುಳು ಸೇವೆ ಮೂಲಕ ವರಿಷ್ಠರಲ್ಲಿ ಅತ್ಯಂತ ಶ್ರದ್ಧೆಯಿಂದ ಮನವಿ ಮಾಡಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಮತ್ತು ತಾಲ್ಲೂಕಿನ ಕಾಂಗ್ರೆಸ್ ಪಕ್ಷದ ಮುಖಂಡರಾದ ಶರಬು ಕಲ್ಯಾಣಿ, ಶರಣು ಬಿಲ್ಲಾಡ್, ಬಸವರಾಜ್ ಕಣಕಿ, ಭಗವಂತರಾಯ್ ಗುಜಗೊಂಡ, ಭೂತಾಳಿ ಬಾಸಗಿ, ವಿದ್ಯಾಧರ್ ಚೌಡಾಪೂರ್, ಭೀಮಾ ಶಂಕರ್ ಸಂಧಿಮನಿ, ನಾಗಣ್ಣಗೌಡ ಮಾಲಿ ಪಾಟೀಲ್, ಲಕ್ಷ್ಮಣ ಗುಬ್ಬೇವಾಡ್, ಲಕ್ಕಪ್ಪ ಕೂಟನೂರ್, ರಮೇಶ್ ಸಂತಿ, ಮುತ್ತಣ್ಣ ಹೊಸಮನಿ ಹಾಗೂ ನೂರಾರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಡಾ. ಅಜಯಸಿಂಗ್ ಅವರ ಅಪಾರ ಸಂಖ್ಯೆಯ ಅಭಿಮಾನಿಗಳು ಉಪಸ್ಥಿತರಿದ್ದು, ನಾಯಕರ ಪರವಾಗಿ ಘೋಷಣೆಗಳನ್ನು ಕೂಗಿ ರಾಜ್ಯ ನಾಯಕರುಗಳಿಗೆ ಮತ್ತು ಹೈಕಮಾಂಡ್‌ನ ನಾಯಕರಿಗೆ ಮನವಿ ಮಾಡಿದರು.

# ಭೂಮಿ ಫಲವತ್ತತೆಚ ಹೆಚ್ಚಸಲು ಕಲ್ಯಾಣ ಕರ್ನಾಟಕದ ರೈತರಿಗೆ ವಿವಿಧ ರೂಪದ ತರಬೇತಿ

**ರಾಯಚೂರು, ಜೂ. 8:** ಕ್ಯಲಾಣ ಕರ್ನಾಟಕದ ರೈತರು ಅತಿ ಹೆಚ್ಚು ಇಳುವರಿ ಪಡೆಯುವ ಆಸೆಯಲ್ಲಿ ಅತಿಯಾದ ರಾಸಾಯನಿಕ ಗೊಬ್ಬರ ಬಳಕೆ ಮಾಡುತ್ತಿರುವುದರಿಂದ ಅವರುಗಳ ಭೂಮಿ ತನ್ನ ಫಲವತ್ತತೆಯನ್ನು ನಿಧಾನವಾಗಿ ಕಳೆದುಕೊಳ್ಳಲು ಆರಂಭಿಸಿದೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ರಾಯಚೂರು ವಿಜ್ಞಾನಗಳ ವಿಶ್ವವಿದ್ಯಾಲಯವು ಕಲ್ಯಾಣ ಕರ್ನಾಟಕದ ರೈತರಿಗೆ ವಿವಿಧ ರೂಪದ ತರಬೇತಿ ನೀಡಲು ಮುಂದಾಗಿದೆ.

ರಾಸಾಯನಿಕ ಗೊಬ್ಬರಗಳ ಬಳಕೆ ಅಧಿಕವಾಗುತ್ತಿರುವ ಕಾರಣ ಮಣ್ಣಿನಲ್ಲಿ ಸಾವಯವ ಅಂಶಗಳ ಪ್ರಮಾಣ ಕಡಿಮೆಯಾಗುತ್ತಿದೆ. ಮಣ್ಣು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಕಳೆದುಕೊಳ್ಳುತ್ತಿದೆ. ಹೀಗಾಗಿ ವಿಶ್ವವಿದ್ಯಾಲಯವು ವಿಸ್ತರಣಾ ನಿರ್ದೇಶನಾಲಯದ ಮುಂದಾಳತ್ವದಲ್ಲಿ ರೈತರಿಗೆ ಮುಂಗಾರು ಹಂಗಾಮಿಗೆ ಸಮತೋಲನ ಪೋಷಕಾಂಶಗಳನ್ನು ಬಳಕೆ ಮಾಡುವ ವಿಧಾನವನ್ನು ಪ್ರಾತ್ಯಕ್ಷಿಕೆ ಮೂಲಕ ತಿಳಿಸಲು ನಿರ್ಧರಿಸಿದೆ.

ಮುಖ್ಯವಾಗಿ ಹಸಿರೆಲೆ ಗೊಬ್ಬರ, ಬೆಳೆಯ ಉಳುವಿಕೆಗಳು ಮತ್ತು ಸಾವಯವ ಪದಾರ್ಥಗಳನ್ನು ಮಣ್ಣಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯ ಜೊತೆಗೆ ಗುಣಮಟ್ಟದ ಆಹಾರ ಮತ್ತು ಉತ್ಪಾದನಾ ವೆಚ್ಚ ಕಡಿಮೆಯಾಗಿತ್ತದೆ. ಭಾರತೀಯ ಕೃಷಿ ಅನುಸಂಧಾನ ಪರಿಷತ್ತಿನ ಮಾರ್ಗದರ್ಶನದಂತೆ ಕೃಷಿ ಮತ್ತು ಅಭಿವೃದ್ಧಿ ಇಲಾಖೆಗಳ ಸಹಭಾಗಿತ್ವದಲ್ಲಿ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ರೈತರಿಗೆ ಅರಿವು ಮೂಡಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ವಿಶ್ವವಿದ್ಯಾಲಯ ವ್ಯಾಪ್ತಿಯ ಏಳು ಕೃಷಿ ವಿಜ್ಞಾನ ಕೇಂದ್ರಗಳು ಮತ್ತು ಆರು ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಮೂಲಕ ರೈತರಿಗೆ ವಿವಿಧ ರೂಪದ ತರಬೇತಿ ಮುಖ್ಯವಾಗಿ ಒಳಾಂಗಣ ಮತ್ತು ಹೊರಾಂಗಣ ತರಬೇತಿ ನೀಡಲಿದೆ ಎಂದು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಎ.ಆರ್.ಕುರುಬರ ಹೇಳುತ್ತಾರೆ.

ಸಾವಯವ ಮತ್ತು ಸಮತೋಲನ ಪೋಷಕಾಂಶಗಳ ನಿರ್ವಹಣಾ ತತ್ವದ ಆಧಾರದ ಮೇಲೆ ರೈತರು ಮಣ್ಣು ಪರೀಕ್ಷಾ ವರದಿಯ ಪ್ರಕಾರ ರಸಗೊಬ್ಬರಗಳನ್ನು ಪೂರೈಸಲು ರೈತರಿಗೆ ಮನವರಿಕೆ ಮಾಡಲಾಗುತ್ತಿದೆ. ಮಣ್ಣಿನ ಫಲವತ್ತತೆ ಮತ್ತು ಉತ್ತಮ ಇಳುವರಿಗಾಗಿ ಸಾವಯವ ಗೊಬ್ಬರಗಳಾದ ಕೊಟ್ಟಿಗೆ ಗೊಬ್ಬರ, ಕಾಂಪೋಸ್ಟ್, ಎರೆಹುಳ, ಹಸಿರೆಲೆ ಗೊಬ್ಬರಗಳ ಜತೆಗೆ ಜೈವಿಕ ಗೊಬ್ಬರಗಳ ಬಳಕೆಯ ವಿದಾನಗಳ ಕುರಿತು ಸಹ ರೈತರಿಗೆ ಮಾಹಿತಿ ನೀಡಲಾಗುವುದು ಎಂದು ತಿಳಿಸುತ್ತಾರೆ.

ಸಮತೋಲನ ಪೋಷಕಾಂಶಗಳ ಅರಿವು ಅಭಿಯಾನದಡಿ ಕಲ್ಯಾಣ ಕರ್ನಾಟಕ ಭಾಗದ ರೈತರಿಗೆ 200 ತರಬೇತಿ ಕಾರ್ಯಕ್ರಮ ಆಯೋಜಿಸಿ ಸುಮಾರು 5,600 ರೈತರಿಗೆ ಮಾಹಿತಿ ಒದಗಿಸಲಾಗುವುದು. ಮುಂಬರುವ ಹಂಗಾಮಿಗೆ ರೈತರು ರಾಸಾಯನಿಕ ಗೊಬ್ಬರಗಳ ಬಳಕೆ ಮಾಡುವ ಬದಲು ಮಣ್ಣು ಪರೀಕ್ಷಾ ವರದಿಯ ಆಧಾರದ ಮೇಲೆ ಸಮತೋಲನ ಪೋಷಕಾಂಶಗಳನ್ನು ಬಳಸಲು ತಿಳಿಸಲಾಗುವುದು ಎನ್ನುತ್ತಾರೆ. ಮುಂಗಾರು ಹಂಗಾಮಿಗೆ ಕಲ್ಯಾಣ ಕರ್ನಾಟಕದ ರೈತರಿಗೆ ಬೇಕಾಗುವ ಬೇಸಾಯ ಕ್ರಮಗಳಾದಿಯಾಗಿ ಕೀಟ, ರೋಗ ವಿವಿಧ ಕೃಷಿ ತಂತ್ರಜ್ಞಾನಗಳನ್ನು ಒದಗಿಸಲು ವಿಶ್ವವಿದ್ಯಾಲಯ ಸದಾ ಸಿದ್ಧವಿದೆ. ರೈತರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ ಎಂದು ಹೇಳುತ್ತಾರೆ. ಎ.ಆರ್. ಕುರುಬರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಮುಂಗಾರು ಪ್ರವೇಶ ಮಾಡಿದ ತಕ್ಷಣ ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿಸಿ ಕೊಳ್ಳಲಿದ್ದಾರೆ. ಹೀಗಾಗಿ ಮುಂಚಿತವಾಗಿಯೇ ಅವರಿಗೆ ತರಬೇತಿ ನೀಡಲು ತೀರ್ಮಾನಿಸಲಾಗಿದೆ.

# ಚೌಂಡಿ ಗ್ರಾಮದಲ್ಲಿ ಖೇತ್ ಬಚಾವೋ ಕೃಷಿ ಜಾಗೃತಿ ಅಭಿಯಾನ

**ಬೀದರ, ಜೂ. 8:** ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯದ ಮಹತ್ವಾಕಾಂಕ್ಷೆಯ 'ಖೇತ್ ಬಚಾವೋ' (ಕೃಷಿ ಉಳಿಸಿ) ಅಭಿಯಾನದ ಅಂಗವಾಗಿ ಜಿಲ್ಲೆಯ ಚೌಂಡಿ ಗ್ರಾಮದಲ್ಲಿ ಪ್ರಗತಿಪರ ರೈತ ಮಹಿಳೆ ಶ್ರೀಮತಿ ಪೂಜಾ ಸಂತೋಷ ಧೂಮನ್‌ಸುರೆ ಅವರ ತೋಟದಲ್ಲಿ ಕೃಷಿ ಜಾಗೃತಿ ಹಾಗೂ ತಾಂತ್ರಿಕ ಸಲಹಾ ಕಾರ್ಯಕ್ರಮ ಜರುಗಿತು.

ಐಸಿಎಆರ್-ಅಟಾರಿ ಬೆಂಗಳೂರು ಇವರ ನಿರ್ದೇಶನದಂತೆ, ಜಿಲ್ಲೆಯ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆಯ ಜಂಟಿ ಸಹಯೋಗ ದಲ್ಲಿ ಜೂನ್ 30 ರವರೆಗೆ ಈ ಬೃಹತ್ ಆಂದೋಲನ ನಡೆಯಲಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ. ರಾಜಶೇಖರ್ ಬಸನಾಯಕ ಹೇಳಿದರು.

ಮಣ್ಣಿನ ಆರೋಗ್ಯ ರಕ್ಷಣೆಗೆ ಆದ್ಯತೆ ಪ್ರಸ್ತುತ ದಿನಗಳಲ್ಲಿ ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆಯಿಂದಾಗಿ ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದ್ದು, ಇದನ್ನು ತಡೆಗಟ್ಟುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ. ಚಂದ್ರಕಾಂತ್ ಅವರು ಮಾತನಾಡಿ, "ರೈತರು ಕಡ್ಡಾಯವಾಗಿ ಮಣ್ಣಿನ ಪರೀಕ್ಷೆ ಮಾಡಿಸಿ, ಅದರ ಆಧಾರದ ಮೇಲೆ ಸಮತೋಲಿತ ರಸಗೊಬ್ಬರಗಳನ್ನು ಬಳಸಬೇಕು. ಸಮಗ್ರ ಪೋಷಕಾಂಶ ನಿರ್ವಹಣೆ ಹಸಿರು ಗೊಬ್ಬರ ಹಾಗೂ ಸಾವಯವ-ಜೈವಿಕ ಗೊಬ್ಬರಗಳ ಬಳಕೆಯಿಂದ ಮಾತ್ರ ಮಣ್ಣಿನ ಆರೋಗ್ಯವನ್ನು ದೀರ್ಘಕಾಲ ಕಾಪಾಡಲು ಸಾಧ್ಯ," ಎಂದು ಮಣ್ಣಿನ ಫಲವತ್ತತೆ ಸಂರಕ್ಷಣೆಯ ಕುರಿತು ಸವಿಸ್ತಾರವಾಗಿ ವಿವರಿಸಿದರು.

ಸುಸ್ಥಿರ ಬೆಳೆ ಮತ್ತು ಸಸ್ಯ ಸಂರಕ್ಷಣೆ ಇದೇ ಸಂದರ್ಭದಲ್ಲಿ ಸಸ್ಯ ಸಂರಕ್ಷಣೆ ತಜ್ಞರಾದ ಡಾ. ಶಿವಕುಮಾರ್ ಅವರು ಮಾತನಾಡಿ, ಉತ್ಪಾದನಾ ವೆಚ್ಚವನ್ನು ಕಡಿತಗೊಳಿಸಿ ಹೆಚ್ಚಿನ ಇಳುವರಿ ಪಡೆಯಲು ವೈಜ್ಞಾನಿಕ ಕೃಷಿ ಪದ್ಧತಿಗಳು ಅತ್ಯಗತ್ಯ. ರೈತರು ಕೀಟ ಮತ್ತು ರೋಗ ಬಾಧೆಗಳ ನಿಯಂತ್ರಣಕ್ಕೆ ರಾಸಾಯನಿಕಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಿ, ಜೈವಿಕ ಹಾಗೂ ನೈಸರ್ಗಿಕ ಕೃಷಿ ಆಧಾರಿತ ಸಸ್ಯ ಸಂರಕ್ಷಣಾ ಉಪಾ ಯಗಳನ್ನು ಅಳವಡಿಸಿಕೊಳ್ಳಬೇಕು," ಎಂದು ತಾಂತ್ರಿಕ ಸಲಹೆಗಳನ್ನು ನೀಡಿದರು. 30 ದಿನಗಳ ಕಾಲ ಗ್ರಾಮ ಮಟ್ಟದಲ್ಲಿ ಸಂವಾದದೇಶಾದ್ಯಂತ ಅನುಷ್ಠಾನ ಗೊಳ್ಳುತ್ತಿರುವ ಈ ಯೋಜನೆಯಡಿ, ಮುಂದಿನ 30 ದಿನಗಳ ಕಾಲ ಬೀದರ್ ಜಿಲ್ಲೆಯಾದ್ಯಂತ ಗ್ರಾಮೀಣ ಭಾಗಗಳಲ್ಲಿ ಸರಣಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕೃಷಿ ವಿಜ್ಞಾನಿಗಳು ಮತ್ತು ಅಧಿಕಾರಿಗಳ ತಂಡವು ಹಳ್ಳಿಗಳಿಗೆ ನೇರ ಭೇಟಿ ನೀಡಿ ರೈತರೊಂದಿಗೆ ನೇರ ಸಂವಾದ, ತಾಂತ್ರಿಕ ಸಲಹಾ ಶಿಬಿರಗಳು ಹಾಗೂ ಮಾಹಿತಿ ಪ್ರಾತ್ಯಕ್ಷಿಕೆಗಳನ್ನು ನಡೆಸಿ ಕೊಡಲಿದ್ದಾರೆ.

ಮುಖ್ಯಸ್ಥರ ಕರೆ: "ಮಣ್ಣಿನ ಆರೋಗ್ಯವೇ ದೇಶದ ಸಂಪತ್ತು. ಜಿಲ್ಲೆಯ ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಈ ಅಭಿಯಾನದಲ್ಲಿ ಭಾಗವಹಿಸಿ, ವಿಜ್ಞಾನಿಗಳ ತಾಂತ್ರಿಕ ಸಲಹೆಗಳನ್ನು ಪಡೆದು ತಮ್ಮ ಜಮೀನಿನ ಮಣ್ಣಿನ ಗುಣಮಟ್ಟವನ್ನು ಕಾಪಾಡಿಕೊಳ್ಳಬೇಕು ಹಾಗೂ ಕೃಷಿ ಉತ್ಪಾದಕತೆಯನ್ನು ಹೆಚ್ಚಿಸಿಕೊಳ್ಳಬೇಕು," ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ರಾಜಶೇಖರ್ ಬಸನಾಯಕ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ. ಈ ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ಶ್ರೀ.ಗುರು ಬಸಯ್ಯಾ ಸ್ವಾಮಿ ಹಾಗೂ ರೈತ ಮಹಿಳೆಯರು ಮತ್ತು ರೈತರು ಈ ಕಾರ್ಯಕ್ರಮದ ಸದುಪಯೋಗ ಪಡೆದುಬೇಕು ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.




ಬೀದರ ಜಿಲ್ಲೆಯ ಚೌಂಡಿ ಗ್ರಾಮದಲ್ಲಿ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಮಹತ್ವಾಕಾಂಕ್ಷೆಯ 'ಖೇತ್ ಬಚಾವೋ' ಅಭಿಯಾನದ ಅಂಗವಾಗಿ ಪ್ರಗತಿಪರ ರೈತ ಮಹಿಳೆ ಶ್ರೀಮತಿ ಪೂಜಾ ಸಂತೋಷ್ ಧೂಮನಸುರೆ ಅವರ ತೋಟದಲ್ಲಿ ಕೃಷಿ ಜಾಗೃತಿ ಹಾಗೂ ತಾಂತ್ರಿಕ ಸಲಹಾ ಕಾರ್ಯಕ್ರಮ ಜರುಗಿತು.

# ಧಾರಾಕಾರ ಮಳೆಗೆ ನಲುಗಿದ ಚಿಂಚೋಳಿ ಸೇತುವೆ ಕುಸಿತ, ಹಲವು ಮನೆಗಳು ಜಲಾವೃತ



**ಕಲಬುರಗಿ, ಜೂ. 8:** ಜಿಲ್ಲೆಯ ಹಲವೆಡೆ ಬಿಟ್ಟುಬಿಡದೆ ಸುರಿಯುತ್ತಿರುವ ಧಾರಾಕಾರ ಮುಂಗಾರು ಮಳೆಗೆ ಚಿಂಚೋಳಿ ತಾಲೂಕಿನ ಚಿಮ್ಮನಚೋಡ ಗ್ರಾಮದ ಬಳಿ ಇದ್ದ ಕಿರು ಸೇತುವೆಯು ಕುಸಿದು ಬಿದ್ದಿದೆ. ಚಿಮ್ಮನಚೋಡ ಮತ್ತು ನರನಾಳ ಗ್ರಾಮಗಳ ನಡುವೆ ಇದ್ದ ಈ ಸಂಪರ್ಕ ಸೇತುವೆ ಸಂಪೂರ್ಣವಾಗಿ ಕುಸಿದ ಪರಿಣಾಮ, ಚಿಂಚೋಳಿಯಿಂದ ಭಾಲ್ಕಿ ಮಾರ್ಗದ ನಡುವಿನ ವಾಹನ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿದೆ.

ಈ ಹೆದ್ದಾರಿ ಮಾರ್ಗದಲ್ಲಿ ಸೇತುವೆ ಮುರಿದು ಬಿದ್ದಿರುವುದರಿಂದ ಎರಡು ಜಿಲ್ಲೆಗಳ ನಡುವಿನ ನೇರ ಸಂಪರ್ಕ ಕಡಿತಗೊಂಡಿದೆ. ಸಾರಿಗೆ ಬಸ್‌ಗಳು ಸೇರಿದಂತೆ ನೂರಾರು ವಾಹನಗಳು ರಸ್ತೆಯ ಇಕ್ಕೆಲಗಳಲ್ಲಿ ಸಾಲುಗಟ್ಟಿ ನಿಂತಿವೆ. ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಸಂಪರ್ಕ ಕೊಂಡಿಯಾದ ಈ ರಸ್ತೆ ಬಂದ್ ಆಗಿರುವುದರಿಂದ ಸಾರ್ವಜನಿಕರು ಮತ್ತು ನಿತ್ಯ ಪ್ರಯಾಣಿಕರು ಪರ್ಯಾಯ ಮಾರ್ಗಗಳನ್ನು ಹುಡುಕಬೇಕಾದ ಅನಿವಾರ್ಯತೆ ಎದುರಾಗಿದ್ದು, ತೀವ್ರ ಪರದಾಟ ನಡೆಸುತ್ತಿದ್ದಾರೆ.

ಮಳೆಯ ಆರ್ಭಟ ಕೇವಲ ರಸ್ತೆ ಸೇತುವೆಗಳಿಗೆ ಸೀಮಿತವಾಗಿಲ್ಲ. ಚಿಂಚೋಳಿ ತಾಲೂಕಿನ ಬೆಡಕಪಳ್ಳಿ ಗ್ರಾಮದ 20ಕ್ಕೂ ಹೆಚ್ಚು ಮನೆಗಳಿಗೆ ಹಳ್ಳದ ಮಳೆನೀರು ನುಗ್ಗಿದೆ. ಇದ್ದಕ್ಕಿದ್ದಂತೆ ಮನೆಗಳಿಗೆ ನೀರು ನುಗ್ಗಿದ್ದರಿಂದ ಧಾನ್ಯಗಳು, ದಿನಬಳಕೆ ವಸ್ತುಗಳು ಹಾಗೂ ಹಾಸಿಗೆ-ಬಟ್ಟೆಗಳು ನೀರಿನಲ್ಲಿ ಮುಳುಗಡೆಯಾಗಿದ್ದು, ಗ್ರಾಮಸ್ಥರು ನೆರವಿಗಾಗಿ ಆಕ್ರಂದನ ಮುಗಿಲು ಮುಟ್ಟಿದೆ.

ಮಳೆಗಾಲ ಆರಂಭಕ್ಕೂ ಮುನ್ನವೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳದ ಜಿಲ್ಲಾಡಳಿತ ಮತ್ತು ಲೋಕೋಪಯೋಗಿ ಇಲಾಖೆಯ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ತಕ್ಷಣವೇ ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ, ತಾತ್ಕಾಲಿಕ ರಸ್ತೆ ಸಂಪರ್ಕ ಕಲ್ಪಿಸಬೇಕು ಹಾಗೂ ಮನೆ ಕಳೆದುಕೊಂಡ ಸಂತ್ರಸ್ತರಿಗೆ ಕನಿಷ್ಠ ಗಂಜಿ ಕೇಂದ್ರ ಮತ್ತು ಪರಿಹಾರದ ವ್ಯವಸ್ಥೆ ಮಾಡಬೇಕು ಎಂದು ಜಲಾವೃತಗೊಂಡ ಗ್ರಾಮಗಳ ಜನರು ಒತ್ತಾಯಿಸಿದ್ದಾರೆ.

ಜಿಲ್ಲೆಯ ಸೇಡಂ ನಗರವೂ ಸೇರಿದಂತೆ ತಾಲ್ಲೂಕಿನ ಹಲವು ಭಾಗಗಳಲ್ಲಿ ಭಾರೀ ಮಳೆ ಸುರಿದ ಪರಿಣಾಮವಾಗಿ ಸೇಡಂ ನಗರದ ಮುಖ್ಯ ರಸ್ತೆ ಸಂಪೂರ್ಣ ಜಲಾವೃತಗೊಂಡು ನಿನ್ನೆ ರಾತ್ರಿಯಿಂದ ಇಂದು ಬೆಳಗಿನ ವರೆಗೂ ಸಂಚಾರ ದುಸ್ತರವಾಗಿ ಪ;ರಿಣಮಿಸಿತು. ಅಲ್ಲದೇ ಮುಖ್ಯ ರಸ್ತೆಯಲ್ಲಿರುವ ಅನೇಕ ಅಂಗಡಿ ಮುಗ್ಗಟ್ಟುಗಳಿಗೆ ನೀರು ನುಗ್ಗಿ ಅಪಾರ ಹಾನಿ ಸಂಭವಿಸಿದೆ ಎಂದು ನಿವಾಸಿಗಳು ಆರೋಪಿಸಿದರು. ಕೂಡಲೇ ಕ್ಷೇತ್ರದ ಶಾಸಕರೂ ಆಗಿರುವ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಅವರು ಆಗಮಿಸಿ ಹಾನಿಗೊಳಗಾದವರಿಗೆ ಪರಿಹರ ಕಲ್ಪಿಸಬೇಕು ಮತ್ತು ರಸ್ತೆಗಳಲ್ಲಿ ನೀರು ನಿಲ್ಲದಂತೆ ಎರಡೂ ಬದಿಗಳಲ್ಲಿ ಚರಂಡಿಗಳನ್ನು ನಿರ್ಮಿಇಸಿ ನೀರು ಹರಿದು ಹೋಗುವಂತೆ ವ್ಯವಸ್ಥೆ ಮಾಡಬೇಕೆಂದು ಆಗ್ರಹಿಸಿದ್ದು, ಈಗ ಮಳೆಗಾಲವಿರುವುದರಿಂದ ನಾಲ್ಕು ತಿಂಗಳವರೆಗೂ ಜನರಿಗೆ ಈ ತೊಮದರೆ ತಪ್ಪಿದ್ದಲ್ಲ. ತಕ್ಷಣವೇ ಸಮರ ಸಜ್ಜಿನಂತೆ ಕ್ರಮ ಜರುಗಿಸಬೇಕೆಂದು ಅಗ್ರಹಿಸಲಾಗಿದೆ.

# ಮರಳು ಸಾಗಣೆ ಸ್ಥಗಿತ: ಅಕ್ರಮ ಮರಳು ದಂಧೆಯ ಕುರಿತು ಎ.ಸಿ.ರಾಜೇಶ್ ವರದಿ

**ಬಳ್ಳಾರಿ ಜೂ 08:** ತಾಲೂಕಿನ ಅಸುಂಡಿ ಹಾಗೂ ಯಾಳ್ಪಿ ಗ್ರಾಮದ ವೇದಾವತಿ ನದಿಯ ಸರಕಾರಿ ಹಾಗೂ ಪಟ್ಟಾ ಜಮೀನಿನಲ್ಲಿ ಅಕ್ರಮ ಮರಳು ದಂಧೆ ಎಗ್ಗಿಲ್ಲದೇ, ನಡೆಯುತ್ತಿರುವ ಬಗ್ಗೆ ಈ ಹಿಂದೆ ಪತ್ರಿಕೆಗಳಲ್ಲಿ ಹಲವಾರು ಬಾರೀ ವರದಿ ಪ್ರಕಟಿಸಿ ಜಿಲ್ಲಾಡಳಿತದ ಗಮನ ಸೆಳೆದಿತ್ತು.

ಇಲ್ಲಿನ ಮರಳು ಗುತ್ತಿಗೆದಾರ ರಾಮಕೃಷ್ಣ ರಾವ್ ಎಂಬ ಅಡ್ನಾಡಿ ಸರಕಾರಿ ನಿಯಮಗಳನ್ನ ಗಾಳಿಗೆ ತೂರಿ ಒಂದು ಪರ್ಮಿಟ್ ಮೇಲೆ ನೂರಾರು ಲಾರಿಗಳ ಮರಳು ದೋಚಿ ಸರಕಾರದ ಖಜಾನೆಗೆ ವಂಚಿಸಿದ್ದಾನೆ. ಅಲ್ಲದೇ, ನಿಯಮ ಮೀರಿ ನೂರಾರು ಅಡಿಗಳ ಆಳ ಮರಳು ತೋಡಿ ವೇದಾವತಿ ನದಿಯನ್ನು ಬಗೆದು ಹರಿದು ಮುಕ್ಕಿದ್ದಾನೆ. ಈತನಿಗೆ ಪೋಲಾ ಹೋಟೆಲ್‌ನ ವೈಟ್‌ಕಾಲರ್ ಲೀಡರ್ ಯೊಬ್ಬ ಸಾಥ್ ಕೊಟ್ಟಿದ್ದು, ರಾಮಕೃಷ್ಣ ರಾವ್ ಹೆಸರಿಗಷ್ಟೆ ಗುತ್ತಿಗೆದಾರ ಈತನ ಹಿಂದೆ ಇರುವ ಮಾಸ್ಟರ್ ಮೈಂಡ್ ಪೋಲಾ ಹೋಟೆಲ್‌ನಲ್ಲಿ ಕುಳಿತು ಕೆಲಸ ಮಾಡುತ್ತಿದೆ. ಇವರಿಗೆ ಸರಕಾರಿ ಅಧಿಕಾರಿಗಳು ಲೆಕ್ಕಕ್ಕೆ ಇಲ್ಲ ಇವರು ನಡೆದಿದ್ದೆ ದಾರಿ ಎಂಬಂತೆ ಅಸುಂಡಿ ಹಾಗೂ ಯಾಳ್ಪಿ ಗ್ರಾಮದ ವೇದಾವತಿ ನದಿಯನ್ನು ಹಗಲು ರಾತ್ರಿ ಎನ್ನದೇ ಬಗೆದು ಲೂಟಿಮಾಡಿ ಕೋಟಿಗಟ್ಟಲೇ ಸಂಪಾದನೆ ಮಾಡಿ ಬಳ್ಳಾರಿಯಲ್ಲಿ ನೂರಾರು ಕೋಟಿಯ ಆಸ್ತಿಗಳಿಸಿದ್ದಾರೆ. ಇವರು ಮಾಡುವ ಅಕ್ರಮ ಮರಳು ದಂಧೆಯಿಂದ ಈ ಭಾಗದ ಅನೇಕ ಗ್ರಾಮಗಳ ರಸ್ತೆಗಳು ಸಂಪೂರ್ಣವಾಗಿ ಹಾಳಾಗಿ ಹದಗೆಟ್ಟು ಹೋಗಿವೆ. ಇವರು ಹಾಕುವ ಓವರ್ ಲೋಡ್ ಮರಳಿನಿಂದ ಈ ಭಾಗದ ರಸ್ತೆಗಳು ಬೆದರಿ ಹೋಗಿವೆ. ಓವರ್ ಲೋಡ್ ಮರಳು ತುಂಬಿ ಅಸುಂಡಿ ಹಾಗೂ ಯಾಳ್ಪಿ ಗ್ರಾಮದ ವೇದಾವತಿ ನದಿಯಿಂದ ಬರುವ ಮರಳು ಲಾರಿಗಳನ್ನು ಪರಿಶೀಲನೆ ಮಾಡಬೇಕಾದ ಆರ್.ಟಿ.ಓ ಅಧಿಕಾರಿಗಳು ಪೋಲಾ ಹೋಟೆಲ್‌ನ ವೈಟ್ ಕಾಲರ್ ಲೀಡರ್ ಕೊಡುವ ಎಂಜಲು ಕಾಸಿಗೆ ಕೈಚಾಚಿ ಬಾಯಿ ಮುಚ್ಚಿಕೊಂಡಿದ್ದಾರೆ.

ಇನ್ನು ಪರ್ಮಿಟ್ ಪರಿಶೀಲನೆ ಮಾಡಬೇಕಾದ ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಎಂದು ಕೈಚಲ್ಲಿ ಕೊಳಿತಿದ್ದಾರೆ. ಇನ್ನು ಪೋಲಿಸ್ ಇಲಾಖೆಯವರಂತಹ ಕಂಡು ಕಾಣದಂತೆ ವರ್ತಿಸುತ್ತಿದ್ದಾರೆ. ಹಾಗಾಗಿ ಮರಳು ದಂಧೆಯ ರಾಮಕೃಷ್ಣರಾವ್ ಮರಳು ಲೂಟಿಗೆ ನಿಂತಿದ್ದಾನೆ. ಈ ಕುರಿತು 'ಗಣಿನಾಡು' ಪತ್ರಿಕೆ ಈ ಹಿಂದಿನಿಂದಲು ಸರಣಿ ವರದಿಗಳನ್ನು ಪ್ರಕಟಿಸುತ್ತಾ ಬಂದಿದೆ ಅಲ್ಲದೇ, ಸ್ಥಳೀಯರು ಸಹ ದೂರು ನೀಡಿದ್ದಾರೆ. ಈ ದೂರನ್ನು ಆಧರಿಸಿ ಬಳ್ಳಾರಿ ಉಪ-ವಿಭಾಗದ ಕಂದಾಯ ಅಧಿಕಾರಿ ಹಾಗೂ ತಾಲೂಕು ಮರಳು ಸಮಿತಿ ಅಧ್ಯಕ್ಷರು ಆದ ಎಚ್.ಡಿ.ರಾಜೇಶ್‌ರವರು ಕ್ರಮಕ್ಕೆ ಮುಂದಾಗಿ ಸ್ಥಳ ಪರಿಶೀಲನೆ ಮಾಡಿದ್ದಾರೆ.

ತಾಲ್ಲೂಕಿನ ಅಸುಂಡಿ ಮತ್ತು ಯಾಳ್ಪಿ ಗ್ರಾಮಗಳ ವ್ಯಾಪ್ತಿಯಲ್ಲಿ ಸಾದಾ ಮರಳು ಗಣಿಗಾರಿಕೆ ನಡೆಸುತ್ತಿರುವ ಲೈಸೆನ್ಸ್‌ದಾರರು ನಿಯಮಗಳನ್ನು ಉಲ್ಲಂಘಿಸಿರುವುದು ಬಳ್ಳಾರಿ ಉಪ ವಿಭಾಗಾಧಿಕಾರಿ ಮತ್ತು ಭೂವಿಜ್ಞಾನಿಗಳ ಜಂಟಿ ಸ್ಥಳ ತಪಾಸಣಾ ವರದಿಯಲ್ಲಿ ಕಂಡು ಬಂದ ಭಾರೀ ಲೋಪಗಳ ವರದಿಯಿಂದ ಅಸುಂಡಿ ಹಾಗೂ ಯಾಳ್ಪಿ ಗ್ರಾಮಗಳ ವೇದಾವತಿ ನದಿಯ ಸರಕಾರಿ ಹಾಗೂ ಪಟ್ಟ ಭೂಮಿಯ ಮರಳು ಗುತ್ತಿಗೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪ ನಿರ್ದೇಶಕಿ ದ್ವಿತೀಯ ತಿಳಿಸಿದ್ದಾರೆ.

ಮರಳು ಕಳ್ಳ ಎಂ.ರಾಮಕೃಷ್ಣ ರಾವ್ ಎಂಬುವವರಿಗೆ ಅಸುಂಡಿ ಗ್ರಾಮದಲ್ಲಿ 12.20 ಎಕರೆ ಹಾಗೂ ಯಾಳ್ಪಿ ಗ್ರಾಮದಲ್ಲಿ 9.90 ಎಕರೆ ಪ್ರದೇಶದಲ್ಲಿ 2022 ರಿಂದ 2027 ರವರೆಗೆ ಮರಳು ಗಣಿಗಾರಿಕೆ ನಡೆಸಲು ಅನುಮತಿ ನೀಡಲಾಗಿತ್ತು. ಆದರೆ, ಕರ್ನಾಟಕ ಉಪ-ಖನಿಜ ರಿಯಾಯಿತಿ ನಿಯಮಾವಳಿ 1994 ಮತ್ತು 2024 ರ ತಿದ್ದುಪಡಿ ನಿಯಮಗಳಡಿ ಪದೇ ಪದೇ ನಿಯಮಗಳನ್ನು ಗಾಳಿಗೆ ತೂರಿರುವುದು ತಪಾಸಣೆ ವೇಳೆ ಸಾಬೀತಾಗಿದ್ದು, ಇದರ ಸಮಗ್ರ ತನಿಖೆಯಾಗುವವರೆಗೂ ಮರಳು ಸಾಗಾಟ ಸ್ಥಗಿತಗೊಳಿಸಲಾಗಿದೆ ಎಂದು ತಿಳಿದು ಬಂದಿದೆ.

**ವರದಿಯಲ್ಲೇನಿತ್ತು?:** ಸಹಾಯಕ ಆಯುಕ್ತರು ಮತ್ತು ಗಣಿ ಇಲಾಖೆಯ ಭೂವಿಜ್ಞಾನಿಗಳು ಮೇ 4 ರಂದು ನಡೆಸಿದ ಜಂಟಿ ತಪಾಸಣೆಯಲ್ಲಿ ಲೈಸೆನ್ಸ್ ಸಂಖ್ಯೆ ಬಿಎಲ್‌ಆರ್-379 ಮತ್ತು ಬಿಎಲ್‌ಆರ್-380 ರ ಪ್ರದೇಶಗಳಲ್ಲಿ ಸರಕಾರಿ ನಿಯಮ ಗಾಳಿಗೆ ತೋರಿದ್ದು ಸೇರಿ ಹಲವು ಲೋಪಗಳು ಕಂಡು ಬಂದಿವೆ.

**ಅತಿಯಾದ ಗಣಿಗಾರಿಕೆ:** ಪರಿಸರ ವಿಮೋಚನಾ ಪತ್ರದ (ಇಸಿ) ನಿಯಮದಂತೆ ಭೂಮಿಯ ಮೇಲ್ಪದರದಿಂದ ಗರಿಷ್ಠ 7 ಮೀಟರ್ ಆಳದವರೆಗೆ ಮಾತ್ರ ಮರಳು ತೆಗೆಯಲು ಅವಕಾಶವಿತ್ತು. ಆದರೆ, ಎರಡೂ ಲೈಸೆನ್ಸ್ ಪ್ರದೇಶಗಳಲ್ಲಿ 7 ಮೀಟರ್‌ಗಿಂತಲೂ ಹೆಚ್ಚಿನ ಆಳಕ್ಕೆ ಗಣಿಗಾರಿಕೆ ನಡೆಸಿರುವುದು ತನಿಖೆಯಿಂದ ದೃಢಪಟ್ಟಿದೆ.

**ಅಕ್ರಮ ದಾಸ್ತಾನು:** ತಾಲೂಕಿನ ಅಸುಂಡಿ ಗ್ರಾಮದ ಲೈಸೆನ್ಸ್ (ಬಿಎಲ್‌ಆರ್-379) ವ್ಯಾಪ್ತಿಯ ಹೊರಗೆ ಸುಮಾರು 8500 ಮೆಟ್ರಿಕ್ ಟನ್ ಮರಳನ್ನು ಅಕ್ರಮವಾಗಿ ಮರಳು ದಾಸ್ತಾನು ಮಾಡಲಾಗಿತ್ತು.

ಈ ಹಿಂದೆ ಇದೇ ಕಾರಣಕ್ಕೆ 25,000 ದಂಡ ವಿಧಿಸಿದ್ದರೂ ಸಹ, ಲೈಸೆನ್ಸ್‌ದಾರರು ಕ್ಯಾರೇ ಎನ್ನದೆ ಮತ್ತೆ ತಮ್ಮ ಹಳೇ ಚಾಳಿಯನ್ನು ಮುಂದುವರೆಸಿ ಅದೇ ನಿಯಮವನ್ನು ಉಲ್ಲಂಘನೆ ಮಾಡಿ ಪುನರಾವರ್ತನೆ ಮಾಡಿದ್ದಾರೆ ಎಂಬುವುದು ಬೆಳಕಿಗೆ ಬಂದಿದೆ.

**ಸಿಸಿ ಟಿವಿ ನಿರ್ವಹಣೆ ಲೋಪ:** ಸ್ಟಾಕ್ ಯಾರ್ಡ್‌ಗಳಲ್ಲಿ ಅಳವಡಿಸಲಾದ ಸಿಸಿ ಟಿವಿ ಕ್ಯಾಮೆರಾಗಳು ನಾಮಾಕವಸ್ತೆ ಇವೆ ತೋರಿಕೆಗೆ ಮಾತ್ರ ಸಿಸಿಟಿವಿ ಅವುಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಮತ್ತು ಹಿಂದಿನ 10 ದಿನಗಳ ವಿಡಿಯೋ ದಾಖಲೆಗಳಲ್ಲ ಒಂದು ದಿನದ ದಾಖಲೆಗಳೇ ಲಭ್ಯವಿರುವುದು ಅಂದರೆ ಇವರ ಕಳ್ಳಾಟ ಬೆಳಕಿಗೆ ಬರುತ್ತೆ ಎಂದು ಸಿಸಿಟಿವಿ ನಿರ್ವಹಣೆ ಸರಿಯಾಗಿ ಮಾಡುತ್ತಿಲ್ಲ ಎಂದು ವರದಿಯಲ್ಲಿ ಬಹಿರಂಗವಾಗಿದೆ.

**ರಸ್ತೆ ನಿರ್ವಹಣೆ ವೈಫಲ್ಯ:** ಮರಳು ಸಾಗಾಣಿಕೆಯಿಂದಾಗಿ ಸಂಪರ್ಕ ರಸ್ತೆಗಳು ದುರಸ್ತಿಯಾಗಿದ್ದರೂ, ಗುತ್ತಿಗೆದಾರರು ಅವುಗಳನ್ನು ಯೋಗ್ಯಸ್ಥಿತಿಯಲ್ಲಿ ನಿರ್ವಹಣೆ ಮಾಡಿಲ್ಲ ಅಲ್ಲದೇ ಓವರ್ ಲೋಡ್‌ನಿಂದ ಈ ಭಾಗದ ಆನೇಕ ಗ್ರಾಮಗಳಿಗೆ ಸಂಪರ್ಕ ರಸ್ತೆಗಳು ಹಾಳಾಗಿವೆ ಎಂದು ಜಂಟಿ ಸ್ಥಳ ಪರಿಶೀಲನಾ ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ಹೇಳಲಾಗಿದೆ.

ಎ.ಸಿ.ರಾಜೇಶ್ ವರದಿ ಹಿನ್ನೆಲೆಯಲ್ಲಿ ಸಮಗ್ರ ತನಿಖೆಯಾಗುವವರೆಗೂ ತಾತ್ಕಾಲಿಕವಾಗಿ ಮರಳು ಸಾಗಾಟ ನಿಲ್ಲಿಸಲಾಗಿದೆ ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಬಲ್ಲ ಮೂಲಗಳ ಮಾಹಿತಿ.



# ಎಪಿಎಂಸಿ ಲೀಸ್–ಕಮ್–ಸೇಲ್ ಮುಸುಕಿನಲ್ಲಿ ಭಾರಿ ಅವ್ಯವಹಾರ!

**ಕೆಲವರು 8-10 ಸಾವಿರ ಬಾಡಿಗೆಗೆ ಪಡೆದು ಕಿರಾಣಿ, ಕೂಲ್ಡ್ರಿಂಕ್, ವ್ಯಾಪಾರಿಗಳಿಗೆ 30-50 ಸಾವಿರಕ್ಕೆ ಬಾಡಿಗೆಗೆ ಕೊಟ್ಟ ಕಿಲಾಡಿಗಳು**

**ಕೆಲ ದಳಾಲಿ ವರ್ತಕರಿಂದ ಆಕ್ಷೇಪ**

**ಸರ್ಕಾರಿ ಆಸ್ತಿಗಳು ಖಾಸಗಿ ವ್ಯಕ್ತಿಗಳ ಜೇಬಿಗೆ. ನಿಯಮ ಉಲ್ಲಂಘಿಸಿ ಪಾರ್ಸೆಲ್ ಸರ್ವೀಸ್‌ಗಳಿಗೆ ಬಾಡಿಗೆ! ಎಪಿಎಂಸಿಗೆ ಕೋಟ್ಯಂತರ ರೂಪಾಯಿ ಆದಾಯ ನಷ್ಟ!**



**ಬಳ್ಳಾರಿ, ಜೂ 8:**.ರೈತರಿಗೆ ಅನುಕೂಲ ಮಾಡಿಕೊಡಲು ಮತ್ತು ಕೃಷಿ ಉತ್ಪನ್ನಗಳ ವ್ಯಾಪಾರವನ್ನು ಉತ್ತೇಜಿಸಲು ಸರ್ಕಾರ ನೀಡಿದ ಎಪಿಎಂಸಿ (APMC) ನಿವೇಶನಗಳು ಕೆಲ ವ್ಯಕ್ತಿಗಳ ಪಾಲಿಗೆ ಹಣ ಗಳಿಸುವ ದಾರಿಯಾಗಿ ಮಾರ್ಪಟ್ಟಿವೆ.

ಕರ್ನಾಟಕ ಎಪಿಎಂಸಿ ಕಾಯ್ದೆಯ ಚೌಕಟ್ಟಿನಲ್ಲಿರುವ ಲೋಪದೋಷಗಳನ್ನು ಬಂಡವಾಳ ಮಾಡಿಕೊಳ್ಳುತ್ತಿರುವ ಕೆಲವು ಹಂಚಿಕೆದಾರರು, ಮಾರುಕಟ್ಟೆ ಪ್ರಾಂಗಣದಲ್ಲಿರುವ ಕೋಟ್ಯಂತರ ರೂಪಾಯಿ ಬೆಲೆಬಾಳುವ ಸರ್ಕಾರಿ ಆಸ್ತಿಗಳನ್ನು ಕಡಿಮೆ ಬೆಲೆಗೆ 8–10 ಸಾವಿರ ತಮ್ಮದಾಗಿಸಿಕೊಂಡು, (ಬಾಡಿಗೆಗೆ, ಲೀಸಿಗೆ) ನಂತರ ಅವುಗಳನ್ನು ನಿಯಮ ಬಾಹಿರವಾಗಿ ಕಮರ್ಷಿಯಲ್ ದಂಧೆಗೆ 30–50 ಸಾವಿರಕ್ಕೆ ಬಾಡಿಗೆಗೆ ನೀಡುತಿದ್ದಾರೆ.

ಬಳ್ಳಾರಿ ಎಪಿಎಂಸಿ ಮಾರುಕಟ್ಟೆಯಲ್ಲಿ ಪ್ರಸ್ತುತ ನಡೆಯುತ್ತಿರುವ ಈ ಬಾಡಿಗೆ ದಂಧೆ ಮಾರುಕಟ್ಟೆ ಸಮಿತಿಯ ಅಸ್ತಿತ್ವಕ್ಕೆ ಧಕ್ಕೆ ತರುತ್ತಿದೆ.

**ಕೃಷಿ ವ್ಯಾಪಾರ ಬದಿಗಿಟ್ಟು.. ಬಾಡಿಗೆ ದಂಧೆಗೆ ಇಳಿದ ಹಂಚಿಕೆದಾರರು!**

ಕೃಷಿ ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವಂತವಾಗಿ ಮಳಿಗೆ ಅಥವಾ ಗೋದಾಮುಗಳನ್ನು ನಿರ್ಮಿಸಲು ಸಾಧ್ಯವಾಗದ ನೈಜ ವ್ಯಾಪಾರಿಗಳಿಗಾಗಿ ಸರ್ಕಾರ ಲೀಸ್–ಕಮ್–ಸೇಲ್ ಪದ್ಧತಿಯನ್ನು ಜಾರಿಗೆ ತಂದಿದೆ. ಇದರ ಪ್ರಕಾರ, ಆರಂಭದಲ್ಲಿ ನಿರ್ದಿಷ್ಟ ಅವಧಿಗೆ ನಿವೇಶನವನ್ನು ಗುತ್ತಿಗೆ ನೀಡಲಾಗುತ್ತದೆ. ಆ ಅವಧಿಯೊಳಗೆ ಅಲ್ಲಿ ಮಳಿಗೆ ನಿರ್ಮಿಸಿ, ನಿರಂತರವಾಗಿ ಕೃಷಿ ವ್ಯಾಪಾರ ಮಾಡುತ್ತಾ, ಮಾರುಕಟ್ಟೆ ಶುಲ್ಕವನ್ನು ಸರಿಯಾಗಿ ಪಾವತಿಸಿದರೆ, ಗುತ್ತಿಗೆ ಅವಧಿ ಮುಗಿದ ನಂತರ ಆ ಆಸ್ತಿಯನ್ನು ಅಬ್ಸಲ್ಯೂಟ್ ಸೇಲ್ ಡೀಡ್ (ಸಂಪೂರ್ಣ ನೋಂದಣಿ) ಮೂಲಕ ವ್ಯಾಪಾರಿಯ ಹೆಸರಿಗೆ ಮಾಡಿಕೊಡಲಾಗುತ್ತದೆ.

ಆದರೆ, ಅಸಲಿ ಆಟ ಆರಂಭವಾಗುವುದೇ ಇಲ್ಲಿಂದ. ಒಮ್ಮೆ ಸೇಲ್ ಡೀಡ್ ನೋಂದಣಿ ಪೂರ್ಣಗೊಳ್ಳುತ್ತಿದ್ದಂತೆ, ಹಂಚಿಕೆದಾರರು ತಾವು ಮಾಡಬೇಕಾದ ಕೃಷಿ ವ್ಯಾಪಾರವನ್ನು ಸಂಪೂರ್ಣವಾಗಿ ನಿಲ್ಲಿಸಿ, ಕಾನೂನು ನಿಯಮಗಳನ್ನು ಗಾಳಿಗೆ ತೂರುತ್ತಿದ್ದಾರೆ. ಬಳ್ಳಾರಿ ಎಪಿಎಂಸಿಯ ಹಲವು ಪ್ರಮುಖ ಪ್ಲಾಟ್‌ಗಳಲ್ಲಿ ಕಟ್ಟಡಗಳನ್ನು ನಿರ್ಮಿಸಿ, ಅವುಗಳನ್ನು ಖಾಸಗಿ ಪಾರ್ಸೆಲ್ ಸರ್ವೀಸ್‌ಗಳಿಗೆ, ಕೊರಿಯರ್ ಕಚೇರಿಗಳಿಗೆ ಮತ್ತು ಲಾಜಿಸ್ಟಿಕ್ಸ್ ಕಂಪನಿಗಳಿಗೆ,ಕೂಲ್ ಡ್ರಿಂಕ್,ಕಿರಾಣಿ ಅಂಗಡಿಗಳಿಗೆ, ಫ್ರಿಜ್ಜ್ ಅಂಗಡಿಗಳಿಗೆ ಬಾಡಿಗೆಗೆ ನೀಡುತ್ತಿದ್ದಾರೆ.


ಈ ಕಾನೂನುಬಾಹಿರ ಬಾಡಿಗೆಯ ಮೂಲಕ ಖಾಸಗಿ ವ್ಯಕ್ತಿಗಳು ತಿಂಗಳಿಗೆ ರೂ. 20,000 ದಿಂದ ರೂ. 50,000 ವರೆಗೂ ಬಾಡಿಗೆ ಹಣವನ್ನು ತಮ್ಮ ಜೇಬಿಗೆ ಇಳಿಸಿಕೊಳ್ಳುತ್ತಿದ್ದಾರೆ. ಸರ್ಕಾರಿ ಜಾಗವನ್ನು ಬಳಸಿಕೊಂಡು ಖಾಸಗಿ ವ್ಯಕ್ತಿಗಳು ಲಕ್ಷ ಲಕ್ಷ ಗಳಿಸುತ್ತಿದ್ದರೆ. ಈ ಆಸ್ತಿಗಳಿಂದ ಎಪಿಎಂಸಿಗೆ ಬರುವ ಪ್ರತ್ಯಕ್ಷ ಬಾಡಿಗೆ ಆದಾಯ ಮಾತ್ರ ಸಂಪೂರ್ಣ ಶೂನ್ಯವಾಗಿದೆ.

**ಎಪಿಎಂಸಿಗೆ ಡಬಲ್ ಲಾಸ್.. ಕೈಕಟ್ಟಿ ಕುಳಿತ ಅಧಿಕಾರಿಗಳು**

ಈ ವ್ಯವಹಾರದಿಂದ ಮಾರುಕಟ್ಟೆ ಸಮಿತಿಗೆ ಎರಡು ರೀತಿಯಲ್ಲಿ ನಷ್ಟವಾಗುತ್ತಿದೆ. ಒಂದೆಡೆ ಬರಬೇಕಾದ ಬಾಡಿಗೆ ಆದಾಯ ಸಿಗುತ್ತಿಲ್ಲ, ಇನ್ನೊಂದೆಡೆ ಅಲ್ಲಿ ಈರುಳ್ಳಿ, ಹತ್ತಿ ಅಥವಾ ಧಾನ್ಯಗಳಂತಹ ಯಾವುದೇ ಕೃಷಿ ವಹಿವಾಟು ನಡೆಯುತ್ತಿಲ್ಲ. ಇದರಿಂದಾಗಿ ಎಪಿಎಂಸಿಗೆ ಸಿಗಬೇಕಾದ ಮಾರುಕಟ್ಟೆ ಶುಲ್ಕ ಕೂಡ ಸಂಪೂರ್ಣವಾಗಿ ಕೈತಪ್ಪಿ ಹೋಗುತ್ತಿದೆ. ಈ ಅಕ್ರಮಗಳ ವಿರುದ್ಧ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಲು ಕಾನೂನಿನ ಲೋಪದೋಷಗಳೇ ಅಡ್ಡಿಯಾಗಿವೆ. ಆಸ್ತಿ ಕೇವಲ ಗುತ್ತಿಗೆಯಲ್ಲಿದ್ದಾಗ ನಿಯಮ ಉಲ್ಲಂಘಿಸಿದರೆ ಅಧಿಕಾರಿಗಳು ತಕ್ಷಣ ನೋಂದಣಿ ರದ್ದುಪಡಿಸಬಹುದು. ಆದರೆ, ಒಮ್ಮೆ ಸೇಲ್ ಡೀಡ್ ಆದ ನಂತರ ಅದು ಕಾನೂನುಬದ್ಧವಾಗಿ ಖಾಸಗಿ ಆಸ್ತಿಯಾಗಿ ಬದಲಾಗುತ್ತದೆ. ಅಧಿಕಾರಿಗಳು ಕ್ರಮ ಕೈಗೊಳ್ಳಲು ಮುಂದಾದರೂ, ಹಂಚಿಕೆದಾರರು ಸಿವಿಲ್ ನ್ಯಾಯಾಲಯಗಳ ಮೊರೆ ಹೋಗಿ ಸ್ಟೇ ಆರ್ಡರ್ ತರುತ್ತಿದ್ದಾರೆ. ಕೋರ್ಟ್‌ನಲ್ಲಿ ವರ್ಷಗಟ್ಟಲೆ ಪ್ರಕರಣ ನಡೆಯುವವರೆಗೂ ತಮ್ಮ ಬಾಡಿಗೆ ದಂಧೆಯನ್ನು ರಾಜಾರೋಷವಾಗಿ ಮುಂದುವರಿಸುತ್ತಿದ್ದಾರೆ. ನೋಂದಣಿ ಮಾಡುವ ಸಮಯದಲ್ಲೇ "ಭವಿಷ್ಯದಲ್ಲಿ ಎಂದಾದರೂ ಈ ಜಾಗವನ್ನು ಕೃಷಿಯೇತರ ಉದ್ದೇಶಗಳಿಗೆ ಬಳಸಿದರೆ, ಈ ಸೇಲ್ ಡೀಡ್ ರದ್ದಾಗಿ ಆಸ್ತಿ ಸ್ವಯಂಚಾಲಿತವಾಗಿ ಮತ್ತೆ ಸರ್ಕಾರಕ್ಕೆ ಸೇರುತ್ತದೆ" ಎನ್ನುವ ಕಠಿಣವಾದ ರಿವರ್ಷನರೀ ಕ್ಲಾಸ್ (Reversionary Clause) ಅನ್ನು ದಾಖಲೆಗಳಲ್ಲಿ ಸೇರಿಸದಿರುವುದೇ ಖಾಸಗಿ ವ್ಯಕ್ತಿಗಳಿಗೆ ದೊಡ್ಡ ಪ್ಲಸ್ ಪಾಯಿಂಟ್ ಆಗಿದೆ.

**ಅಕ್ರಮಗಳಿಗೆ ಕಡಿವಾಣ ಬೀಳಬೇಕಿದೆ**

ಬಳ್ಳಾರಿ ಎಪಿಎಂಸಿ ಮಾರುಕಟ್ಟೆಯಲ್ಲಿ ಸರ್ಕಾರಿ ಆಸ್ತಿಗಳ ದುರುಪಯೋಗಕ್ಕೆ ಕಡಿವಾಣ ಹಾಕಬೇಕಾದರೆ ತಕ್ಷಣವೇ ಉನ್ನತ ಅಧಿಕಾರಿಗಳು ಮತ್ತು ಸರ್ಕಾರ ಎಚ್ಚೆತ್ತುಕೊಳ್ಳಬೇಕಿದೆ. ಮಾರುಕಟ್ಟೆ ಪ್ರಾಂಗಣದ ಪ್ರತಿಯೊಂದು ಪ್ಲಾಟ್ ಮತ್ತು ಮಳಿಗೆಯಲ್ಲಿ ನಡೆಯುತ್ತಿರುವ ವ್ಯಾಪಾರದ ಬಗ್ಗೆ ಸಮಗ್ರ ಸಮೀಕ್ಷೆ ನಡೆಸಬೇಕಿದೆ. ನಿಯಮ ಉಲ್ಲಂಘಿಸಿ ಕಮರ್ಷಿಯಲ್ ಮತ್ತು ಪಾರ್ಸೆಲ್ ಸರ್ವೀಸ್‌ಗಳಿಗೆ ಬಾಡಿಗೆ ನೀಡಿರುವ ಕಟ್ಟಡಗಳ ಸೇಲ್ ಡೀಡ್ ರದ್ದುಪಡಿಸಲು ವಿಶೇಷ ಸುಗ್ರೀವಾಜ್ಞೆ ಅಥವಾ ಕಾಯ್ದೆ ತಿದ್ದುಪಡಿ ತರಬೇಕಿದೆ. ಅಕ್ರಮವಾಗಿ ಬಳಕೆಯಾಗುತ್ತಿರುವ ಕಟ್ಟಡಗಳನ್ನು ತಕ್ಷಣವೇ ಸೀಜ್ ಮಾಡಿ, ಸರ್ಕಾರದ ವಶಕ್ಕೆ ಪಡೆಯದಿದ್ದರೆ ಎಪಿಎಂಸಿ ಆಸ್ತಿಗಳು ಖಾಸಗಿ ವ್ಯಕ್ತಿಗಳ ಜಾಗೀರಾಗಿ ಬದಲಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಸೋಮವಾರ ಕೆಲ ದಲ್ಲಾಳಿ ವರ್ತಕರು ಕೃಷಿ ಉತ್ಪನ್ನ ಮಾರುಕಟ್ಟೆಯ ಕಾರ್ಯದರ್ಶಿ ಅವರನ್ನು ಭೇಟಿಯಾಗಿ ಈ ದಂಧೆಯನ್ನು ಕೂಡಲೇ ತಡೆಹಿಡಿಯಬೇಕೆಂದು ಆಕ್ರೋಶವನ್ನು ವ್ಯಕ್ತ ಪಡಿಸಿದರು.




ತಿರುಪತಿ, ಜೂ.8: ಬೆಂಗಳೂರು ಮೂಲದ ನಿರ್ಮಾಣ ಕಂಪನಿಯಾದ ಸಮುದ್ರ ಗ್ರೂಪ್‌ನ ನಿರ್ದೇಶಕ ನವೀನ್ ಕುಮಾರ್ ಭಾನುವಾರ ಟಿಟಿಡಿ ಶ್ರೀ ವೆಂಕಟೇಶ್ವರ ಪ್ರಾಣದಾನ ಟ್ರಸ್ಟ್‌ಗೆ 11,11,111 ಲಕ್ಷ ರೂ. ದೇಣಿಗೆ ನೀಡಿದ್ದಾರೆ. ತಿರುಮಲದ ಟಿಟಿಡಿ ಹೆಚ್ಚುವರಿ ಇ.ಓ ಸಿಎಚ್ ವೆಂಕಯ್ಯ ಚೌಧರಿ ಅವರಿಗೆ ದೇಣಿಗೆ ಡಿಡಿಯನ್ನು ನವೀನ್‌ಕುಮಾರ್ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ದಾನಿಯ ಕುಟುಂಬ ಸದಸ್ಯರಾದ ನಾಗರಾಮ್, ಮುರಳಿ ಮತ್ತಿತರರು ಹಾಜರಿದ್ದರು.



ತಿರುಪತಿ, ಜೂ.8: ಹೈದರಾಬಾದ್ ಮೂಲದ ಸಾಫ್ಟ್‌ವೇರ್ ಎಂಜಿನಿಯರ್ ಭೂರಂ ತಿರುಮಲ ದೀಕ್ಷಿತ್ ಅವರು ಸೋಮವಾರ ಟಿಟಿಡಿ ಎಸ್.ವಿ. ಅನ್ನದಾನಂ ಟ್ರಸ್ಟ್‌ಗೆ 10 ಲಕ್ಷ ರೂ. ದೇಣಿಗೆ ನೀಡಿದ್ದಾರೆ. ದಾನಿ ಹೈದರಾಬಾದ್‌ನಲ್ಲಿರುವ ತಮ್ಮ ಕಚೇರಿಯಲ್ಲಿ ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಅವರಿಗೆ ದೇಣಿಗೆ ಡಿಡಿಯನ್ನು ಹಸ್ತಾಂತರಿಸಿದರು. ದಾನಿಯ ತಂದೆ, ನಿವೃತ್ತ ಎಂಜಿನಿಯರ್ ಬಿ. ಜಗದೀಶ್ವರ್ ಮತ್ತು ಅವರ ಕುಟುಂಬ ಸದಸ್ಯರು ಹಾಜರಿದ್ದರು.

## ತಿರುಮಲ: ಭಕ್ತರು ಅರ್ಪಿಸಿದ ಅಕ್ಕಿ ಇ-ಹರಾಜ್



ತಿರುಮಲ/ಬಳ್ಳಾರಿ ಜೂ 08. ಜೂನ್ 11 ರಂದು ಮಿಶ್ರ ಅಕ್ಕಿ ಇ–ಹರಾಜು ಹಾಕಲಿದ್ದಾರೆ. ತಿರುಮಲ ಶ್ರೀವಾರಿ ದೇವಸ್ಥಾನ ಮತ್ತು ಟಿಟಿಡಿ ಸಂಯೋಜಿತ ದೇವಾಲಯಗಳ ಹುಂಡಿಗಳ ಮೂಲಕ ಭಕ್ತರು ಅರ್ಪಿಸಿರುವ ಅಕ್ಕಿಯನ್ನು ಜೂನ್ 11 ರಂದು ಇ–ಹರಾಜಿನ ಮೂಲಕ ಮಾರಾಟ ಮಾಡಲಾಗುತ್ತದೆ. ಸುಮಾರು 7,938 ಕೆಜಿ ಅಕ್ಕಿಯ ಒಟ್ಟು 20 ಲಾಟ್‌ಗಳನ್ನು ಹರಾಜಿಗೆ ಇಡಲಾಗುತ್ತದೆ. ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವವರು ಜೂನ್ 10 ರಂದು ಬೆಳಿಗ್ಗೆ 10 ಗಂಟೆಯೊಳಗೆ ಕೊನುಗೋಲು ಪೋರ್ಟಲ್ ಮೂಲಕ ರೂ. 50,000 ಇಎಂಡಿ ಪಾವತಿಸಬೇಕು.

ಹೆಚ್ಚಿನ ವಿವರಗಳಿಗಾಗಿ, ತಿರುಪತಿಯಲ್ಲಿರುವ ಟಿಟಿಡಿ ಮಾರ್ಕೆಟಿಂಗ್ ಕಚೇರಿಯನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು. ದೂರವಾಣಿ: 0877–2264429. ಅಲ್ಲದೆ, ಟಿಟಿಡಿ ವೆಬ್‌ಸೈಟ್ www.konugolu.ap.gov.in ಗೆ ಭೇಟಿ ನೀಡಬಹುದು ಎಂದು ತಿಳಿಸಿದ್ದಾರೆ.



**ವಿಜಯಪುರ, ಜೂ.8:** ಚಡಚಣ ತಾಲೂಕಿನ ರೈತರು ಪ್ರಸ್ತುತ ಕೃಷಿ ಚಟುವಟಿಕೆಗಳಲ್ಲಿ ನಿರತರಾಗಿದ್ದಾರೆ. ಆದರೆ, ಸ್ಥಳೀಯ ಮಾರುಕಟ್ಟೆಯಲ್ಲಿ ರಸಗೊಬ್ಬರಕ್ಕೆ ವಿಶೇಷವಾಗಿ (ಯೂರಿಯಾ/ಡಿಎಪಿ) ಅತಿಯಾದ ಬೆಲೆ ನಿಗಧಿಪಡಿಸಲಾಗಿದೆ. ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರಕ್ಕೆ ಗೊಬ್ಬರ ಮಾರಾಟ ಮಾಡಲಾಗುತ್ತಿದೆ. ಇದು ಸಣ್ಣ ಮತ್ತು ಅತಿಸಣ್ಣ ರೈತರಿಗೆ ಆರ್ಥಿಕ ಹೊರೆಯಾಗುತ್ತಿದೆ. ಆದ್ದರಿಂದ ಇದನ್ನು ಗಂಭೀರವಾಗಿ ಪರಿಗಣಿಸಿ, ನಮ್ಮ ಪ್ರದೇಶದ ಸಹಕಾರ ಸಂಘಗಳು ಅಥವಾ ಅಧಿಕೃತ ಮಾರಾಟಗಾರರಲ್ಲಿ ನಿಗದಿತ ದರದಲ್ಲಿ ರಸಗೊಬ್ಬರ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಹಾಗೂ ನಿಗದಿತ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುವ ಮಾರಟಗಾರರ ಲೈಸೆನ್ಸ್ ರದ್ದು ಪಡಿಸಿ, ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕರ್ನಾಟಕ ರಾಷ್ಟ್ರ ಸಮಿತಿ ವತಿಯಿಂದ ಚಡಚಣ ತಾಲೂಕ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

# ಎಲ್‌ಎಲ್‌ಸಿ ಕಾಲುವೆ ಬಳಿ ಘೋರ ಕೃತ್ಯ.. ಮರ್ಯಾದಾ ಹತ್ಯೆ ಶಂಕೆ





**ಮೃತ ಯುವಕ ಅನಂತಪುರ ಜಿಲ್ಲೆಯ ಬೊಲ್ಲನಗುಡ್ಡಂ ಮೂಲದ ಬಸವನಗೌಡ (27) ಎಂದು ಗುರುತಿಸಲಾಗಿದೆ**

**ಘಟನಾ ಸ್ಥಳ ಪರಿಶೀಲಿಸಿದ ರೂರಲ್ ಡಿವೈಎಸ್ಪಿ**

ಬಳ್ಳಾರಿ (ಕ್ರೈಂ): ಜೂ 08. ಬಳ್ಳಾರಿ ತಾಲೂಕು ವ್ಯಾಪ್ತಿಯ ಎಲ್‌ಎಲ್‌ಸಿ ಕಾಲುವೆ ಸುತ್ತಮುತ್ತಲಿನ ಪ್ರದೇಶವು ಭೀಕರ ಹತ್ಯೆಯೊಂದಕ್ಕೆ ಸಾಕ್ಷಿಯಾಗಿದೆ. ಯುವಕನನ್ನು ಬರ್ಬರವಾಗಿ ಹತ್ಯೆಗೈದ ದುಷ್ಕರ್ಮಿಗಳು.. ಸಾಕ್ಷ್ಯನಾಶ ಮಾಡುವ ಉದ್ದೇಶದಿಂದ ಮೃತದೇಹವನ್ನು ಬರೋಬ್ಬರಿ 13 ಕಿಲೋಮೀಟರ್ ದೂರದವರೆಗೆ ಕೊಂಡೊಯ್ದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ. ಈ ಘಟನೆಯಲ್ಲಿ ಮೃತಪಟ್ಟವನನ್ನು ಅನಂತಪುರ ಜಿಲ್ಲೆಯ ವ್ಯಾಪ್ತಿಯ ಬೊಲ್ಲನಗುಡ್ಡಂ ಪ್ರದೇಶದ ನಿವಾಸಿ ಬಸವನಗೌಡ (27) ಎಂದು ಪೊಲೀಸರು ಗುರುತಿಸಿದ್ದಾರೆ. ಪಕ್ಕಾ ಪ್ಲಾನ್ ಮಾಡಿ ಮೃತದೇಹಕ್ಕೆ ಬೆಂಕಿ ಹಚ್ಚಿದ್ದರೂ.. ಶನಿವಾರ ಸುರಿದ ಮಳೆಯಿಂದಾಗಿ ಬೆಂಕಿ ನಂದಿಹೋಗಿದ್ದು, ಶವವು ಅರ್ಧಂಬರ್ಧ ಸುಟ್ಟುಹೋಗಿ ಈ ಭೀಕರ ಘಟನೆ ಬೆಳಕಿಗೆ ಬಂದಿದೆ. ಘಟನಾ ಸ್ಥಳದಲ್ಲಿ ದೊರೆತ ಸುಳಿವು ಹಾಗೂ ಹತ್ಯೆ ನಡೆದ ರೀತಿಯನ್ನು ಗಮನಿಸಿದರೆ ಇದೊಂದು 'ಮರ್ಯಾದಾ ಹತ್ಯೆ' ಆಗಿರಬಹುದು ಎಂದು ಪೊಲೀಸರು ಬಲವಾಗಿ ಶಂಕಿಸಿದ್ದಾರೆ.

**ಬೈಕ್ ಇಲ್ಲಿದೆ.. ಶವ ಅಲ್ಲಿದೆ..**

ಎಲ್‌ಎಲ್‌ಸಿ ಕಾಲುವೆ ಬಳಿ ಕೆಲಸ ಮಾಡುತ್ತಿದ್ದ ಸಿಬ್ಬಂದಿ, ತಾಂಬ್ರಹಳ್ಳಿ ಬಳಿ (128ನೇ ಕಿಲೋಮೀಟರ್) ಕಾಲುವೆ ಏರಿಯ ಪಕ್ಕದ ಮುಳ್ಳಿನ ಪೊದೆಗಳಲ್ಲಿ ಅರ್ಧ ಸುಟ್ಟು ಕರಕಲಾದ ಸ್ಥಿತಿಯಲ್ಲಿದ್ದ ಮೃತದೇಹವನ್ನು ಗಮನಿಸಿ ಮೋಕಾ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಕಾರ್ಯಪ್ರವೃತ್ತರಾದ ಪೊಲೀಸರು ಸುತ್ತಮುತ್ತಲಿನ ಪ್ರದೇಶದಲ್ಲಿ ಶೋಧ ನಡೆಸಿದಾಗ.. ಮೃತದೇಹ ದೊರೆತ ಸ್ಥಳದಿಂದ 13 ಕಿಲೋಮೀಟರ್ ದೂರದಲ್ಲಿ (116.200 ಕಿಲೋಮೀಟರ್ ಬಳಿ) ಮೃತ ಯುವಕನಿಗೆ ಸೇರಿದ ಪಲ್ಸರ್ ಬೈಕ್, ಚಪ್ಪಲಿಗಳು ಹಾಗೂ ವಾಹನದಲ್ಲಿ ಕೆಲವು ನಿರೋಧ್ (ಕಾಂಡೋಮ್) ಪ್ಯಾಕೆಟ್‌ಗಳನ್ನು ಪತ್ತೆ ಹಚ್ಚಿದ್ದಾರೆ. ವಿಚಾರಣೆಯ ಬಳಿಕ ಮೃತದೇಹವು ಬಳ್ಳಾರಿಯ ವಿದ್ಯಾನಗರದಲ್ಲಿರುವ ಸ್ನೇಹ ಡಯಾಗ್ನೋಸ್ಟಿಕ್ ಸೆಂಟರ್‌ನಲ್ಲಿ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದ ಬಸವನಗೌಡ ಅವರದ್ದು ಎಂದು ದೃಢಪಡಿಸಿದ್ದಾರೆ.

**ಅಸಲಿಗೆ ನಡೆದಿದ್ದೇನು..**

ಪೊಲೀಸರಿಗೆ ದೊರೆತ ಸುಳಿವುಗಳ ಆಧಾರದ ಮೇಲೆ.. ಬಸವನಗೌಡ ಯಾವುದೋ ಅಪರಿಚಿತ ಯುವತಿಯೊಂದಿಗೆ 116ನೇ ಕಿಲೋಮೀಟರ್ ಬಳಿಗೆ ಬಂದಿರಬಹುದು. ಅದೇ ಸಮಯದಲ್ಲಿ ಯುವತಿಯ ಸಂಬಂಧಿಕರು ಅಥವಾ ಪರಿಚಯಸ್ಥರು ಅವರನ್ನು ಹಿಂಬಾಲಿಸಿ ಬಂದು ದಾಳಿ ಮಾಡಿರಬಹುದು ಎಂದು ಭಾವಿಸಲಾಗಿದೆ.

ತೀವ್ರ ಆಕ್ರೋಶಗೊಂಡ ಅವರು ಯುವಕನನ್ನು ಅಲ್ಲಿಯೇ ಹತ್ಯೆಗೈದು, ಬಳಿಕ ಸಾಕ್ಷ್ಯವನ್ನು ಮರೆಮಾಚುವ ಉದ್ದೇಶದಿಂದ ಮೃತದೇಹವನ್ನು ಬೇರೊಂದು ವಾಹನದಲ್ಲಿ 128ನೇ ಕಿಲೋಮೀಟರ್ ಬಳಿಗೆ ಕೊಂಡೊಯ್ದಿರಬಹುದು ಎಂದು ಶಂಕಿಸಲಾಗಿದೆ. ಯಾರಿಗೂ ಅನುಮಾನ ಬಾರದಂತೆ ಕಾಲುವೆ ಏರಿಯ ಪಕ್ಕದಲ್ಲಿರುವ ಮುಳ್ಳಿನ ಪೊದೆಗಳಲ್ಲಿ ಶವವನ್ನು ಎಸೆದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ ಎಂದು ಪೊಲೀಸರು ಅಭಿಪ್ರಾಯ ಪಟ್ಟಿದ್ದಾರೆ.

**ಘಟನಾ ಸ್ಥಳದಲ್ಲಿ ರೂರಲ್ ಡಿವೈಎಸ್ಪಿ ಪರಿಶೀಲನೆ:**

ಈ ಭೀಕರ ಘಟನೆ ಸ್ಥಳೀಯವಾಗಿ ತೀವ್ರ ಸಂಚಲನ ಮೂಡಿಸುತ್ತಿದ್ದಂತೆ, ರೂರಲ್ ಡಿವೈಎಸ್ಪಿ ಅವರು ತಕ್ಷಣವೇ ಘಟನಾ ಸ್ಥಳಕ್ಕೆ ಧಾವಿಸಿದ್ದಾರೆ. ಹತ್ಯೆ ನಡೆದಿರಬಹುದು ಎಂದು ಭಾವಿಸಲಾದ 116.200 ಕಿಲೋಮೀಟರ್ ಪ್ರದೇಶ ಮತ್ತು ಮೃತದೇಹವನ್ನು ಸುಟ್ಟುಹಾಕಿದ 128 ಕಿಲೋಮೀಟರ್ ಪ್ರದೇಶಗಳನ್ನು ಅವರು ಕೂಲಂಕಷವಾಗಿ ಪರಿಶೀಲಿಸಿ, ಪರಿಸ್ಥಿತಿಯನ್ನು ಅವಲೋಕಿಸಿದ್ದಾರೆ. ತನಿಖೆಯನ್ನು ಚುರುಕುಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಈ ನಿಟ್ಟಿನಲ್ಲಿ ಮೋಕಾ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ಮೃತ ಯುವಕನ ಮೊಬೈಲ್ ಕಾಲ್ ಡೇಟಾ ಹಾಗೂ ಆ ಮಾರ್ಗದಲ್ಲಿರುವ ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಆರೋಪಿಗಳಿಗಾಗಿ ತೀವ್ರ ಶೋಧ ನಡೆಸುತ್ತಿದ್ದಾರೆ.

# ಬೀದರ್ ಜಿಲ್ಲೆಯಲ್ಲಿ ಈ ವರ್ಷವೂ ಸೋಯಾ ಅವರೆ ಬಿತ್ತನೆಗೆ ರೈತರ ಉತ್ಸುಕತೆ: ವರುಣನ ನಿರೀಕ್ಷೆ



ಬೀದರ, ಜೂ. 8: ಈಗಾಗಲೇ ಮುಮಗಾರು ಮಳೆಯು ಸಣ್ಣ ಪ್ರಮಾಣದಲ್ಲಿ ಜಿಲ್ಲೆಯಾದ್ಯಮತ ಆರಂಭವಾಗಿದ್ದು, ಮುಂಗಾರು ಬಿತ್ತನೆಗೆ ಬಹುತೇಕ ಸಿದ್ಧತೆ ಮಾಡಿಕೊಂಡಿರುವ ಜಿಲ್ಲೆಯ ರೈತರು ಭೂಮಿ ಸಂಪೂರ್ಣ ಹಸಿಯಾಗುವಂತೆ ವರುಣನ ನಿರೀಕ್ಷೆಯಲ್ಲಿದ್ದಾರೆ.

ಸಾಮಾನ್ಯವಾಗಿ ಜೂನ್ 7ರಂದು ಮೃಗಪ್ರವೇಶ ನಡೆದು, ಮಳೆಗಾಲಕ್ಕೆ ನಾಂದಿ ಹಾಡಲಿದೆ. ಅದರಂತೆ ಜೂನ್ ಏಳರಂದು ಅಲ್ಪಸ್ವಲ್ಪ ಮಳೆ ಸುರಿದಿದೆ. ಆದರೆ ಬಿರುಬೇಸಿಗೆಯಿಂದ ಕಾಯ್ದಿರುವ ಭೂಮಿತಾಯಿಯ ಒಡಲು ಇನ್ನೂ ಹಸಿಯಾಗಬೇಕಿದೆ. ಸಮೃದ್ಧ ಹಸಿಯಗುವಂಥ ಮಳೆರಾಯನ ಆಗಮನ ವಿಳಂಬವಾಗಿರುವ ಕಾರಣ ರೈತರು ಬಿತ್ತನೆಗೆ ಕಾಯಬೇಕಾಗಿದೆ.

ರೈತರು ಈಗಾಗಲೇ ಹೊಲದಲ್ಲಿನ ಕಸ, ಕಡ್ಡಿ ಆಯ್ದು, ನೇಗಿಲು, ಕುಂಟಿ ಹೊಡೆದಿದ್ದಾರೆ. ರೋಟವೇಟರ್ ಮೂಲಕ ಭೂಮಿಯನ್ನು ಬಿತ್ತನೆಗೆ ಹದಗೊಳಿಸಿದ್ದಾರೆ. ಎತ್ತುಗಳು ಹಾಗೂ ಕಾರ್ಮಿಕರ ಕೊರತೆಯಿಂದಾಗಿ ಬಹುತೇಕರು ಟ್ರ್ಯಾಕ್ಟರ್ ಬಳಸಿಯೇ ಸಿದ್ಧತಾ ಕಾರ್ಯಗಳನ್ನು ಕೈಗೊಂಡಿದ್ದಾರೆ.

ತೈಲ ಬೆಲೆ ಹೆಚ್ಚಳದ ಕಾರಣ ಟ್ರ್ಯಾಕ್ಟರ್ ಬಾಡಿಗೆಯಲ್ಲೂ ಏರಿಕೆ ಆಗಿದ್ದು, ಕೃಷಿಗಾಗಿ ದುಬಾರಿ ವೆಚ್ಚ ಮಾಡಬೇಕಾದ ಅನಿವಾರ್ಯತೆಯಲ್ಲಿ ಇದ್ದಾರೆ.

ಬಿತ್ತನೆಗಾಗಿ ಹೆಚ್ಚಿನವರು ರೈತ ಸಂಪರ್ಕ ಕೇಂದ್ರಗಳಲ್ಲಿ ಉದ್ದು, ಹೆಸರು, ಸೋಯಾ ಅವರೆ, ತೊಗರಿ ಬೀಜ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ರಸಗೊಬ್ಬರ ಖರೀದಿಸಿದ್ದಾರೆ. ಸೋಯಾಬೀನ್ ಬೀಜಕ್ಕೆ ಈ ವರ್ಷವೂ ಹೆಚ್ಚಿನ ಬೇಡಿಕೆ ಕಂಡು ಬಂದಿದೆ.

'ಮುಂಗಾರು ಬಿತ್ತನೆಗೆ ಹೊಲ ಸಿದ್ಧಗೊಳಿಸಿದ್ದೇನೆ. ಈ ಬಾರಿ ನಿಸರ್ಗ ಕೈಹಿಡಿಯಲಿದೆ ಎಂಬ ಆಶಾಭಾವದಲ್ಲಿ ಇದ್ದೇನೆ. 80 ರಿಂದ 100 ಮೀ.ಮೀ ಮಳೆಯಾದ ನಂತರ ಬಿತ್ತನೆ ಕಾರ್ಯ ಆರಂಭಿಸಲಿದ್ದೇನೆ' ಎಂದು ಗುಮ್ಮಾ ಗ್ರಾಮದ ರೈತ ಪ್ರಶಾಂತ ಪಾಟೀಲ ತಿಳಿಸುತ್ತಾರೆ.

ಪಿಕೆಪಿಎಗಳಲ್ಲಿ ರೈತರಿಗೆ ಅಗತ್ಯವಿರುವಷ್ಟು ರಸಗೊಬ್ಬರ ಸಿಗುತ್ತಿಲ್ಲ. ಯುರಿಯಾ, ಡಿಎಪಿ ರಸಗೊಬ್ಬರ ಮಾರುಕಟ್ಟೆಯಲ್ಲೂ ದೊರೆಯುತ್ತಿಲ್ಲ. ವ್ಯಾಪಾರಿಗಳು ಕೃತಕ ಅಭಾವ ಸೃಷ್ಟಿಸಿ ಅಧಿಕ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. 50 ಕೆ.ಜಿ. ಚೀಲಕ್ಕೆ ರೈತರು ಶೇ 30 ರಿಂದ ಶೇ 40 ರಷ್ಟು ಅಧಿಕ ಹಣ ಕೊಟ್ಟು ಖರೀದಿಸಬೇಕಾಗುತ್ತಿದೆ' ಎಂದು ಮಂದಕನಳ್ಳಿಯ ಚನ್ನಬಸಪ್ಪ ಗೌರಶೆಟ್ಟಿ, ಕಮಠಾಣದ ಸೂರ್ಯಕಾಂತ ಕ್ಯಾಸಾ ಹೇಳುತ್ತಾರೆ.

ಬೀದರ್ ತಾಲ್ಲೂಕಿನಲ್ಲಿ ಬಿತ್ತನೆ ಬೀಜಕ್ಕೆ ಕೊರತೆ ಇಲ್ಲ. 6 ರೈತ ಸಂಪರ್ಕ ಕೇಂದ್ರ ಹಾಗೂ 22 ಹೆಚ್ಚುವರಿ ಕೇಂದ್ರಗಳ ಮೂಲಕ ಈಗಾಗಲೇ ಶೇ 75ರಷ್ಟು ರೈತರಿಗೆ ಬೀಜ ವಿತರಿಸಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕಿ ಆರತಿ ಪಾಟೀಲ ಮಾಹಿತಿ ನೀಡಿದ್ದಾರೆ.

8 ಸಾವಿರ ಕ್ವಿಂಟಲ್ ಸೋಯಾ ಅವರೆ, 50 ಕ್ವಿಂಟಲ್ ತೊಗರಿ, 20 ಕ್ವಿಂಟಲ್ ಉದ್ದು ಹಾಗೂ 10 ಕ್ವಿಂಟಲ್ ಹೆಸರು ಬೀಜಗಳನ್ನು ವಿತರಣೆ ಮಾಡಲಾಗಿದೆ' ಎಂದು ತಿಳಿಸುತ್ತಾರೆ. ಅತಿಯಾದ ರಾಸಾಯನಿಕ ಗೊಬ್ಬರ ಬಳಕೆಯಿಂದ ಮಣ್ಣಿನ ಫಲವತ್ತತೆ ಮೇಲೆ ಪರಿಣಾಮ ಉಂಟಾಗಲಿದೆ. ಕಾರಣ, ರೈತರು ಸಂಯುಕ್ತ ಗೊಬ್ಬರ ಬಳಕೆಗೆ ಮುಂದಾಗಬೇಕು ಎಂದು ಸಲಹೆ ಮಾಡುತ್ತಾರೆ. ಸಹಾಯಕ ಕೃಷಿ ನಿರ್ದೇಶಕಿ ಆರತಿ ಪಾಟೀಲ. ರೈತರು ಯೂರಿಯಾ, ಡಿಎಪಿ ಗೊಬ್ಬರದ ಬದಲಾಗಿ ಸಂಯುಕ್ತ ಗೊಬ್ಬರಗಳಾದ 20:20:0:13, 12:32:16, 15:15:15, 14:35:14, ನ್ಯಾನೋ ಯಾ ನ್ಯಾನೋ ಡಿಎಪಿ ಗೊಬ್ಬರ ಬಳಸಬೇಕು ಎಂದು ಸೂಚಿಸಿದ್ದಾರೆ.

# ಬಳ್ಳಾರಿ ಜಿಲ್ಲೆಯಲ್ಲಿ ನಿರಂತರ ಮಳೆ: ನೀರು ನಿಲ್ಲದಂತೆ ಎಚ್ಚರಿಕೆ ವಹಿಸಲು ಡಾ.ಯಲ್ಲಾ ರಮೇಶ್ ಬಾಬು ಸೂಚನೆ



ಬಳ್ಳಾರಿ, ಜೂ.8: ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಭಾರಿ ಮಳೆಯ ಹಿನ್ನೆಲೆಯಲ್ಲಿ ಸಾರ್ವಜನಿಕ ಆರೋಗ್ಯ ರಕ್ಷಣೆಗಾಗಿ ಮಳೆ ನೀರು ನಿಲ್ಲದಂತೆ ತಡೆಯಲು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸೂಚಿಸಿದ್ದಾರೆ.

ಬಳ್ಳಾರಿ ನಗರದ ಹಲವು ವಾರ್ಡ್ ಹಾಗೂ ಪ್ರದೇಶಗಳಲ್ಲಿ ವಿವಿಧ ಕಾರಣಗಳಿಂದ ಮಳೆ ನೀರು ಸಂಗ್ರಹಣೆಯಾಗಿದ್ದು, ಇದು ಸಾರ್ವಜನಿಕ ಆರೋಗ್ಯಕ್ಕೆ ದೊಡ್ಡ ಆಪತ್ತನ್ನು ತಂದೊಡ್ಡಬಹುದು. ಭಾರಿ ಮಳೆಯು ಕುಡಿಯುವ ನೀರಿನ ಸರಬರಾಜನ್ನು ಕಲುಷಿತಗೊಳಿಸುವುದಲ್ಲದೆ, ಮೂಲಸೌಕರ್ಯಗಳಿಗೆ ಹಾನಿ ಉಂಟುಮಾಡುತ್ತದೆ. ಅಲ್ಲದೆ, ನಿಂತ ನೀರು ರೋಗಾಣುಗಳ ಸಂತಾನೋತ್ಪತ್ತಿ ಕೇಂದ್ರವಾಗುವ ಸಾಧ್ಯತೆ ಇರುವುದರಿಂದ ಆರೋಗ್ಯ ಇಲಾಖೆಯು ತಕ್ಷಣವೇ ರೋಗ ನಿಯಂತ್ರಣ ಕ್ರಮಗಳನ್ನು ಜಾರಿಗೆ ತರಲಿದೆ ಎಂದು ಅವರು ತಿಳಿಸಿದ್ದಾರೆ.

**ರೋಗವಾಹಕಗಳಿಂದ ಹರಡುವ ರೋಗಗಳು:** ಟೈರ್‌ಗಳು, ಕೂಲರ್‌ಗಳು ಮತ್ತು ರಸ್ತೆ ಗುಂಡಿಗಳಲ್ಲಿ ನಿಲ್ಲುವ ಮಳೆನೀರು ಡೆಂಗ್ಯೂ, ಮಲೇರಿಯಾ ಮತ್ತು ಚಿಕೂನ್‌ಗುನ್ಯಾ ಹರಡುವ ಸೊಳ್ಳೆಗಳಿಗೆ ಆಶ್ರಯತಾಣವಾಗುತ್ತದೆ.

**ನೀರಿನಿಂದ ಹರಡುವ ರೋಗಗಳು:** ಪ್ರವಾಹದ ನೀರು ಒಳಚರಂಡಿ ವ್ಯವಸ್ಥೆಯನ್ನು ಸೇರಿ ಕುಡಿಯುವ ನೀರನ್ನು ಕಲುಷಿತಗೊಳಿಸುವುದರಿಂದ ಕಾಲರಾ, ಟೈಫಾಯಿಡ್ ಮತ್ತು ಜಠರದುರಿತದ ಭೀತಿ ಎದುರಾಗುತ್ತದೆ.

**ಸೋಂಕುಗಳು:** ತೇವಾಂಶ ಮತ್ತು ಪ್ರವಾಹದ ನೀರಿಗೆ ದೀರ್ಘಕಾಲ ಒಡ್ಡಿಕೊಳ್ಳುವುದರಿಂದ ಇನ್ಫ್ಲು ?ಲಯೆನ್ಸ, ಆಸ್ತಮಾ ಮತ್ತು ಶಿಲೀಂಧ್ರಗಳ ಸೋಂಕು ಹೆಚ್ಚಾಗಬಹುದು. ಹಠಾತ್ ಪ್ರವಾಹ, ಭೂಕುಸಿತ, ಬೆಳೆ ವೈಫಲ್ಯ ಹಾಗೂ ಕಟ್ಟಡಗಳ ಕುಸಿತದಿಂದಾಗಿ ಜನ–ಜಾನುವಾರುಗಳ ಜೀವಕ್ಕೆ ಹಾನಿಯಾಗುವ ಸಾಧ್ಯತೆ ಇರುತ್ತದೆ.

**ಆರೋಗ್ಯ ಇಲಾಖೆಯಿಂದ ಕ್ರಮ:**

ಸೊಳ್ಳೆ ಮತ್ತು ಲಾರ್ವಾ ನಿಯಂತ್ರಣ: ನಿಂತ ನೀರನ್ನು ಖಾಲಿ ಮಾಡಲು ಸಮುದಾಯ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗುವುದು. ಸೊಳ್ಳೆಗಳ ಜೈವಿಕ ನಿಯಂತ್ರಣಕ್ಕಾಗಿ ಕೊಳಗಳು ಮತ್ತು ನಿರಂತರ ಜಲಮೂಲಗಳಿಗೆ ಲಾರ್ವಾ ಭಕ್ಷಕ ಮೀನುಗಳನ್ನು (ಗ್ಯಾಂಬೂಸಿಯಾ ಅಥವಾ ಗಪ್ಪಿ) ಬಿಡಲಾಗುವುದು. ಹೆಚ್ಚಿನ ಅಪಾಯವಿರುವ ವಲಯಗಳಲ್ಲಿ ಲಾರ್ವಿಸೈಡ್‌ಗಳ ಬಳಕೆ ಮತ್ತು ಫಾಗಿಂಗ್ ಮಾಡಲಾಗುವುದು.

**ಶುದ್ಧ ಕುಡಿಯುವ ನೀರು ಮತ್ತು ನೈರ್ಮಲ್ಯ:**

ಸ್ಥಳೀಯ ನೀರು ಸರಬರಾಜನ್ನು ನಿರಂತರವಾಗಿ ಪರಿಶೀಲಿಸಿ, ಅಗತ್ಯವಿರುವ ಪ್ರದೇಶಗಳಿಗೆ ಕ್ಲೋರಿನೇಷನ್ ಮಾತ್ರೆಗಳನ್ನು ವಿತರಿಸಲಾಗುವುದು. ನೀರು ತುಂಬಿದ ಪ್ರದೇಶಗಳ ತ್ವರಿತ ಒಳಚರಂಡಿ ವ್ಯವಸ್ಥೆ ಮತ್ತು ಸೋರುತ್ತಿರುವ ಪೈಪ್‌ಲೈನ್‌ಗಳ ದುರಸ್ತಿಗೆ ಮುನ್ಸಿಪಲ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲಾಗುವುದು.

**ವೈದ್ಯಕೀಯ ಸಿದ್ಧತೆ ಮತ್ತು ಕಣ್ಗಾವಲು:**

ಜಲಾವೃತ ಮತ್ತು ಗ್ರಾಮೀಣ ಪ್ರದೇಶಗಳಿಗೆ ತಕ್ಷಣದ ಚಿಕಿತ್ಸೆ ನೀಡಲು ಸಂಚಾರಿ ಆರೋಗ್ಯ ತಂಡಗಳನ್ನು ನಿಯೋಜಿಸಲಾಗುವುದು. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಜ್ವರದ ಔಷಧಗಳು, ಪ್ರತಿಜೀವಕಗಳು, ಮಲೇರಿಯಾ ನಿರೋಧಕಗಳು ಮತ್ತು ಒ.ಆರ್.ಎಸ್ ಪಾಕೆಟ್‌ಗಳನ್ನು ಸಾಕಷ್ಟು ಪ್ರಮಾಣದಲ್ಲಿ ಸಂಗ್ರಹಿಸಿಡಲಾಗುವುದು. ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ತ್ವರಿತ ಪ್ರತಿಕ್ರಿಯೆ ತಂಡಗಳನ್ನು ರಚಿಸಲಾಗಿದೆ.

**ಸಾರ್ವಜನಿಕರಿಗೆ ಆರೋಗ್ಯ ಇಲಾಖೆಯ ಪ್ರಮುಖ ಸಲಹೆಗಳು:**

ಸಾರ್ವಜನಿಕರು ಕಡ್ಡಾಯವಾಗಿ ಕುದಿಸಿ ಆರಿಸಿದ ನೀರನ್ನೇ ಕುಡಿಯಬೇಕು. ತರಕಾರಿ ಮತ್ತು ಧಾನ್ಯಗಳನ್ನು ಸ್ವಚ್ಛವಾಗಿ ತೊಳೆದೇ ಬಳಸಬೇಕು. ನಿರಂತರ ಜ್ವರ ಕಾಣಿಸಿಕೊಂಡಲ್ಲಿ ವಿಳಂಬ ಮಾಡದೆ ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು. ಮನೆಗಳ ಕಿಟಕಿಗಳಿಗೆ ಸೊಳ್ಳೆ ಪರದೆಗಳನ್ನು ಅಳವಡಿಸುವುದು ಮತ್ತು ರಕ್ಷಣಾತ್ಮಕ ಉಡುಪುಗಳನ್ನು ಧರಿಸುವ ಮೂಲಕ ಸೊಳ್ಳೆ ಕಡಿತದಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಬೇಕು.

ಹವಾಮಾನ ವೈಪರೀತ್ಯ ಹಾಗೂ ಮುಂಚಿನ ಎಚ್ಚರಿಕೆ ವ್ಯವಸ್ಥೆಗಳ ಬಗ್ಗೆ ನಿರಂತರ ಮೇಲ್ವಿಚಾರಣೆ ನಡೆಸಲಾಗುತ್ತಿದ್ದು, ಸಾರ್ವಜನಿಕರು ಆತಂಕಪಡದೆ ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಡಿಎಚ್‌ಓ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಅಂದ್ರಾಳ್ ಹಳ್ಳದಲ್ಲಿ ಮಹಿಳೆಯ ಮೃತದೇಹ ಪತ್ತೆ ಹಲವು ಅನುಮಾನಗಳಿಗೆ ಕಾರಣವಾದ ಘಟನೆ



**ಬಳ್ಳಾರಿ, ಜೂ 08**. ಬಳ್ಳಾರಿ ನಗರದ ಡಿ.ಸಿ. ಕ್ಯಾಂಪ್ ರಸ್ತೆಯ ಸಮೀಪ ಹರಿಯುವ ಅಂದ್ರಾಳ್ ಹಳ್ಳದಲ್ಲಿ ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿರುವ ಘಟನೆ ಸಾರ್ವಜನಿಕರಲ್ಲಿ ಆತಂಕ ಮತ್ತು ಕುತೂಹಲಕ್ಕೆ ಕಾರಣವಾಗಿದೆ. ಸ್ಥಳೀಯರು ಹಳ್ಳದ ಬಳಿ ತೆರಳಿದ ವೇಳೆ ನೀರಿನಲ್ಲಿ ಮಹಿಳೆಯ ಶವ ತೇಲುತ್ತಿರುವುದು ಕಂಡುಬಂದಿದ್ದು, ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಕಳೆದ ರಾತ್ರಿ ಬಳ್ಳಾರಿ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾರೀ ಮಳೆಯಾಗಿದ್ದು, ಹಳ್ಳದಲ್ಲಿ ನೀರಿನ ಹರಿವು ಹೆಚ್ಚಾಗಿತ್ತು. ಈ ಹಿನ್ನೆಲೆಯಲ್ಲಿ ಮೃತದೇಹ ಮಳೆ ನೀರಿನೊಂದಿಗೆ ಬೇರೆ ಪ್ರದೇಶದಿಂದ ಕೊಚ್ಚಿಕೊಂಡು ಬಂದಿರಬಹುದೇ ಅಥವಾ ಮಹಿಳೆಯನ್ನು ಕೊಲೆ ಮಾಡಿ ಹಳ್ಳಕ್ಕೆ ಎಸೆದಿರಬಹುದೇ ಎಂಬ ಅನುಮಾನಗಳು ವ್ಯಕ್ತವಾಗಿವೆ. ಘಟನೆಯು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದ್ದು, ಮೃತದೇಹದ ಸ್ಥಿತಿ ನೋಡಿದ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ.

ಮೃತ ಮಹಿಳೆಯ ಶವವು ಬೆತ್ತಲೆ ಸ್ಥಿತಿಯಲ್ಲಿ ಪತ್ತೆಯಾಗಿರುವುದು ಪ್ರಕರಣದ ಸುತ್ತ ಮತ್ತಷ್ಟು ಅನುಮಾನಗಳಿಗೆ ಕಾರಣವಾಗಿದೆ. ಇದರಿಂದ ಇದು ಕೇವಲ ಅಪಘಾತವೋ, ಆತ್ಮಹತ್ಯೆಯೋ ಅಥವಾ ಕೊಲೆ ಪ್ರಕರಣವೋ ಎಂಬ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆಗಳು ಆರಂಭವಾಗಿವೆ. ಮಹಿಳೆಯ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ತಿಳಿದುಬಂದಿದೆ.

ಸುದ್ದಿ ತಿಳಿಯುತ್ತಿದ್ದಂತೆಯೇ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಸ್ಥಳಕ್ಕೆ ಆಗಮಿಸಿ ಘಟನಾ ಸ್ಥಳವನ್ನು ವೀಕ್ಷಣೆ ನಡೆಸಿದರು. ಮಹಿಳೆಯ ಮೃತದೇಹ ಕಂಡುಬಂದ ಹಿನ್ನೆಲೆಯಲ್ಲಿ ಸ್ಥಳೀಯರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಪ್ರಕರಣದ ಸಂಪೂರ್ಣ ಸತ್ಯಾಂಶ ಬಹಿರಂಗವಾಗಬೇಕೆಂದು ಆಗ್ರಹಿಸಿದ್ದಾರೆ.

ಮಾಹಿತಿ ಪಡೆದ ಎ.ಪಿ.ಎಂ.ಸಿ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹವನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸುವ ಪ್ರಕ್ರಿಯೆ ಕೈಗೊಂಡಿದ್ದಾರೆ. ಸ್ಥಳದಲ್ಲಿ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಲಾಗುತ್ತಿದ್ದು, ಮಹಿಳೆಯ ಗುರುತು ಪತ್ತೆ ಹಾಗೂ ಸಾವಿನ ನಿಖರ ಕಾರಣ ತಿಳಿಯಲು ತನಿಖೆ ಆರಂಭಿಸಲಾಗಿದೆ.

ಪ್ರಾಥಮಿಕ ತನಿಖೆಯ ಬಳಿಕವೇ ಮಹಿಳೆಯ ಸಾವಿನ ಹಿಂದಿನ ನಿಜವಾದ ಕಾರಣ ಬಹಿರಂಗವಾಗಲಿದ್ದು, ಮರಣೋತ್ತರ ಪರೀಕ್ಷೆಯ ವರದಿ ಬಂದ ನಂತರ ಪ್ರಕರಣದ ಕುರಿತು ಸ್ಪಷ್ಟ ಚಿತ್ರಣ ದೊರೆಯುವ ಸಾಧ್ಯತೆ ಇದೆ. ಸದ್ಯ ಪ್ರಕರಣವು ಬಳ್ಳಾರಿ ಎ.ಪಿ.ಎಂ.ಸಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದು, ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರೆಸಿದ್ದಾರೆ.

# ಇರಾನ್–ಇಸ್ರೇಲ್ ಕದನ ವಿರಾಮ ಸನ್ನಿಹಿತ: ಶೀಘ್ರವೇ ಶಾಂತಿ ಒಪ್ಪಂದ
## ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿರಂತರ ಒತ್ತಡ

**ವಾಷಿಂಗ್ಟನ್/ ಟೆಲ್ ಅವೀವ್, ಜೂನ್ 8:** ಉಭಯ ದೇಶಗಳ ನಡುವಿನ ಹೊಸ ಸುತ್ತಿನ ದಾಳಿಗಳು ಈಗಾಗಲೇ ದುರ್ಬಲವಾದ ಕದನ ವಿರಾಮಕ್ಕೆ ಬೆದರಿಕೆ ಹಾಕಿದ ನಂತರ ಇಸ್ರೇಲ್ ಮತ್ತು ಇರಾನ್ "ತಕ್ಷಣದ ಕದನ ವಿರಾಮವನ್ನು ಮಾಡಲು ನೋಡುತ್ತಿವೆ" ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೋಮವಾರ ಹೇಳಿದ್ದಾರೆ. "'ಶಾಂತಿ' ಕುರಿತ ಅಂತಿಮ ಮಾತುಕತೆಗಳು ನಡೆಯುತ್ತಿವೆ, "ದಿಗ್ಬಂಧನವು ಜಾರಿಯಲ್ಲಿರುತ್ತದೆ ಮತ್ತು 'ಅಂತಿಮ ಒಪ್ಪಂದ' ತಲುಪುವವರೆಗೆ ಪೂರ್ಣ ಬಲ ಮತ್ತು ಪರಿಣಾಮದಲ್ಲಿ ಇರುತ್ತದೆ. ವಿಷಯಗಳು ತ್ವರಿತವಾಗಿ ಚಲಿಸಬೇಕು." ಸಂಘರ್ಷವನ್ನು ಕೊನೆಗೊಳಿಸಲು ಪ್ರಾಥಮಿಕ ಒಪ್ಪಂದವು ಹತ್ತಿರದಲ್ಲಿದೆ ಎಂದು ಟ್ರಂಪ್ ವಾರಗಳಿಂದ ಸೂಚಿಸುತ್ತಿದ್ದಾರೆ, ಆದರೆ ಒಪ್ಪಂದವು ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ. ಇರಾನ್ ಮತ್ತು ಇಸ್ರೇಲ್ ಪರಸ್ಪರರ ವಿರುದ್ಧದ ದಾಳಿಗಳನ್ನು ನಿಲ್ಲಿಸುವ ಇಚ್ಛೆಯನ್ನು ಸೂಚಿಸಿದ ನಂತರ ಟ್ರಂಪ್ ಅವರ ಹೇಳಿಕೆ ಬಂದಿದೆ.

ದಿ ಟೈಮ್ಸ್ ಆಫ್ ಇಸ್ರೇಲ್ ಪ್ರಕಾರ, ಟೆಹ್ರಾನ್ ತನ್ನ ಕ್ಷಿಪಣಿ ದಾಳಿಗಳನ್ನು ನಿಲ್ಲಿಸಿದರೆ ಇಸ್ರೇಲ್ ಇನ್ನು ಮುಂದೆ ಯಾವುದೇ ದಾಳಿಗಳನ್ನು ನಡೆಸುವುದಿಲ್ಲ ಎಂದು ಅಮೆರಿಕ ಇರಾನ್ಗೆ ತಿಳಿಸಿದೆ ಎಂದು ಪ್ರಾದೇಶಿಕ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇಸ್ರೇಲ್ ದಾಳಿಗಳನ್ನು ಸ್ಥಗಿತಗೊಳಿಸಲು ಒಪ್ಪಿಕೊಂಡಿದೆ ಎಂದು ವರದಿ ತಿಳಿಸಿದೆ. ಟ್ರಂಪ್ ಅವರ ಕೋರಿಕೆಯ ಮೇರೆಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಇಸ್ರೇಲ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ, ಆದರೆ ದಕ್ಷಿಣ ಲೆಬನಾನ್ನಲ್ಲಿ ಹೆಜ್ಬೊಲ್ಲಾ ವಿರುದ್ಧ ಇಸ್ರೇಲ್ ಕಾರ್ಯಾಚರಣೆಯನ್ನು ಮುಂದುವರಿಸುತ್ತದೆ ಎಂದು ಒತ್ತಿ ಹೇಳಿದರು. ಇಸ್ರೇಲ್ ವಿರುದ್ಧದ ಮಿಲಿಟರಿ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಿದೆ ಎಂದು ಇರಾನ್ ಹೇಳಿದೆ ಆದರೆ ಇಸ್ರೇಲ್ ನಡೆಯುತ್ತಿರುವ ಕಾರ್ಯಾಚರಣೆಗಳನ್ನು ನಡೆಸುತ್ತಿರುವ ದಕ್ಷಿಣ ಲೆಬನಾನ್ ಸೇರಿದಂತೆ ದಾಳಿಗಳು ಮುಂದುವರಿದರೆ ಅದನ್ನು ಪುನರಾರಂಭಿಸುವುದಾಗಿ ಎಚ್ಚರಿಸಿದೆ.

ಇಸ್ರೇಲ್ ಮತ್ತು ಇರಾನ್ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ ಚರ್ಚಿಸಲು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಭದ್ರತಾ ಸಂಪುಟವನ್ನು ಕರೆಯುವ ಸಾಧ್ಯತೆಯಿದೆ ಎಂಬ ವರದಿಗಳು ಹೊರಬರುತ್ತಿವೆ.

ಇಸ್ರೇಲ್ ರಕ್ಷಣಾ ಪಡೆಗಳು ಇಸ್ರೇಲ್ ಮೇಲೆ ಸುಮಾರು 30 ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಹಾರಿಸಿವೆ ಎಂದು ಹೇಳಿವೆ, ಆದರೆ ಯೆಮೆನ್‌ನಲ್ಲಿ ಇರಾನ್ ಬೆಂಬಲಿತ ಹೌತಿಗಳು ಎರಡು



ಕ್ಷಿಪಣಿಗಳನ್ನು ಸಹ ಹಾರಿಸಿದ್ದಾರೆ. ಟ್ರಂಪ್ ಈ ಹಿಂದೆ ಎರಡೂ ಕಡೆಯವರು ಕದನ ವಿರಾಮಕ್ಕೆ ಒಪ್ಪಿಕೊಳ್ಳುವಂತೆ ಕರೆ ನೀಡಿದರು ಮತ್ತು ಟ್ರೂತ್ ಸೋಷಿಯಲ್‌ನಲ್ಲಿ ತಕ್ಷಣ ಗುಂಡು ಹಾರಿಸುವುದನ್ನು ನಿಲ್ಲಿಸಿ ಎಂದು ಬರೆದಿದ್ದಾರೆ. ಇರಾನ್‌ನಲ್ಲಿ "ಕಾರ್ಯತಂತ್ರದ ರಕ್ಷಣಾ ವ್ಯವಸ್ಥೆಗಳ" ಮೇಲೆ ದೊಡ್ಡ ಪ್ರಮಾಣದ ದಾಳಿಯನ್ನು ಪೂರ್ಣಗೊಳಿಸಿರುವುದಾಗಿ ಐಡಿಎಫ್ ಹೇಳಿದೆ, ಆದರೆ ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಎರಡು ಇಸ್ರೇಲಿ ವಾಯುನೆಲೆಗಳನ್ನು ಗುರಿಯಾಗಿಸಿ ಕೊಂಡಿರುವುದಾಗಿ ಹೇಳಿಕೊಂಡಿದೆ ಎಂದು ಇರಾನ್ ಮಾಧ್ಯಮ ವರದಿಗಳು ತಿಳಿಸಿವೆ.

ಇರಾನ್ ತೊರೆಯುವಂತೆ ಭಾರತೀಯರಿಗೆ ಕರೆ


# ರಾಯಭಾರ ಕಚೇರಿ ಸಂಪರ್ಕದಲ್ಲಿರುವಂತೆ ವಿದೇಶಾಂಗ ಸಚಿವಾಲಯ ಸಲಹೆ

**ನವದೆಹಲಿ, ಜೂ.8:** ಪಶ್ಚಿಮ ಏಷ್ಯಾದಲ್ಲಿ ಪರಿಸ್ಥಿತಿ ಉಲ್ಬಣಿಸುತ್ತಿರುವ ಹಿನ್ನೆಲೆಯಲ್ಲಿ ಇರಾನ್‌ನಲ್ಲಿರುವ ಭಾರತೀಯ ಪ್ರಜೆಗಳಿಗೆ ತಕ್ಷಣವೇ ಆ ದೇಶವನ್ನು ತೊರೆಯುವಂತೆ ಭಾರತ ಸರ್ಕಾರ ಸಲಹೆ ನೀಡಿದೆ.

ಇರಾನ್‌ನಲ್ಲಿರುವ ಭಾರತೀಯರು ತಮ್ಮ ಸುರಕ್ಷತೆಯ ಬಗ್ಗೆ ಅತ್ಯಂತ ಜಾಗರೂಕರಾಗಿರಬೇಕು ಮತ್ತು ಸಾಧ್ಯವಾದಷ್ಟು ಬೇಗ ದೇಶವನ್ನು ತೊರೆಯುವಂತೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸಲಹೆ ನೀಡಿದೆ. ಇರಾನ್‌ಗೆ ಅಗತ್ಯವಿಲ್ಲದ ಪ್ರಯಾಣವನ್ನು ಮಾಡದಂತೆಯೂ ಸರ್ಕಾರವು ಭಾರತೀಯರಿಗೆ ಸೂಚಿಸಿದೆ. ಹಾಗೂ ಇರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರುವಂತೆ ಹಾಗೂ ಅಲ್ಲಿನ ಹೈ ಕಮಿಷನ್ ನೀಡುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಕೋರಿದೆ. ಪಶ್ಚಿಮ ಏಷ್ಯಾದಲ್ಲಿ ಇರಾನ್ ಮತ್ತು ಇಸ್ರೇಲ್ ನಡುವಿನ ಸಂಘರ್ಷ ತೀವ್ರಗೊಂಡ ಹಿನ್ನೆಲೆಯಲ್ಲಿ, ಈ ಪ್ರದೇಶದಲ್ಲಿರುವ ಭಾರತೀಯರ ಸುರಕ್ಷತೆಗಾಗಿ ಭಾರತವು ಈ ಮುನ್ನೆಚ್ಚರಿಕೆ ಕ್ರಮವನ್ನು ಕೈಗೊಂಡಿದೆ. ಪ್ರಸ್ತುತ ಇರಾನ್‌ನಲ್ಲಿರುವವರು ಲಭ್ಯವಿರುವ ಯಾವುದೇ ಮಾರ್ಗಗಳ ಮೂಲಕ ದೇಶವನ್ನು ತೊರೆಯುವಂತೆಯೂ ಅದು ಒತ್ತಾಯಿಸಿದೆ.ಈ ಪ್ರದೇಶದಲ್ಲಿನ ಇತ್ತೀಚಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು, ಇರಾನ್‌ಗೆ ಯಾವುದೇ ಪ್ರಯಾಣವನ್ನು ಮಾಡದಿರುವಂತೆ ಎಲ್ಲಾ ಭಾರತೀಯ ಪ್ರಜೆಗಳಿಗೆ ರಾಯಭಾರ ಕಚೇರಿಯು ತನ್ನ ಹಿಂದಿನ ಸಲಹೆಯನ್ನು ಪುನರುಚ್ಚರಿಸುತ್ತದೆ. ಪ್ರಸ್ತುತ ಇರಾನ್‌ನಲ್ಲಿರುವ ಭಾರತೀಯ ಪ್ರಜೆಗಳು ಲಭ್ಯವಿರುವ ಸಾರಿಗೆ ವಿಧಾನಗಳ ಮೂಲಕ ದೇಶವನ್ನು ತೊರೆಯಲು ಸೂಚಿಸಲಾಗಿದೆ ಎಂದು ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಫೆಬ್ರವರಿ 28 ರಂದು ಇರಾನ್ ಮೇಲೆ ಅಮೆರಿಕ–ಇಸ್ರೇಲ್ ದಾಳಿಯಿಂದಾಗಿ ಪ್ರಾದೇಶಿಕ ಉದ್ವಿಗ್ನತೆ ಹೆಚ್ಚಾದ ನಂತರ, ಭಾರತವು ನಾಗರಿಕರು ಪ್ರಯಾಣವನ್ನು ತಪ್ಪಿಸಿ ಸಾಧ್ಯವಾದಷ್ಟು ಬೇಗ ದೇಶವನ್ನು ತೊರೆಯುವಂತೆ ಒತ್ತಾಯಿಸಿ ಹಲವಾರು ಸಲಹೆಗಳನ್ನು ನೀಡಿತ್ತು. ಯುದ್ಧ ಪ್ರಾರಂಭವಾದಾಗಿನಿಂದ 1,800ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ದೇಶದಿಂದ ಸ್ಥಳಾಂತರಿಸಲಾಗಿತ್ತು. ಫೆಬ್ರವರಿ 28 ರಿಂದ ಪಶ್ಚಿಮ ಏಷ್ಯಾದಿಂದ ಸುಮಾರು 6.49 ಲಕ್ಷ ಪ್ರಯಾಣಿಕರು ಭಾರತಕ್ಕೆ ಮರಳಿದ್ದಾರೆ ಎಂದು ವಿದೇಶಾಂಗ ಸಚಿವಾಲಯ (ಎಂಇಎ) ಏಪ್ರಿಲ್‌ನಲ್ಲಿ ತಿಳಿಸಿದ್ದು, ಕೊಲ್ಲಿ ಮತ್ತು ಪಶ್ಚಿಮ ಏಷ್ಯಾ ಪ್ರದೇಶದ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಮತ್ತು ಅಲ್ಲಿ ವಾಸಿಸುವ ಬಹುಸಂಖ್ಯೆಯ ಭಾರತೀಯ ಸಮುದಾಯದ ಸುರಕ್ಷತೆ, ಭದ್ರತೆ ಮತ್ತು ಕಲ್ಯಾಣಕ್ಕೆ ಆದ್ಯತೆ ನೀಡುತ್ತಿದೆ ಎಂದು ಹೇಳಿದೆ. ಬೈರುತ್‌ನ ದಕ್ಷಿಣ ಉಪನಗರಗಳ ಮೇಲೆ ಇಸ್ರೇಲ್ ನಡೆಸಿದ ದಾಳಿಗೆ ಪ್ರತೀಕಾರವಾಗಿ ಇರಾನ್ ಇಸ್ರೇಲ್ ಗುರಿಗಳ ಮೇಲೆ ಕ್ಷಿಪಣಿಗಳನ್ನು ಹಾರಿಸಿದ ನಂತರ ಇಂದು ಉದ್ವಿಗ್ನತೆ ತೀವ್ರವಾಗಿ ಹೆಚ್ಚಾಯಿತು. ಯುದ್ಧವನ್ನು ಕೊನೆಗೊಳಿಸಲು ಒಪ್ಪಂದಕ್ಕೆ ಅವಕಾಶ ನೀಡಲು ಲೆಬನಾನ್‌ನಲ್ಲಿ ದಾಳಿಗಳನ್ನು ನಿಲ್ಲಿಸುವಂತೆ ಟ್ರಂಪ್ ಇಸ್ರೇಲ್‌ಗೆ ನಿರ್ದೇಶನ ನೀಡಿದ್ದರೂ ಸಹ ಪ್ರತೀಕಾರವಾಗಿ ಇಸ್ರೇಲ್ ಕ್ಷಿಪಣಿ ದಾಳಿ ನಡೆಸಿ, ಇರಾನ್‌ನಲ್ಲಿ 20 ಸ್ಥಳಗಳ ಮೇಲೆ ದಾಳಿ ನಡೆಸಿದೆ. ಇರಾನ್ ಬೆಂಬಲಿತ ಹೌತಿಗಳ ನೆಲೆಯಾದ ಯೆಮೆನ್‌ನಿಂದ ಬಂದ ಕ್ಷಿಪಣಿಯನ್ನು ತಡೆಹಿಡಿದಿರುವುದಾಗಿ ಇಸ್ರೇಲ್ ಹೇಳಿದೆ. ಇರಾನ್‌ನ ಮಶಹನರ್‌ನಲ್ಲಿರುವ ಪೆಟ್ರೋಕೆಮಿಕಲ್ ಸೌಲಭ್ಯದ ಮೇಲೆಯೂ ಇಸ್ರೇಲ್ ದಾಳಿ ನಡೆಸಿ ಭಾಗಶಃ ಹಾನಿಯನ್ನುಂಟುಮಾಡಿದೆ. ಏತನಧ್ಯೆ, ಇಸ್ರೇಲ್ ಮತ್ತು ಇರಾನ್‌ನ ಹೊಸ ದಾಳಿಗಳು ಟೆಹ್ರಾನ್‌ನೊಂದಿಗಿನ ತನ್ನ ಆಡಳಿತದ ಶಾಂತಿ ಮಾತುಕತೆಯ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಟ್ರಂಪ್ ಹೇಳಿದ್ದಾರೆ.

# ಗಲ್ಫ್ ಪರಿಹಾರಕ್ಕಾಗಿ ಹೆಪ್ಪುಗಟ್ಟಿದ ಆಸ್ತಿಗಳನ್ನು ಬಳಸುವ ಬಗ್ಗೆ ಅಮೆರಿಕ ಚಿಂತನೆ ನಡೆಸುತ್ತಿದೆ ಎಂಬ ವರದಿಗಳನ್ನು ಇರಾನ್ ಅಸಂಬದ್ಧ ಎಂದು ಕರೆದಿದೆ

**ವಾಷಿಂಗ್ಟನ್/ ಟೆಹ್ರಾನ್, ಜೂನ್ 8:** ನಡೆಯುತ್ತಿರುವ ಸಂಘರ್ಷದ ಸಮಯದಲ್ಲಿ ಇರಾನಿನ ಮಿಲಿಟರಿ ಕ್ರಮಗಳಿಗೆ ಸಂಬಂಧಿಸಿದ ಹಾನಿಗೆ ಅಮೆರಿಕನ್–ಒಗ್ಗೂಡಿದ ಗಲ್ಫ್ ರಾಷ್ಟ್ರಗಳಿಗೆ ಪರಿಹಾರ ನೀಡುವ ಕಡೆಗೆ ಹೆಪ್ಪುಗಟ್ಟಿದ ಇರಾನಿನ ಆಸ್ತಿಗಳನ್ನು ಮರುನಿರ್ದೇಶಿಸುವ ಯೋಜನೆಯನ್ನು ಅಮೆರಿಕ ಖಜಾನೆ ಇಲಾಖೆ ಪರಿಗಣಿಸುತ್ತಿದೆ ಎಂಬ ವರದಿಗಳ ನಂತರ, ಇರಾನ್ ಈ ಪ್ರಸ್ತಾಪವನ್ನು "ಅಸಂಬದ್ಧ" ಮತ್ತು "ಹಾಸ್ಯಾಸ್ಪದ" ಎಂದು ತಳ್ಳಿಹಾಕಿದೆ. ಪ್ರಾದೇಶಿಕ ಸಂಘರ್ಷದಿಂದ ಪ್ರಭಾವಿತವಾಗಿರುವ ಗಲ್ಫ್ ರಾಷ್ಟ್ರಗಳಲ್ಲಿ ಪುನರ್ನಿರ್ಮಾಣ ಅಥವಾ ಪರಿಹಾರಕ್ಕಾಗಿ ಇರಾನ್ನ ನಿರ್ಬಂಧಿತ ಹಣವನ್ನು ಬಳಸಲು ವಾಷಿಂಗ್ಟನ್ ಪರಿಗಣಿಸುತ್ತಿದೆ ಎಂಬ ಹೇಳಿಕೆಗಳನ್ನು ಇರಾನ್ ಮಾಧ್ಯಮಗಳು ಉಲ್ಲೇಖಿಸಿವೆ. ಇರಾನ್ ದೇಶದ ವಿರುದ್ಧದ ಕ್ರಮಗಳಿಗೆ ಜವಾಬ್ದಾರರಾಗಿರುವ ಎಲ್ಲಾ ಪಕ್ಷಗಳ ವಿರುದ್ಧ ತನ್ನದೇ ಆದ ಹಕ್ಕುಗಳನ್ನು ಮುಂದುವರಿಸುತ್ತದೆ ಎಂದು ಅವರು ಹೇಳಿದರು. ಇರಾನ್ ಮೇಲೆ ದಾಳಿ ನಡೆಸಲು ಬಳಸಿದ ಯುಎಸ್ ಮಿಲಿಟರಿ ನೆಲೆಗಳನ್ನು ಆಯೋಜಿಸುವ ದೇಶಗಳು ಹಾನಿಗಳಿಗೆ ಪರಿಹಾರವನ್ನು ಪಡೆಯಲು ಟೆಹ್ರಾನ್ಗೆ ಆಧಾರಗಳನ್ನು ಒದಗಿಸಬಹುದು ಎಂದು ಅವರು ಗಮನಸೆಳೆದರು. "ಇದು ಹಾಸ್ಯಾಸ್ಪದ ಹಕ್ಕು" ಎಂದು ಬಘೈ ಹೇಳಿದರು, ಇರಾನ್ ಸ್ವತಃ ಇರಾನ್ ವಿರುದ್ಧ ಮಾಡಿದ ಅಪರಾಧಗಳು ಎಂದು ವಿವರಿಸುವ ಘಟನೆಗಳಲ್ಲಿ ಭಾಗಿಯಾಗಿದೆ ಎಂದು ಆರೋಪಿಸಿರುವ ಪ್ರಾದೇಶಿಕ ನಟರ ವಿರುದ್ಧ "ಗಣನೀಯ ಹಕ್ಕುಗಳನ್ನು" ಹೊಂದಿದೆ ಎಂದು ವಾದಿಸಿದರು. ನಡೆಯುತ್ತಿರುವ ಯಾವುದೇ ಮಾತುಕತೆಗಳಲ್ಲಿ ಹೆಪ್ಪುಗಟ್ಟಿದ ಇರಾನಿನ ಸ್ವತ್ತುಗಳನ್ನು ಹಿಂದಿರುಗಿಸುವುದು ಒಂದು ಕೇಂದ್ರ ಷರತ್ತು ಎಂದು ಅವರು ಹೇಳಿದರು, ಈ ವಿಷಯದ ಬಗ್ಗೆ ಟೆಹ್ರಾನ್ "ಯಾವುದೇ ಮೃದುತ್ವವನ್ನು ತೋರಿಸಲು ಎಂದಿಗೂ ಉದ್ದೇಶಿಸಿಲ್ಲ" ಎಂದು ಒತ್ತಿ ಹೇಳಿದರು. ಶಾಂತಿ ಒಪ್ಪಂದದ ಮಾತುಕತೆಗಳು ಮುಂದುವರೆದಂತೆ, ಇರಾನ್ ತನ್ನ ವಿದೇಶಿ ನಿಧಿಗಳನ್ನು ಬಿಡುಗಡೆ ಮಾಡುವಂತೆ ಪದೇ ಪದೇ ಒತ್ತಾಯಿಸಿದೆ ಮತ್ತು ಯುನೈಟೆಡ್ ಸ್ಟೇಟ್ಸ್ ಮತ್ತು ಇಸ್ರೇಲ್ಗೆ ಅದು ಆರೋಪಿಸುವ ಯುದ್ಧ–ಸಂಬಂಧಿತ ಹಾನಿಗೆ ಪರಿಹಾರವನ್ನು ಸಹ ಕೋರಿದೆ.



ವರದಿಯಾದ ಪ್ರಸ್ತಾಪಗಳಲ್ಲಿ ಪ್ರಸ್ತುತ ವಿದೇಶಿ ಖಾತೆಗಳಲ್ಲಿ ಇರಿಸಲಾಗಿರುವ ಅಥವಾ ಅಂತರರಾಷ್ಟ್ರೀಯ ಹಣಕಾಸು ವ್ಯವಸ್ಥೆಗಳಲ್ಲಿ ಬಂಧಿಸಲ್ಪಟ್ಟಿರುವ ಇರಾನಿನ ರಾಜ್ಯ ನಿಧಿಗಳನ್ನು ಮರುನಿರ್ದೇಶಿಸಲು ಕಾನೂನು ಮಾರ್ಗಗಳನ್ನು ಪರಿಶೀಲಿಸುವುದು ಸೇರಿದೆ. ಆದಾಗ್ಯೂ, ಅಂತಹ ಕ್ರಮಗಳು ಈಗಾಗಲೇ ದುರ್ಬಲವಾದ ರಾಜತಾಂತ್ರಿಕ ಪ್ರಯತ್ನಗಳನ್ನು ದುರ್ಬಲಗೊಳಿಸುತ್ತವೆ ಎಂದು ಇರಾನ್ ಅಧಿಕಾರಿಗಳು ಹೇಳುತ್ತಾರೆ. ಟೆಹ್ರಾನ್ನಲ್ಲಿರುವ ಇರಾನಿನ ಅಧಿಕಾರಿಗಳು ಹೆಪ್ಪುಗಟ್ಟಿದ ಸ್ವತ್ತುಗಳ ಬಿಡುಗಡೆಯನ್ನು ಯಾವುದೇ ಮಾತುಕತೆ ಪ್ರಕ್ರಿಯೆಯಲ್ಲಿ ಪ್ರಮುಖ "ವಿಶ್ವಾಸ ಪರೀಕ್ಷೆ" ಎಂದು ರೂಪಿಸಿದ್ದಾರೆ, ಆದರೆ ತಿಳುವಳಿಕೆಯ ಜ್ಞಾಪಕ ಪತ್ರದ ಮೊದಲ ಹಂತದ ಆರಂಭದಲ್ಲಿ ಇರಾನ್ನ ವಿದೇಶಿ ನಿಧಿಗಳಲ್ಲಿ ಗಮನಾರ್ಹ ಭಾಗವನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿದ್ದಾರೆ.

ಹೆಚ್ಚುತ್ತಿರುವ ಹಣಕಾಸು ಮತ್ತು ಮಿಲಿಟರಿ ಉದ್ವಿಗ್ನತೆಗಳು ಪ್ರದೇಶವನ್ನು ಮತ್ತಷ್ಟು ಅಸ್ಥಿರಗೊಳಿಸಬಹುದು ಮತ್ತು ಇರಾನ್ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವಿನ ರಾಜತಾಂತ್ರಿಕ ಪ್ರಕ್ರಿಯೆಯನ್ನು ಹಳಿತಪ್ಪಿಸಬಹುದು ಎಂದು ಎಚ್ಚರಿಸಿ, ಟೆಹ್ರಾನ್ ಅಂತರರಾಷ್ಟ್ರೀಯ ಸಂಸ್ಥೆಗಳಿಗೆ ಹೆಚ್ಚು ಸಕ್ರಿಯವಾಗಿ ಮಧ್ಯಪ್ರವೇಶಿಸುವಂತೆ ಮನವಿ ಮಾಡಿದೆ.

# ಮಧ್ಯಪ್ರಾಚ್ಯ ಯುದ್ಧಕ್ಕೆ 100 ದಿನ ಮುಂದುವರಿದರೆ ಭಾರಿ ಸಂಕಷ್ಟ


**ವಾಷಿಂಗ್ಟನ್, ಜೂನ್ 8:** ಈ ವರ್ಷದ ಫೆ.28ರಂದು ಇಸ್ರೇಲ್–ಅಮೆರಿಕ ಜಂಟಿಯಾಗಿ ಇರಾನ್ ಮೇಲೆ ಕ್ಷಿಪಣಿ ದಾಳಿ ನಡೆಸುವ ಮೂಲಕ ಭೀಕರ ಯುದ್ಧಕ್ಕೆ ಸಾಕ್ಷಿಯಾಯಿತು. ಅಂದಿನಿಂದ ಇಂದಿನವರೆಗೂ ಎಲ್ಲಿಯೂ ಸಮರ ನಿಲ್ಲಿಸಿದ ರಾಷ್ಟ್ರಗಳು, ಕೇವಲ ನೆಪಕ್ಕಷ್ಟೇ ಕದನ ವಿರಾಮ ಎಂಬ ಪದವನ್ನು ಘೋಷಿಸಿವೆ. ಈ ಯುದ್ಧದಿಂದ ಜಗತ್ತಿನಲ್ಲಿ ಸಾಕಷ್ಟು ಸಮಸ್ಯೆಗಳು ಉಲ್ಬಣಿಸಿದ್ದು, ಬಹುತೇಕ ದೇಶಗಳು ಅಕ್ಷರಶಃ ತತ್ತರಿಸಿವೆ.

100 ದಿನಗಳ ನಂತರವೂ ಪರಿಸ್ಥಿತಿ ಮಾತ್ರ ಸುಧಾರಣೆ ಕಂಡಿಲ್ಲ. ಈಗಲೂ, ಅದೇ ಉದ್ವಿಗ್ನತೆ ಮುಂದುವರೆದಿದೆ. ಇರಾನ್‌ನ ಸುಪ್ರೀಂ ನಾಯಕ ಅನ್ನು ಕೊಂದ ಅಮೆರಿಕದ ವಿರುದ್ಧ ಪ್ರತೀಕಾರ ತೀರಿಸಿಕೊಳ್ಳಲು ಮುಗಿಬಿದ್ದ ಇರಾನ್, ಗಲ್ಫ್ ರಾಷ್ಟ್ರಗಳ ಮೇಲೆ ದಾಳಿ ಮಾಡುವುದರ ಜೊತೆಗೆ ಹಾರ್ಮುಜ್ ಜಲಸಂಧಿಯನ್ನು ಮುಚ್ಚಿತು. ಇಲ್ಲಿಂದಲೇ ಇಡೀ ಜಗತ್ತಿಗೆ ಶುರುವಾಗಿದ್ದು ತೈಲ, ಅನಿಲ, ಇಂಧನ ಬಿಕ್ಕಟ್ಟಿನಂತ ಅನೇಕ ಸಮಸ್ಯೆಗಳು.

ಗೃಹಬಳಕೆ ಮತ್ತು ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆ, ಪೆಟ್ರೋಲ್–ಡಿಸೇಲ್ ಸೇರಿ ಕೆಲವು ಅತ್ಯಗತ್ಯ ಹಾಗೂ ದಿನಬಳಕೆ ವಸ್ತುಗಳ ಬೆಲೆಗಳು ದಿಢೀರ್ ದುಪ್ಪಟ್ಟಾಗಿರುವುದು ಸದ್ಯ ಭಾರತದ ಜೊತೆಗೆ ಅನೇಕ ದೇಶಗಳ ಜನತೆಗೆ ಭಾರೀ ಸಂಕಷ್ಟ ತಂದೊಡ್ಡಿದೆ. ಇದು ಬಡವರು ಮತ್ತು ಮಧ್ಯವರ್ಗದ ಜನರಿಗಂತು ನುಂಗಲಾರದ ಬಿಸಿತುಪ್ಪವಾಗಿದೆ. ಪ್ರಸ್ತುತ ಕದನ ವಿರಾಮ ಒಪ್ಪಂದ ಜಾರಿಯಲ್ಲಿದ್ದರೂ, ಮೂರು ದೇಶಗಳ ನಡುವಿನ ಉದ್ವಿಗ್ನತೆ ಮಾತ್ರ ಕಿಂಚಿತ್ತು ಕಡಿಮೆಯಾಗಿಲ್ಲ.

ಹಾರ್ಮುಜ್ ಜಲಸಂಧಿಯನ್ನು ಮುಚ್ಚಿ 100 ದಿನಗಳೇ ಕಳೆದಿವೆ. ಇದರಿಂದಾಗಿ, ಜಾಗತಿಕವಾಗಿ ತೈಲ ಮತ್ತು ಅನಿಲ ತೊಂದರೆಗಳು ಮುಂದುವರೆದಿವೆ. ಹಲವಾರು ದೇಶಗಳು ತೀರ ಹೆಣಗಾಡುತ್ತಿವೆ. ಅಮೆರಿಕ–ಇರಾನ್ ಸಂಘರ್ಷದಿಂದ ಹಾರ್ಮುಜ್ ದಿಗ್ಬಂಧನ ಏನಾದರೂ ಹೀಗೆ ಮುಂದುವರಿದರೆ, ಜಗತ್ತಿನ ಅನೇಕ ದೇಶಗಳು ತೀವ್ರ ಸಂಕಷ್ಟಗಳನ್ನು ಎದುರಿಸಬೇಕಾಗುತ್ತದೆ. ಅಮೆರಿಕ ಮತ್ತು ಇರಾನ್ ನಡುವೆ ಇನ್ನೂ ಶಾಂತಿ ಒಪ್ಪಂದವಾಗಿಲ್ಲ ಎಂಬುದೂ ಇಲ್ಲಿ ಗಮನಾರ್ಹ.

ಮತ್ತೊಂದೆಡೆ, ಶಾಂತಿ ಒಪ್ಪಂದದ ಮಧ್ಯಸ್ಥಿಕೆ ವಹಿಸುವ ಪಾಕಿಸ್ತಾನದ ಪ್ರಯತ್ನಗಳು ಸತತವಾಗಿ ವಿಫಲವಾಗುತ್ತಿವೆ. ಇಸ್ಲಾಮಾಬಾದ್‌ನಲ್ಲಿ ಈಗಾಗಲೇ ಮಾತುಕತೆಗಳು ನಡೆಯುತ್ತಿದ್ದರೂ ಸಹ, ಅದ್ಯಾವುದು ಯುದ್ಧ ನಿಲ್ಲಿಸಲು ಸಹಾಯ ಮಾಡುವಂತೆ ತೋರುತ್ತಿಲ್ಲ. ಮುಂದಿನ ದಿನಗಳಲ್ಲಿ ಯುದ್ಧ ಹೀಗೆಯೇ ಮುಂದುವರಿದರೆ, ತೈಲ ಮತ್ತು ಅನಿಲ ಸಮಸ್ಯೆಗಳು ಇನ್ನಷ್ಟು ಹದಗೆಡುವ ಎಲ್ಲ ಲಕ್ಷಣಗಳು ಸ್ಪಷ್ಟವಾಗಿ ಕಾಣುತ್ತಿವೆ.



ಅಮೆರಿಕದಲ್ಲಿರುವ ಭಾರತೀಯ ರಾಯಭಾರಿ ವಿನಯ್ ಮೋಹನ್ ಕ್ವಾತ್ರ ಅವರು ಅಧ್ಯಕ್ಷರ ಉಪ ಸಹಾಯಕ ಮತ್ತು ರಾಷ್ಟ್ರೀಯ ಭದ್ರತಾ ಮಂಡಳಿಯ ಭಯೋತ್ಪಾದನಾ ನಿಗ್ರಹದ ಹಿರಿಯ ನಿರ್ದೇಶಕ ಸೆಬಾಸ್ಟಿಯನ್ ಗೋರ್ಕಾ ಅವರನ್ನು ಭೇಟಿಯಾಗಿದ್ದರು.

# ಫಿಲಿಪ್ಪೀನ್ಸ್‌ನಲ್ಲಿ 7.8 ತೀವ್ರತೆಯಲ್ಲಿ ಭಾರಿ ಭೂಕಂಪನ 35ಕ್ಕೂ ಹೆಚ್ಚು ಸಾವು, ನೂರಾರು ಮಂದಿಗೆ ಗಾಯ, ಕುಸಿದ ಕಟ್ಟಡಗಳು



**ನವದೆಹಲಿ, ಜೂ.8:** ಫಿಲಿಪ್ಪೀನ್ಸ್‌ನ ದಕ್ಷಿಣ ದ್ವೀಪವಾದ ಮಿಂಡನಾವೊದಲ್ಲಿ ಭಾರಿ ಭೂಕಂಪನ ಸಂಭವಿಸಿದ್ದು ಕನಿಷ್ಠ 35 ಜನರು ಬಲಿಯಾಗಿದ್ದಾರೆ. ರಿಕ್ಟರ್ ಮಾಪಕದಲ್ಲಿ 7.8 ರಷ್ಟು ತೀವ್ರತೆಯ ವರದಿಯಾಗಿದ್ದು ಭೂಕಂಪದ ಬೆನ್ನಲ್ಲೇ ಫಿಲಿಪ್ಪೀನ್ಸ್ ಮತ್ತು ನೆರೆಯ ಇಂಡೋನೇಷ್ಯಾದಲ್ಲಿ ಸುನಾಮಿ ಮುನ್ನೆಚ್ಚರಿಕೆ ಘೋಷಿಸಲಾಗಿದ್ದು, ಕರಾವಳಿ ಪ್ರದೇಶದ ಜನರನ್ನು ಎತ್ತರದ ಪ್ರದೇಶಗಳಿಗೆ ಸ್ಥಳಾಂತರಗೊಳ್ಳುವಂತೆ ಸೂಚಿಸಲಾಗಿದೆ. ಭೂಕಂಪದ ಕೇಂದ್ರಬಿಂದುವಿನಿಂದ ಕೇವಲ 15 ಕಿ.ಮೀ ದೂರದಲ್ಲಿರುವ ಜನರಲ್ ಸ್ಯಾಂಟೋಸ್ ನಗರ ಹಾಗೂ ಸರಂಗಾನಿ ಪ್ರಾಂತ್ಯದಲ್ಲಿ ಭಾರಿ ಹಾನಿಯಾಗಿದೆ. ಭೂಕಂಪದ ತೀವ್ರತೆಗೆ ಮನೆಗಳಲ್ಲಿದ್ದ ಪೀಠೋಪಕರಣಗಳು, ಟಿವಿ ಸೇರಿದಂತೆ ವಿದ್ಯುತ್ ಉಪಕರಣಗಳು ನೆಲಕ್ಕುರುಳಿವೆ. ಮುನ್ನೆಚ್ಚರಿಕಾ ಕ್ರಮವಾಗಿ ಸಾರಂಗನಿ ಪ್ರಾಂತ್ಯದಲ್ಲಿ ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಲಾಗಿದ್ದು, ಸದ್ಯ ಇಡೀ ಪ್ರದೇಶದಲ್ಲಿ ದೂರ ಸಂಪರ್ಕ ಮತ್ತು ಇಂಟರ್‌ನೆಟ್ ಕಡಿತಗೊಳಿಸಿದೆ.

**ಸುನಾಮಿಯ ಎಚ್ಚರಿಕೆ ನೀಡಿದ ಸರ್ಕಾರ :**

ಫಿಲಿಪ್ಪೀನ್ಸ್‌ನ ಭೂಕಂಪನ ಸಂಸ್ಥೆ ಫಿವೋಲ್ಸ್ ಕರಾವಳಿ ತೀರಕ್ಕೆ 1 ಮೀಟರ್‌ಗಿಂತಲೂ ಎತ್ತರದ ಸುನಾಮಿ ಅಲೆಗಳು ಅಪ್ಪಳಿಸುವ ಸಾಧ್ಯತೆಯಿದ್ದು, ಇದು ಮುಂದಿನ ಕೆಲವು ಗಂಟೆಗಳ ಕಾಲ ಮುಂದುವರಿಯಬಹುದು ಎಂದು ಎಚ್ಚರಿಸಿದೆ. ನೆರೆಯ ಇಂಡೋನೇಷ್ಯಾದ ಜಿಯೋಫಿಸಿಕ್ಸ್ ಏಜೆನ್ಸಿ ಈಗಾಗಲೇ ತೀರದಲ್ಲಿ 0.19 ಮೀಟರ್ ಎತ್ತರದ ಅಲೆಗಳು ಪತ್ತೆಯಾಗಿರುವುದನ್ನು ಖಚಿತಪಡಿಸಿದೆ. ಅಮೆರಿಕದ ಸುನಾಮಿ ಮುನ್ನೆಚ್ಚರಿಕಾ ವ್ಯವಸ್ಥೆಯೂ ಸಹ ಈ ಭಾಗಕ್ಕೆ ಹೈ–ಅಲರ್ಟ್ ಘೋಷಿಸಿದೆ.

**35ಮಂದಿ ಸಾವು, 200 ಮಂದಿಗೆ ಗಾಯ:**

12 ಮಂದಿ ಸಾವು ದೃಢಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ. ರಕ್ಷಣಾ ಕಾರ್ಯಾಚರಣೆ ಮುಂದುವರಿದಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ. 130 ಹೆಚ್ಚು ಜನರು ಗಾಯಗೊಂಡಿದ್ದಾರೆ. ಇಲ್ಲಿ ಕೆಲವು ಸಣ್ಣ ಕಟ್ಟಡಗಳು ಭಾಗಶಃ ಕುಸಿದಿದ್ದು, ಪ್ರಮುಖ ಪ್ರವೇಶ ಸೇತುವೆ ಸೇರಿದಂತೆ ಹಲವಾರು ರಚನೆಗಳ ಮೇಲೆ ಬಿರುಕು ಕಾಣಿಸಿಕೊಂಡಿವೆ. ದಾವೊ ಓರಿಯಂಟಲ್ ಪ್ರಾಂತ್ಯದಲ್ಲಿ ಓರ್ವ ಸಾವನ್ನಪ್ಪಿದ್ದಾನೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ. ಜನರಲ್ ಸ್ಯಾಂಟೋಸ್‌ನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತಾತ್ಕಾಲಿಕವಾಗಿ ಮುಚ್ಚಲಾಗಿದ್ದು, 17 ದೇಶೀಯ ವಿಮಾನಗಳ ಹಾರಾಟವನ್ನು ರದ್ದುಗೊಳಿಸಲಾಗಿದೆ. ಫಿಲಿಪ್ಪೀನ್ಸ್‌ನ ಕರಾವಳಿಯ ಹಲವು ಭಾಗಗಳಲ್ಲಿ ಅವಾಂತರ ಸೃಷ್ಟಿಯಾಗಿದ್ದು, ದಕ್ಷಿಣದಲ್ಲಿ ವಾಣಿಜ್ಯ ಕೇಂದ್ರವಾಗಿರುವ ಟ್ಯೂನ ಸಂಸ್ಕರಣಾ ನಗರವಾದ ಜನರಲ್ ಸ್ಯಾಂಟೋಸ್‌ನಲ್ಲಿ ಕನಿಷ್ಠ ಒಂದು ಸಣ್ಣ ಕಟ್ಟಡ ಕುಸಿದಿದೆ. ಇನ್ನು ದೇಶದ ರಾಜಧಾನಿ ಮನಿಲಾದ **DZRH** ರೇಡಿಯೋ ಕೇಂದ್ರವು ತನ್ನ ಪ್ರಾಂತೀಯ ಶಾಖೆ ಇದ್ದ ಸಣ್ಣ ವಾಣಿಜ್ಯ ಕಟ್ಟಡವು ಭಾಗಶಃ ಕುಸಿದು ಬಿದ್ದಿದೆ.

ಈ ಹಿಂದೆ ಸಂಭವಿಸಿದ್ದ 6.9 ತೀವ್ರತೆಯ ಭೂಕಂಪದಿಂದ 76 ಮಂದಿ ಮೃತಪಟ್ಟಿದ್ದು, ಸುಮಾರು 72 ಸಾವಿರ ಕಟ್ಟಡಗಳು ಹಾನಿಗೊಳಗಾಗಿದ್ದವು.

ಇದೀಗ 7.8 ತೀವ್ರತೆಯ ಭೂಕಂಪ ಮತ್ತೊಮ್ಮೆ ಫಿಲಿಪ್ಪೀನ್ಸ್‌ನಲ್ಲಿ ಭಾರಿ ಆತಂಕ ಸೃಷ್ಟಿಸಿದ್ದು, ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗಳು ಭರದಿಂದ ಸಾಗುತ್ತಿವೆ.

# ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಮಹಾ ದಾಖಲೆ: ಆಫ್ಘನ್ ವಿರುದ್ಧ ಇನ್ನಿಂಗ್ಸ್, 300 ರನ್‌ಗಳ ಜಯ

**ಚಂಡೀಗಢ, ಜೂ. 8:** ನ್ಯೂ ಚಂಡೀಗಢದ ಪಿಸಿಎ ಸ್ಟೇಡಿಯಂನಲ್ಲಿ ನಡೆದ ಏಕೈಕ ಟೆಸ್ಟ್ ಪಂದ್ಯದ ಮೂರನೇ ದಿನದಂದು ಭಾರತ ತಂಡವು ಅಫ್ಘಾನಿಸ್ತಾನ ವಿರುದ್ಧ ಇನ್ನಿಂಗ್ಸ್ ಮತ್ತು 300 ರನ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಟೆಸ್ಟ್ ಇತಿಹಾಸದಲ್ಲೇ ಅತಿ ದೊಡ್ಡ ಗೆಲುವನ್ನು ದಾಖಲಿಸಿದೆ. ಇದೇ ಪಂದ್ಯದ ಮೂಲಕ ಪದಾರ್ಪಣೆ ಮಾಡಿದ ಭಾರತದ ಎಡಗೈ ಸ್ಪಿನ್ನರ್ ಮಾನವ್ ಸುತಾರ್, ಅಮೋಘ ಪ್ರದರ್ಶನದ ಮೂಲಕ ಐತಿಹಾಸಿಕ ಗೆಲುವಿಗೆ ಸ್ಮರಣೀಯ ಮುನ್ನುಡಿ ಬರೆದಿದ್ದಾರೆ. ಭಾರತ ತಂಡವು ತನ್ನ ಮೊದಲ ಇನಿಂಗ್ಸ್‌ನಲ್ಲಿ 8 ವಿಕೆಟ್ ನಷ್ಟಕ್ಕೆ 564 ರನ್‌ಗಳ ಬೃಹತ್ ಮೊತ್ತ ಪೇರಿಸಿ ಇನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿತು. ತದನಂತರ 3ನೇ ದಿನದ ಮಧ್ಯಾಹ್ನದ ಭೋಜನ ವಿರಾಮಕ್ಕೂ ಮುನ್ನವೇ ಅಫ್ಘಾನಿಸ್ತಾನ ತಂಡವನ್ನು ಕೇವಲ 152 ರನ್‌ಗಳಿಗೆ ಆಲೌಟ್ ಮಾಡಿ ಫಾಲೋ–ಆನ್ ಹೇರಿತು. ಬಳಿಕ ಎರಡನೇ ಇನ್ನಿಂಗ್ಸ್ ಆರಂಭಿಸಿದ ಪ್ರವಾಸಿ ತಂಡವನ್ನು ಆತಿಥೇಯ ಭಾರತೀಯ ಬ್ಯಾಟರ್‌ಗಳು ಕೇವಲ 35.5 ಓವರ್‌ಗಳಲ್ಲಿ 112 ರನ್‌ಗಳಿಗೆ ಧೂಳೀಪಟ ಮಾಡುವ ಮೂಲಕ, ಮೂರೇ ದಿನಗಳಲ್ಲಿ ಅಮೋಘ ಹಾಗೂ ಐತಿಹಾಸಿಕ ಜಯದ ಮುದ್ರೆ ಒತ್ತಿದರು. ಮೊದಲ ಎರಡು ದಿನಗಳ ಕಾಲ ಭಾರತ ತಂಡದ ಬ್ಯಾಟರ್‌ಗಳು ನಡೆಸಿದ ಭರ್ಜರಿ ಬ್ಯಾಟಿಂಗ್ ಪ್ರದರ್ಶನವೇ ಈ ಭಾರಿ ಗೆಲುವಿಗೆ ಬಲವಾದ ಮುನ್ನುಡಿ ಬರೆಯಿತು. ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಆತಿಥೇಯ ತಂಡದ ಪರ ಕೆ.ಎಲ್. ರಾಹುಲ್ ಆಕರ್ಷಕ ಶತಕ (100) ಸಿಡಿಸಿದರೆ, ನಾಯಕ ಶುಭಮಾನ್ ಗಿಲ್ 126 ರನ್‌ಗಳ ಜವಾಬ್ದಾರಿಯುತ ಇನ್ನಿಂಗ್ಸ್ ಆಡಿ ಮುನ್ನಡೆಸಿದರು. ಇದರೊಂದಿಗೆ ಸಾಯಿ ಸುದರ್ಶನ್ (81), ರಿಷಭ್ ಪಂತ್ (81) ಮತ್ತು ವಾಷಿಂಗ್ಟನ್ ಸುಂದರ್ (ಅಜೇಯ 52) ಅವರ ಉಪಯುಕ್ತ ಕೊಡುಗೆಗಳ ನೆರವಿನಿಂದ ಭಾರತ ಬೃಹತ್ ಮೊತ್ತ ಪೇರಿಸಲು ಸಾಧ್ಯವಾಯಿತು. ಈ ಬೃಹತ್ ಸ್ಕೋರ್‌ನ ಒತ್ತಡದಿಂದ ಹೊರಬರಲು ಆಫ್ಘಾನಿಸ್ತಾನಕ್ಕೆ ಸಾಧ್ಯವೇ ಆಗಲಿಲ್ಲ. ಮೂರನೇ ದಿನದಾಟವನ್ನು 5 ವಿಕೆಟ್‌ಗೆ 113 ರನ್‌ಗಳಿಂದ ಮುಂದುವರಿಸಿದ ಆ ತಂಡ, ರಹಮತ್ ಶಾ ಅವರ ಹೋರಾಟದ 60 ರನ್‌ಗಳ ಹೊರತಾಗಿಯೂ ಕೇವಲ 152 ರನ್‌ಗಳಿಗೆ ಸರ್ವಪತನ ಕಂಡಿತು.

ಪ್ರವಾಸಿಗರ ಬ್ಯಾಟಿಂಗ್ ಬೆನ್ನೆಲುಬು ಮುರಿದ ಚೊಚ್ಚಲ ಪಂದ್ಯದ ಸ್ಪಿನ್ನರ್ ಮಾನವ್ ಸುತಾರ್ 33 ರನ್‌ಗಳಿಗೆ 6 ವಿಕೆಟ್ ಪಡೆಯುವ ಮೂಲಕ, ಟೆಸ್ಟ್ ಪದಾರ್ಪಣೆಯಲ್ಲೇ ಭಾರತೀಯ ಬೌಲರ್ ಒಬ್ಬರ ಎರಡನೇ ಅತ್ಯುತ್ತಮ ಬೌಲಿಂಗ್ ಪ್ರದರ್ಶನವನ್ನು ತಮ್ಮದಾಗಿಸಿಕೊಂಡರು. ಮೊದಲ ಇನಿಂಗ್ಸ್‌ನಲ್ಲಿ 412 ರನ್‌ಗಳ ಭಾರಿ ಹಿನ್ನಡೆಯೊಂದಿಗೆ ಎರಡನೇ ಇನಿಂಗ್ಸ್‌ನಲ್ಲಿ ಫಾಲೋ–ಆನ್ ಬ್ಯಾಟಿಂಗ್ ಆರಂಭಿಸಿದ ಅಫ್ಘಾನಿಸ್ತಾನ, ಆರಂಭದಲ್ಲಿ ಕೊಂಚ ಉತ್ತಮ ಹೋರಾಟದ ಮನೋಭಾವ ಪ್ರದರ್ಶಿಸಿತು. ಆರಂಭಿಕ ಆಟಗಾರರಾದ ಅಬ್ದುಲ್ ಮಲಿಕ್ ಮತ್ತು ಸೆದಿಕುಲ್ಲಾ ಅಟಲ್ ಮೊದಲ ವಿಕೆಟ್‌ಗೆ 42 ರನ್‌ಗಳ ಜೊತೆಯಾಟವಾಡಿದರು, ಇದು ಟೆಸ್ಟ್ ಇತಿಹಾಸದಲ್ಲಿ ಭಾರತದ ವಿರುದ್ಧ ಅಫ್ಘಾನಿಸ್ತಾನದ ಅತ್ಯುತ್ತಮ ಆರಂಭಿಕ ಜೊತೆಯಾಟವಾಗಿದೆ. ಅದರಲ್ಲೂ ಭಾರತೀಯ ಸ್ಪಿನ್ನರ್‌ಗಳ ವಿರುದ್ಧ ದಿಟ್ಟವಾಗಿ ಕೌಂಟರ್ ಅಟ್ಯಾಕ್ ಮಾಡಿದ ಅಟಲ್, ಪಂದ್ಯವನ್ನು ಮತ್ತಷ್ಟು ದೂರ ಕೊಂಡೊಯ್ಯುವ ಛಲ ತೋರಿದರು. ಆದರೆ, ಮೊಹಮ್ಮದ್ ಸಿರಾಜ್ ಅವರು ಮಲಿಕ್ ಅವರನ್ನು ಎಲ್‌ಬಿಡಬ್ಲ್ಯೂ ಬಲೆಯಲ್ಲಿ ಸಿಲುಕಿಸುವ ಮೂಲಕ ಭಾರತಕ್ಕೆ ಮೊದಲ ಯಶಸ್ಸು ತಂದುಕೊಟ್ಟರು. ಇದು ಭಾರತೀಯ ಸ್ಪಿನ್ನರ್‌ಗಳಿಗೆ ವಿಕೆಟ್ ಬೇಟೆಯಾಡಲು ದಾರಿ ಮಾಡಿಕೊಟ್ಟಿತು. ನಂತರ ಬಂದ ರಹಮಾನುಲ್ಲಾ ಗುರ್ಬಾಜ್ ವೇಗವಾಗಿ 24 ರನ್ ಗಳಿಸಿದರಾದರೂ, ಕುಲದೀಪ್ ಯಾದವ್ ಅವರಿಗೆ ಪೆವಿಲಿಯನ್ ಹಾದಿ ತೋರಿಸಿದರು. ಇದಾದ ಬೆನ್ನಲ್ಲೇ ವಾಷಿಂಗ್ಟನ್ ಸುಂದರ್ ಅಫ್ಘಾನಿಸ್ತಾನ ತಂಡದ ವಿಕೆಟ್‌ಗಳ ಪತನಕ್ಕೆ ಆಘಾತಕಾರಿ ಮುನ್ನುಡಿ ಬರೆದರು. ಈ ಆಫ್–ಸ್ಪಿನ್ನರ್ ಪಂದ್ಯದ ಎರಡನೇ ಸರದಿಯಲ್ಲಿ ರಹಮತ್ ಶಾ ಮತ್ತು ಹಶ್ಮತ್‌ಉಲ್ಲಾ ಶಾಹಿದಿ ಅವರನ್ನು ಔಟ್ ಮಾಡಿದ್ದಲ್ಲದೆ, ಟೀ ವಿರಾಮದ ಕೆಲವೇ ಕ್ಷಣಗಳ ಮುನ್ನ ಕ್ರೀಸ್‌ನಲ್ಲಿ ಗಟ್ಟಿಯಾಗಿ ನಿಂತಿದ್ದ ಅಟಲ್ (42) ಅವರನ್ನು ಔಟ್ ಮಾಡಿದರು. ಇದರಿಂದಾಗಿ ಅಫ್ಘಾನಿಸ್ತಾನ ತಂಡವು 1 ವಿಕೆಟ್‌ಗೆ 74 ರನ್ ಗಳಿಸಿದ್ದ ಸುಸ್ಥಿತಿಯಿಂದ ದಿಢೀರನೆ 98 ರನ್‌ಗಳಿಗೆ 5 ವಿಕೆಟ್ ಕಳೆದುಕೊಂಡು ತೀವ್ರ ಸಂಕಷ್ಟಕ್ಕೆ ಸಿಲುಕಿತು ಹಾಗೂ ಚೇತರಿಸಿಕೊಳ್ಳಲು ಸಾಧ್ಯವಾಗಲೇ ಇಲ್ಲ. ಪಂದ್ಯದ ಕೊನೆಯ ಸೆಷನ್ ಕೇವಲ ಆರು ಓವರ್‌ಗಳ ಕಾಲ ಮಾತ್ರ ನಡೆಯಿತು. ಚೊಚ್ಚಲ ಪಂದ್ಯವಾಡುತ್ತಿರುವ ಸುತಾರ್ ಅವರು ಅಫ್ಸರ್ ಜಜಾಯ್ ಅವರನ್ನು ಎಲ್‌ಬಿಡಬ್ಲ್ಯೂ ಮಾಡುವ ಮೂಲಕ ಮತ್ತೊಂದು ವಿಕೆಟ್ ಪಡೆದರೆ, ಸುಂದರ್ ಅವರು ಅಜ್ಮತ್‌ಉಲ್ಲಾ ಉಮರ್‌ಜಾಯ್ ಅವರ ವಿಕೆಟ್ ಉರುಳಿಸಿ ಈ ಇನಿಂಗ್ಸ್‌ನಲ್ಲಿ ತಮ್ಮ 4ನೇ ವಿಕೆಟ್ ಸಾಧನೆ ಮಾಡಿದರು. ಅಂತಿಮವಾಗಿ ಕುಲದೀಪ್ ಯಾದವ್ ಅವರು ಸತತ ಎಸೆತಗಳಲ್ಲಿ ನಂಗೇಯಾಲಿಯಾ ಖರೋಟೆ ಮತ್ತು ಮೊಹಮ್ಮದ್ ಸಲೀಮ್ ಸಫಿ ಅವರನ್ನು ಔಟ್ ಮಾಡುವ ಮೂಲಕ ಅಫ್ಘಾನಿಸ್ತಾನದ ಕೆಳ ಕ್ರಮಾಂಕದ ಬ್ಯಾಟಿಂಗ್ ಸರಣಿಗೆ ಮುಕ್ತಾಯ ಹಾಡಿದರು. ಗಾಯದ ಸಮಸ್ಯೆಯಿಂದಾಗಿ ಶರಾಫುದ್ದೀನ್ ಅಶ್ರಫ್ ಬ್ಯಾಟಿಂಗ್ ಮಾಡಲು ಕ್ರೀಸ್‌ಗೆ ಬಾರದ ಹಿನ್ನೆಲೆಯಲ್ಲಿ ಅಫ್ಘಾನಿಸ್ತಾನ ತಂಡದ ಎರಡನೇ ಇನ್ನಿಂಗ್ಸ್ ಕೇವಲ 112 ರನ್‌ಗಳಿಗೆ ಮುಕ್ತಾಯಗೊಂಡು, ಪಂದ್ಯಕ್ಕೆ ಅಂತಿಮ ತೆರೆ ಬಿದ್ದಿತು.



ಪಂದ್ಯದ ಮೊದಲ ಎರಡು ದಿನಗಳ ಕಾಲ ಭಾರತದ ಬ್ಯಾಟರ್‌ಗಳು ಸಂಪೂರ್ಣ ಪ್ರಾಬಲ್ಯ ಸಾಧಿಸಿದ್ದರೂ, ಅಂತಿಮವಾಗಿ ಈ ಪಂದ್ಯದ ಅಸಲಿ ಹೀರೋ ಆಗಿ ಹೊರಹೊಮ್ಮಿದ್ದು ಮಾತ್ರ ಯುವ ಆಟಗಾರ ಸುತಾರ್. ಈ ಎಡಗೈ ಸ್ಪಿನ್ನರ್ ಅಫ್ಘಾನಿಸ್ತಾನದ ಮೊದಲ ಇನಿಂಗ್ಸ್‌ನಲ್ಲಿ ಭರ್ಜರಿ 6 ವಿಕೆಟ್ ಉರುಳಿಸಿದ್ದೂ ಸೇರಿದಂತೆ ಪಂದ್ಯದುದ್ದಕ್ಕೂ ಒಟ್ಟು 7 ವಿಕೆಟ್‌ಗಳನ್ನು ಪಡೆಯುವ ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್ ರಂಗಕ್ಕೆ ಸ್ಮರಣೀಯವಾಗಿ ಪಾದಾರ್ಪಣೆ ಮಾಡಿದರು. ಇದರ ಜೊತೆಗೆ ಭಾರತವು ಟೆಸ್ಟ್ ಇತಿಹಾಸದಲ್ಲೇ ಗೆಲುವು ದಾಖಲಿಸಲು ಕಾರಣರಾದರು.